www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ನಿಮ್ಮ ಭವಿಷ್ಯವನ್ನು ಬದಲಾಯಿಸಲು ಸಾಧ್ಯವಿಲ್ಲ. ಆದರೆ ನಿಮ್ಮಿಂದ ನಿಮ್ಮ ಹವ್ಯಾಸಗಳನ್ನು ಬದಲಿಸಲು ಸಾಧ್ಯವಿದೆ. ನಿಮ್ಮ ಹವ್ಯಾಸಗಳು ನಿಮ್ಮ ಭವಿಷ್ಯವನ್ನು ಖಂಡಿತ ಬದಲಾಯಿಸುತ್ತವೆ.

ಉದಯ UV ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ರಾಜ್ಯ ರಾಜಕೀಯಕ್ಕೆ ಮರಳುವ ಸುಳಿವು ಕೊಟ್ಟ ಎಚ್‌ಡಿಕೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಕೀಯದಿಂದ ದೂರ ಸರಿಯುವುದಿಲ್ಲ. ನಾನು ರಾಜಕಾರಣದಲ್ಲಿ ಇದ್ದೇನೆ. ನಾನು ಎಲ್ಲಿರಬೇಕು ಎಂದು ತೀರ್ಮಾನ ಮಾಡುವುದು ರಾಜ್ಯದ ಜನತೆ. ರಾಜ್ಯ ರಾಜಕೀಯಕ್ಕೆ ಯಾವಾಗ ಬರಬೇಕು ಎಂದು ಜನತೆಯ ಆಶಯದ ಮೇರೆಗೆ ತೀರ್ಮಾನ ಮಾಡುತ್ತೇನೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದರು.

ಬೆಂಗಳೂರಿನ ತಮ್ಮ ನಿವಾಸದ ಬಳಿ ಮಾಧ್ಯಮಗಳು ಕೇಳಿದ ಪ್ರಶ್ನೆಗೆ ಉತ್ತರಿಸಿದ ಕೇಂದ್ರ ಸಚಿವರು; ನಾವು ಎನ್‌ಡಿಎ ಮೈತ್ರಿಯಲ್ಲಿದ್ದೇವೆ. ಈ ಮೈತ್ರಿಯಲ್ಲಿ ಯಾವುದೇ ಗೊಂದಲಕ್ಕೆ ಅವಕಾಶ ಕೊಡಬಾರದು. ನಮ್ಮ ಉದ್ದೇಶ ರಾಜ್ಯದಲ್ಲಿ ಉತ್ತಮ ಸರ್ಕಾರ ತರಬೇಕು ಎನ್ನುವುದು. ಇದು ನನ್ನ ವೈಯಕ್ತಿಕ ಉದ್ದೇಶ ಎಂದರು.

ರಾಜ್ಯದಲ್ಲಿ ಈಗ ಆಡಳಿತ ಹೇಗೆ ನಡೆಯುತ್ತಿದೆ ಎಂದು ನಾನು ನಿರಂತರವಾಗಿ ಗಮನಿಸುತ್ತಿದ್ದೇನೆ. ಒಳ್ಳೆಯ ಸರ್ಕಾರ ಬಂದು ಜನತೆ ನೆಮ್ಮದಿಯಿಂದ ಇರಬೇಕು. ಈ ನಿಟ್ಟಿನಲ್ಲಿ ನಾಡಿನ ಜನತೆ ನಾನು ಯಾವ ಸ್ಥಾನದಲ್ಲಿ ಇರಬೇಕು ಅಂತ ತೀರ್ಮಾನ ಮಾಡಿದರೆ ಅದರಂತೆ ನಡೆಯುತ್ತೇನೆ. ಈ ವಿಷಯ ನನ್ನ ಕೈಯಲ್ಲಿ ಇಲ್ಲ ಎಂದು ಮಾರ್ಮಿಕವಾಗಿ ಉತ್ತರಿಸಿದರು.

ನಾನು ರಾಜ್ಯ ರಾಜಕೀಯದಿಂದ ದೂರ ಸರಿಯುತ್ತೇನೆ ಅಂತ ಯಾರಾದರೂ ತಿಳಿದುಕೊಂಡಿದ್ದರೆ ತಪ್ಪು. ನಾನು ರಾಜ್ಯ ರಾಜಕಾರಣದಿಂದ ದೂರ ಸರಿಯಲ್ಲ. ರಾಜ್ಯದ ರಾಜಕಾರಣದಲ್ಲಿ ಇರುತ್ತೇನೆ. ಕೇಂದ್ರದಲ್ಲಿ ಪ್ರಧಾನಿಗಳು ಉತ್ತಮ ಜವಾಬ್ದಾರಿ ಕೊಟ್ಟಿದ್ದಾರೆ. ಎರಡು ಇಲಾಖೆಯಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಲು ಅವಕಾಶ ನೀಡಿದ್ದಾರೆ. ರಾಜ್ಯ ರಾಜಕೀಯಕ್ಕೆ ಯಾವ ಸಮಯದಲ್ಲಿ ಬರಬೇಕು ಅಂತ ತೀರ್ಮಾನ ಮಾಡುತ್ತೇನೆ. ತಪ್ಪಿಸಿಕೊಳ್ಳಲು ಆಗುವುದಿಲ್ಲ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರ ನೀಡಿದರು.



**ಅಧಿಕಾರಿಗಳ ಮೇಲೆ ಕ್ರಮ ಆಗಬೇಕು**

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ಮೇಲೆ ನಿರಂತರವಾಗಿ ಅಧಿಕಾರಿಗಳ ಮೇಲೆ ದೌರ್ಜನ್ಯ ನಡೆಸುವ ಪ್ರವೃತ್ತಿ ಹೆಚ್ಚಾಗುತ್ತಿದೆ. ಇದು ಸರಿಯಲ್ಲ, ಶಿಡ್ಲಘಟ್ಟ ಪ್ರಕರಣದ ಬಗ್ಗೆ ನಾನು ಈಗಾಗಲೇ ಮುಖ್ಯ ಕಾರ್ಯದರ್ಶಿ ಅವರಿಗೆ ತಿಳಿಸಿದ್ದೇನೆ. ಈವರೆಗೆ ಅವರು ಈ ಬಗ್ಗೆ ಯಾವ ಕ್ರಮವನ್ನು ವಹಿಸಿಲ್ಲ. ಇವತ್ತು ಸಂಕ್ರಾಂತಿ ಹಬ್ಬವಿದೆ. ಹೀಗಾಗಿ ನಾನು ಮತ್ತೆ ಅವರನ್ನು ಕೇಳಲು ಹೋಗಿಲ್ಲ ಎಂದು ಸಚಿವ ಕುಮಾರಸ್ವಾಮಿ ಅವರು ಹೇಳಿದರು.

ಶಿಡ್ಲಘಟ್ಟದ ಕಾಂಗ್ರೆಸ್ ಮುಖಂಡನಿಂದ ಅಧಿಕಾರಿಗೆ ಧಮ್ಕಿ ಹಾಕಿದ ಪ್ರಕರಣ ನಿಜಕ್ಕೂ ಬೇಸರ ತರಿಸಿದೆ. ನಮ್ಮ ಪಕ್ಷ ಅಂತಲ್ಲ, ಯಾವುದೇ ಪಕ್ಷದ ಕಾರ್ಯಕರ್ತರು, ಮುಖಂಡರು ಅಧಿಕಾರಿಗಳ ಜತೆ ಅನುಚಿತವಾಗಿ ವರ್ತಿಸಬಾರದು. ಒಂದೆರಡು ಪ್ರಕರಣಗಳಲ್ಲಿ ಕಠಿಣ ಕ್ರಮ ಜರುಗಿಸಿದರೆ ಅದು ಪಾಠವಾಗುತ್ತದೆ ಎಂದು ಕುಮಾರಸ್ವಾಮಿ ಅವರು ಸರ್ಕಾರಕ್ಕೆ ಸಲಹೆ ಮಾಡಿದರು.

ಅಧಿಕಾರಿಗಳ ಮೇಲೆ ಒತ್ತಡ ಹೇರಿ ಕೆಲಸ ಮಾಡಿಸುವ ಪ್ರವೃತ್ತಿ ಸರ್ಕಾರದಲ್ಲಿ ವ್ಯಾಪಕವಾಗಿದೆ. ಸಾಮಾನ್ಯ ಕಾರ್ಯಕರ್ತರಿಂದ ಹಿಡಿದು ಅಧಿಕಾರದಲ್ಲಿರುವ ಮೇಲಿನವರು ಅಧಿಕಾರಿಗಳ ಮೇಲೆ ಒತ್ತಡ ಹಾಕಿ ಕಾನೂನುಬಾಹಿರ ಕೆಲಸ ಮಾಡಿಸುತ್ತಿದ್ದಾರೆ. ಸರ್ಕಾರ ಸರಿ ಇಲ್ಲದೆ ಇಲ್ಲದಿದ್ದಾಗ ಇವೆಲ್ಲ ನಡೆಯುತ್ತವೆ. ಮೇಟಿ ಸರಿಯಾಗಿದ್ದರೆ ಇಂತಹ ಘಟನೆಗಳು ನಡೆಯುವುದಿಲ್ಲ ಎಂದು ಕೇಂದ್ರ ಸಚಿವರು ತೀವ್ರ ಬೇಸರ ವ್ಯಕ್ತಪಡಿಸಿದರು.

ಅಧಿಕಾರಿಗಳು ಕೂಡ ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸಬೇಕು. ಬಡ್ತಿ ಅಥವಾ ಪೋಸ್ಟಿಂಗ್ ಆಸೆಗೆ ಬಿದ್ದು ಕಾನೂನುಬಾಹಿರ ಕೆಲಸ ಮಾಡಿದರೆ ಪ್ರತಿಫಲ ಅನುಭವಿಸಬೇಕಾಗುತ್ತದೆ. ಇತ್ತೀಚೆಗೆ ಒಂದು ಪತ್ರಿಕೆಯ ಅಗ್ರಬರಹವನ್ನು ಓದಿದೆ.

'ಕಳಪೆ ಕಾಮಗಾರಿ; ಆರು ಮಂದಿ ಹೊಣೆ' ಎನ್ನುವ ವರದಿ ನೋಡಿದ ಮೇಲೆ ವಿಕಾಸಸೌಧ ನಿರ್ಮಾಣದಲ್ಲಿ ಇಂಜಿನಿಯರುಗಳು ನಡೆಸಿರುವ ಅಕ್ರಮ ನಡೆಸಿರುವುದು ಬಯಲಾಗಿದೆ. 8 ವರ್ಷಗಳ ನಂತರ ಅಧಿಕಾರಿಗಳ ಮೇಲೆ ಕ್ರಮ ಆಗಬೇಕು ಅಂತ ಲೋಕಾಯುಕ್ತ ತೀರ್ಪು ಕೊಟ್ಟಿದೆ. ಹೀಗಾಗಿ ಅಧಿಕಾರಿಗಳು ಜನಪ್ರತಿನಿಧಿಗಳ ಒತ್ತಡಕ್ಕೆ ಕೆಲಸ ಮಾಡಬಾರದು. ಸರ್ಕಾರದ ನಿಯಮಾವಳಿ ಉಲ್ಲಂಘನೆ ಆಗದಂತೆ ಆತ್ಮಸಾಕ್ಷಿಗಾಗಿ ಕೆಲಸ ಮಾಡಿ ಎಂದು ಕೇಂದ್ರ ಸಚಿವರು ಕಿವಿಮಾತು ಹೇಳಿದರು.

## 4,900 ಕೋಟಿ ಆದಾಯ ಖೋತಾ ಎಪ್ರಿಲ್‌ಗೆ ಮತ್ತೆ ವಿದ್ಯುತ್ ದರ ಏರಿಕೆ

• ಉದಯವಾಹಿನಿ, ಬೆಂಗಳೂರು

ಐದು ವಿದ್ಯುತ್ ಸರಬರಾಜು ಕಂಪನಿಗಳ ಆದಾಯದಲ್ಲಿ ಖೋತಾ ಆಗಿದ್ದು, ಇದನ್ನು ಸರಿ ದೂಗಿಸಲು ಏಪ್ರಿಲ್‌ನಿಂದಲೇ ವಿದ್ಯುತ್ ದರ ಏರಿಸುವ ತಯಾರಿ ನಡೆದಿದೆ.ವಿದ್ಯುತ್ ಸರಬರಾಜು ಕಂಪನಿಗಳು(ಎಸ್ಕಾಂ) 2024–25ನೇ ಸಾಲಿನ ವಾರ್ಷಿಕ ಕಾರ್ಯಕ್ಷಮತೆ ವರದಿಯನ್ನು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗಕ್ಕೆ (ಕೆಇಆರ್‌ಸಿ) ಸಲ್ಲಿಸಿವೆ. ಎಸ್ಕಾಂಗಳ ಆದಾಯದಲ್ಲಿ ಸುಮಾರು 4,900 ಕೋಟಿಖೋತಾ ಆಗಿರುವುದನ್ನು ವರದಿಯಲ್ಲಿ ಪ್ರಸ್ತಾಪಿಸಲಾಗಿದೆ. ಕಳೆದ ವರ್ಷದ ಮಾರ್ಚ್‌ನಲ್ಲಿ ದರ ಪರಿಷ್ಕರಣೆ ಮಾಡಿದಾಗ ಕೆಇಆರ್‌ಸಿ ಅಂದಾಜು ಮಾಡಿದ್ದಲೆಕ್ಕಾಚಾರದಲ್ಲಿ ವೆಚ್ಚ ಹೆಚ್ಚಾಗಿದ್ದರೆ, ಆದಾಯದಲ್ಲಿ ಖೋತಾ ಆಗಿದೆ. ಇದರ ನಡುವೆ ಸಮತೋಲನ ಕಾಪಾಡಲು ದರ ಪರಿಷ್ಕರಣೆ ಮಾಡುವ ಅಗತ್ಯವಿದೆ ಎಂದು ಎಸ್ಕಾಂಗಳು ಕೆಇಆರ್‌ಸಿಗೆ ಸಲ್ಲಿಸಿರುವ ವರದಿಯಲ್ಲಿ ಉಲ್ಲೇಖಿಸಿವೆ. ಕಂಪನಿಗಳು ಸಲ್ಲಿಸಿರುವ ಪ್ರಸ್ತಾವದ ಬಗ್ಗೆ ಆಯೋಗವು ಪರಿಶೀಲನೆ ನಡೆಸಿ ದರ ಹೆಚ್ಚಳದ ಆದೇಶ ಹೊರಡಿಸಲಿದೆ. ಯಾವ, ಯಾವ ಬಾಬಿನಲ್ಲಿ ನಿಗದಿಗಿಂತ ಕಡಿಮೆ ಆದಾಯ ಸಂಗ್ರಹವಾಗಿದೆ. ಯಾವುದಕ್ಕೆ ನಿಗದಿಗಿಂತ ಅಧಿಕ ವೆಚ್ಚವಾಗಿದೆ ಎಂಬ ವಿವರಗಳು ವರದಿಯಲ್ಲಿದೆ.

## ಅಂಗವಿಕಲ ಬ್ಯಾಂಕ್ ಉದ್ಯೋಗಿ ಮರು ನೇಮಕಕ್ಕೆ ಹೈ ಆದೇಶ

• ಉದಯವಾಹಿನಿ, ಬೆಂಗಳೂರು

ಪ್ರೊಬೆಷನರಿ ಅವಧಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅಂಗವಿಕಲ ಉದ್ಯೋಗಿಯೊಬ್ಬರನ್ನು ಸೇವೆಯಿಂದ ವಜಾಗೊಳಿಸಿದ್ದ ಭಾರತೀಯ ಸ್ಟೇಟ್ ಬ್ಯಾಂಕ್ ಆದೇಶವನ್ನು ರದ್ದುಪಡಿಸಿರುವ ಹೈಕೋರ್ಟ್, 'ಉದ್ಯೋಗಿಯನ್ನು ಸೇವೆಗೆ ಮರು ನಿಯೋಜನೆ ಮಾಡಬೇಕು' ಎಂದು ನಿರ್ದೇಶಿಸಿದೆ. ಏಕಸದಸ್ಯ ನ್ಯಾಯಪೀಠದ ಆದೇಶ ಪ್ರಶ್ನಿಸಿ ನಗರದ ಸೇಂಟ್ ಮಾರ್ಕ್ಸ್ ರಸ್ತೆ ಶಾಖೆಯ, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಸಹಾಯಕ ವ್ಯವಸ್ಥಾಪಕ ನಿರ್ದೇಶಕ ಸಲ್ಲಿಸಿದ್ದ ಮೇಲ್ಮನವಿಯನ್ನು (ಡಬ್ಲ್ಯು.ಎ 1880/2025) ನ್ಯಾಯಮೂರ್ತಿ ಡಿ.ಕೆ.ಸಿಂಗ್ ನೇತೃತ್ವದ ವಿಭಾಗೀಯ ನ್ಯಾಯಪೀಠ ವಜಾಗೊಳಿಸಿ ಆದೇಶಿಸಿದೆ. ಆಂಧ್ರ ಪ್ರದೇಶದ ಕರ್ನೂಲ್ ಜಿಲ್ಲೆಯ ಕುರುವ ಸೋಮೇಶ್ (29) ಭಾರತೀಯ ಸ್ಟೇಟ್ ಬ್ಯಾಂಕ್‌ನ ಸೇಂಟ್ ಮಾರ್ಕ್ಸ್ ರಸ್ತೆ ಶಾಖೆಯಲ್ಲಿ 2023ರಲ್ಲಿ ಕಿರಿಯ ಸಹಾಯಕರಾಗಿ ನೇಮಕಗೊಂಡಿದ್ದರು.

ಒಂಬತ್ತು ತಿಂಗಳ ಉದ್ಯೋಗ ನಿರ್ವಹಿಸಿದ್ದ ಅವರನ್ನು ಕರ್ತವ್ಯ ಲೋಪ ಆರೋಪದಡಿ ವಜಾಗೊಳಿಸಲಾಗಿತ್ತು. ವಜಾ ಆದೇಶವನ್ನು ಪ್ರಶ್ನಿಸಿ ಸೋಮೇಶ್ ಹೈಕೋರ್ಟ್ ಮೆಟ್ಟಿಲೇರಿದ್ದರು.

## ಪೌರಾಯುಕ್ತಗೆ ನಿಂದನೆ ಆರೋಪ; ರಾಜೀವ್ ಗೌಡಗೆ ಕೆಪಿಸಿಸಿ ನೋಟಿಸ್

• ಉದಯವಾಹಿನಿ, ಬೆಂಗಳೂರು

ಶಿಡ್ಲಘಟ್ಟ ನಗರಸಭೆ ಪೌರಾಯುಕ್ತಗೆ ನಿಂದನೆ ಮಾಡಿದ ಆರೋಪದ ಹಿನ್ನೆಲೆಯಲ್ಲಿ ಶಿಡ್ಲಘಟ್ಟ ಕ್ಷೇತ್ರದ 2023ರ ಕಾಂಗ್ರೆಸ್ ಅಭ್ಯರ್ಥಿ ರಾಜೀವ್ ಗೌಡ ಅವರಿಗೆ ಒಂದು ವಾರದಲ್ಲಿ ಘಟನೆ ಸಂಬಂಧ ಸೂಕ್ತ ಸಮಜಾಷಿ ನೀಡಬೇಕು. ಇಲ್ಲವಾದರೆ ಈ ಬಗ್ಗೆ ಶಿಸ್ತು ಕ್ರಮ ಕೈಗೊಳ್ಳಬೇಕಾಗುತ್ತದೆ' ಎಂದು ಎಚ್ಚರಿಕೆ ನೀಡಿ, ಕೆಪಿಸಿಸಿ ವತಿಯಿಂದ ನೋಟಿಸ್ ನೀಡಲಾಗಿದೆ. ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ.ಚಂದ್ರಶೇಖರ್, ನೋಟಿಸ್ ನೀಡಿದ್ದು, ಶಿಡ್ಲಘಟ್ಟ ವ್ಯಾಪ್ತಿಯಲ್ಲಿ ಖಾಸಗಿ ಕಾರ್ಯಕ್ರಮದ ಸಭೆಯೊಂದಕ್ಕೆ ಸಂಬಂಧಪಟ್ಟಂತೆ ತಾವುಗಳು ಬ್ಯಾನರ್‌ಗಳನ್ನು ನಗರಸಭೆ ವ್ಯಾಪ್ತಿಯಲ್ಲಿ ಹಾಕಿರುವುದರ ಬಗ್ಗೆ ಸದರಿ ನಗರಸಭೆ ಪೌರಾಯುಕ್ತರೊಂದಿಗೆ ದೂರವಾಣಿ ಸಂಭಾಷಣೆ ನೆಡೆಸುವಾಗ ವ್ಯಕ್ತಿಗತ ನಿಂದನೆ ಮಾಡಿ, ಕೆಟ್ಟ ಪದಗಳನ್ನು ಉಪಯೋಗಿಸಿ ನಿಂದನೆ ಮಾಡಿರುವ ವಿಷಯಗಳು ಮಾಧ್ಯಮಗಳಲ್ಲಿ ಬಿತ್ತರಗೊಂಡಿದೆ' ಎಂದು ಉಲ್ಲೇಖಿಸಿದ್ದಾರೆ. 'ತಮ್ಮ ಈ ವರ್ತನೆ ಹಾಗೂ ತಾವು ಸದರಿ ನಗರಸಭೆ ಪೌರಾಯುಕ್ತರೊಂದಿಗೆ ಆಡಿರುವ ಮಾತುಗಳಿಂದ ಪಕ್ಷಕ್ಕೆ ಮುಜುಗರ ಉಂಟುಮಾಡುತ್ತದೆ ಎಂದು ಚಂದ್ರಶೇಖರ್ ಸೂಚನೆ ನೀಡಿದ್ದಾರೆ.

**ಮಕರ ಸಂಕ್ರಾಂತಿ ವೇಳೆ ನಗರದ ಗವೀಪುರದ ಗುಟ್ಟಹಳ್ಳಿಯಲ್ಲಿರುವ ಐತಿಹಾಸಿಕ ಪ್ರಸಿದ್ಧ ಗವಿಗಂಗಾಧರೇಶ್ವರ ದೇವಾಲಯದ ಶಿವಲಿಂಗದ ಮೇಲೆ ಸೂರ್ಯನ ರಶ್ಮಿ ಸ್ಪರ್ಶವಾಯಿತು. ಗುರುವಾರ ಸಂಜೆ 5.19 ರಿಂದ 5.26ರವರೆಗೆ ಒಟ್ಟು ಆರು ನಿಮಿಷ ಆರು ಸೆಕೆಂಡುಗಳ ಕಾಲ ಭಾಸ್ಕರನ ಸ್ಪರ್ಶವಾಯಿತು. ಆರು ನಿಮಿಷದವರೆಗೆ ಸಂಭವಿಸಿದ ಪವಾಡ ಸದೃಶ್ಯ ಕ್ಷಣದ ವೇಳೆ ಶಿವಲಿಂಗದ ಮೇಲೆ ಎಳನೀರು ಹಾಗೂ ಕ್ಷೀರಾಭಿಷೇಕ ಮಾಡಲಾಯಿತು**

# ಗಂಗಾಧರನಿಗೆ ರವಿ ನಮನ



## ಶಿವಲಿಂಗದ ಮೇಲೆ ಸೂರ್ಯ ರಶ್ಮಿ ಸ್ಪರ್ಶ ಕಣ್ತುಂಬಿಕೊಂಡು ಪುನೀತರಾದ ಭಕ್ತರು

### ಸೂರ್ಯ ಪೂಜೆ ಸಂಭ್ರಮ

ಮಕರ ಸಂಕ್ರಾಂತಿ ದಿನವಾದ ಗುರುವಾರ ದೇಗುಲದಲ್ಲಿ ವಿಶೇಷ ಪೂಜೆಗಳು ನಡೆಸಲಾಗಿದೆ. ಶಿವನ ಲಿಂಗಕ್ಕೆ ಹಾಲು, ಎಳನೀರಿನ ಅಭಿಷೇಕಗಳನ್ನು ಮಾಡಲಾಯಿತ್ತು. ಗವಿಗಂಗಾಧರೇಶ್ವ ಸ್ವಾಮಿ ದೇಗುಲ 16ನೇ ಶತಮಾನದ ಕೆಂಪೇಗೌಡರ ಕಾಲದ್ದಾಗಿದ್ದು, ದೇಗುಲದಲ್ಲಿ ಸಾಕಷ್ಟು ಕೌತುಕಗಳು ಅಡಗಿವೆ. ಮಕರ ಸಂಕ್ರಾಂತಿಯ ದಿನದಂದು ಸೂರ್ಯನ ಕಿರಣಗಳು ನಂದಿಯ ತಲೆಯ ಮಧ್ಯಭಾಗದ ಮೂಲಕ ಹಾದು ಗುಹೆಯೊಳಗಿರುವ ಶಿವಲಿಂಗದ ತಳಭಾಗವನ್ನು ಸ್ಪರ್ಶಿಸಿ ನಂತರ ಸ್ವಲ್ಪ ಸ್ವಲ್ಪವಾಗಿ ಮೇಲೆ ಸಾಗುತ್ತ ಗಂಗಾಧರೇಶ್ವರನಿಗೆ ಸೂರ್ಯಾಭಿಷೇಕ ಮಾಡಲಾಯಿತು.

### ಶ್ರೀರಂಗಪಟ್ಟಣದಲ್ಲಿ ಶಿವಲಿಂಗದ ಮೇಲೆ ಸೂರ್ಯ ರಶ್ಮಿ

ವರ್ಷದ ಮೊದಲ ಹಬ್ಬ ಸಂಕ್ರಾಂತಿ ದಿನದಂದು ಸೂರ್ಯ ತನ್ನ ಪಥವನ್ನ ಉತ್ತರಾಯಣಕ್ಕೆ ಬದಲಿಸಿದ ಹಿನ್ನೆಲೆ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದ ಚಂದ್ರವನ ಆಶ್ರಮದ ಕಾಶಿ ಚಂದ್ರಮೌಳೇಶ್ವರ ಸ್ವಾಮಿಯ ಗರ್ಭ ಗುಡಿಯ ಶಿವಲಿಂಗದ ಮೇಲೆ ಸೂರ್ಯ ರಶ್ಮಿ ಸ್ಪರ್ಶಿಸಿದೆ. ಪ್ರತಿ ವರ್ಷ ಸಂಕ್ರಾಂತಿ ದಿನದಂದು ಸೂರ್ಯ ರಶ್ಮಿ ಇಲ್ಲಿನ ಶಿವಲಿಂಗದ ಮೇಲೆ ಬೀಳುವ ಪ್ರತೀತಿ ಇದೆ. ಸೂರ್ಯ ರಶ್ಮಿ ಶಿವ ಲಿಂಗದ ಮೇಲೆ ಬಿದ್ದಿದೆ. ಸೂರ್ಯ ರಶ್ಮಿ ಶಿವಲಿಂಗದ ಮೇಲೆ ಬೀಳುತ್ತಿದ್ದಂತೆ ಕಾಶಿ ಚಂದ್ರಮೌಳೇಶ್ವರಸ್ವಾಮಿಗೆ ವಿವಿಧ ಅಭಿಷೇಕ ಮಾಡಿ ವಿಶೇಷ ಪೂಜೆಯನ್ನು ಚಂದ್ರನ ಆಶ್ರಮದ ಪೀಠಾಧ್ಯಕ್ಷ ಮಹಾಂತ ಶಿವಯೋಗಿ ಸ್ವಾಮೀಜಿ ನೆರವೇರಿಸಿದರು. ಈ ವಿಶೇಷ ಕ್ಷಣವನ್ನು ಭಕ್ತರು ಕಣ್ತುಂಬಿಕೊಂಡು ಪುನೀತರಾಗಿದ್ದಾರೆ.

### ಜಲ, ಕ್ಷೀರಗಳಿಂದ ಶಿವನಿಗೆ ಅಭಿಷೇಕ

• ಉದಯವಾಹಿನಿ, ಬೆಂಗಳೂರು

ಮಕರ ಸಂಕ್ರಾಂತಿ ವೇಳೆ ನಗರದ ಗವೀಪುರದ ಗುಟ್ಟಹಳ್ಳಿಯಲ್ಲಿರುವ ಐತಿಹಾಸಿಕ ಪ್ರಸಿದ್ಧ ಗವಿಗಂಗಾಧರೇಶ್ವರ ದೇವಾಲಯದ ಶಿವಲಿಂಗದ ಮೇಲೆ ಸೂರ್ಯನ ರಶ್ಮಿ ಸ್ಪರ್ಶವಾಯಿತು. ಗುರುವಾರ ಸಂಜೆ 5.19 ರಿಂದ 5.26ರವರೆಗೆ ಒಟ್ಟು ಆರು ನಿಮಿಷ ಆರು ಸೆಕೆಂಡುಗಳ ಕಾಲ ಭಾಸ್ಕರನ ಸ್ಪರ್ಶವಾಯಿತು. ಆರು ನಿಮಿಷದವರೆಗೆ ಸಂಭವಿಸಿದ ಪವಾಡ ಸದೃಶ್ಯ ಕ್ಷಣದ ವೇಳೆ ಶಿವಲಿಂಗದ ಮೇಲೆ ಎಳನೀರು ಹಾಗೂ ಕ್ಷೀರಾಭಿಷೇಕ ಮಾಡಲಾಯಿತು.

ಈ ದೃಶ್ಯವನ್ನು ಕಣ್ತುಂಬಿಕೊಳ್ಳಲು ದೇವಾಲಯದ ಆಡಳಿತ ಮಂಡಳಿಯು ದೇವಸ್ಥಾನದ ಹೊರಗೆ ಎಲ್‌ಇಡಿ ವ್ಯವಸ್ಥೆ ಮಾಡಲಾಗಿತ್ತು. ಸಹಸ್ರಾರು ಮಂದಿ ಭಕ್ತರು ದಿವ್ಯ ಕ್ಷಣವನ್ನು ಕಣ್ತುಂಬಿಕೊಂಡರು. ನಂದಿ ಕೊಂಬಿನ ಮೂಲಕ ಶಿವನ ಗರ್ಭಗೃಹ ಪ್ರವೇಶಿಸಿದ ಸೂರ್ಯರಶ್ಮಿ, ಸುಮಾರು 2 ನಿಮಿಷ ಶಿವಲಿಂಗವನ್ನು ಸ್ಪರ್ಶಿಸಿದೆ. ದೇವರ ದರ್ಶನಕ್ಕೆ ಸುಮಾರು 200 ಮೀಟರ್‌ನಷ್ಟು ಉದ್ದದ ಸರತಿ ಸಾಲಲ್ಲಿ ಭಕ್ತರು ನಿಂತಿದ್ದು, ದೇವಸ್ಥಾನದ ಆವರಣದಲ್ಲಿ ಎಲ್‌ಇಡಿ ಸ್ಕ್ರೀನ್ ವ್ಯವಸ್ಥೆ ಮಾಡಲಾಗಿತ್ತು.ಮೋಡ ಕವಿದ ವಾತಾವರಣದಿಂದಾಗಿ 2025ರಲ್ಲಿ ಸೂರ್ಯರಶ್ಮಿ ಶಿವಲಿಂಗವನ್ನು ಸ್ಪರ್ಶಿಸಲು ಸಾಧ್ಯವಾಗಿರಲಿಲ್ಲ. ಈ ವರ್ಷ ಭಕ್ತರು ಅಪರೂಪದ ದೃಶ್ಯವನ್ನು ಕಣ್ತುಂಬಿಕೊಂಡರು. ಈ ವೇಳೆ ಓಂ ನಮಃ ಶಿವಾಯ ಎಂದು ಶಿವನಾಮವನ್ನ ಪಠಿಸಿದರು.

ಸೂರ್ಯನು ದಕ್ಷಿಣಾಯಣದಿಂದ ಉತ್ತರಾಯಣಕ್ಕೆ ತನ್ನ ಪಥ ಬದಲಿಸುವ ಈ ದಿನವನ್ನು ಅತ್ಯಂತ ಪವಿತ್ರವೆಂದು ಪರಿಗಣಿಸಲಾಗುತ್ತದೆ. ದಕ್ಷಿಣದಿಂದ ಉತ್ತರಕ್ಕೆ ಪಥ ಬದಲಿಸುವ ಸೂರ್ಯನ ಚಲನೆ ಗುರುತಿಸುವ ಮಕರ ಸಂಕ್ರಾಂತಿ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಆಚರಿಸಲಾಯಿತು. ಬೆಂಗಳೂರಲ್ಲಿ ಜನರು ದೇವಾಲಯಗಳಿಗೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಜೊತೆಗೆ ನೆರೆಹೊರೆಯವರು ಮತ್ತು ಸ್ನೇಹಿತರಿಗೆ 'ಎಳ್ಳು-ಬೆಲ್ಲ' ಹಂಚಿ ಪರಸ್ಪರ ಶುಭಾಶಯ ವಿನಿಯಮ ಮಾಡಿಕೊಂಡರು.

**ಇದು ಶುಭ ಸಂಕೇತ ಎಂದ ಅರ್ಚಕರು :** ಸೂರ್ಯ ಸ್ಪರ್ಶದ ಬಳಿಕ ಮಾತನಾಡಿದ ಗವಿಗಂಗಾಧರೇಶ್ವರ ದೇಗುಲದ ಪ್ರಧಾನ ಅರ್ಚಕ ಸೋಮಸುಂದರ ದೀಕ್ಷಿತ್, ವಿಶೇಷವಾದ ದಿನವಾಗಿದ್ದು, ವಿಸ್ಮಯ ನೋಡಿ ನನಗೆ ವಿಶೇಷ ಸಂತೋಷವಾಗಿದೆ ಎಂದರು. ದೇವರಿಗೆ ಅಭಿಷೇಕ ಮಾಡಿ ಆನಂದದಿಂದ ನೋಡಿದೆ, ಈ ನನ್ನ ಆನಂದ ಭಕ್ತರಿಗೆ ಹಂಚುತ್ತಿದ್ದೇನೆ. ಈಶ್ವರನ ಮೇಲೆ ಹಾಲು ಸುರಿದಾಗ, ಸೂರ್ಯನ ಕಿರಣ ಬಿದ್ದಾಗ. ಲಿಂಗದ ಕಪ್ಪು ಎಲ್ಲಿಯೂ ಕಾಣಿಸಿಲ್ಲ, ನಿನ್ನೆ ಸೂರ್ಯ ಬಂದಿರಲಿಲ್ಲ. ಆದರೆ ಈಗ ಸೂರ್ಯ ಬಂದ, ಪ್ರವೇಶ ಮಾಡಿ ಹೋದ, ಎಲ್ಲರಿಗೂ ಶುಭವಾಗಲಿ ಎಂದರು. ಇನ್ನು ಪೂರ್ಣ ಶಿವಲಿಂಗದ ಮೇಲೆ ರಶ್ಮಿ ಪೂರ್ಣವಾಗಿತ್ತು. ಈ ವೇಳೆ ಎಲ್ಲಿಯೂ ಕಪ್ಪು ಚುಕ್ಕೆ ಕಾಣಿಸಿಲ್ಲ. ಈ ರೀತಿ ಕಪ್ಪು ಚುಕ್ಕಿ ಕಾಣಿಸದೇ ಇದ್ದಿದ್ದು ಒಳ್ಳೆಯದರ ಸಂಕೇತ ಅಂತ ಹೇಳಿದ್ರು.

### ಶಿವಗಂಗೆ ಬೆಟ್ಟದ ತುದಿಯಲ್ಲಿ ತೀರ್ಥ ಉದ್ಭವ

ಮಕರ ಸಂಕ್ರಾಂತಿ ದಿನದಂದು ನೆಲಮಂಗಲದ ಪ್ರಸಿದ್ಧ ಶಿವಗಂಗೆ ಬೆಟ್ಟದ ತುತ್ತತುದಿಯಲ್ಲಿ ಗಂಗಾ ತೀರ್ಥ ಉದ್ಭವವಾಗಿ ಜನರು ಪುನೀತರಾಗಿದ್ದಾರೆ. ನೆಲಮಂಗಲ ತಾಲ್ಲೂಕಿನ ದಕ್ಷಿಣ ಕಾಶಿ ಶಿವಗಂಗೆ ಬೆಟ್ಟದ ತುದಿಯ ಕಂಬದ ಕೆಳಗೆ ಮಕರ ಲಗ್ನದಲ್ಲಿ ಗಂಗಾ ತೀರ್ಥ ಉದ್ಭವವಾಗಿದೆ. ಭೂಮಿಯಿಂದ ಸುಮಾರು 4,559 ಅಡಿ ಎತ್ತರವಿರುವ ಶಿವಗಂಗೆ ಬೆಟ್ಟದಲ್ಲಿ ವಿಸ್ಮಯ ರೀತಿಯಲ್ಲಿ ಪ್ರತಿ ವರ್ಷವೂ ನಡೆಯುವ ಕೌತುಕ ಇದಾಗಿದೆ. ಇಲ್ಲಿ ನೆಲೆಸಿರುವ ಶ್ರೀ ಗಂಗಾಧರೇಶ್ವರ ಮತ್ತು ಶ್ರೀ ಗಿರಿಜೆಗೆ ಕಲ್ಯಾಣೋತ್ಸವ ನೆರವೇರಿತು. ನಂತರ ಶ್ರೀ ಗಂಗಾಧರೇಶ್ವರನಿಗೆ ವಿಶೇಷ ಪೂಜೆ ಮಾಡಲಾಯಿತು. ಬಳಿಕ ಬೆಟ್ಟ ತುದಿಯಲ್ಲಿ ಉದ್ಭವವಾದ ತೀರ್ಥ ನೀರನ್ನ ತಂದು ಗಿರಿಜಾ ಕಲ್ಯಾಣೋತ್ಸವ ಚಾಲನೆ ನೀಡಲಾಯಿತು. ಶಾಸಕ ಶ್ರೀನಿವಾಸ್ ಸಾವಿರಾರು ಭಕ್ತರ ಸಮ್ಮುಖದಲ್ಲಿ ಗಿರಿಜಾ ಕಲ್ಯಾಣೋತ್ಸವ ಚಾಲನೆ ನೀಡಿ, ದೇವರ ದರ್ಶನ ಪಡೆದಿದ್ದಾರೆ.

## ಪಾದಯಾತ್ರೆಗೆ ಬಿಜೆಪಿಯಲ್ಲಿ ಒಟ್ಟಿಗೆ ಹೆಜ್ಜೆ ಹಾಕುವ ಕಾಲುಗಳು ಬೇಕಲ್ಲವೇ

• ಉದಯವಾಹಿನಿ, ಬೆಂಗಳೂರು

ವಿರೋಧ ಪಕ್ಷದ ನಾಯಕರಾಗಿದ್ದ ಸಿದ್ದರಾಮಯ್ಯನವರಿಗೆ, ಜನಾರ್ದನ ರೆಡ್ಡಿ ಸವಾಲು ಹಾಕಿದರು ಎನ್ನುವ ಕಾರಣಕ್ಕಾಗಿ, ಕಾಂಗ್ರೆಸ್ ಪಾರ್ಟಿಯು, ಬಳ್ಳಾರಿ ಟು ಬೆಂಗಳೂರು ಪಾದಯಾತ್ರೆ ನಡೆಸಿತ್ತು. ಈಗ, ಬಿಜೆಪಿಯ ಸರದಿ, ಬಿಜೆಪಿಗೆ ಈ ಬಾರಿ ಜೆಡಿಎಸ್ ಸಾಥ್ ನೀಡಲಿದೆ.

ಕೆಲವು ದಿನಗಳ ಹಿಂದೆ, ಬಿಜೆಪಿಯ ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿ ನಿವಾಸದ ಮುಂದೆ, ಕಾಂಗ್ರೆಸ್ ಶಾಸಕ ಭರತ್ ರೆಡ್ಡಿ ಮತ್ತು ಬೆಂಬಲಿಗರು ಬ್ಯಾನರ್ ಕಟ್ಟುವ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಭಟನೆಯನ್ನು ನಡೆಸಿದ್ದರು. ಆ ವೇಳೆ, ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ ಎನ್ನುವವರು ಮೃತ ಪಟ್ಟಿದ್ದರು. ಈ ವಿಚಾರ, ಬಿಜೆಪಿ ಮತ್ತು ಕಾಂಗ್ರೆಸ್ ನಾಯಕರ ತೀವ್ರ ವಾಕ್ಸಮರಕ್ಕೆ ಕಾರಣವಾಗಿದೆ.

ಈಗ, ಬಿಜೆಪಿ ಮತ್ತು ಜೆಡಿಎಸ್ ಜಂಟಿಯಾಗಿ ಪಾದಯಾತ್ರೆ ನಡೆಸಲು ಮುಂದಾಗಿದೆ. ಜನವರಿ ಹದಿನೇಳರಂದು ಬಳ್ಳಾರಿಯಲ್ಲಿ ಬೃಹತ್ ಸಮಾವೇಶದ ನಂತರ, ಬೆಂಗಳೂರಿಗೆ ಪಾದಯಾತ್ರೆ ಆರಂಭವಾಗಲಿದೆ. ಜನವರಿ ಐದರಂದು, ಬೆಂಗಳೂರಿನ ಅರಮನೆ ಮೈದಾನದಲ್ಲಿ ಸಮಾರೋಪ ಕಾರ್ಯಕ್ರಮ ನಡೆಯಲಿದೆ. ಬಿಜೆಪಿ – ಜೆಡಿಎಸ್ ಪಾದಯಾತ್ರೆಯ ಬಗ್ಗೆ, ಕರ್ನಾಟಕ ಸಚಿವರಾದ ಪ್ರಿಯಾಂಕ್ ಖರ್ಗೆ ಲೇವಡಿ ಮಾಡಿದ್ದಾರೆ. ರಾಜ್ಯ ಐಟಿ, ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತರಾಜ್ ಇಲಾಖೆಯ ಸಚಿವರಾದ ಖರ್ಗೆ, ಪಾದಯಾತ್ರೆ ನಡೆಸಲು ಜೊತೆಯಾಗಿ ಹೆಜ್ಜೆ ಇಡುವವರು ಬೇಕಲ್ಲವೇ ಎಂದು ಲೇವಡಿ ಮಾಡಿದ್ದಾರೆ. ಆ ಮೂಲಕ, ಬಿಜೆಪಿಯಲ್ಲಿನ ಆಂತರಿಕ ಭಿನ್ನಮತದ ಬಗ್ಗೆ ವ್ಯಂಗ್ಯವಾಡಿದ್ದಾರೆ. ಪ್ರಿಯಾಂಕ್ ಖರ್ಗೆ ಮಾಡಿರುವ ಟ್ವೀಟ್ ಹೀಗಿದೆ: ಪಾದಯಾತ್ರೆ ಮಾಡಬೇಕೆಂದರೆ ಒಟ್ಟಿಗೆ ಹೆಜ್ಜೆ ಹಾಕುವ ಕಾಲುಗಳು ಬೇಕು, ಆದರೆ ಬಿಜೆಪಿಯಲ್ಲಿ ಒಬ್ಬರಿಗೊಬ್ಬರು ಕಾಲೆಳೆಯುವವರೇ ಇರುವಾಗ ಪಾದಯಾತ್ರೆಗೆ ಪಾದಗಳು ಸೇರುವುದಾದರೂ ಹೇಗೆ! ಕಾಲೆಳೆದುಕೊಳ್ಳುವ ಆಟದಲ್ಲಿ ಬಳ್ಳಾರಿ ಪಾದಯಾತ್ರೆ ಪ್ರಹಸನದ ಪ್ರದರ್ಶನ ಆರಂಭಕ್ಕೂ ಮುನ್ನವೇ ತೆರೆ ಬಿದ್ದಿದೆ.



**ಬಿಜೆಪಿ ಜೆಡಿಎಸ್ ಜಂಟಿ ಪಾದಯಾತ್ರೆ**

ಪಾದಯಾತ್ರೆಯನ್ನು ಮುನ್ನಡೆಸುವ ನಾಯಕತ್ವವಿಲ್ಲ, ಯಾರಾದರೂ ನಾಯಕರಾಗಿಬಿಡುವ ಅಸೂಯೆ, ಬಣ ಜಗಳದಲ್ಲಿ ಒಟ್ಟಿಗೆ ಹೆಜ್ಜೆ ಹಾಕುವಲ್ಲಿ ಇಲ್ಲದ ಒಮ್ಮತ, ಇದೆಲ್ಲಕ್ಕೂ ಮಿಗಿಲಾಗಿ ಪಾದಯಾತ್ರೆಗೆ ವ್ಯಕ್ತವಾಗದ ಜನ ಬೆಂಬಲ, ಇದೆಲ್ಲವನ್ನೂ ಅರಿತ ಬಿಜೆಪಿಯವರ ಪಾದಗಳು ಜಗನ್ನಾಥ ಭವನದಿಂದ ಹೊರಗೆ ಹೊರಡದೆ ನಿಂತಿವೆ! ಬಿಜೆಪಿಯ ಪಾದಯಾತ್ರೆ ರಾಜಕೀಯ ಜಿದ್ದಿಗಾಗಿಯೇ ಹೊರತು ಜನ ಕೇಂದ್ರಿತ ವಿಷಯಗಳಿಗಾಗಿ ಅಲ್ಲ, ಹೀಗಿರುವಾಗ ಯಾತ್ರೆಗೆ ಜನ ಬೆಂಬಲ ಸಿಗುವುದು ಕನಸಿನ ಮಾತು.

ಕಾಂಗ್ರೆಸ್ ನಡೆಸಿದ ಎಲ್ಲಾ ಪಾದಯಾತ್ರೆಗಳಿಗೆ ಅಪಾರ ಜನಬೆಂಬಲ ವ್ಯಕ್ತವಾಗಿದೆ, ನಾವು ಎತ್ತಿಕೊಂಡ ವಿಷಯಗಳಿಗೆ ಯಶಸ್ಸೂ ದೊರಕಿದೆ.

ಏಕೆಂದರೆ ನಾವು ಪಾದಯಾತ್ರೆಗಳನ್ನು ಜನರಿಗಾಗಿ ನಡೆಸಿದ್ದೇವೆ ಹೊರತು ರಾಜಕೀಯ ಮೇಲಾಟಕ್ಕಾಗಿ ಅಲ್ಲ. @BJP4Karnataka ಎಂದಿಗೂ ಕಾಂಗ್ರೆಸ್ಸಿನಂತೆ ಪಾದಯಾತ್ರೆ ಮಾಡಲು ಸಾಧ್ಯವಿಲ್ಲ, ಏಕೆಂದರೆ ಅವರಿಗೆ ಕಾಂಗ್ರೆಸ್ಸಿನಂತೆ ಜನಪರ ಚಿಂತನೆಗಳಿಲ್ಲ ಎಂದು ಪ್ರಿಯಾಂಕ್ ಖರ್ಗೆಯವರು, ಎಕ್ಸ್ (ಟ್ವಿಟ್ಟರ್) ಮೂಲಕ ತಿರುಗೇಟು ನೀಡಿದ್ದಾರೆ.

# ಕರ್ನಾಟಕ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ

## ಯಾರಿಗೂ ಯಾರದೇ ಭಯ ಇಲ್ಲ. ಘನತೆ ಗೌರವ ಮೀರಿ ಅತ್ಯಂತ ಕೀಳು ಮಟ್ಟದ ಭಾಷೆ ಬಳಸುತ್ತಿದ್ದಾರೆ

• ಉದಯವಾಹಿನಿ, ದಾವಣಗೆರೆ

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಗೃಹ ಸಚಿವರಿಗೆ ಪೊಲೀಸರ ಮೇಲೆ ನಿಯಂತ್ರಣ ಇಲ್ಲ. ಯಾರಿಗೂ ಯಾರದೇ ಭಯ ಇಲ್ಲ. ಘನತೆ ಗೌರವ ಮೀರಿ ಅತ್ಯಂತ ಕೀಳು ಮಟ್ಟದ ಭಾಷೆ ಬಳಸುತ್ತಿದ್ದಾರೆ ಅಧಿಕಾರಿಗಳು, ಜನರು ಈ ಸರ್ಕಾರದ ವಿರುದ್ಧ ತಿರುಗಿ ಬೀಳುತ್ತಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ್ ಬೊಮ್ಮಾಯಿ ಹೇಳಿದರು.

ಶಿಡ್ಲಘಟ್ಟದಲ್ಲಿ ಪೌರಾಯುಕ್ತೆ ಮೇಲೆ ಕಾಂಗ್ರೆಸ್ ನಾಯಕ ಆವಾಜ್ ಹಾಕಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಈ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಗೃಹ ಸಚಿವರಿಗೆ ಪೊಲೀಸರ ಮೇಲೆ ನಿಯಂತ್ರಣ ಇಲ್ಲ. ಪೊಲೀಸ್ ಠಾಣೆಗಳು ಕಲೆಕ್ಷನ್ ಸೆಂಟರ್‌ಗಳಾಗಿವೆ. ಯಾರ ಭಯ ಯಾರಿಗೂ ಇಲ್ಲ. ಕಾಂಗ್ರೆಸ್ ನಾಯಕರು ಘನತೆ ಗೌರವ ಮೀರಿ ಅತ್ಯಂತ ಕೀಳು ಮಟ್ಟದ ಭಾಷೆ ಬಳಸುತ್ತಿದ್ದಾರೆ. ಅಧಿಕಾರಿಗಳು, ಜನರು ಈ ಸರ್ಕಾರದ ವಿರುದ್ಧ ತಿರುಗಿ ಬೀಳುತ್ತಾರೆ ಎಂದು ಎಚ್ಚರಿಸಿದರು. ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಳ್ಳಾರಿಯಿಂದ ಪಾದಯಾತ್ರೆ ಮಾಡುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಈ ಕುರಿತು ಪಕ್ಷದ ರಾಜ್ಯಾಧ್ಯಕ್ಷರು ಹೈಕಮಾಂಡ್ ಜೊತೆ ಮಾತನಾಡಿ ಶೀಘ್ರ ತೀರ್ಮಾನ ಮಾಡುತ್ತಾರೆ ಎಂದು ಹೇಳಿದರು. ಇನ್ನು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಬದಲಾವಣೆ ಮಾಡುವ ವಿಚಾರ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಈಗ ಸದ್ಯಕ್ಕೆ ಆ ಪ್ರಶ್ನೆಯೇ ಉದ್ಭವಿಸುವುದಿಲ್ಲ. ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರ, ಕೆಲಸ ಮಾಡುತ್ತಿದ್ದಾರೆ, ಸಂಘಟನೆ ನಡೆಯುತ್ತಿದೆ ಎಂದು ಹೇಳಿದರು

**ಸರ್ಕಾರದ ವಿರುದ್ಧ ಬೊಮ್ಮಾಯಿ ವಾಗ್ದಾಳಿ**

**ಸಮಾಜದಲ್ಲಿ ಮುಷ್ಠಿ ಇದ್ದಾಗ ಮಾತ್ರ ಶಕ್ತಿ**


ಸಮಾಜದಲ್ಲಿ ಮುಷ್ಠಿ ಇದ್ದಾಗ ಮಾತ್ರ ಶಕ್ತಿ ಇರುತ್ತದೆ. ಪಂಚಮಸಾಲಿ ಸಮುದಾಯದ ಎರಡೂ ಪೀಠಗಳ ನಡುವೆ ಎಷ್ಟೇ ಭಿನ್ನಾಭಿಪ್ರಾಯ ಮೂಡಿಸುವ ಪ್ರಯತ್ನ ನಡೆದರೂ ವಚನಾನಂದ ಸ್ವಾಮೀಜಿಗಳು ಎರಡೂ ಪೀಠಗಳು ಒಂದು ಎಂದು ಹೃದಯಗಳನ್ನು ಬೆಸೆಯುವ ಕೆಲಸ ಮಾಡುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ಹರಿಹರದ ಶ್ರೀ ಹರಪೀಠದಲ್ಲಿ ಹರಜಾತ್ರಾ, ಮಹೋತ್ಸವ ಹಾಗೂ ಕಿತ್ತೂರು ರಾಣಿ ಚನ್ನಮ್ಮಾಜೀ ಅವರ ದ್ವಿಶತಮಾನ ವಿಜಯೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ಹರಿ ಮತ್ತು ಹರ ಸಂಗಮ ಕ್ಷೇತ್ರ ಹರಿಹರ, ಈ ಎರಡೂ ಭಕ್ತಗಣ ಎಲ್ಲಿ ಕೂಡುತ್ತಾರೋ ಅಲ್ಲಿ ನಮ್ಮ ಸಂಸ್ಕೃತಿ ಜಾತೆಯಾಗುತ್ತದೆ. ಹರಿಹರ ಪೀಠದಲ್ಲಿ ನಡೆಯುವ ಜಾತ್ರೆ ಬಹಳ ಅರ್ಥ ಪೂರ್ಣ ಆಗುತ್ತಿರುವುದು ಇದಕ್ಕೆ ನಮ್ಮ ಗುರುಗಳಾದ ವಚನಾನಂದ ಸ್ವಾಮೀಜಿಗಳು ಕಾರಣ, ಅವರು ಶ್ವಾಸ ಗುರುಗಳು, ಶ್ವಾಸ ಜ್ಞಾನ ಅಂದರೆ ಅದು ಅತ್ಯಂತ ಉತ್ಕೃಷ್ಟ ಜ್ಞಾನ. ನಾವೂ ಉಸಿರಾಡುತ್ತೇವೆ. ಆದರೆ ನಮಗೆ ಜ್ಞಾನ ಮತ್ತು ನಿಯಂತ್ರಣ ಇಲ್ಲ. ಯಾರು ಶ್ವಾಸವನ್ನು ನಿಯಂತ್ರಿಸುತ್ತಾರೋ ಅವರೇ ಗುರು.

ಅವರು ಸಮಾಜವನ್ನೂ ಕೂಡ ಅದೇ ಶಿಸ್ತು ಮತ್ತು ನಿಯಮದಿಂದ ಸಂಸ್ಕಾರವನ್ನು ಮತ್ತು ಸಂಸ್ಕೃತಿಯಿಂದ ಕಟ್ಟಬೇಕೆಂಬ ಮಹದಾಸೆ ಹೊಂದಿದ್ದಾರೆ.

ಅದು ಅಷ್ಟು ಸುಲಭದ ಮಾತಲ್ಲ, ಯೋಗಾ ಗುರುಗಳ ಸಾಧನೆ ಸುಲಭವಲ್ಲ. ಅವರು ಮಾಡಿರುವ ಸಾಧನೆ ನೋಡಿದಾಗ ಈ ಸಮಾಜವನ್ನು ಧಾರ್ಮಿಕವಾಗಿ ಆದ್ಯಾತ್ಮಿಕ ಶೈಕಣಿಕ ಸಮಾಜಿಕವಾಗಿ ಆದರ್ಶ ಸಮಾಜ ಕಟ್ಟುತ್ತಾರೆ ಎನ್ನುವ ವಿಶ್ವಾಸ ಇದೆ ಎಂದು ಹೇಳಿದರು.

**ಶ್ರಮದ ಫಲದಿಂದಲೇ ಸಮಾಜ ಕಟ್ಟಲು ಸಾಧ್ಯ**


ರೈತಾಪಿ ಸಮಾಜ ಮಣ್ಣಿನ ಜೊತೆಗೆ ಹಣ್ಣಾಗಿ ಮಣ್ಣಿನಲ್ಲಿ ಬೆವರು ಸುರಿಸಿ ಬಂಗಾರದ ಬೆಳೆ ಬೆಳೆಯುವ ಸಮಾಜ. ಯಾರು ಮಣ್ಣಿನೊಂದಿಗೆ ಇರುತ್ತಾರೊ ಅವರು ಪ್ರಾಮಾಣಿಕರಿರುತ್ತಾರೆ. ನಿಷ್ಠೆಯಿಂದ ಇರುತ್ತಾರೆ. ಘಟ್ಟದ ಮೇಲೆ ಇರುವವರು ಕಷ್ಟದ ಕೆಲಸ ಮಾಡತ್ತಾರೆ. ಸಮುದ್ರದ ತಟದಲ್ಲಿ ಇರವವರು ಸಾಹಸಿಗಳು, ಮಣ್ಣಿನ ಜೊತೆಗೆ ಇರುವವರು ಪ್ರಾಮಾಣಿಕರು. ಐದು ಸಾವಿರ ವರ್ಷಗಳಿಂದ ಈ ಮಣ್ಣಿನ ಸಾರ ಉಳಿಸಿಕೊಂಡು ಬಂದವರು ಯಾವುದೇ ಸಕಾರ ಅಲ್ಲ. ರೈತ, ಕೆಳಗಿದ್ದ ಮಣ್ಣು ಮೇಲೆ ಬರಬೇಕು. ಮೇಲಿದ್ದ ಮಣ್ಣು ಕೆಳಗೆ ಬರಬೇಕು ಆಗ ಮಣ್ಣಿನ ಸಾರ ಉಳಿಯುತ್ತದೆ. ಯಾರಿಗೆ ನಿದ್ದೆ ಬರುವುದಿಲ್ಲ ಅವರ ಬಳಿ ಹಾಸಿಗೆ ಇದೆ. ಯಾರಿಗೆ ನಿದ್ದೆ ಬರುತ್ತದೆ ಅವರ ಬಳಿ ಹಾಸಿಗೆ ಇಲ್ಲ. ಮೈ ಮುರಿದು ದುಡಿದರೆ ಹಾಸಿಗೆ ಇದ್ದವನಿಗೂ ನಿದ್ದೆ ಬರುತ್ತದೆ. ಮೈ ಮುರಿದು ದುಡಿದವನಿಗೆ ಆರ್ಥಿಕ ಶಕ್ತಿ ಬಂದರೆ ಅವನಿಗೂ ಹಾಸಿಗೆ ಸಿಗುತ್ತದೆ. ಆದರೆ ಎರಡಕ್ಕೂ ಶ್ರಮ ಬೇಕು. ಶ್ರಮದ ಫಲದಿಂದಲೇ ಸಮಾಜ ಕಟ್ಟಲು ಸಾಧ್ಯ ಎಂದು ಹೇಳಿದರು.



**ಈ ದಿನದ ದರ** ಪೆಟ್ರೋಲ್: 102.66 ₹/L ಡೀಸೆಲ್ : 90.99 ₹/L ಬಂಗಾರ: ₹14,362/Gram24ct ₹13,165/Gram22ct ಬೆಳ್ಳಿ: ₹295.00/Gram

## ಪುರಂದರ ನಮನ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು



ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಕರ್ನಾಟಕ ಸಂಗೀತ ಪಿತಾಮಹ ಶ್ರೀ ಪುರಂದರದಾಸರ ಆರಾಧನೆಯ ಅಂಗವಾಗಿ ಜನವರಿ 18, ಭಾನುವಾರ ಸಂಜೆ 6-30ಕ್ಕೆ ಪುರಂದರ ನಮನ ವಿಶೇಷ ದಾಸವಾಣಿ ಕಾರ್ಯಕ್ರಮ. ಗಾಯನ ಶ್ರೀಮತಿ ಸುಷ್ಮಾ ಶ್ರೇಯಸ್, ಕೀ-ಬೋರ್ಡ್ ಶ್ರೀ ಟಿ.ಎಸ್. ರಮೇಶ್, ತಬಲಾ ಶ್ರೀ ಸರ್ವೋತ್ತಮ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಕೆಂಗೇರಿ ಉಪನಗರ, ಬೆಂಗಳೂರು-560060 ಸರ್ವರಿಗೂ ಆತ್ಮೀಯ ಸುಸ್ವಾಗತ

## ಅಂಚೆ ಕಚೇರಿ ಪುನರಾರಂಭ: ತೇಜಸ್ವಿ ಸೂರ್ಯ ಭರವಸೆ

• ಉದಯವಾಹಿನಿ, ಬೆಂಗಳೂರು

ನಗರದ ಬಸವನಗುಡಿಯ ಅಶೋಕ ನಗರ ಅಂಚೆ ಕಚೇರಿಯನ್ನು ಪುನರಾರಂಭಿಸುವುದಾಗಿ ಸಂಸದ ತೇಜಸ್ವಿ ಸೂರ್ಯ ಭರವಸೆ ನೀಡಿದರು. ಶಾಸಕ ರವಿಸುಬ್ರಮಣ್ಯ ಹಾಗೂ ಮಾಜಿ ಮೇಯರ್ ಕಟ್ಟೆ ಸತ್ಯನಾರಾಯಣ ನೇತೃತ್ವದಲ್ಲಿ ಬಂದ್ ಆಗಿರುವ ಅಶೋಕ ನಗರ ಅಂಚೆ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು. ಸ್ಥಳಕ್ಕೆ ಆಗಮಿಸಿದ ತೇಜಸ್ವಿ ಅವರು ಪ್ರತಿಭಟನಕಾರರಿಂದ ಮನವಿ ಪತ್ರ ಸ್ವೀಕರಿಸಿ ಮಾತನಾಡಿದರು. ಸ್ಥಳೀಯರ ಮನವಿಯನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ವಿಷಯನ್ನು ಕೇಂದ್ರ ಸಚಿವರು ಹಾಗೂ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಇತ್ಯರ್ಥಗೊಳಿಸಲಾಗುವುದು' ಎಂದು ಹೇಳಿದರು. ಅಂಚೆ ಇಲಾಖೆ ಅಧಿಕಾರಿಗಳು ಮತ್ತು ಬಸವನಗುಡಿಯ ನಾಗರಿಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಶಾಂತಿಯನ್ನು ಸಾರುವುದೇ ನಿಜವಾದ ಧರ್ಮ: ಯಡಿಯೂರಪ್ಪ

• ಉದಯವಾಹಿನಿ, ಕೆಂಗೇರಿ

ಧರ್ಮವನ್ನು ಸೀಮಿತ ಚೌಕಟ್ಟಿನಲ್ಲಿ ಅರ್ಥೈಸಲಾಗುವುದಿಲ್ಲ. ಶಾಂತಿಯನ್ನು ಸಾರುವ ಹಾಗೂ ಸೌಹಾರ್ದತೆ ಬೆಸೆಯುವ ಬಂಧವೇ ನಿಜವಾದ ಧರ್ಮ' ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಭಿಪ್ರಾಯಪಟ್ಟರು. ಸೋಂಪುರದ ಬಸವೇಶ್ವರಸ್ವಾಮಿ ರಥೋತ್ಸವ ಮತ್ತು ಕಡಲೆಕಾಯಿ ಪರಿಷೆಯ ಅಂಗವಾಗಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಅರ್ಚಕ ದಂಪತಿಗಳನ್ನು ಸನ್ಮಾನಿಸಿ ಮಾತನಾಡಿದರು. 'ಅಯೋಧ್ಯೆಯ ಶ್ರೀರಾಮಮಂದಿರದಲ್ಲಿ ಪ್ರತಿಯೊಬ್ಬರೂ ಶ್ರೀರಾಮನ ದರ್ಶನ ಮಾಡಿ ದೈವಕೃಪೆಗೆ ಪಾತ್ರರಾಗಬೇಕು. ಪ್ರಕೃತಿ ಹಾಗೂ ಮನುಜನ ನಡುವಿನ ಸಂಬಂಧದ ಸಾಂಕೇತಿಕವಾಗಿ ಸಂಕ್ರಾಂತಿ ಹಬ್ಬವನ್ನು ಆಚರಿಸಲಾಗುತ್ತದೆ. ಇಂತಹ ಕಾರ್ಯಕ್ರಮಗಳ ಮೂಲಕ ನಾಡಿನ ಸಂಸ್ಕೃತಿ, ಸಂಪ್ರದಾಯಗಳು ಮತ್ತಷ್ಟು ಶ್ರೀಮಂತವಾಗಲಿದೆ' ಎಂದರು. ಬಸವಣ್ಣದೇವರ ಸೇವಾ ಸಮಿತಿಯ ಕಾರ್ಯ ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ವಿಶ್ವ ಒಕ್ಕಲಿಗರ ಮಹಾಸಂಸ್ಥಾನದ ಪೀಠಾಧಿಪತಿ ನಿಶ್ಚಲಾನಂದನಾಥ ಸ್ವಾಮೀಜಿ ಮಾತನಾಡಿ, 'ಪ್ರಗತಿಪರರು ಹಾಗೂ ಚಿಂತಕರ ಹೆಸರಿನಲ್ಲಿ ಹಿಂದೂ ಧರ್ಮವನ್ನು ಹಳಿಯುವ ಒಂದು ವರ್ಗ ಸಕ್ರಿಯವಾಗಿದೆ. ಇಂತಹ ಸ್ವಯಂಘೋಷಿತ ಬುದ್ಧಿಜೀವಿಗಳಿಂದ ಧರ್ಮದ ಉಳಿವು ಸಾಧ್ಯವೇ ಎಂದು ಪ್ರಶ್ನಿಸಿದರು. ರಾಜ್ಯ ಬಿಜೆಪಿ ರೈತ ಮೋರ್ಚಾ ಉಪಾಧ್ಯಕ್ಷ ಎಂ.ರುದ್ರೇಶ್ ಮಾತನಾಡಿ, ಸನಾತನ ಧರ್ಮದಲ್ಲಿ ದೇವಾಲಯಗಳ ಪಾತ್ರ ಹಿರಿದಾಗಿದ್ದು, ನೆಲಮೂಲ ಸಂಸ್ಕೃತಿಯ ಕೊಂಡಿಗಳೆನಿಸಿವೆ. ಹೀಗಾಗಿ ಧಾರ್ಮಿಕ ಕಾರ್ಯ ಹಾಗೂ ಧರ್ಮ ರಕ್ಷಣೆಯಲ್ಲಿ ತೊಡಗಿರುವ ಕೆಂಗೇರಿ ಹೋಬಳಿ ಸುತ್ತಮುತ್ತಲ ಗ್ರಾಮಗಳು ಸೇರಿದಂತೆ ನಗರ ವ್ಯಾಪ್ತಿಯ ಐನೂರಕ್ಕೂ ಹೆಚ್ಚು ಅರ್ಚಕ ದಂಪತಿಗಳಿಗೆ ಗೌರವ ಸಮರ್ಪಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

## ಡ್ರಗ್ಸ್ ದಂಧೆ, ಇಬ್ಬರು ವಿದೇಶಿಗರ ಬಂಧನ, ಸುಮಾರು 1 ಕೋಟಿ ರೂ. ಮೌಲ್ಯದ ವಸ್ತು ವಶ!

• ಉದಯವಾಹಿನಿ, ಬೆಂಗಳೂರು

ಪ್ರತ್ಯೇಕ ಮಾದಕ ದ್ರವ್ಯ ದಂಧೆ ಪ್ರಕರಣಗಳಲ್ಲಿ ಇಬ್ಬರು ವಿದೇಶಿ ಪ್ರಜೆಗಳನ್ನು ಬಂಧಿಸಿರುವುದಾಗಿ ಬೆಂಗಳೂರಿನ ಸಿಸಿಬಿಯ ಮಾದಕ ದ್ರವ್ಯ ನಿಯಂತ್ರಣ ಘಟಕ ತಿಳಿಸಿದೆ. ಆರೋಪಿಗಳಿಂದ 101 ಗ್ರಾಂ ಕೊಕೇನ್, 481 ಗ್ರಾಂ ಹೈಡ್ರೋ ಗಾಂಜಾ, ಅಪರಾಧಕ್ಕೆ ಬಳಸಲಾದ ಮೊಬೈಲ್ ಫೋನ್‌ಗಳು ಮತ್ತು ದ್ವಿಚಕ್ರ ವಾಹನಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದು, ಇವುಗಳ ಒಟ್ಟು ಅಂದಾಜು ಮೌಲ್ಯ ಸುಮಾರು 1 ಕೋಟಿ ರೂ. ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಮೊದಲ ಕಾರ್ಯಾಚರಣೆಯಲ್ಲಿ ಬೇಗೂರು ಪೊಲೀಸ್ ಠಾಣಾ ವ್ಯಾಪ್ತಿಯ ಜೆಇಬಿಎಸ್ ಲೇಔಟ್‌ನಲ್ಲಿ ವ್ಯಕ್ತಿಯೊಬ್ಬರು ಹೈಡ್ರೊ ಗಾಂಜಾ ಸಾಗಾಟ ಮಾಡುತ್ತಿದ್ದಾರೆ ಎಂಬ ಮಾಹಿತಿ ಮೇರೆಗೆ ಮಾದಕ ದ್ರವ್ಯ ನಿಯಂತ್ರಣ ಘಟಕದ ಅಧಿಕಾರಿಗಳು ದಾಳಿ ನಡೆಸಿದ್ದು, ವಿದೇಶಿ ಪ್ರಜೆಯನ್ನು ಬಂಧಿಸಿದ್ದಾರೆ. ಅಂದಾಜು 48 ಲಕ್ಷ ಮೌಲ್ಯದ ಹೈಡ್ರೋ ಗಾಂಜಾ, ಅಪರಾಧಕ್ಕೆ ಬಳಸಿದ್ದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಕೆಆರ್ ಪುರಂ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಮತ್ತೊಂದು ಕಾರ್ಯಾಚರಣೆಯಲ್ಲಿ ವಿದೇಶಿ ಪ್ರಜೆಯೊಬ್ಬರು ಕೊಕೇನ್ ಸರಬರಾಜು ಮಾಡುತ್ತಿದ್ದಾರೆ ಎಂಬ ಸುಳಿವು ಆಧರಿಸಿ ಅಧಿಕಾರಿಗಳು ದಾಳಿ ನಡೆಸಿ ಆರೋಪಿಯನ್ನು ಬಂಧಿಸಿದ್ದಾರೆ. ಬಂಧಿತರಿಂದ ಅಂದಾಜು 50.6 ಲಕ್ಷ ಮೌಲ್ಯದ ಕೊಕೇನ್, ಮೊಬೈಲ್ ಫೋನ್ ಮತ್ತು ಅಪರಾಧಕ್ಕೆ ಬಳಸಿದ್ದ ದ್ವಿಚಕ್ರ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಕೆಆರ್‌ಎಸ್‌ನಿಂದ 6 ಟಿಎಂಸಿ ನೀರು ತರುವ ಉದ್ದೇಶ

### ಜಲಮಂಡಳಿಯ 6ನೇ ಹಂತದ ಕಾವೇರಿ ಯೋಜನೆಗೆ ಮೀನಮೇಷ! ಬೆಂಗಳೂರು ಹೊರವಲಯಕ್ಕೆ ನೀರು ಸಿಗೋದ್ಯಾವಾಗ?

• ಉದಯವಾಹಿನಿ, ಬೆಂಗಳೂರು

ರಾಜಧಾನಿಯ ಹೊರವಲಯದಲ್ಲಿರುವ ಪ್ರದೇಶಗಳು ಹಾಗೂ ಸುತ್ತಮುತ್ತಲಿನ ಉಪನಗರಗಳ ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಜಲಮಂಡಳಿ ರೂಪಿಸಿರುವ ಕಾವೇರಿ 6ನೇ ಹಂತದ ಯೋಜನೆ ಗೆ ಅನುಮೋದನೆ ನೀಡಲು ಸರಕಾರ ಮೀನಮೇಷ ಎಣಿಸುತ್ತಿದೆ. ಸರಕಾರದ ವಿಳಂಬ ನೀತಿಯಿಂದಾಗಿ ಭವಿಷ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸುವ ಆತಂಕ ಎದುರಾಗಿದೆ. ಮಹಾನಗರದ ಹೊರವಲಯದಲ್ಲಿನ ಬಡಾವಣೆಗಳು ಸುತ್ತಲಿನ ಮಾದನಾಯಕನಹಳ್ಳಿ, ಹುಣಸಮಾರನಹಳ್ಳಿ, ಚಿಕ್ಕಬಾಣಾವರ, ನೆಲಮಂಗಲ, ಹೊಸಕೋಟೆ, ದೇವನಹಳ್ಳಿ, ಬಾಶೆಟ್ಟಿಹಳ್ಳಿ, ವಿಜಯಪುರಕ್ಕೆ ನೀರು ಪೂರೈಸುವ ಉದ್ದೇಶದಿಂದಲೇ ಕಾವೇರಿ 6ನೇ ಹಂತದ ಯೋಜನೆ ರೂಪಿಸಲಾಗಿದೆ.

**9 ತಿಂಗಳ ಹಿಂದೆಯೇ ಪ್ರಸ್ತಾವನೆ ಸಲ್ಲಿಕೆ**

ಈ ಸಂಬಂಧ 9 ತಿಂಗಳ ಹಿಂದೆಯೇ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಿ, ಅನುಮೋದನೆ ಕೋರಿ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಆದರೆ, ಈವರೆಗೆ ಅನುಮತಿ ದೊರೆತಿಲ್ಲ. ಕಾವೇರಿಯಿಂದ ನಗರದ ಜನತೆಯ ನೀರಿನ ದಾಹ ತಣಿಸಲು ಪ್ರತಿ 10 ವರ್ಷಕ್ಕೊಂದು ಯೋಜನೆ ರೂಪಿಸಿ ಅನುಷ್ಠಾನಗೊಳಿಸಲಾಗಿದೆ. ಮಳವಳ್ಳಿ ತಾಲ್ಲೂಕಿನ ತೊರೆಕಾಡನಹಳ್ಳಿಯಿಂದ 775 ಎಂಎಲ್‌ಡಿ ನೀರು ಪೂರೈಕೆಯ ಕಾವೇರಿ 5ನೇ ಹಂತದ ಯೋಜನೆಗೆ 2014ರಲ್ಲಿ ಚಾಲನೆ ನೀಡಲಾಯಿತು. ಕಾಮಗಾರಿ ಪೂರ್ಣಕ್ಕೆ 10 ವರ್ಷ




**ಪ್ರಸ್ತುತ ನೀರಿನ ಪೂರೈಕೆ ವಿವರ**

**ಸದ್ಯ ನಗರದ 1.50 ಕೋಟಿ ಜನಸಂಖ್ಯೆಗೆ ಜಲಮಂಡಳಿಯು 1 ರಿಂದ 5 ಹಂತದ ಯೋಜನೆಗಳಡಿಯಲ್ಲಿ 2225 ಎಂಎಲ್‌ಡಿ ನೀರನ್ನು ಪೂರೈಸುತ್ತಿದೆ. ಇದರಲ್ಲಿ ಸುಮಾರು 354 ಎಂಎಲ್‌ಡಿಯನ್ನು ಉಳಿತಾಯ ಮಾಡುತ್ತಿದೆ. ಉಳಿದ 1871 ಎಂಎಲ್‌ಡಿಯನ್ನು ಸರಬರಾಜು ಮಾಡುತ್ತಿದೆ.**

ಕಾಲಾವಕಾಶ ತೆಗೆದುಕೊಂಡು 2024ರ ಅಕ್ಟೋಬರ್‌ನಲ್ಲಿ ನೀರು ಸರಬರಾಜು ಮಾಡಲಾಯಿತು.

ಸಿಲಿಕಾನ್ ಸಿಟಿಯು ಶರವೇಗದಲ್ಲಿ ಅಭಿವೃದ್ಧಿ ಹೊಂದುತ್ತಿದ್ದು, ವರ್ಷದಿಂದ ವರ್ಷಕ್ಕೆ ಕುಡಿಯುವ ನೀರಿನ ಬೇಡಿಕೆ ಪ್ರಮಾಣ ಹೆಚ್ಚಾಗುತ್ತಲೇ ಇದೆ. ನಗರವು ಕುಡಿಯುವ ನೀರಿಗೆ ಕಾವೇರಿ ಮತ್ತು ಕೊಳವೆಬಾವಿಗಳನ್ನೇ ಅವಲಂಬಿಸಿದೆ. ನಗರೀಕರಣದ ಪ್ರಭಾವದಿಂದ ಅಂತರ್ಜಲ ಮಟ್ಟ ಕುಸಿಯುತ್ತಿದೆ. ಕಾವೇರಿಯಿಂದ ನಗರಕ್ಕೆ ಹಂಚಿಕೆಯಾಗಿದ್ದ ನೀರಿನ ಪ್ರಮಾಣದ ಕೋಟಾ ಕೂಡ ಮುಗಿದಿದೆ. ಎತ್ತಿನಹೊಳೆ ಯೋಜನೆಯಿಂದ ನಗರಕ್ಕೆ ನೀರು ಪೂರೈಸುವ ಯೋಜನೆಯು ಗಗನಕುಸುಮವಾಗಿಯೇ ಉಳಿದಿದೆ. ಹೀಗಾಗಿ, ಕುಡಿಯುವ ನೀರು ಪೂರೈಕೆ ಯೋಜನೆಗಳನ್ನು ಸಕಾಲದಲ್ಲಿ ಕೈಗೊಳ್ಳದಿದ್ದರೆ, ಭವಿಷ್ಯದಲ್ಲಿ ನೀರಿಗೆ ಹಾಹಾಕಾರ ಉಂಟಾಗಲಿದೆ.

**ಯಾವ್ಯಾವ ಪ್ರದೇಶಗಳಿಗೆ ನೀರು?:** ಕಾವೇರಿ 6ನೇ ಹಂತದ ಯೋಜನೆಯಡಿ ಹಂಚಿಕೆಯಾಗಿರುವ 6 ಟಿಎಂಸಿ ನೀರಿನ ಪೈಕಿ, 4 ಟಿಎಂಸಿಯನ್ನು ನಾಡಪ್ರಭು ಕೆಂಪೇಗೌಡ ಬಡಾವಣೆ, ಶಿವರಾಮ ಕಾರಂತ ಬಡಾವಣೆ ಸೇರಿದಂತೆ ಇತರೆ ಪ್ರದೇಶಗಳು ಹಾಗೂ ಉಳಿದ 2 ಟಿಎಂಸಿ ನೀರನ್ನು ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಬೇಡಿಕೆ ಅನುಸಾರ ಮಾದನಾಯಕನಹಳ್ಳಿ, ಹುಣಸಮಾರನಹಳ್ಳಿ, ಚಿಕ್ಕಬಾಣಾವರ, ನೆಲಮಂಗಲ, ಹೊಸಕೋಟೆ, ದೇವನಹಳ್ಳಿ, ಬಾಶೆಟ್ಟಿಹಳ್ಳಿ, ವಿಜಯಪುರಕ್ಕೆ ಸರಬರಾಜು ಮಾಡಲು ತೀರ್ಮಾನಿಸಲಾಗಿದೆ.

**ಕೆಆರ್‌ಎಸ್‌ಟು ಜಿಕೆವಿಕೆ:** ಕಾವೇರಿ 6ನೇ ಹಂತದಡಿ ನೀರು ತರಲು ರೂಪಿಸಿರುವ ವಿಸ್ತೃತ ಯೋಜನಾ ವರದಿಯಂತೆ ಕೆಆರ್‌ಎಸ್‌ನಿಂದ 2 ಕಿ.ಮೀ. ದೂರದ ಕಟ್ಟೇರಿ ಗ್ರಾಮದಲ್ಲಿ ನೀರು ಸಂಸ್ಕರಣಾ ಘಟಕ, ಶೇಖರಣಾ ಜಲಾಶಯ ನಿರ್ಮಿಸಿ ನೀರು ಪಂಪ್ ಮಾಡಲಾಗುತ್ತದೆ. ಬಳಿಕ ಗುರುತ್ವಾಕರ್ಷಣೆ ಬಲದ ಮೂಲಕ 82 ಕಿ.ಮೀ. ದೂರದ ರಾಮನಗರ ಬಳಿಯ ದೇವರ ಹೊಸಹಳ್ಳಿಯಲ್ಲಿ ನಿರ್ಮಿಸುವ ಶೇಖರಣಾ ಜಲಾಶಯಕ್ಕೆ ನೀರನ್ನು ಹರಿಸಲಾಗುತ್ತದೆ.

**6ನೇ ಹಂತದಡಿ 6 ಟಿಎಂಸಿ ಪೂರೈಕೆ**

**ಜಲಮಂಡಳಿಯು 6ನೇ ಹಂತದ ಯೋಜನೆಯಡಿ 6 ಟಿಎಂಸಿಯಷ್ಟು ನೀರನ್ನು 140 ಕಿ.ಮೀ. ದೂರದ ಕೆಆರ್ ಎಸ್‌ನಿಂದ ನಗರಕ್ಕೆ ತರಲು ಉದ್ದೇಶಿಸಿದೆ. ಇದಕ್ಕೆ 6939 ಕೋಟಿ ರೂ. ವೆಚ್ಚ ಅಂದಾಜಿಸಲಾಗಿದೆ. ಯೋಜನೆಗೆ 5177 ಕೋಟಿ ರೂ. ಹಾಗೂ ಭೂಸ್ವಾಧೀನಕ್ಕೆ 1822 ಕೋಟಿ ರೂ. ನಿಗದಿಪಡಿಸಿದೆ. ಯೋಜನೆಗೆ ಅಗತ್ಯವಿರುವ ಹಣ ಹೊಂದಿಸಲು ಜಲಮಂಡಳಿಯು ವಿಶ್ವಬ್ಯಾಂಕ್, ಜೈಕಾ, ಹುಡ್ಕೋ ಸೇರಿದಂತೆ ಇತರೆ ಹಣಕಾಸು ಸಂಸ್ಥೆಗಳ ಮೊರೆ ಹೋಗಿದೆ. ರಾಜ್ಯ ಸರಕಾರವು ಯೋಜನೆಗೆ ಒಪ್ಪಿಗೆ ನೀಡಿದ ಕೂಡಲೇ ಸಾಲ ಕೋರಲು ನಿರ್ಧರಿಸಿದೆ.**

## ಲಾಲ್‌ಬಾಗ್ ಫಲಪುಷ್ಪ ಪ್ರದರ್ಶನ: ತೇಜಸ್ವಿ ವಿಸ್ಮಯ ಲೋಕ ಅನಾವರಣ

• ಉದಯವಾಹಿನಿ, ಬೆಂಗಳೂರು

ಸಸ್ಯಕಾಶಿ' ಲಾಲ್‌ಬಾಗ್‌ನ ಗಾಜಿನ ಮನೆಯೊಳಗೆ ಬಣ್ಣ ಬಣ್ಣದ ಹೂವುಗಳ ಮಧ್ಯದಲ್ಲಿ ತಲೆ ಎತ್ತಿರುವ ಬೃಹತ್ ಬೆಟ್ಟ, ಅದರ ಮೇಲೆ ತೇಜಸ್ವಿ ಅವರ ಪುತ್ಥಳಿ, ಧುಮ್ಮಿಕ್ಕುತ್ತಿರುವ ಕೃತಕ ಜಲಪಾತ, ಪುಷ್ಪಗಳಲ್ಲಿ ಅರಳಿರುವ 'ನಿರುತ್ತರ'ದ ಮನೆ, ಅದರ ಮುಂಭಾಗದಲ್ಲಿ ತೇಜಸ್ವಿ ಮತ್ತು ರಾಜೇಶ್ವರಿ ದಂಪತಿ ಕುಳಿತಿರುವ ಪ್ರತಿಮೆಗಳು ನೋಡಗರ ಕಣ್ಮನ ಸೆಳೆಯುತ್ತಿವೆ. ತೋಟಗಾರಿಕೆ ಇಲಾಖೆಯಿಂದ ಲಾಲ್‌ಬಾಗ್‌ನಲ್ಲಿ ಗಣರಾಜ್ಯೋತ್ಸವದ ಅಂಗವಾಗಿ ಹಮ್ಮಿಕೊಂಡಿರುವ ತೇಜಸ್ವಿ ವಿಸ್ಮಯ ವಿಷಯ ಆಧಾರಿತ 219ನೇ ಫಲಪುಷ್ಪ ಪ್ರದರ್ಶನಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚಾಲನೆ ನೀಡಿದರು. ಪ್ರದರ್ಶನವು ಜ.26ರವರೆಗೆ ನಡೆಯಲಿದೆ.

ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರ ಬದುಕು ಬರಹವನ್ನು ಇಲ್ಲಿ ಪ್ರಸ್ತುತಪಡಿಸಲಾಗಿದೆ. ತೇಜಸ್ವಿ ಅವರ ಅಭಿವ್ಯಕ್ತಿಯ ಪರಿಸರದ ಕಾಡು, ಹೊಳೆ, ಪ್ರಾಣಿ ಪಕ್ಷಿ ಕೀಟದ ಮಾದರಿಗಳು ಗಮನ ಸೆಳೆಯುತ್ತಿವೆ. ಗಾಜಿನ ಮನೆಯ ಹಿಂಭಾಗದಲ್ಲಿ ಕೃತಕ ಕಾಡಿನ ಮಧ್ಯದಲ್ಲಿ ಕರ್ವಾಲೊ ಕಾದಂಬರಿ ಪಾತ್ರಗಳಾದ 'ಕಿವಿ' ನಾಯಿ, ಕರಿಯಪ್ಪ,




ಮಂದಣ್ಣ, ಹಾರುವ ಓತಿ, ಮಿಡತೆ, ಜೇನುಹುಳುಗಳು ಪ್ರೇಕ್ಷಕರನ್ನು ಕೈಬೀಸಿ ಕರೆಯುತ್ತಿವೆ.

ಗಾಜಿನ ಮನೆಯ ಕೇಂದ್ರ ಭಾಗದ ಬಲಬದಿಯಲ್ಲಿ ತೇಜಸ್ವಿ ಅವರ ಬಹುಮುಖಿ ವ್ಯಕ್ತಿತ್ವವನ್ನು ಬಿಂಬಿಸುವ ವ್ಯಂಗ್ಯಚಿತ್ರದ ಪ್ರತಿಮೆ ಇದೆ. ಅದರ ಸುತ್ತಲೂ ಜೋಡಿಸಿರುವ ಪುಷ್ಪಗಳ ಮಧ್ಯೆ ತೇಜಸ್ವಿ ಅವರ ಆಯ್ದ 12 ಪುಸ್ತಕಗಳ ಮಾದರಿ, ಪಾತ್ರ-ಸನ್ನಿವೇಶಗಳನ್ನು ಆಧರಿಸಿದ ವ್ಯಂಗ್ಯಚಿತ್ರಗಳನ್ನು ಪ್ರದರ್ಶಿಸಲಾಗಿದೆ.

**ಅನನ್ಯ ಫಲಗಳ ಪ್ರದರ್ಶನ:** ಗಾಜಿನ ಮನೆಯ ಎಡ ಭಾಗದಲ್ಲಿ ಬಿಳಿಗಿರಿ ರಂಗನಬೆಟ್ಟ, ವಿವಿಧ ಸಸ್ಯಶಾಸ್ತ್ರೀಯ ತೋಟಗಳು, ಮಂಗಳೂರು, ಊಟಿ ಸೇರಿದಂತೆ ದೇಶ ವಿದೇಶಗಳ ಕಾಡಿನಲ್ಲಿ ಬೆಳೆಯುವ ಅಪರೂಪದ ಫಲಗಳನ್ನು ಸಂಗ್ರಹಿಸಿ ಪ್ರದರ್ಶಿಸಲಾಗಿದೆ. ಗಾಜಿನ ಮನೆಯ ಕೇಂದ್ರ ಭಾಗದ ಎಡ ಬದಿಯಲ್ಲಿ ಕುವೆಂಪು ರೂಪಿಸಿದ ಮಂತ್ರ ಮಾಂಗಲ್ಯ ಪದ್ಧತಿಯಲ್ಲಿ ಮೊಟ್ಟ ಮೊದಲಿಗೆ ಮದುವೆಯಾಗಿ, ನಾಡಿನಲ್ಲಿ ವೈಚಾರಿಕ ಕ್ರಾಂತಿಗೆ ನಾಂದಿ ಹಾಡಿದ ತೇಜಸ್ವಿ-ರಾಜೇಶ್ವರಿ ಅವರ ಸರಳ ಮದುವೆ ಸನ್ನಿವೇಶವನ್ನು ವರ್ಟಿಕಲ್ ಮಾದರಿ ಗಾರ್ಡನ್ ನಲ್ಲಿ ರೂಪಿಸಲಾಗಿದೆ. ಇಲ್ಲಿ ತೇಜಸ್ವಿ-ರಾಜೇಶ್ವರಿ ಅವರ ವಿವಾಹವನ್ನು ಕುವೆಂಪು ನೆರವೇರಿಸುತ್ತಿರುವ ಪ್ರತಿಮೆಗಳು ನೋಡುಗರ ಗಮನ ಸೆಳೆಯುತ್ತಿವೆ. ಇದಕ್ಕಾಗಿ ಒಟ್ಟು 2.40 ಲಕ್ಷ ಗಿಡಗಳನ್ನು ಬಳಸಲಾಗಿದೆ.

ಗಾಜಿನ ಮನೆಯ ನಾಲ್ಕು ದಿಕ್ಕುಗಳಲ್ಲಿ ಕುವೆಂಪು ಹೇಮಾವತಿ, ಶಿವರಾಮ ಕಾರಂತ, ರಾಮಮನೋಹರ ಲೋಹಿಯಾ ಮತ್ತು ರಾಜೇಶ್ವರಿ ತೇಜಸ್ವಿಯರ ಪುತ್ಥಳಿಗಳು ರಾರಾಜಿಸುತ್ತಿವೆ. ಇದರ ಜೊತೆಗೆ ಅಲ್ಲಲ್ಲಿ ಹಾಕಿರುವ ಎಲ್‌ಇಡಿ ಪರದೆಗಳ ಮೇಲೆ ತೇಜಸ್ವಿ ಅವರ ಸಂದರ್ಶನ ಹಾಗೂ ವಿವಿಧ ಮಾಹಿತಿಗಳನ್ನು ಪ್ರಸಾರ ಮಾಡಲಾಗುತ್ತಿದೆ.

## ಭಾರತೀಯ ಸೇನೆಯು ಯುವ ಪೀಳಿಗೆಗೆ ಮಾದರಿ: ರಾಜ್ಯಪಾಲ




• ಉದಯವಾಹಿನಿ, ಬೆಂಗಳೂರು

ಭಾರತೀಯ ಸೇನೆಯು ಯುವ ಪೀಳಿಗೆಗೆ ಮಾದರಿಯಾಗಿದೆ. ಸೇನಾ ಜೀವನವು ವೈಯಕ್ತಿಕ ಹಿತಾಸಕ್ತಿಗಳನ್ನು ಮೀರಿ ರಾಷ್ಟ್ರೀಯ ಹಿತಾಸಕ್ತಿಗೆ ಮೊದಲ ಆದ್ಯತೆ ನೀಡುವುದನ್ನು ಕಲಿಸುತ್ತದೆ ಎಂದು ಕರ್ನಾಟಕದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು. ಬೆಂಗಳೂರಿನ ಎಂಇಜಿ ಕೇಂದ್ರದ ಯುದ್ಧ ಸ್ಮಾರಕದಲ್ಲಿ ನಡೆದ 78ನೇ ಸೇನಾ ದಿನಾಚರಣೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಇಂದಿನ ಯುವಕರಿಗೆ ಶಿಸ್ತು, ಸಮಯಪಾಲನೆ, ನಾಯಕತ್ವ ಮತ್ತು ತಂಡದ ಕೆಲಸದಂತಹ ಮೌಲ್ಯಗಳು ಅತ್ಯಗತ್ಯವಾಗಿದೆ. ಸೇನೆಯು ಈ ಮೌಲ್ಯಗಳಿಗೆ ಜೀವಂತ ಉದಾಹರಣೆಯನ್ನು ಒದಗಿಸುತ್ತದೆ. ಭಾರತೀಯ ಸೇನೆಯ ಮೂಲ ಧ್ಯೇಯವಾಕ್ಯ, ಸೇವೆಯೇ ಪರಮಾತ್ಮ.ಈ ಹೇಳಿಕೆಯು ಪ್ರತಿಯೊಬ್ಬ ಸೈನಿಕನ ಜೀವನದಲ್ಲಿ ಮಾರ್ಗದರ್ಶಿ ತತ್ವವಾಗಿದೆ.

## ಸಾರಿಗೆ ನೌಕರರ ವೇತನ ಪರಿಷ್ಕರಣೆ ಸಮಸ್ಯೆಯಾಗಿದ್ದೇ ಬಿಜೆಪಿ ಕಾಲದಲ್ಲಿ: ರಾಮಲಿಂಗಾರೆಡ್ಡಿ

• ಉದಯವಾಹಿನಿ, ಬೆಂಗಳೂರು



ವೇತನ ಪರಿಷ್ಕರಣೆ ಸಂಬಂಧ ಮೊದಲ ಬಾರಿಗೆ ಮುಷ್ಕರ ಮಾಡಿದ್ದು ಬಿಜೆಪಿ ಕಾಲದಲ್ಲಿಯೇ ಎಂಬುದನ್ನು ಮರೆತು ಬಿಟ್ಟರಾ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಪ್ರಶ್ನಿಸಿದ್ದಾರೆ. ಸಾರಿಗೆ ನೌಕರರಿಗೆ ಶೇ 15ರಷ್ಟು ಹೆಚ್ಚಳದ ಹಿಂಬಾಕಿಯನ್ನು ನೀಡಿಲ್ಲ. 38 ತಿಂಗಳ ಹಿಂಬಾಕಿಯನ್ನು ನೀಡುವಂತೆ ಒತ್ತಾಯಿಸಿ ನಿವೃತ್ತ ನೌಕರರು ಪ್ರತಿಭಟಿಸುವ ಸ್ಥಿತಿಯನ್ನು ಕಾಂಗ್ರೆಸ್ ನೇತೃತ್ವದ ಸರ್ಕಾರ ಸೃಷ್ಟಿಸಿದೆ' ಎಂದು ಬಿಜೆಪಿ ಎಕ್ಸ್ ಖಾತೆಯಲ್ಲಿ ಟೀಕಿಸಿತ್ತು. ಅದಕ್ಕೆ ರಾಮಲಿಂಗಾರೆಡ್ಡಿ ಪ್ರತಿಕ್ರಿಯೆ ನೀಡಿದ್ದಾರೆ.

ಬಿಜೆಪಿ ಅವಧಿಯಲ್ಲಿ ವೇತನಕ್ಕಾಗಿ 15 ದಿವಸಗಳ ಸುದೀರ್ಘ ಮುಷ್ಕರ ನಡೆದಿತ್ತು. ಮುಷ್ಕರದಲ್ಲಿ ಪಾಲ್ಗೊಂಡ 3,000 ನೌಕರರನ್ನು ವಜಾ, ಅಮಾನತು, ವರ್ಗಾವಣೆ ಮಾಡಿ, ಹಲವು ಸಿಬ್ಬಂದಿಯ ವಿರುದ್ಧ ಎಫ್‌ಐಆರ್ ದಾಖಲಿಸಿತ್ತು. ಇಂದಿಗೂ ಅವರು ಕೋರ್ಟ್ ಕಚೇರಿ ಅಲೆಯುತ್ತಿದ್ದಾರೆ. ಸಾರಿಗೆ ನೌಕರರ ವೇತನ ಪರಿಷ್ಕರಣೆ ಮಾಡಿ 38 ತಿಂಗಳ ಬಾಕಿ ಹಣ ಪಾವತಿ ಮಾಡದೇ, ಅದಕ್ಕಾಗಿ ಯಾವುದೇ ಹಣ ಮೀಸಲಿರಿಸದೆ ಸಾರಿಗೆ ನೌಕರರನ್ನು ಬೀದಿಗೆ ತಂದು ಅವರು ಮುಷ್ಕರವನ್ನು ಮಾಡುವ ಹಂತಕ್ಕೆ ತಂದಿರುವುದನ್ನು ಮರೆತು ಬಿಟ್ಟಿರಾ ಎಂದು ಕೇಳಿದ್ದಾರೆ. 2023ರಲ್ಲಿ ವೇತನ ಹೆಚ್ಚಳ ಮಾಡಿ ನಿವೃತ್ತಿ ಹೊಂದಿದ ನೌಕರರಿಗೆ ಬಾಕಿ ನೀಡದೆ ಹೋಗಿದ್ದೀರಿ. ನಾವು ರೂ.224 ಕೋಟಿ ಪಾವತಿ ಮಾಡಿದ್ದೇವೆ. ನಿಮ್ಮ ಕಾಲದಲ್ಲಿ ಶೂನ್ಯ ನೇಮಕಾತಿ, ಹೊಸ ಬಸ್ ಸೇರ್ಪಡೆ ಇಲ್ಲ. ನೌಕರರಿಗೆ ಅರ್ಧ ವೇತನ. ಈ ರೀತಿ ದುರಾಡಳಿತ ನೀಡಿದವರು ಈಗ ಎಕ್ಸ್ ಖಾತೆಯಲ್ಲಿ ನಮ್ಮನ್ನು ಪ್ರಶ್ನಿಸುತ್ತಿದ್ದಾರೆ ಎಂದು ಟೀಕಿಸಿದ್ದಾರೆ. ನಮ್ಮ ಕಾಲದಲ್ಲಿ ಬರೋಬ್ಬರಿ 10,000 ಹುದ್ದೆಗಳಿಗೆ ನೇಮಕಾತಿ, 7,800 ಹೊಸ ಬಸ್ಸುಗಳು, ಸಾರಿಗೆ ನೌಕರರಿಗೆ ಪ್ರತಿ ತಿಂಗಳ ಒಂದನೇ ತಾರೀಖಿನಂದು ಪೂರ್ತಿ ಸಂಬಳ ಪಾವತಿ, ನೌಕರರ ಸಮಸ್ಯೆಗಳನ್ನು ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಆಗಿದೆ. ನಿಮ್ಮ ಅಧಿಕಾರದ ಅವಧಿಯಲ್ಲಿ ಕಾಳಜಿ ವಹಿಸದೇ ಈಗ ಕಾಳಜಿಯ ನಾಟಕ ಮಾಡಲು ನಾಚಿಕೆಯಾಗುವುದಿಲ್ಲವೇ ಎಂದು ಎಕ್ಸ್ ನಲ್ಲಿ ಬಿಜೆಪಿಯನ್ನು ಪ್ರಶ್ನಿಸಿದ್ದಾರೆ.

## ಶ್ರೀ ಗುರುಲಿಂಗೇಶ್ವರ ಸ್ವಾಮಿ ದೇವಾಲಯದಲ್ಲಿ ವಿಶೇಷ ಮಕರ ಸಂಕ್ರಾಂತಿ ಆಚರಣೆ

• ಉದಯವಾಹಿನಿ,ಬೆಂಗಳೂರು

ಶ್ರೀ ಗುರುಲಿಂಗೇಶ್ವರ್ ಟ್ರಸ್ಟ್ ವತಿಯಿಂದ, ಶ್ರೀ ಜ್ಞಾನಾಂಬಿಕಾ ಸಮೇತ ಗುರುಲಿಂಗೇಶ್ವರ ಸ್ವಾಮಿ ದೇವಾಲಯದಲ್ಲಿ ಮಕರ ಸಂಕ್ರಾಂತಿ ಹಬ್ಬವನ್ನು ಅದ್ದೂರಿಯಾಗಿ ಮತ್ತು ವೈಭವಾಗಾಗಿ ಆಚರಿಸಲಾಯಿತು. ಈ ಬಾರಿ ಸಂಕ್ರಾಂತಿ ವಿಶೇಷವಾಗಿ, 1 ಲಕ್ಷಕ್ಕೂ ಹೆಚ್ಚು ಕಬ್ಬಿನ ಕಡ್ಡಿಗಳಿಂದ ದೇವಾಲಯದ ಆವರಣವನ್ನು ಶೋಭಾಯಮಾನವಾಗಿ ಅಲಂಕರಿಸಲಾಗಿದ್ದು, ಭಕ್ತರಿಗೆ ವಿಶೇಷ ಆಕರ್ಷಣೆಯಾಗಿದೆ.

ಕಾರ್ಯಕ್ರಮಕ್ಕೆ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ, ಲೋಕಸಭಾ ಸದಸ್ಯರಾದ ತೇಜಸ್ವಿ ಸೂರ್ಯ, ಶಾಸಕರಾದ ಸಿ. ಕೆ. ರಾಮಮೂರ್ತಿ, ಟ್ರಸ್ಟ್ ಅಧ್ಯಕ್ಷ ಕೃಷ್ಣಂರಾಜು, ಕಾರ್ಯದರ್ಶಿ ಸತ್ಯನಾರಾಯಣ ರಾಜು, ಖಜಾಂಚಿ ಗೋವಿಂದರಾಜು, ಸಹಾಯಕರಾದ ಸುಂದರರಾಜು ಹಾಜರಿದ್ದರು ಮತ್ತು ಸಂಕ್ರಾಂತಿ ಪೂಜಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಸಾಮೂಹಿಕ ಮಕರ ಸಂಕ್ರಾಂತಿ ಕಾರ್ಯಕ್ರಮದಲ್ಲಿ ನೂರಾರು ಮಹಿಳೆಯರು ಮತ್ತು ಭಕ್ತರು ಭಾಗವಹಿಸಿದರು. ದಿನವಿಡೀ ಗಣಪತಿ ಪೂಜೆ, ಮೃತ್ಯುಂಜಯ ಹೋಮ, ವಿಶೇಷ ಮಂಗಳಾರತಿ, ಅನ್ನಸಂತರ್ಪಣೆ ಮತ್ತು ಪ್ರಸಾದ ವಿನಿಯೋಗವನ್ನು ಆಯೋಜಿಸಲಾಗಿತ್ತು. ಸಂಕ್ರಾಂತಿ ಅಂಗವಾಗಿ ಸಾಮೂಹಿಕ ಪೊಂಗಲ್ ಆಚರಣೆ ಕೂಡ ನೆರವೇರಿತು. ಅಲಂಕರಿಸಿದ ಪೊಂಗಲ್ ಕುಂಡಗಳೊಂದಿಗೆ ಮೆರವಣಿಗೆ ನಡೆಸಿದ




ದೃಶ್ಯ ದೇವಾಲಯದ ಆವರಣಕ್ಕೆ ಹೊಸ ಚೈತನ್ಯ ತಂದಿತು. ಪೌರಾಣಿಕ ಇತಿಹಾಸ ಹೊಂದಿರುವ ಶ್ರೀ ಗುರುಲಿಂಗೇಶ್ವರ ದೇವಾಲಯದಲ್ಲಿ ಶಿವ, ವಿಷ್ಣು, ಬ್ರಹ್ಮ ಸಾನ್ನಿಧ್ಯದಲ್ಲಿ ಸಂಪ್ರದಾಯಬದ್ಧವಾಗಿ ಸಂಕ್ರಾಂತಿ ಆಚರಣೆ ಯನ್ನು ಶತಮಾನಗಳಿಂದ ಮುಂದುವರಿಸಲಾಗಿದೆ. ಹಿಂದೆ ದೇವಾಲಯದ ಸುತ್ತ ಹೊಲ, ಗದ್ದೆಗಳಲ್ಲಿ ಎಲ್ಲರೂ ಒಂದೇ ಕುಟುಂಬದಂತೆ ಸಂಕ್ರಾಂತಿ ಆಚರಿಸುತ್ತಿದ್ದರು; ಇದೇ ಪರಂಪರೆಯನ್ನು ಈಗಲೂ ಮುಂದುವರೆಸಲಾಗುತ್ತಿದೆ ಎಂದು ದೇವಸ್ಥಾನ ಟ್ರಸ್ಟ್ ಸದಸ್ಯರು ತಿಳಿಸಿದ್ದಾರೆ. ಈ ಬಾರಿ ಕಬ್ಬಿನಿಂದ ಮಹಾ ಅಲಂಕಾರ ದೇವಾಲಯದ ಸಂಕ್ರಾಂತಿ ಕಾರ್ಯಕ್ರಮಕ್ಕೆ ವಿಶೇಷ ಕಂಗೊಳನ್ನು ನೀಡಿದೆ ಎಂದು ಸಂಘಟಕರು ತಿಳಿಸಿದ್ದಾರೆ.

## ತೇಜಸ್ವಿ ಸೂರ್ಯ, ಪತ್ನಿಯಿಂದ ಜಯನಗರ ಸಂಕ್ರಾಂತಿ ಹಬ್ಬವನ್ನು ಪೊಂಗಲ್ ಮೂಲಕ ಸಂಭ್ರಮಾಚರಣೆ

• ಉದಯವಾಹಿನಿ, ಜಯನಗರ

ವಿಧಾನಸಭಾ ಕ್ಷೇತ್ರದ ರಾಗಿಗುಡ್ಡ ಸ್ಲಂ ವಿವೇಕಾನಂದ ವಸತಿ ಸಂಕೀರ್ಣದಲ್ಲಿ ಮಾನ್ಯ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಹಾಗೂ ಲೋಕಸಭಾ ಸದಸ್ಯರಾದ ಶ್ರೀ ತೇಜಸ್ವಿ ಸೂರ್ಯ, ಶಾಸಕರಾದ ಸಿ. ಕೆ. ರಾಮಮೂರ್ತಿರವರು ಪಕ್ಷದ ಸಾರ್ವಜನಿಕರ ಜೊತೆಯಲ್ಲಿ ಸೇರಿ ಸಂಕ್ರಾಂತಿ ಹಬ್ಬವನ್ನು 1500 ಮಡಿಕೆಗಳಲ್ಲಿ ಪೊಂಗಲ್ ತಯಾರಿಕೆ ಮಾಡುವ ಮೂಲಕ ಸಂಭ್ರಮಾಚರಣೆ ಮಾಡಿದರು. ತೇಜಸ್ವಿಸೂರ್ಯರವರು ಮಾತನಾಡಿ ದಕ್ಷಿಣ ಭಾರತದಲ್ಲಿ ಸಂಕ್ರಾಂತಿ ಹಬ್ಬವನ್ನು ಅದ್ದೂರಿಯಾಗಿ ಆಚರಿಸುತ್ತಾರೆ. ಹಿಂದೂಗಳಿಗೆ ಹಬ್ಬವೆಂದರೆ ಕುಟುಂಬ ದವರು, ಅಕ್ಕ ಪಕ್ಕ ದವರು ಮತ್ತು ಸ್ನೇಹಿತರ ಬಳಗ ಒಟ್ಟಾಗಿ ಸೇರಿ ಆಚರಿಸುವ ಪದ್ಧತಿ. ರೈತರಿಗೆ ನಾಡಿನ ಜನರಿಗೆ ಸಂಕ್ರಾಂತಿ ಹಬ್ಬದಲ್ಲಿ ಉತ್ತಮ ಮಳೆ, ಬೆಳೆಯಾಗಲಿ ಸುಖ, ಶಾಂತಿ, ನೆಮ್ಮದಿ ಸಿಗಲಿ ಎಂಬ ಶುಭ ಹಾರೈಕೆ ಎಂದು ಹೇಳಿದರು.

**7 ಕೋಟಿ ಅನುದಾನದಲ್ಲಿ ಅಭಿವೃದ್ಧಿ**

ಸಿ.ಕೆ.ರಾಮಮೂರ್ತಿರವರು ಮಾತನಾಡಿ ಜೆಪಿನಗರ ಈ ಭಾಗದಲ್ಲಿ ಜನಪ್ರಿಯ ಶಾಸಕರಾಗಿದ್ದ ವಿಜಯಕುಮಾರ್ ರವರ ಸಹಕಾರದಿಂದ 1300 ಮನೆಗಳಲ್ಲಿ ನಿರ್ಮಿಸಿ, 7ಕೋಟಿ ಅನುದಾನದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಯಿತು. ಸಂಕ್ರಾಂತಿ ಹಬ್ಬವನ್ನು ಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ಒಂದೇ ಕುಟುಂಬದಂತೆ ಒಟ್ಟಾಗಿ ಆಚರಿಸಲಾಗುತ್ತಿದೆ ಎಂದು ಹೇಳಿದರು. ನೂರಾರು ಮಡಿಕೆಗಳಲ್ಲಿ ಸಿಹಿ, ಖಾರ ಪೊಂಗಲ್ ತಯಾರಿಸಿದರು. ಮಾಜಿ ಮಹಾಪೌರರಾದ ಎಸ್.ಕೆ.ನಟರಾಜ್, ಮಾಜಿ ಪಾಲಿಕೆ ಸದಸ್ಯರುಳಾದ ಬಿ.ಸೋಮಶೇಖರ್, ಚಂದ್ರಶೇಖರ್ ರಾಜು, ಮಂಜುನಾಥ್ ರೆಡ್ಡಿ, ಷಣ್ಮುಗರವರು ಉಪಸ್ಥಿತರಿದ್ದರು.




# ತಂತ್ರಾಂಶದಲ್ಲಿ ಕಾಣದ ಹೊಗೆ ತಪಾಸಣೆ: ಸಂಕಷ್ಟಕ್ಕೆ ಸಿಲುಕುತ್ತಿರುವ ವಾಹನ ಮಾಲೀಕರು

### ವಾಹನ್ 4ರ ಜೊತೆಗೆ ವಾಯುಮಾಲಿನ್ಯ ತಪಾಸಣೆಯ ವಿವರವನ್ನು ಸಂಯೋಜನೆ ಮಾಡಲು ಹಿಂದಿನ ತಂತ್ರಾಂಶದಲ್ಲಿ ಸಾಧ್ಯವಿಲ್ಲ

• ಉದಯವಾಹಿನಿ, ಬೆಂಗಳೂರು

ವಾಹನಗಳ ಹೊಗೆ ತಪಾಸಣೆ ನಡೆಸಿ ಪ್ರಮಾಣಪತ್ರ ಪಡೆದಿದ್ದರೂ ವಾಹನ್-4 ತಂತ್ರಾಂಶದಲ್ಲಿ ಕಾಣಿಸುತ್ತಿಲ್ಲ. ಹಾಗಾಗಿ ಹೊರ ರಾಜ್ಯಗಳಿಗೆ ತೆರಳುವ ವಾಹನಗಳ ಮಾಲೀಕರು ದಂಡ ಕಟ್ಟಬೇಕಾದ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಹೊಸ ತಂತ್ರಾಂಶ ಸಿದ್ಧವಾಗಿದ್ದರೂ ಅದರ ಅನುಷ್ಠಾನಕ್ಕೆ ರಾಜ್ಯ ಸರ್ಕಾರ ಒಪ್ಪಿಗೆ ನೀಡಿಲ್ಲ. ಹಳೇ ತಂತ್ರಾಂಶ ಬದಲಾಯಿಸಲು ಸಾರಿಗೆ ಇಲಾಖೆ ವರ್ಷಗಳ ಹಿಂದೆಯೇ ನಿರ್ಧರಿಸಿತ್ತು. 'ಹೊಗೆ ಪರೀಕ್ಷೆ' ಪ್ರಮಾಣಪತ್ರದೊಂದಿಗೆ ಕ್ಯೂಆರ್ ಕೋಡ್ ಕೂಡ ಇರಲಿದ್ದು, ದೇಶದ ಯಾವುದೇ ಮೂಲೆಯಲ್ಲಿ ಕ್ಯೂಆರ್ ಕೋಡ್ ಸ್ಕ್ಯಾನಿಂಗ್ ಮಾಡಿದರೂ 'ಮಾಲಿನ್ಯ' ಪರೀಕ್ಷೆ ಸಹಿತ ಎಲ್ಲ ವಿವರಗಳು ಸಿಗುವ ತಂತ್ರಾಂಶ ಅಭಿವೃದ್ಧಿಪಡಿಸಲು ವರ್ಷದ ಹಿಂದೆ ಟೆಂಡರ್ ಕರೆಯಲಾಗಿತ್ತು.

ಟೆಕ್ ವಾಣಿಜ್ಯ ಟೆಂಡರ್' ಪಡೆದಿರುವ 'ಮೇರು ಇನ್ಫೊ ಸೊಲ್ಯುಷನ್' ಹೊಸ ತಂತ್ರಜ್ಞಾನ ಒಳಗೊಂಡಿರುವ ತಂತ್ರಾಂಶ ತಯಾರಿಸಿತ್ತು. ಆದರೆ, ಜಾರಿ ಮಾಡಲು ಸರ್ಕಾರದಿಂದ ಇನ್ನೂ ಒಪ್ಪಿಗೆ ಸಿಗದೆ ಇರುವುದರಿಂದ ಅಲ್ಲಿಗೇ ಪ್ರಕ್ರಿಯೆ ನಿಂತುಬಿಟ್ಟಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಹೊಸ ತಂತ್ರಾಂಶ ಅಳವಡಿಕೆಗೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿದ್ದೇವೆ. ಒಪ್ಪಿಗೆ ಸಿಕ್ಕಿದ ಕೂಡಲೇ ಜಾರಿ ಮಾಡಲಾಗುವುದು ಎಂದು ಸಾರಿಗೆ ಇಲಾಖೆಯ ಹೆಚ್ಚುವರಿ ಆಯುಕ್ತ ಜ್ಞಾನೇಂದ್ರ ಕುಮಾರ್ ತಿಳಿಸಿದ್ದಾರೆ. ಸರ್ವರ್ ಅಳವಡಿಸಲಾಗಿದೆ. ಇಂಟರ್‌ನೆಟ್ ಇದೆ. ತಂತ್ರಾಂಶವು ಪರೀಕ್ಷಾ ಹಂತದಲ್ಲಿದೆ. ಅನುಮತಿ ಸಿಕ್ಕಿದರೆ ಒಂದು ತಿಂಗಳ ಒಳಗೆ ಎಲ್ಲ ಪ್ರಕ್ರಿಯೆಗಳು ಪೂರ್ಣಗೊಂಡು ತಪಾಸಣೆ ಆರಂಭಗೊಳ್ಳಲಿದೆ' ಎಂದು ಮಾಹಿತಿ ನೀಡಿದ್ದಾರೆ.**

**-ಆಯುಕ್ತ ಜ್ಞಾನೇಂದ್ರ ಕುಮಾರ್**

'ಬೇರೆ ರಾಜ್ಯಗಳಲ್ಲಿ ಸಂಚಾರ ಪೊಲೀಸರು ಇಲ್ಲವೇ ಸಾರಿಗೆ ಅಧಿಕಾರಿಗಳು ಹೊಗೆ ತಪಾಸಣೆ ಬಗ್ಗೆ ಪರಿಶೀಲಿಸುತ್ತಾರೆ. ಹೊಗೆ ತಪಾಸಣೆ ಮಾಡಿಸದೇ ಇದ್ದರೆ ರೂ.1 ಸಾವಿರ ದಂಡ ವಿಧಿಸುತ್ತಾರೆ. ತಪಾಸಣೆ ಮಾಡಿರುವ ಬಗ್ಗೆ ಪ್ರಮಾಣಪತ್ರ ನೀಡಿದ ನಂತರ, ಅದರ ವಿವರವು ತಂತ್ರಾಂಶದಲ್ಲಿ ಇಲ್ಲದೇಹೋದರೆ ನಕಲಿ ಪ್ರಮಾಣಪತ್ರ ಸೃಷ್ಟಿಸಿದ್ದೀರಿ ಎಂದು ರೂ.10 ಸಾವಿರ ದಂಡ ವಿಧಿಸುತ್ತಾರೆ'




ಎಂದು ವಾಹನ ಚಾಲಕರು ಅಲವತ್ತುಕೊಂಡಿದ್ದಾರೆ. 'ವಾಹನ್ 4ರ ಜೊತೆಗೆ ವಾಯುಮಾಲಿನ್ಯ ತಪಾಸಣೆಯ ವಿವರವನ್ನು ಸಂಯೋಜನೆ ಮಾಡಲು ಹಿಂದಿನ ತಂತ್ರಾಂಶದಲ್ಲಿ ಸಾಧ್ಯವಿಲ್ಲ. 2010ರಲ್ಲಿ ಅಭಿವೃದ್ಧಿಪಡಿಸಿದ್ದ ಆ ತಂತ್ರಾಂಶದ ಅವಧಿ 2016ಕ್ಕೆ ಮುಗಿದು ಹೋಗಿದ್ದರೂ ಈಗಲೂ ಅದನ್ನೇ ಬಳಸಲಾಗುತ್ತಿದೆ' ಎಂದು ಸಾರಿಗೆ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ವಾಯುಮಾಲಿನ್ಯ ತಪಾಸಣೆ ಕೇಂದ್ರಗಳನ್ನು ಪೊಲ್ಯೂಶನ್ ಅಂಡರ್ ಕಂಟ್ರೋಲ್ ಸೆಂಟರ್ (ಪಿಯುಸಿಸಿ) ಎಂದು ಕರೆಯಲಾಗುತ್ತದೆ. ವಾಹನಗಳು ಉಗುಳುವ ಹೊಗೆಯ ಪ್ರಮಾಣ ಆಧರಿಸಿ ಅವುಗಳ ಇಂಜಿನ್ ಸ್ಥಿತಿ ತಿಳಿಯಲಾಗುತ್ತದೆ.

ಸದೃಢತಾ ಅವಧಿ ಮುಗಿದಿರುವ ವಾಹನಗಳನ್ನು ಮುಂದೆ ಎಷ್ಟು ಸಮಯ ಓಡಿಸಬಹುದು ಎಂಬುದು ಕೂಡ ಹೊಗೆ ತಪಾಸಣೆ ನಂತರ ನಮೂದಾಗುತ್ತದೆ.


ಬಿ1, ಬಿ2. ಬಿ3 ಹಂತದ ವಾಹನಗಳಿಗೆ ಆರು ತಿಂಗಳು ಅವಕಾಶ, ಬಿ4, ಬಿ5 ಹಂತದಲ್ಲಿರುವ ವಾಹನಗಳಿಗೆ ಒಂದು ವರ್ಷ ಅವಕಾಶ ಸಿಗಲಿದೆ. ಬೇರೆ ರಾಜ್ಯಗಳಲ್ಲಿ ನಮ್ಮ ರಾಜ್ಯದ ವಾಹನಗಳಿಗೆ ದಂಡ ಬೀಳುವುದೂ ತಪ್ಪಲಿದೆ' ಎಂದು ಅವರು ಮಾಹಿತಿ ನೀಡಿದ್ದಾರೆ.

**ಸಾರಿಗೆ ಇಲಾಖೆ, ಸಾರಿಗೆ ರಸ್ತೆ ಸುರಕ್ಷತೆ ವಿಭಾಗದ ಆಂತರಿಕ ಸಮಸ್ಯೆ**

**ದೇಶದ ಬೇರೆ ಯಾವುದೇ ರಾಜ್ಯದಲ್ಲಿ ಇಲ್ಲದ ಸಮಸ್ಯೆ ಕರ್ನಾಟಕದಲ್ಲಿ ಉಂಟಾಗಿದೆ. ಹೊಗೆ ತಪಾಸಣೆ ಮಾಡಿಸಿ ಪಡೆಯುವ ಪ್ರಮಾಣ ಪತ್ರಗಳು ವಾಹನ್ 4ರಲ್ಲಿ ತೋರಿಸದೇ ಇದ್ದರೂ ರಾಜ್ಯದ ಒಳಗೆ ಸಾಕಾಗುತ್ತದೆ. ಹೊರ ರಾಜ್ಯಗಳಿಗೆ ಹೋದಾಗ ಸಮಸ್ಯೆಯಾಗುತ್ತಿದೆ ಎಂದು ರಾಜ್ಯ ಬಸ್ ಮಾಲೀಕರ ಸಂಘದ ಅಧ್ಯಕ್ಷ ಎಸ್. ನಟರಾಜ ಶರ್ಮ ದೂರಿದ್ದಾರೆ. ಬಸ್ ಸೇರಿದಂತೆ ವಾಹನ ಮಾಲೀಕರ ಮೇಲೆ ಹಿಡಿತ ಇಟ್ಟುಕೊಳ್ಳಲು ಇವರು ತಂತ್ರಾಂಶವನ್ನು ಸರಿಪಡಿಸುತ್ತಿಲ್ಲ. ಮಾಲೀಕರು ಇವರ ಕಚೇರಿಗೆ ಹೋಗಿ ಅಗತ್ಯ ಸೇವೆ ಸಮರ್ಪಿಸಿದ ಬಳಿಕವೇ ಸರಿಯಾಗಬೇಕು ಎಂದು ಬಯಸುತ್ತಿರುವಂತಿದೆ. ಹೊಸ ತಂತ್ರಾಂಶ ತಯಾರಿಸಿದ್ದರೂ ಅನುಷ್ಠಾನಕ್ಕೆ ಒಪ್ಪಿಗೆ ಸಿಗುತ್ತಿಲ್ಲ ಎಂದರೆ ಇದು ಸಾರಿಗೆ ಇಲಾಖೆ ಮತ್ತು ಸಾರಿಗೆ ರಸ್ತೆ ಸುರಕ್ಷತೆ ವಿಭಾಗದ ಆಂತರಿಕ ಸಮಸ್ಯೆ. ಅದಕ್ಕೆ ನಾವು ಯಾಕೆ ದಂಡ ಕಟ್ಟಬೇಕು' ಎಂದು ಅವರು ಪ್ರಶ್ನಿಸಿದ್ದಾರೆ.**

# ಪಟ್ಟಣದಲ್ಲಿ ಪ್ರತ್ಯಕ್ಷವಾದ ಸಲಗ : ಮಾರಿಗುಡಿ ಬೀದಿಯಲ್ಲಿ ರಂಪಾಟ

• ಉದಯವಾಹಿನಿ, ಗುಂಡ್ಲುಪೇಟೆ


ಉದಯವಾಹಿನಿ ಚಿತ್ರ

ಅಚಾನಕ್ಕಾಗಿ ಪಟ್ಟಣ ಪ್ರವೇಶಿಸಿದ ಕಾಡಾನೆಯೊಂದು ಊಟಿ ಮೈಸೂರು ಹೆದ್ದಾರಿಯಲ್ಲಿ ಸಂಚರಿಸಿ ಮಾರಿಗುಡಿ ಬೀದಿಯಲ್ಲಿ ಸಿಕ್ಕಸಿಕ್ಕ ದ್ವಿಚಕ್ರ ವಾಹನಗಳನ್ನ ಜಖಂಗೊಳಿಸಿರುವ ಘಟನೆ ಗುರುವಾರ ಬೆಳಗಿನ ಜಾವ 3.30ರ ವೇಳೆಗೆ ಸಂಭವಿಸಿದೆ.

ಆಹಾರವನ್ನರಸಿ ರೈತರ ಜಮೀನುಗಳಿಗೆ ನುಗ್ಗಿದ ಕಾಡಾನೆ ಹಾದಿ ತಪ್ಪಿ ಪಟ್ಟಣ ಪ್ರವೇಶ ಮಾಡಿದೆ ಎನ್ನಲಾಗಿದೆ, ಪುರಸಭಾ ವ್ಯಾಪ್ತಿಯ ಐದನೇ ವಾರ್ಡಿಗೆ ನುಗ್ಗಿದ ನೀಲದಂತದ ಸಲಗವನ್ನ ಕಂಡ ನಾಯಿಗಳು ಬೊಗಳಿದ ಹಿನ್ನೆಲೆ ಅಟ್ಟಿಸಿಕೊಂಡು ಬರುವ ವೇಳೆ ಎದುರಿಗೆ ಸಿಕ್ಕ ದ್ವಿಚಕ್ರ ವಾಹನಗಳನ್ನು ಎತ್ತಿ ಬೀಸಾಡಿದೆ, ಹಾಗೂ ಆನೆ ರಂಪಾಟ ವೇಳೆ ಜನಸಂಚಾರ ಇಲ್ಲದಿದ್ದರಿಂದ ಬಾರಿ ಅನಾಹುತ ತಪ್ಪಿದೆ , ಯಾರಿಗೂ ಸಹ ಪ್ರಾಣಹಾನಿಯಾಗಿಲ್ಲ, ಆನೆಯ ಅದ್ವಾನದ ದೃಶ್ಯಗಳು ಪುರಸಭಾ ಮಾಜಿ ಅಧ್ಯಕ್ಷ ಕಿರಣ್ ಗೌಡ ಮನೆಯ ಸಿಸಿಟಿವಿ ಕ್ಯಾಮಾರದಲ್ಲಿ ಸೆರೆಯಾಗಿದ್ದು ದೃಶ್ಯ ನೋಡಿದ ಸ್ಥಳೀಯರು ಬೆಚ್ಚಿಬಿದ್ದಿದ್ದಾರೆ.

**ಅರಣ್ಯ ಇಲಾಖೆಗೆ ಮಾಹಿತಿ - ಕಾರ್ಯಚರಣೆ :** ಆನೆ ಮಾರಿಗುಡಿ ಬೀದಿಗೆ ಪ್ರವೇಶಿಸಿದ್ದನ್ನ ಮನಗಂಡ ಪುರಸಭಾ ಮಾಜಿ ಅಧ್ಯಕ್ಷ ಕಿರಣ್ ಗೌಡ ಅರಣ್ಯ ಇಲಾಖೆಗೆ ಮಾಹಿತಿ ನೀಡಿದ ಬೆನ್ನಲ್ಲೇ ಅಧಿಕಾರಿಗಳ ಸೂಚನೆ ಮೇರೆಗೆ ಆನೆಯನ್ನ ಹಿಂಬಾಲಿಸಿದ ಸಿಬ್ಬಂದಿಗಳು ವಾಪಾಸ್ ಕಾಡಿಗಟ್ಟಲು ಹರಸಾಹಸ ಪಡಬೇಕಾಯಿತು, ಕುಂದಕೆರೆ ಅರಣ್ಯ ವಲಯದ ಹೆಗ್ಗವಾಡಿ ಮಾರ್ಗವಾಗಿ ಅರಣ್ಯದೊಳಗೆ ಓಡಿಸುವಲ್ಲಿ ಸಿಬ್ಬಂದಿಗಳು ಯಶಸ್ವಿಯಾದರು.

**ತಪ್ಪಿದ ಬಾರಿ ಅನಾಹುತ :** ಇತ್ತೀಚೆಗೆ ವನ್ಯಜೀವಿಗಳು ಪಟ್ಟಣ ವ್ಯಾಪ್ತಿಯಲ್ಲಿ ಕಾಣಿಸಿಕೊಳ್ಳುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ, ಕಳೆದ ಬಾರಿ ಸಾಕಾನೇ ಪಾರ್ಥಸಾರಥಿ ಪಟ್ಟಣದೊಳಗೆ ದಿಢೀರ್ ಪ್ರತ್ಯಕ್ಷವಾಗಿತ್ತು ಆದರೆ ಯಾರಿಗೂ ತೊಂದರೆ ನೀಡಿರಲಿಲ್ಲ ಹಾಗೆಯೇ ಕಾಡಾನೆಯನ್ನ ಸಾಕಾನೇ ಎಂದು ಭಾವಿಸಿದ್ದರೆ ಗತಿ ಏನು ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

ಮುಂಜಾನೆ 3.30 ರ ಸುಮಾರಿಗೆ ಸಲಗ ಬಂದು ಹೋಗಿರುವುದರಿಂದ ಅನಾಹುತ ತಪ್ಪಿದೆ ಸಾರ್ವಜನಿಕರ ಸಂಚಾರ ವೇಳೆ ಕಾಣಿಸಿಕೊಂಡಿದ್ದರೆ ಗತಿ ಏನು , ಅರಣ್ಯ ಇಲಾಖೆಯವರು ತಕ್ಷಣ ಸ್ಪಂದಿಸಿ ವಾಪಾಸ್ ಕಾಡಿಗಟ್ಟಿದ್ದರಿಂದ ಅವಘಡ ತಪ್ಪಿದಂತಾಗಿದೆ.

# ಅಂಗವಿಕಲರ ಜೊತೆ ಎಚ್‌ಡಿಕೆ ಸಂಕ್ರಾಂತಿ ಆಚರಣೆ

## ಕೆಪಿಟಿಸಿಎಲ್ ಅಂಗವಿಕಲ ನೌಕರರ ಕುಟುಂಬಗಳ ಜೊತೆ ಹಬ್ಬ ಆಚರಿಸಿದ ಕೇಂದ್ರ ಸಚಿವ

• ಉದಯವಾಹಿನಿ, ರಾಮನಗರ


ಇಲ್ಲಿನ ಕೇತಗಾನಹಳ್ಳಿಯಲ್ಲಿರುವ ತಮ್ಮ ತೋಟದ ಮನೆಯಲ್ಲಿ ಬೆಸ್ಕಾಂ ಮತ್ತು ಕೆಪಿಟಿಸಿಎಲ್‌ನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಂಗವಿಕಲ ಉದ್ಯೋಗಿಗಳ ಜೊತೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಸಂಕ್ರಾಂತಿ ಹಬ್ಬವನ್ನು ವಿಶೇಷವಾಗಿ ಆಚರಿಸಿದರು. ನೌಕರರ ಜೊತೆ ಎಚ್‌ಡಿಕೆ ಅವರ ಏಳನೇ ವರ್ಷದ ಹಬ್ಬದ ಆಚರಣೆ ಇದಾಗಿದೆ. ಹಬ್ಬದ ಪ್ರಯುಕ್ತ ನೌಕರರು, ಮಕ್ಕಳು ಹಾಗೂ ಅವರ ತಂದೆ ತಾಯಂದಿರು ಸೇರಿದಂತೆ 600ಕ್ಕೂ ಜನರು ಇಂದು ಎಚ್‌ಡಿಕೆ ನಿವಾಸದಲ್ಲಿ ಜಮಾಯಿಸಿದರು. ಎಲ್ಲರಿಗೂ ಹಬ್ಬದ ಶುಭಾಶಯ ಕೋರಿದ ಎಚ್‌ಡಿಕೆ, ಬಳಿಕ ಅವರೊಂದಿಗೆ ಎಳ್ಳುಬೆಲ್ಲ ಸೇವಿಸಿದರು.

ಬಳಿಕ ಮಾನತಾಡಿದ ಎಚ್‌ಡಿಕೆ. ನಿಮ್ಮನ್ನು ನೋಡುತ್ತಿದ್ದರೆ ನನ್ನ ಹೃದಯ ತುಂಬಿ ಬರುತ್ತಿದೆ. ದೇವರು ಕೊಟ್ಟ ಸಣ್ಣ ಅವಕಾಶದಲ್ಲಿ ನಿಮಗೆ ಸಹಾಯ ಮಾಡುವ ಅವಕಾಶ ಸಿಕ್ಕಿತು. ಅದನ್ನೇ ನೀವೆಲ್ಲರೂ ಹೃದಯದಲ್ಲಿ ಇಟ್ಟುಕೊಂಡು ನನ್ನ ಮೇಲೆ ಪ್ರೀತಿ, ವಾತ್ಸಲ್ಯ ತೋರುತ್ತಿರುವುದು ನನ್ನ ಜೀವನಕ್ಕೆ ಸಾರ್ಥಕತೆ ತಂದಿದೆ' ಎಂದು ಭಾವುಕರಾದರು. 'ನಿಮ್ಮ ಜೀವನ ಎಲ್ಲರಿಗೂ ಮಾದರಿ. ಶ್ರಮ ವಹಿಸಿ ಕೆಲಸ ಮಾಡುತ್ತೀರಿ. ಸರ್ಕಾರ ನೀಡುವ ಸಂಬಳದಿಂದ ಉತ್ತಮ ಬದುಕು ಕಟ್ಟಿಕೊಂಡಿದ್ದೀರಿ. ನಿಮ್ಮ ಜೀವನ, ಬೆಳವಣಿಗೆ ಸಮಾಜಕ್ಕೆ ಮಾದರಿ. ನೀವು, ನಿಮ್ಮ ಕುಟುಂಬ, ನಿಮ್ಮ ಮಕ್ಕಳು ಇನ್ನೂ ಎತ್ತರದ ಸಾಧನೆ ಮಾಡಬೇಕು' ಎಂದು ಶುಭ ಹಾರೈಸಿದರು. ಪುತ್ರ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹಾಗೂ ಮುಖಂಡರು ಇದ್ದರು.

**ಹಿನ್ನೆಲೆ ಏನು?:**ಕುಮಾರಸ್ವಾಮಿ ಅವರು 2006ರಲ್ಲಿ ಮುಖ್ಯಮಂತ್ರಿಯಾಗಿದ್ದಾಗ ನಡೆಯುತ್ತಿದ್ದ ಜನತಾ ದರ್ಶನದಲ್ಲಿ ಅಂಗವಿಕಲರು ಉದ್ಯೋಗ ಕೋರಿ ಮನವಿ ಸಲ್ಲಿಸಲು ಬರುತ್ತಿದ್ದರು. ಆಗ ಕುಮಾರಸ್ವಾಮಿ ಅವರು, ಬೆಸ್ಕಾಂ ಸೇರಿ ಕೆಪಿಟಿಸಿಎಲ್‌ನ ವಿವಿಧ ವಿಭಾಗಗಳಲ್ಲಿ ಗುತ್ತಿಗೆ ಆಧಾರದ ಮೇಲೆ 600ಕ್ಕೂ ಹೆಚ್ಚು ಅಂಗವಿಕಲರನ್ನು ನೇಮಕ ಮಾಡಿದರು.

ಉದ್ಯೋಗಿಗಳಿಗೆ 2018ರವರೆಗೂ ಸೇವೆ ಕಾಯಂ ಆಗಲಿಲ್ಲ. ಅದುವರೆಗೂ ಯಾವುದೇ ಸರ್ಕಾರ ಅಂಗವಿಕಲರ ಮನವಿಗೆ ಸ್ಪಂದಿಸಿರಲಿಲ್ಲ. 2018ರಲ್ಲಿ ಎಚ್‌ಡಿಕೆ ಮತ್ತೆ ಮುಖ್ಯಮಂತ್ರಿಯಾದಾಗ, ಗುತ್ತಿಗೆ ಆಧಾರದ ಮೇಲೆ ನೇಮಕವಾಗಿದ್ದ ಅಂಗವಿಕಲರ ಸೇವೆಯನ್ನು 2019 ಜ. 14ರಂದು ಸಂಕ್ರಾಂತಿ ಹಬ್ಬದ ದಿನವೇ ಕಾಯಂ ಮಾಡಿದ ಆದೇಶ ಹೊರಡಿಸಿದರು.

ಇದರಿಂದಾಗಿ ಎಸ್‌ಎಸ್‌ಎಲ್‌ಸಿ ಪಾಸಾಗಿದ್ದ 300 ಹಾಗೂ ಪದವೀಧರರ 300 ಅಂಗವಿಕಲರಿಗೆ ಇಂಧನ ಇಲಾಖೆಯಲ್ಲಿ ಉದ್ಯೋಗಾವಕಾಶದೊಂದಿಗೆ ಹೊಸ ಬದುಕು ಸಿಕ್ಕಿತು. ಅಂದಿನಿಂದ ಅಷ್ಟೂ ಉದ್ಯೋಗಿಗಳು ಸಂಕ್ರಾಂತಿ ದಿನದಂದು ಎಚ್‌ಡಿಕೆ ಅವರ ಮನೆಗೆ ಬಂದು ಹಬ್ಬದ ಶುಭಾಶಯ ಕೋರಿ, ಅವರೊಂದಿಗೆ ಆಚರಿಸುತ್ತಾರೆ.


ಉದಯವಾಹಿನಿ ಚಿತ್ರ

> ಅಂಗವಿಕಲರಿಗೆ ಅನುಕಂಪದ ಬದಲು ಆರ್ಥಿಕ ನೆರವು ಒದಗಿಸಬೇಕು. ನನಗೆ ಅವಕಾಶ ಸಿಕ್ಕಾಗ ಸಣ್ಣ ಸಹಾಯ ಮಾಡಿದೆ. ದೈಹಿಕವಾಗಿ ಶಕ್ತಿ ಇಲ್ಲದವರಿಗಾಗಿ ನನ್ನ ಹೃದಯ ಮಿಡಿಯುತ್ತದೆ. ಅಂತಹವರ ಒಳಿತಿಗಾಗಿ ಯಾವಾಗಲೂ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ
>
> -ಎಚ್.ಡಿ. ಕುಮಾರಸ್ವಾಮಿ, ಕೇಂದ್ರ ಸಚಿವ

### ಬದುಕು ಬದಲಿಸಿದ ಎಚ್‌ಡಿಕೆ

**ಕುಮಾರಸ್ವಾಮಿ ಅವರಿಂದಾಗಿ ನಮ್ಮ ಬದುಕೇ ಬದಲಾಯಿತು. ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವಾಗ ನಮ್ಮ ವೇತನ ರೂ.3 ಸಾವಿರ ಇತ್ತು. ಕಾಯಂ ಆದ ಬಳಿಕ ರೂ.80 ಸಾವಿರದಿಂದ ರೂ.1 ಲಕ್ಷದವರೆಗೆ ವೇತನ ಪಡೆಯುತ್ತಿದ್ದೇವೆ. ಸ್ವಂತ ಮನೆ ಕಟ್ಟಿಕೊಂಡಿದ್ದೇವೆ. ಮಕ್ಕಳಿಗೆ ಒಳ್ಳೆಯ ಶಿಕ್ಷಣ ಕೊಡಿಸುತ್ತಿದ್ದೇವೆ. ಇದೆಲ್ಲ ಸಾಧ್ಯವಾಗಿದ್ದು ಕುಮಾರಸ್ವಾಮಿ ಅವರಿಂದ. ಹೀಗಾಗಿ ಪ್ರತಿ ವರ್ಷ ಅವರ ಜೊತೆ ಸಂಕ್ರಾಂತಿ ಆಚರಿಸುತ್ತೇವೆ ಎಂದು ಉದ್ಯೋಗಿಗಳು ಹೇಳಿದರು.**

## ಹುಲಗನ ಮುರುಡಿ

## ವೆಂಕಟರಮಣ ರಥೋತ್ಸವ ಸಂಪನ್ನ



• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ತೆರಕಣಾಂಬಿ ಸಮೀಪದ ಹುಲಗಣ ಮುರುಡಿ ವೆಂಕಟರಮಣಸ್ವಾಮಿ ಸನ್ನಿಧಿಯಲ್ಲಿ ವಿಜೃಂಭಣೆಯಿಂದ ವರ್ಷದ ಮೊದಲ ಜಾತ್ರಾ ಮಹೋತ್ಸವ ಜರುಗಿತು. ಮಕರ ಸಂಕ್ರಾಂತಿ ಹಿನ್ನೆಲೆ ಶ್ರೀಕೃಷ್ಣ ಮೂರ್ತಿಗೆ ವಿಶೇಷ ಪುಷ್ಪಗಳಿಂದ ಅಲಂಕೃತಗೊಳಿಸಲಾಗಿತ್ತು, ಮುಂಜಾನೆಯಿಂದಲೇ ಭಕ್ತಗಣಕ್ಕೆ ದರ್ಶನವಕಾಶ ಕಲ್ಪಿಸಲಾಗಿತ್ತು. ಸಂಪ್ರದಾಯದಂತೆ ಬೆಟ್ಟದಲ್ಲಿ ಮಧ್ಯಾಹ್ನ 1.30 ರ ಸುಮಾರಿಗೆ ಗರುಡ ಪಕ್ಷಿ ಗೋಪುರದ ಮೇಲೆ ಹಾರಾಟ ನಡೆಸಿದ ಬಳಿಕ ತಹಶೀಲ್ದಾರ್ ಎಂ.ಎಸ್.ತನ್ಮಯ್ ಹೀಡುಗಾಯಿ ಒಡೆಯುವ ಮೂಲಕ ರಥೋತ್ಸವಕ್ಕೆ ಚಾಲನೆ ನೀಡಿದರು. ಆಷಾಢ ಮಾಸ ಮುಗಿಯುತ್ತಿದ್ದಂತೆ ನವಜೋಡಿಗಳು ತೇರಿಗೆ ಹಣ್ಣು ಜವನ ಎಸೆಯುವ ಮೂಲಕ ಪುನೀತರಾದರು.

ಬೆಳಗ್ಗೆಯಿಂದಲೇ ಸಾಗರೋಪಾದಿಯಲ್ಲಿ ಭಕ್ತ ಸಮೂಹ ಬೆಟ್ಟಕ್ಕೆ ಬಂದರೆ ಹರಕೆ ಹೊತ್ತ ಸುತ್ತಮುತ್ತಲಿನಾ ಗ್ರಾಮಸ್ಥರು ಕಾಲ್ನಡಿಗೆಯಲ್ಲಿ ದೇಗುಲ ತಲುಪಿದರು. ಭಕ್ತರ ಸಂಖ್ಯೆ ಹೆಚ್ಚಳವಾಗುವ ಸಾಧ್ಯತೆಯನ್ನರಿತ ಆರಕ್ಷಕ ಇಲಾಖೆ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಿತ್ತು, ವಾಹನಗಳಿಗೆ ಬೆಟ್ಟದ ತಪ್ಪಲಿನಲ್ಲೇ ನಿರ್ಬಂಧ ಹೇರುವ ಮೂಲಕ ನಿಲುಗಡೆಗೆ ಪ್ರತ್ಯೇಕವಕಾಶ ಕಲ್ಪಿಸಲಾಗಿತ್ತು.

## ದಯಾಮರಣ ಕೋರಿದ 16 ರೈತರು


ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ

ಉಳುವವನೇ ಭೂಮಿಯ ಒಡೆಯ ಯೋಜನೆಯಡಿ ಜಾರಿಯಾಗಿರುವ ಜಮೀನು ಅತಿಕ್ರಮಣಕ್ಕೆ ಪ್ರಯತ್ನಿಸುತ್ತಿರುವ ವ್ಯಕ್ತಿಯೊಬ್ಬರು ಮಾನಸಿಕವಾಗಿ ಹಾಗೂ ದೈಹಿಕವಾಗಿ ಹಿಂಸೆ ನೀಡುತ್ತಿದ್ದಾರೆ. ಅಧಿಕಾರಿಗಳಿಗೂ ದೂರು ಕೊಟ್ಟರೂ ಪ್ರಯೋಜವಾಗಿಲ್ಲ ಎಂದು ಅಳಲು ತೋಡಿಕೊಂಡಿರುವ ಪೇಟೆಯ 16 ರೈತರು ದಯಾಮರಣ ಕೋರಿ ರಾಷ್ಟ್ರಪತಿಗೆ ಪತ್ರ ಬರೆದಿದ್ದಾರೆ. ಈ ಕುರಿತು ನಗರದ ಎಪಿಎಂಸಿಯ ರೈತ ಭವನದಲ್ಲಿ ರೈತರೊಂದಿಗೆ ಸುದ್ದಿಗೋಷ್ಠಿ ನಡೆಸಿದ ರೈತ ಸಂಘದ ಮುಖಂಡ ನಲ್ಲಹಳ್ಳಿ ಶ್ರೀನಿವಾಸ್, ಉಳುವವವನೇ ಭೂಮಿಯ ಒಡೆಯ ಯೋಜನೆಯಡಿ ಮಂಗಳವಾರಪೇಟೆಯ 16 ರೈತರಿಗೆ 17.24 ಎಕರೆ ಜಮೀನು ಮಂಜೂರಾಗಿದೆ. ಮೂರು ತಲೆಮಾರುಗಳಿಂದ ಆ ಜಮೀನು ಕುಟುಂಬಗಳ ಸ್ವಾಧೀನದಲ್ಲಿತ್ತು ಎಂದರು.

'ಇದೇ ಜಮೀನಿನನ್ನು ತಾಲ್ಲೂಕಿನ ಮಾಜಿ ಸಚಿವರೊಬ್ಬರು ತಮ್ಮ ಸಂಬಂಧಿಗೆ ಮರು ಮಂಜೂರು ಮಾಡಿಸಿದ್ದಾರೆ. ಅವರು 16 ಕುಟುಂಬಗಳಿಗೆ 2018ರಿಂದಲೂ ಈ ಜಮೀನು ನಮ್ಮದು ಎಂದು ತೊಂದರೆ ಕೊಡುತ್ತಿದ್ದಾರೆ. ಈ ಸಂಬಂಧ ಕಾನೂನು ಹೋರಾಟ ಸಹ ಚನ್ನಪಟ್ಟಣದಲ್ಲಿ ನ್ಯಾಯಾಲಯದಲ್ಲಿ ನಡೆದಿದೆ' ಎಂದು ತಿಳಿಸಿದರು. 'ಜಮೀನಿನಲ್ಲಿ ಬೆಳೆದಿದ್ದ ಭತ್ತವನ್ನು ಇತ್ತೀಚೆಗೆ ಕೊಯ್ದು ಮಾಡಲು ಹೋದಾಗ, ಆ ವ್ಯಕ್ತಿ ಕಡೆಯವರು ಅಡ್ಡಿಪಡಿಸಿದ್ದಾರೆ. ಸ್ಥಳಕ್ಕೆ ಬಂದ ಪೊಲೀಸರು ಸಹ ಆ ವ್ಯಕ್ತಿ ಪರವಾಗಿಯೇ ವಕಾಲತ್ತು ಮಾಡಿದ್ದಾರೆ. ಇದರಿಂದ ನೊಂದ ರೈತ ವಿಶ್ವನಾಥ್ ಪೊಲೀಸರ ಸಮ್ಮುಖದಲ್ಲೇ ವಿಷ ಕುಡಿದು ಆತ್ಮಹತ್ಯೆಗೆ ಯತ್ನಿಸಿ ಆಸ್ಪತ್ರೆಯಲ್ಲಿದ್ದಾರೆ' ಎಂದು ಹೇಳಿದರು. 'ವ್ಯಕ್ತಿಯು ರೈತರಿಗೆ ನೀಡುವ ಮಾನಸಿಕ ಮತ್ತು ದೈಹಿಕ ಹಿಂಸೆ ಕುರಿತು ತಹಶೀಲ್ದಾರ್ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ದೂರು ಕೊಟ್ಟರೂ ಪ್ರಯೋಜನವಾಗಿಲ್ಲ. ಆತ ಪ್ರಭಾವಿಯಾಗಿರುವುದರಿಂದ ಯಾರೂ ರೈತರ ನೆರವಿಗೆ ಬರುತ್ತಿಲ್ಲ. ಹಾಗಾಗಿ, ದಯಾಮರಣ ಕೋರಿ ರಾಷ್ಟ್ರಪತಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ' ಎಂದರು.

ಸುದ್ದಿಗೋಷ್ಠಿಯಲ್ಲಿ ರೈತ ಸಂಘದ ಮುಖಂಡರಾದ ರಾಜು, ಕೃಷ್ಣಪ್ಪ, ದೇವರಾಜು, ರಮೇಶ್, ಶಿವರಾಜ್, ರೈತರಾದ ರತ್ನಮ್ಮ, ವಿಶ್ವನಾಥ್, ಮಲ್ಲಪ್ಪ, ಶೋಭ, ರೇಖಾ, ಚಿಕ್ಕಮ್ಮ, ಜಯಲಕ್ಷ್ಮಮ್ಮ, ವೆಂಕಟಮ್ಮ, ಜಯಮ್ಮ ಹಾಗೂ ಇತರರು ಇದ್ದರು.

# ಚಾಮುಂಡಿ ಬೆಟ್ಟದಲ್ಲಿ ಶಾಶ್ವತ ನಿರ್ಮಾಣ ಸಲ್ಲ: ಹೈಕೋರ್ಟ್

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ಮೈಸೂರಿನ ಪ್ರಸಿದ್ಧ ಚಾಮುಂಡೇಶ್ವರಿ ಬೆಟ್ಟದಲ್ಲಿ ಯಾವುದೇ ಶಾಶ್ವತ ಕಾಮಗಾರಿ ನಿರ್ಮಾಣ ಮಾಡಬಾರದು ಎಂದು ಹೈಕೋರ್ಟ್, ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿದೆ.

ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ' ರಚನೆಯ ಸಿಂಧುತ್ವ ಪ್ರಶ್ನಿಸಿ ಮೈಸೂರು ರಾಜಮನೆತನದ ಪ್ರಮೋದಾ ದೇವಿ ಒಡೆಯರ್ ಸಲ್ಲಿಸಿರುವ ರಿಟ್ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಕುರಿತಂತೆ ಮಧ್ಯಂತರ ಆದೇಶ ನೀಡಿದೆ.

ವಿಚಾರಣೆ ವೇಳೆ ಪ್ರಮೋದಾ ದೇವಿ ಪರ ಪದಾಂಕಿತ ಹಿರಿಯ ವಕೀಲ ಜೆ.ಸಾಯಿ ದೀಪಕ್, 'ದೇವಾಲಯದ ಆಸ್ತಿ ಮಾಲಿಕತ್ವ ವಿವಾದವು ಇದೇ ಹೈಕೋರ್ಟ್‌ನ ವಿಭಾಗೀಯ ನ್ಯಾಯಪೀಠದ ಮುಂದೆ ವಿಚಾರಣೆಗೆ ಬಾಕಿ ಇದೆ.

ಏತನ್ಮಧ್ಯೆ, ರಾಜ್ಯ ಸರ್ಕಾರ ಶಾಸನದ ಮೂಲಕ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರವನ್ನು ಅಸ್ತಿತ್ವಕ್ಕೆ ತಂದಿದೆ. ಈ ಪ್ರಾಧಿಕಾರವು ಅರ್ಜಿದಾರರಿಗೆ ಯಾವುದೇ ಸಭೆಯ ನೋಟಿಸ್‌ಗಳನ್ನು ನೀಡುತ್ತಿಲ್ಲ ಮತ್ತು ದೇವಾಲಯದ ಆವರಣದಲ್ಲಿ ಕೆಲವು ಶಾಶ್ವತ ನಿರ್ಮಾಣಗಳ ಕಾಮಗಾರಿ ನಡೆಸುತ್ತಿದೆ' ಎಂದು ದೂರಿದರು.ಇದಕ್ಕೆ ರಾಜ್ಯ ಸರ್ಕಾರದ ಪರ ಹಾಜರಿದ್ದ ಹೆಚ್ಚುವರಿ ಅಡ್ವಕೇಟ್ ಜನರಲ್ ಎನ್.ದೇವದಾಸ್ (ಎಎಜಿ), 'ಕೇಂದ್ರ ಸರ್ಕಾರದ ಪ್ರಸಾದ್ ಯೋಜನೆಯಡಿ ಚಾಮುಂಡಿ ಬೆಟ್ಟದಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ. ದೇವಾಲಯದ ಆವರಣದಲ್ಲಿ ಯಾವುದೇ ಶಾಶ್ವತ ಕಾಮಗಾರಿ ನಡೆಸುವುದಿಲ್ಲ. ಬೇಸಿಗೆ ಸಮೀಪಿಸುತ್ತಿರುವ ಕಾರಣ ಭಕ್ತರ ಹಿತದೃಷ್ಟಿಯಿಂದ ತಂಗುದಾಣ ನಿರ್ಮಿಸಲಾಗುತ್ತಿದೆ' ಎಂದು ವಿವರಿಸಿದರು.

**ಯಾವುದೇ ಶಾಶ್ವತ ಕಾಮಗಾರಿ ನಿರ್ಮಾಣ**

ವಾದ ಪ್ರತಿವಾದ ಆಲಿಸಿದ ನ್ಯಾಯಪೀಠ, ಮುಂದಿನ ವಿಚಾರಣೆಯ ದಿನಾಂಕದೊಳಗಾಗಿ ಪ್ರಸಾದ್ ಯೋಜನೆ ಅಡಿಯಲ್ಲಿ ಕೈಗೊಳ್ಳುತ್ತಿರುವ ಕಾಮಗಾರಿ ಮತ್ತು ಯೋಜನೆಯ ಅನುಷ್ಠಾನದ ವಿಧಾನದ ವಿವರಗಳನ್ನು ಕೋರ್ಟ್‌ಗೆ ಹಾಜರುಪಡಿಸಬೇಕು' ಎಂದು ರಾಜ್ಯ ಮತ್ತು ಕೇಂದ್ರ ಸರ್ಕಾರಕ್ಕೆ ತಾಕೀತು ಮಾಡಿತು. ಅಂತೆಯೇ, 'ಕೇಂದ್ರ ಸರ್ಕಾರದ ಯೋಜನೆಯಡಿ ಯಾವ ರೀತಿಯ ಕಾಮಗಾರಿಗಳಿಗೆ ಅವಕಾಶವಿದೆ ಎಂಬುದನ್ನು ತಿಳಿಸಿ' ಎಂದು ಉಭಯ ಸರ್ಕಾರಗಳಿಗೆ ನಿರ್ದೇಶಿಸಿ ವಿಚಾರಣೆಯನ್ನು ಫೆಬ್ರುವರಿ 13ಕ್ಕೆ ಮುಂದೂಡಿತು. ಕೇಂದ್ರ ಪ್ರವಾಸೋದ್ಯಮ ಸಚಿವಾಲಯವನ್ನೂ ಪ್ರತಿವಾದಿಯನ್ನಾಗಿ ಸೇರ್ಪಡೆ ಮಾಡಬೇಕೆಂಬ ಮಧ್ಯಂತರ ಅರ್ಜಿ ಸ್ವೀಕರಿಸಿದ ನ್ಯಾಯಪೀಠ ಡೆಪ್ಯುಟಿ ಸಾಲಿಸಿಟರ್ ಜನರಲ್ ಎಚ್.ಶಾಂತಿಭೂಷಣ್ ಅವರಿಗೆ ನೋಟಿಸ್ ಪಡೆಯಲು ಸೂಚಿಸಿತು.

### ಕೋರಿಕೆ ಏನು?

**ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ-2024 ಸಂವಿಧಾನದ 13, 25, 26 ಮತ್ತು 29ನೇ ವಿಧಿಗಳ ಉಲ್ಲಂಘನೆ. ಈ ಕಾಯ್ದೆಯನ್ನು ಏಕಪಕ್ಷೀಯವಾಗಿ ರೂಪಿಸಲಾಗಿದ್ದು ತಾರತಮ್ಯದಿಂದ ಕೂಡಿದೆ. ಅದ್ದರಿಂದ, ಇದನ್ನು ಅಸಿಂಧುಗೊಳಿಸಬೇಕು' ಎಂದು ಅರ್ಜಿದಾರರು ಕೋರಿದ್ದಾರೆ.**

# ಮೇರೆ ಮೀರಿದ ರಾಜಕೀಯ ಹಗೆತನ: ಸಂಸದ ಡಾ.ಕೆ.ಸುಧಾಕರ್ ವಾಗ್ದಾಳಿ

• ಉದಯವಾಹಿನಿ, ಚಿಕ್ಕಬಳ್ಳಾಪುರ



ಜಿಲ್ಲೆಯಲ್ಲಿ ರಾಜಕೀಯ ಹಗೆತನ ಮೇರೆ ಮೀರಿದೆ. ಎದುರಾಳಿ ಮುಖಂಡರು ಮತ್ತು ಕಾರ್ಯಕರ್ತರ ಮೇಲೆ ಸುಳ್ಳು ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ ಎಂದು ಸಂಸದ ಡಾ.ಕೆ.ಸುಧಾಕರ್ ಆರೋಪಿಸಿದರು. ತಾಲ್ಲೂಕಿನ ಪುರದಗಡ್ಡೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ರಾಜಕೀಯ ಹಗೆತನ ಮತ್ತು ಸೇಡು ತೀರಿಸಿಕೊಳ್ಳಬೇಕು ಎಂದಿದ್ದರೆ ಇವರು (ಡಾ.ಎಂ.ಸಿ.ಸುಧಾಕರ್) ಶಾಸಕರೇ ಆಗುತ್ತಿರಲಿಲ್ಲ ಎಂದರು.

ಈ ಕ್ಷೇತ್ರದ ಶಾಸಕ ಮಾತೆತ್ತಿದರೆ ದಲಿತರ ಉದ್ಧಾರ ಮಾಡುವೆ ಎನ್ನುತ್ತಾರೆ. ದಲಿತರ ಮುಖಂಡರ ಮೇಲೆ ರಾಜಕೀಯ ದುರುದ್ದೇಶದಿಂದ ಪೊಕ್ಸೊ ಪ್ರಕರಣ ದಾಖಲಿಸುವರು. 25ರಿಂದ 30 ಜನರ ಸಮ್ಮುಖದಲ್ಲಿ ಸಭೆ ನಡೆದಿದೆ. ಆ ನಂತರ ಪೊಕ್ಸೊ ಪ್ರಕರಣ ದಾಖಲಿಸಿದ್ದಾರೆ. ಈ ಬಗ್ಗೆ ಎಸ್‌ಪಿ ಮತ್ತು ಐಜಿ ಅವರ ಜೊತೆ ಮಾತನಾಡಿದ್ದೇನೆ. ನೀವು ದಲಿತ ಮುಖಂಡರನ್ನು ಬಂಧಿಸಿ ನೋಡಿ ನಿಮ್ಮಲ್ಲಿ ಒಬ್ಬರ ತಲೆದಂಡ ಆಗುವವರೆಗೆ ಬಿಡುವುದಿಲ್ಲ ಎಂದಿದ್ದೇನೆ' ಎಂದು ಹೇಳಿದರು.

'ಯಾರೊ ಒಬ್ಬ ಆತ್ಮಹತ್ಯೆ ಮಾಡಿಕೊಂಡರೆ ನನ್ನ ಮೇಲೆ ಉದ್ದೇಶ ಪೂರ್ವಕವಾಗಿ ಪ್ರಕರಣ ದಾಖಲಿಸುತ್ತಾರೆ. ದುರುದ್ದೇಶ, ಷಡ್ಯಂತ್ರ ಮತ್ತು ರಾಜಕೀಯ ಹಗೆಯ ಕಾರಣದಿಂದ ಈ ರೀತಿ ಮಾಡುತ್ತಿದ್ದಾರೆ. ನಿಮ್ಮ ವಿರುದ್ಧ ರಾಜಕೀಯ ಸೇಡು ತೀರಿಸಿಕೊಳ್ಳಬೇಕು ಎಂದಿದ್ದರೆ ನನಗೆ ನಿಮಗಿಂತಲೂ ಹೆಚ್ಚಿನ ಅಧಿಕಾರ ಇತ್ತು. ರಾಜಕೀಯಕ್ಕಾಗಿ ಸುಳ್ಳು ಪ್ರಕರಣಗಳನ್ನು ನಾನು ದಾಖಲಿಸಿಲ್ಲ' ಎಂದು ಸಚಿವ ಡಾ.ಎಂ.ಸಿ.ಸುಧಾಕರ್ ಮತ್ತು ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ವಾಗ್ದಾಳಿ ನಡೆಸಿದರು. 'ಪದೇ ಪದೇ ಯಾರ ಕಾಲನ್ನೂ ಹಿಡಿದು ಭಿಕ್ಷೆಗೆ ಹೋಗಿಲ್ಲ. ನಮ್ಮ ಮನೆಯ ಮುಂದೆ ದಿನದ 24 ಗಂಟೆ ಬಂದು ಕಾಯುತ್ತ ಭಿಕ್ಷೆ ಎತ್ತಿದ್ದಾರೆ' ಎಂದು ವಾಗ್ದಾಳಿ ನಡೆಸಿದರು. ಚಿಕ್ಕಬಳ್ಳಾಪುರ ಜಿಲ್ಲೆಗೆ ಹಾಲು ಒಕ್ಕೂಟ ತಂದ ಸಂತೃಪ್ತಿ ನನಗೆ ಇದೆ. ವೈದ್ಯಕೀಯ ಕಾಲೇಜು ತರಬೇಕು ಎಂದುಕೊಂಡಿದ್ದೆ ಆ ಕೆಲಸ ಮಾಡಿದೆ. ಇಂದಿನ ಜಿಲ್ಲಾ ಉಸ್ತುವಾರಿ ಸಚಿವರು ಒಕ್ಕೂಟವು ಕೋಲಾರದಲ್ಲಿಯೇ ಇರಲಿ ಎಂದಿದ್ದರು. ನಾನು ಹೈಕೋರ್ಟ್ ಮೊರೆ ಹೋಗಿ ಜಿಲ್ಲೆಗೆ ಒಕ್ಕೂಟ ತಂದಿದ್ದೇನೆ' ಎಂದರು.

> ಸುಧಾಕರ್ ಕಡತಗಳನ್ನು ವಿಲೇವಾರಿ ಮಾಡಿದೆ ಎಂದಿದ್ದ ಪ್ರದೀಪ್ ಈಶ್ವರ್ ಮಾತಿಗೆ ಪ್ರತಿಕ್ರಿಯಿಸಿದ ಸಂಸದರು ನನ್ನ ಕಡತವಿರಲಿ ಅಥವಾ ಜನರ ಕಡತಗಳು ಇರಲಿ ನಿಯಮಗಳ ರೀತಿ ಇದ್ದರೆ ಆ ಕಡತಗಳನ್ನು ವಿಲೇವಾರಿ ಮಾಡಬೇಕು. ನಿಯಮಗಳ ಉಲ್ಲಂಘನೆ ಆಗಿದ್ದರೆ ಆ ಕೆಲಸ ಮಾಡುವುದಿಲ್ಲ. ಸರ್ಕಾರ ಇವರಪ್ಪನದ್ದಾ ಎಂದು ಆಕ್ರೋಶ ವ್ಯಕ್ತಪಡಿಸಿದರು.
>
> -ಸಂಸದ ಡಾ.ಕೆ.ಸುಧಾಕರ್

# ಸಿಎಂ ನವರ ಬಾಯಿಯೇ ಬಚ್ಚಲು, ಅವರನ್ನೇ ಪಕ್ಷದವರು ಪಾಲಿಸ್ತಿದ್ದಾರೆ?

## ನನ್ನ ಫೋಟೋ ಇದ್ದರೂ ಸರಿ, ಮೊದಲು ಕರ್ನಾಟಕವನ್ನು ಫ್ಲೆಕ್ಸ್‌ಮುಕ್ತ ಮಾಡಿ ಎಂದು ಆಗ್ರಹ

• ಉದಯವಾಹಿನಿ, ಮೈಸೂರು

**ಸರ್ಕಾರದ ವಿರುದ್ಧ ಸಂಸದ ಪ್ರತಾಪ್ ಸಿಂಹ ಕಿಡಿ**

ಶಿಡ್ಲಘಟ್ಟದ ಪೌರಾಯುಕ್ತೆಗೆ ಕಾಂಗ್ರೆಸ್ ಮುಖಂಡನಿಂದ ಧಮ್ಕಿ ಹಾಕಿದ ಘಟನೆ ನಡೆದಿತ್ತು ಈ ಬಗ್ಗೆ ಮಾಜಿ ಸಂಸದ ಪ್ರತಾಪ್ ಸಿಂಹ ಮಾತನಾಡಿ, ಅಧಿಕಾರಿಗೆ ಧಮ್ಕಿ ಹಾಕಿದ ಪುಡಾರಿಯನ್ನು ಒದ್ದು ಒಳಗೆ ಹಾಕಿ. ಸಿಎಂ ಸಿದ್ದರಾಮಯ್ಯನವರ ಬಾಯಿಯೇ ಬಚ್ಚಲಾಗಿದೆ. ಅವರೇ ಯಾರಿಗೂ ಮರ್ಯಾದೆ ಕೊಡೋದಿಲ್ಲ. ಇದನ್ನೇ ಅವರ ಪಕ್ಷದವರು ಅನುಸರಿಸುತ್ತಿದ್ದಾರೆ ಎಂದು ಹೇಳಿದರು.

ಶಿಡ್ಲಘಟ್ಟ ನಗರದಲ್ಲಿ ಕಲ್ಟ್ ಸಿನಿಮಾ ಪ್ರಚಾರದ ಬ್ಯಾನರ್ ಅನ್ನು ತೆರವುಗೊಳಿಸಿದ್ದಕ್ಕೆ ಕುಪಿತಗೊಂಡ ಕಾಂಗ್ರೆಸ್ ಮುಖಂಡ ರಾಜೀವ್‌ಗೌಡ, ನಗರಸಭೆ ಪೌರಾಯುಕ್ತೆಗೆ ಮೊಬೈಲ್ ಕರೆ ಮಾಡಿ ಧಮ್ಕಿ ಹಾಕಿ ಅವಾಚ್ಯ ಶಬ್ದಗಳಿಂದ ನಿಂದಿಸಿ ನನ್ನ ತಾಕತ್ತು ಏನೆಂದು ತೋರಿಸುತ್ತೇನೆ ಎಂದು ಬೆದರಿಕೆ ಹಾಕಿದ್ದರು. ಸದ್ಯ ಈ ಬಗ್ಗೆ ಕರ್ನಾಟಕ ರಾಜಕೀಯದಲ್ಲಿ ಭಾರಿ ಚರ್ಚೆಯನ್ನುಟ್ಟು ಹಾಕಿತ್ತು.

**ಫ್ಲೆಕ್ಸ್ ಮುಕ್ತವಾಗಲಿ:** ಸಿಎಂ ಬಳಸುವ ಭಾಷೆ ಸರಿ ಇದ್ದರೆ ಅವರ ಕಾರ್ಯಕರ್ತರದು ಸರಿ ಇರುತ್ತಿತ್ತು. ಹಿಂದೆ ಐಎಎಸ್ ಅಧಿಕಾರಿಗೆ ಸಿದ್ದರಾಮಯ್ಯ ಭಂಟ ನಿಂದಿಸಿದ್ದ. ಇಂತಹ ಹಲವು ಘಟನೆಗಳು ನಡೆದಿವೆ. ಅದು ಈಗ ಮುಂದುವರಿದಿದೆ. ರಾಜ್ಯವನ್ನು ಮೊದಲು ಫ್ಲೆಕ್ಸ್ ಮುಕ್ತ ಮಾಡಿ. ನನ್ನ ಫೋಟೋ ಇದ್ದರೂ ಕೂಡ ಫ್ಲೆಕ್ಸ್ ತೆಗೆಸಿ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಮೈಸೂರಿನಲ್ಲಿ ಹೇಳಿದರು.

**ಸತ್ತ ಆಡಳಿತ:** ರಾಜ್ಯದಲ್ಲಿ ಆಡಳಿತ ಸತ್ತಿದೆ. ಸತ್ತ ಆಡಳಿತದ ಹೆಣವನ್ನು ಸಿದ್ದರಾಮಯ್ಯ ಮುಂದೆ ಹೊತ್ತಿದ್ದಾರೆ, ಡಿಕೆಶಿ ಹಿಂದೆ ಹೊತ್ತಿದ್ದಾರೆ. ಆಡಳಿತದ ಹೆಣವನ್ನು ಮುಂದೆ ಹೊರಲು ಡಿ ಕೆ ಶಿವಕುಮಾರ್ ಯತ್ನಿಸುತ್ತಿದ್ದಾರೆ.ಹೆಣ ಮುಂದೆ ಯಾರಾದರೂ ಹೊರಲಿ, ಹಿಂದೆ ಯಾರಾದರೂ ಹೊರಲಿ, ಅದರಲ್ಲೇನೂ ವ್ಯತ್ಯಾಸ ಇಲ್ಲ. ಸಿದ್ದರಾಮಯ್ಯ ಯಾವತ್ತಿಗೂ ದೇವರಾಜ ಅರಸು ಆಗಲು ಸಾಧ್ಯವಿಲ್ಲ.ಸಿದ್ದರಾಮಯ್ಯ ಬಹಳ ಬೇಗ ಜನರ ಮನಸ್ಸಿನಿಂದ ದೂರ ಆಗುತ್ತಾರೆ.

ಜನ ಸಿದ್ದರಾಮಯ್ಯರನ್ನು ಮರೆಯುವ ದಿನಗಳು ಬಹಳ ದೂರವಿಲ್ಲ. ಡಿಕೆಶಿ ಜೊತೆ ಪೈಪೋಟಿ ಮಾಡುತ್ತಾ ಇನ್ನಷ್ಟು ದಿನ ಸಿದ್ದರಾಮಯ್ಯ ತಮ್ಮ ಸ್ಥಾನ ಉಳಿಸಿಕೊಳ್ಳಬಹುದು. ಆದರೆ ಏನೂ ಪ್ರಯೋಜನ ಇಲ್ಲ ಎಂದು ಹೇಳಿದರು.

ಜನ ಕಳೆದ ಚುನಾವಣೆಯಲ್ಲಿ ಮಾಡಿದ ತಪ್ಪಿನಿಂದ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ.ಇನ್ನೂ ಎರಡೂವರೆ ವರ್ಷ ಈ ಸತ್ತ ಆಡಳಿತ ಸಹಿಸಿಕೊಳ್ಳಲೇ ಬೇಕು.ಈ ಸರ್ಕಾರವೇನು ಬೀಳುವುದಿಲ್ಲ. ಕುರ್ಚಿಯಲ್ಲಿ ಕೂರುವವರು ಬದಲಾಗಬಹುದು ಅಷ್ಟೇ ಎಂದು ಮೈಸೂರಿನಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ ಹೇಳಿದರು.



> ಚಾಮರಾಜ ಕ್ಷೇತ್ರದ ಜನಕ್ಕೆ ಉಪಕಾರ ಮಾಡದಿದ್ದರೂ ಉಪದ್ರ ನೀಡುವ ಜನಪ್ರತಿನಿಧಿಗಳು ಬೇಕಿಲ್ಲ. ವಿದ್ಯಾವಂತರೇ ಹೆಚ್ಚಾಗಿರುವ ಚಾಮರಾಜ ಕ್ಷೇತ್ರದ ಜನರಿಗೆ ವಿದ್ಯಾವಂತರೆ ಪ್ರತಿನಿಧಿ ಆಗಲು ಬಯಸುತ್ತಾರೆ. ಬಿಜೆಪಿಯ ಶಂಕರಲಿಂಗೇಗೌಡ ಜನಸ್ನೇಹಿ ಶಾಸಕ. ಕಾಂಗ್ರೆಸ್ ನ ವಾಸು ಅಭಿವೃದ್ಧಿ ಸ್ನೇಹಿ ಶಾಸಕ. ಇವರಿಬ್ಬರು ನನಗೆ ಸದಾ ಸ್ಮರಣೀಯರು. ನಾನು ಚಾಮರಾಜ ಕ್ಷೇತ್ರದ ಟಿಕೆಟ್ ಆಕಾಂಕ್ಷಿ. ಅಭ್ಯರ್ಥಿ ಯಾರಾಗಬೇಕು ಎಂಬುದನ್ನು ಪಕ್ಷದ ಹೈಕಮಾಂಡ್ ನಿರ್ಧರಿಸುತ್ತದೆ. ಆಕಾಂಕ್ಷಿಗೂ, ಅಭ್ಯರ್ಥಿಗೂ ವ್ಯತ್ಯಾಸ ಗೊತ್ತಿಲ್ಲದೇ ಕೆಲವರು ಏನೇನೋ ಮಾತಾಡುತ್ತಿದ್ದಾರೆ.
>
> -ಮಾಜಿ ಸಂಸದ ಪ್ರತಾಪ್ ಸಿಂಹ

## ಮಿನಿ ನ್ಯೂಸ್

### ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಸಮಾಜದಲ್ಲಿನ ಜಾತಿ ಶ್ರೇಣೀಕರಣದ ಅಂಕುಡೊಂಕುಗಳನ್ನು ಹೋಗಲಾಡಿಸಿ ಸಮಸಮಾಜ ನಿರ್ಮಾಣಕ್ಕೆ ಕ್ರಾಂತಿಯ ಮುನ್ನುಡಿ ಶರಣರು ಬರೆದಿದ್ದಾರೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಜಿ.ಪ್ರಭು ಅಭಿಪ್ರಾಯಪಟ್ಟರು.ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಚಿಕ್ಕಬಳ್ಳಾಪುರದ ಕನ್ನಡ ಭವನದಲ್ಲಿ ಹಮ್ಮಿಕೊಂಡಿದ್ದ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿಯಲ್ಲಿ ಮಾತನಾಡಿದರು.

ಕರ್ನಾಟಕದ ಚರಿತ್ರೆಯಲ್ಲಿ 12ನೇ ಶತಮಾನದಲ್ಲಿ ಕನ್ನಡದಲ್ಲಿ ವಚನ ಸಾಹಿತ್ಯ ರಚಿಸಿ ಒಂದು ವೈಚಾರಿಕ ಕ್ರಾಂತಿಯನ್ನೇ ಸೃಷ್ಟಿಸಿ ಜನರಲ್ಲಿ ಜಾಗೃತಿ ಮೂಡಿಸಿತು. ಬಸವಣ್ಣನವರ ನಾಯಕತ್ವದಲ್ಲಿ ಅನೇಕ ಸಮುದಾಯಗಳಿಗೆ ಸೇರಿದ ಶಿವಶರಣರು ಭವ್ಯ ಕರ್ನಾಟಕದ ಕನಸಿನ ಬೀಜ ಬಿತ್ತಿದರು. ಅನೇಕ ತಾರತಮ್ಯ ಹಾಗೂ ವೈರುಧ್ಯ ಮತ್ತು ಸಂಘರ್ಷಗಳಲ್ಲಿ ಸಮಾನತೆ ತಂದುಕೊಡಲು ಅಂದೇ ನಾಂದಿಯಾಡಿದ್ದರು. ಇಡೀ ವಿಶ್ವಕ್ಕೆ ಗುರುವಾಗಿ ಸಮಾನತೆಯ ಗುರುಪರಂಪರೆಯನ್ನು ಶರಣರ ನೇತೃತ್ವದಲ್ಲಿ ಹಾಕಿಕೊಟ್ಟದ್ದು ಕರ್ನಾಟಕ ಎಂಬುದು ಹೆಮ್ಮೆಪಡುವ ವಿಷಯ ಎಂದರು.

ಶಿವಯೋಗಿ ಸಿದ್ಧರಾಮೇಶ್ವರರು ಸುಮಾರು 60 ಸಾವಿರ ವಚನ ರಚಿಸಿದ್ದಾರೆ ಎನ್ನಲಾಗಿದ್ದು, ಈ ಪೈಕಿ ಸುಮಾರು 1200 ವಚನ ದೊರೆತಿವೆ. ಈ ವಚನಗಳಲ್ಲಿರುವ ಸಂದೇಶ, ವೈಚಾರಿಕತೆ, ಮೌಲ್ಯಗಳನ್ನು ಪ್ರತಿಯೊಬ್ಬರೂ ಎಷ್ಟರ ಮಟ್ಟಿಗೆ ಅಳವಡಿಸಿಕೊಂಡಿದ್ದೇವೆ ಎಂಬುದು ಪ್ರಧಾನವಾಗುತ್ತದೆ ಎಂದರು. ಜಯಂತಿಗಳನ್ನು ಆಚರಣೆಗಳಿಗೆ ಸೀಮಿತಗೊಳಿಸದೆ ಮಹಾನ್ ವ್ಯಕ್ತಿಗಳು, ಚಿಂತಕರು ತೋರಿದ ಮಾರ್ಗದಲ್ಲಿ ಪ್ರಾಮಾಣಿಕವಾಗಿ ಸಾಗುವ ಕೆಲಸವಾಗಬೇಕು. ಆಗ ಮಾತ್ರ ಮಹನೀಯರ ಜಯಂತಿಗಳು ಹಾಗೂ ಕಾರ್ಯಕ್ರಮ ಸಾರ್ಥಕವಾಗುತ್ತವೆ. ಉತ್ತಮ ವ್ಯಕ್ತಿತ್ವ ನಿರ್ಮಾಣಕ್ಕೆ ಮತ್ತು ಭವಿಷ್ಯದ ಪೀಳಿಗೆಯ ಸಾಮಾಜಿಕ ಉನ್ನತಿಗೆ ವಚನಕಾರರ ಸಂದೇಶಗಳು ಅಗತ್ಯವಿವೆ ಎಂದು ಪ್ರತಿಪಾದಿಸಿದರು. ವಿದ್ಯಾರ್ಥಿಗಳು ಹಾಗೂ ಯುವಜನರು ವಚನಕಾರರ ಸಾಹಿತ್ಯವನ್ನು ಅಧ್ಯಯನ ಮಾಡುವ ಮೂಲಕ ಸನ್ಮಾರ್ಗದಲ್ಲಿ ನಡೆದು ಉತ್ತಮ ಸಮಾಜ ನಿರ್ಮಾಣ ಮಾಡಬೇಕು ಎಂದರು.

### ಬೆಳೆಗಳಿಂದ ಆರ್ಥಿಕ ಸದೃಢತೆ: ನಂಜಾವಧೂತ ಸ್ವಾಮೀಜಿ ಅಭಿಪ್ರಾಯ

• ಉದಯವಾಹಿನಿ, ಶಿರಾ

ತಾಲ್ಲೂಕಿನ ಮದಲೂರು ಕೆರೆಗೆ ಹೇಮಾವತಿ ನೀರು ಬಂದ ಹಿನ್ನೆಲೆಯಲ್ಲಿ ರೈತರು 35 ಸಾವಿರ ಹೆಕ್ಟರ್ ಪ್ರದೇಶದಲ್ಲಿ ಅಡಿಕೆ ಕೃಷಿ ಮಾಡುತ್ತಿರುವುದು ಮುಂದಿನ ದಿನಗಳಲ್ಲಿ ಅನ್ನದಾತರು ಆರ್ಥಿಕವಾಗಿ ಸದೃಢತೆ ಕಾಣುವ ಸಂಕೇತವಾಗಿದೆ ಎಂದು ನಂಜಾವಧೂತ ಸ್ವಾಮೀಜಿ ಅಭಿಪ್ರಾಯಪಟ್ಟರು. ತಾಲ್ಲೂಕಿನ ಪಟ್ಟನಾಯಕನಹಳ್ಳಿಯಲ್ಲಿ ನಡೆಯುತ್ತಿರುವ ಗುರುಗುಂಡ ಬ್ರಹೇಶ್ವರ ಸ್ವಾಮಿ ಜಾತ್ರೆ ಕೃಷಿ ಮತ್ತು ಕೈಗಾರಿಕಾ ವಸ್ತು ಪ್ರದರ್ಶನ ವೇದಿಕೆಯಲ್ಲಿ ತೋಟಗಾರಿಕೆ ಇಲಾಖೆ, ರೇಷ್ಮೆ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಆಧುನಿಕ ಬೇಸಾಯ ಕ್ರಮಗಳ ಕುರಿತು ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ರೈತ ಬೆಳೆದಂತ ತೋಟಗಾರಿಕೆ ಬೆಳೆಗಳಿಗೆ ಸೂಕ್ತ ಬೆಲೆ ಹಾಗೂ ಮಾರುಕಟ್ಟೆ ಕಲ್ಪಿಸುವುದು ಸರ್ಕಾರದ ಜವಾಬ್ದಾರಿ ಎಂದರು. ತೋಟಗಾರಿಕೆ ಬೆಳೆಗಳಲ್ಲಿ ನೀರಿನ ಸದ್ಬಳಕೆ, ಸೂಕ್ಷ್ಮ ಹನಿ ನೀರಾವರಿ, ಉತ್ತಮ ಬೆಳೆ ಬೆಳೆಯುವ ಕ್ರಮದ ಕುರಿತು ಡಾ. ಎಂ.ಜಿ.ಬಸನಗೌಡ ಅವರು ರೈತರಿಗೆ ಉಪನ್ಯಾಸ ನೀಡಿದರು.

### ಭೋವಿ ಸಮುದಾಯವೆಂದರೆ ಶ್ರಮಿಕ ಸಮಾಜ: ಸಂಸದ ಮಲ್ಲೇಶ್ ಬಾಬು

• ಉದಯವಾಹಿನಿ, ಕೋಲಾರ

ಭೋವಿ ಜನಾಂಗವು ಹಿಂದಿನಿಂದಲೂ ವಿದ್ಯಾಭ್ಯಾಸದ ಕಡೆ ಗಮನ ಹರಿಸದೆ ಕಲ್ಲು, ಮಣ್ಣು, ಕೆರೆ ಕಟ್ಟೆ ಕೆಲಸ ಮಾಡಿಕೊಂಡು ಜೀವನ ಕಟ್ಟಿಕೊಂಡಿದೆ. ಸಮುದಾಯದವರು ದೊಡ್ಡ ಅಧಿಕಾರಿಗಳಾಗಿದ್ದೇ ವಿರಳ. ಇನ್ನಾದರೂ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ ಮುಂದೆ ಬರಬೇಕು ಎಂದು ಸಂಸದ ಎಂ.ಮಲ್ಲೇಶ್ ಬಾಬು ತಿಳಿಸಿದರು. ನಗರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ನಡೆದ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಮುದಾಯವು ಮೈಸೂರಿನ ಕೆಆರ್‌ಎಸ್ ಜಲಾಶಯ ನಿರ್ಮಿಸುವ ಕೆಲಸ ಸೇರಿದಂತೆ ಶಾಶ್ವತವಾಗಿ ಉಳಿಯುವಂಥ ಕೆಲಸಗಳನ್ನು ಮಾಡಿಕೊಂಡು ಜೀವನ ನಡೆಸುತ್ತಿದ್ದಾರೆ. ಇಂಥ ಸಮುದಾಯಕ್ಕೆ ಎಲ್ಲಾ ರೀತಿಯ ಸಹಾಯ ಮಾಡಬೇಕು ಎಂದರು.

### ಕೃಷ್ಣಕುಮಾರ್, ಮಾತೃಶ್ರೀಯವರಿಗೆ ಮಂಜಿನ ನಗರಿಯಲ್ಲಿ ಅಭಿನಂದನೆ

• ಉದಯವಾಹಿನಿ, ಕಾಸರಗೋಡು

ಕನ್ನಡ ಭವನದ ರಜತ ಸಂಭ್ರಮ, ನಾಡು ನುಡಿ ಹಬ್ಬ ಕಾರ್ಯಕ್ರಮದಲ್ಲಿ ಸಮಾಜ ಸೇವಾ ರತ್ನ -2026 ಪ್ರಶಸ್ತಿಗೆ ಆಯ್ಕೆಯಾಗಿರುವ ಕಲಿಯುಗದ ಶ್ರವಣಕುಮಾರ ಕೃಷ್ಣಕುಮಾರ್ ಹಾಗೂ ಮಾತೃಶ್ರೀ ಚುಡಾರತ್ನಮ್ಮನವರನ್ನು ಮಡಿಕೇರಿಯ ರೋಟರಿ ಮಿಸ್ಟಿ ಹಿಲ್ಸ್ ಸದಸ್ಯರು ರೋಟರಿ ಹಾಲ್‌ನಲ್ಲಿ ಏರ್ಪಡಿಸಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಕೃಷ್ಣಕುಮಾರ್ ಮಾತೃಶ್ರೀ ಚೂಡಾರತ್ನಮ್ಮನವರನ್ನು ಹೃದಯಪೂರ್ವಕವಾಗಿ ಅಭಿನಂದಿಸಲಾಯಿತು.



ಈಗಾಗಲೇ ಒಂದು ಲಕ್ಷ ಕಿಲೋಮೀಟರ್ ಗಳಿಗೂ ಹೆಚ್ಚು ತಂದೆ ಕೊಡಿಸಿದ ಸ್ಕೂಟರ್‌ನಲ್ಲಿ ತಾಯಿಯೊಂದಿಗೆ ಸಂಚರಿಸಿ ಪುಣ್ಯಕ್ಷೇತ್ರಗಳ ದರ್ಶನವನ್ನು ಮಾಡಿಸಿರುವುದು ಒಂದು ಘನ ಕಾರ್ಯವಾಗಿದ್ದು ಇಡೀ ದೇಶವೇ ಹೆಮ್ಮೆ ಪಡುವಂತದ್ದಾಗಿದೆ ಎಂದರು.

ಕೃಷ್ಣ ಕುಮಾರ್ ರವರು ಮಾತನಾಡಿ ವಯಸ್ಸಾದ ತಂದೆ ತಾಯಿಯೊಂದಿಗೆ ದಿನದಲ್ಲಿ ಸ್ವಲ್ಪ ಸಮಯ ಕಳೆಯುವುದರಿಂದ ಧಾವಂತದ ಬದುಕಿನ ಒತ್ತಡಗಳು ನಿವಾರಣೆಯಾಗುವುದರಲ್ಲಿ ಸಂಶಯವಿಲ್ಲ.ಇಳಿಗಾಲದಲ್ಲಿ ಪೋಷಕರನ್ನು ಸಲಹಬೇಕಾದ್ದು ಎಲ್ಲ ಮಕ್ಕಳ ಆದ್ಯ ಕರ್ತವ್ಯವಾಗಿದೆ ಎಂದರು

ಅಂತರಾಳದಿಂದ..
EDITORIAL

# ಸೆಗಣಿ, ಗೋಮೂತ್ರದ ಮಧ್ಯೆ ಭಾರತದ ಶಿಕ್ಷಣ ವ್ಯವಸ್ಥೆ

ಈ ದೇಶದಲ್ಲಿ ದಲಿತರು ದೇವಸ್ಥಾನ ಪ್ರವೇಶ ಮಾಡುತ್ತಾರೆ ಎಂಬ ಆತಂಕದಿಂದ ವರ್ಷಗಟ್ಟಲೆ ದೇವಸ್ಥಾನಗಳಿಗೇ ಬೀಗ ಹಾಕಿದ ಉದಾಹರಣೆಗಳಿವೆ. ಶಾಲೆ ಕಾಲೇಜುಗಳಲ್ಲಿ ದಲಿತರು, ದುರ್ಬಲ ವರ್ಗದ ಜನರು ಕಾಲಿಡುತ್ತಾರೆ ಎನ್ನುವ ಕಾರಣಕ್ಕಾಗಿಯೇ ಹಂತಹಂತವಾಗಿ ಸರಕಾರಿ ಶಾಲೆಗಳನ್ನೇ ಮುಚ್ಚಿಸುವ ಸಂಚುಗಳು ನಡೆಯುತ್ತಿವೆ. ಸರಕಾರಿ ಶಾಲೆಗಳು ದುರ್ಬಲ, ಕೆಳಜಾತಿಯ ಜನರ ಶಿಕ್ಷಣದ ಹಕ್ಕುಗಳನ್ನು ಪೂರೈಸುತ್ತಿರುವುದು ಹಲವರಿಗೆ ಸಹಿಸುವ ವಿಷಯವಲ್ಲ. ಇದೇ ಕಾರಣಕ್ಕೆ ದಲಿತರ, ಅಲ್ಪಸಂಖ್ಯಾತರ ಸ್ಕಾಲರ್‌ಶಿಪ್ ಗಳಿಗೂ ಸರಕಾರ ಹಂತಹಂತವಾಗಿ ಕತ್ತರಿ ಹಾಕುತ್ತಾ ಬರುತ್ತಿದೆ. ಒಂದು ಕಾಲದಲ್ಲಿ ಮುಸ್ಲಿಮರು ವಿದ್ಯಾವಂತರಾಗಬೇಕು, ಮುಖ್ಯವಾಹಿನಿಗೆ ಬರಬೇಕು ಎನ್ನುವ ಕೂಗು ಪ್ರಗತಿಪರ ವಲಯದಿಂದ ಕೇಳಿ ಬರುತ್ತಿತ್ತು. ನರೇಂದ್ರ ಮೋದಿಯವರೇ ಒಮ್ಮೆ ಜೋರ್ಡಾನ್ ದೊರೆ ಅತಿಥಿಯಾಗಿ ಭಾಗವಹಿಸಿದ ಸಮಾವೇಶವೊಂದರಲ್ಲಿ ಮುಸ್ಲಿಮರು ಒಂದು ಕೈಯಲ್ಲಿ ಕುರ್‌ಆನ್ ಮತ್ತೊಂದು ಕೈಯಲ್ಲಿ ಕಂಪ್ಯೂಟರ್ ನ್ನು ಹೊಂದಿರಬೇಕು' ಎಂದು ಕರೆ ನೀಡಿದ್ದರು. ಇದೀಗ ನೋಡಿದರೆ, ಮುಸ್ಲಿಮರು ಅತ್ಯಧಿಕ ಸಂಖ್ಯೆಯಲ್ಲಿ ವಿದ್ಯಾವಂತರಾಗುವುದನ್ನು ಕಾಲೇಜುಗಳಿಗೆ ಅಡಿಯಿಡುವುದನ್ನು ಗಮನಿಸಿ ಶಾಲಾ ಕಾಲೇಜುಗಳನ್ನೇ ಮುಚ್ಚಿಸುವಂತಹ ಕೃತ್ಯಗಳಿಗೆ ಸರಕಾರವೇ ಮುಂದಾಗುತ್ತಿದೆ.ಮಹಿಳೆಯರು ವಿದ್ಯಾವಂತರಾಗಬೇಕು, ಮುಸ್ಲಿಮ್ ತರುಣಿಯರು ಶಿಕ್ಷಣ ಪಡೆಯಬೇಕು ಎಂದು ಘೋಷಿಸಿದ ಸರಕಾರವೇ ಬಳಿಕ ಹಿಜಾಬ್‌ನ ನೆಪ ಮುಂದಿಟ್ಟು ಆಕೆಯನ್ನು ಶಾಲೆ ಪ್ರವೇಶಿಸದಂತೆ ತಡೆಯಿತು. ಮುಸ್ಲಿಮ್ ವಿದ್ಯಾರ್ಥಿನಿಯರು ಶಾಲೆ ಕಾಲೇಜುಗಳಲ್ಲಿ ಸಾಧಿಸುತ್ತಿರುವ ಸಾಧನೆಗಳನ್ನು ನೋಡಿದ ಸಂಘಪರಿವಾರ ಮತ್ತು ಸರಕಾರ ಜಂಟಿಯಾಗಿ ಹಿಜಾಬ್ ವಿವಾದವನ್ನು ಪ್ರಾಯೋಜಿಸಿತು.

> **ಸಾರ್ವಜನಿಕವಾಗಿ ಸಿಹಿ ಹಂಚಿದರು. 2016ರಲ್ಲಿ ಈ ಆಸ್ಪತ್ರೆ ಉದ್ಘಾಟನೆ ಮಾಡಿದ ಸಂದರ್ಭದಲ್ಲಿ ಪ್ರಧಾನಿ ಮೋದಿಯವರು ಜಮ್ಮು ಮತ್ತು ಕಾಶ್ಮೀರದ ಯುವ ಸಮುದಾಯಕ್ಕೆ ಶಿಕ್ಷಣದ ಹೆಬ್ಬಾಗಿಲು ತೆರೆಯಿತು ಎಂಬರ್ಥದಲ್ಲಿ ಮಾತನಾಡಿದ್ದರು. ಆಸ್ಪತ್ರೆಯಲ್ಲಿನ ಸೌಲಭ್ಯಗಳ ಬಗ್ಗೆ ಪ್ರಶಂಸಿಸುತ್ತಾ ಅದನ್ನು ಕೇಂದ್ರ ಸರಕಾರದ ಸಾಧನೆಯೆಂಬಂತೆ ಕೊಚ್ಚಿಕೊಂಡಿದ್ದರು.**

ಬಟ್ಟೆಯನ್ನು ಮುಂದಿಟ್ಟುಕೊಂಡು ವಿದ್ಯಾರ್ಥಿನಿಯರಿಗೆ ಬಹಿಷ್ಕಾರವನ್ನು ಹಾಕಿತು ಮುಸ್ಲಿಮ್ ಸಮುದಾಯದ ವಿದ್ಯಾರ್ಥಿಗಳು ಅತ್ಯುನ್ನತ ಶಿಕ್ಷಣ ಪಡೆದು ಯುಪಿಎಸ್‌ಸಿಯಲ್ಲಿ ಅತಿ ಹೆಚ್ಚು ಮಂದಿ ಉತ್ತೀರ್ಣಗೊಂಡಾಗ ಅದಕ್ಕಾಗಿ ಸಂತೋಷ ಪಡದೆ, ಯುಪಿಎಸ್ಸಿ ಜಿಹಾದ್ ಎಂದು ಸಂಘಪರಿವಾರ ಮೈಪರಚಿಕೊಳ್ಳತೊಡಗಿತು. ಎದೆ ಸೀಳಿದರೆ ನಾಲ್ಕು ಅಕ್ಷರವಿಲ್ಲ ಪಂಕ್ಚರ್ ಹಾಕುವವರು ಎಂದು ಸಾರ್ವಜನಿಕವಾಗಿ ನಿಂದನೆಗೊಳಗಾದ ಸಮುದಾಯ ಅಕ್ಷರ ಕಲಿತಾಕ್ಷಣ, ಅದನ್ನೇ ಅಪರಾಧವಾಗಿ ಬಿಂಬಿಸುವ ಪ್ರಯತ್ನ ನಡೆಯಿತು.

ಆರ್ಥಿಕವಾಗಿ, ಸಾಮಾಜಿಕವಾಗಿ ಹಿಂದುಳಿದಿದ್ದರೂ, ಸಿಕ್ಕ ಅವಕಾಶಗಳನ್ನು ಬಳಸಿಕೊಂಡು ಯುಪಿಎಸ್‌ಸಿಯಂತಹ ಪರೀಕ್ಷೆಯಲ್ಲಿ ದುರ್ಬಲ ಸಮುದಾಯ ಸಾಧನೆ ಹೆಮ್ಮೆಯ ವಿಷಯವಾಗಬೇಕು. ಆದರೆ ಅದಕ್ಕಾಗಿ ಅಸೂಯೆ ಪಡುತ್ತಾ ಮುಸ್ಲಿಮರಿಗೆ ಶಿಕ್ಷಣವನ್ನೇ ನಿರಾಕರಿಸುವ ಮಾತುಗಳನ್ನು ಕೆಲವರು ಆಡುತ್ತಿದ್ದಾರೆ.ದಕ್ಷಿಣ ಭಾರತದ ರಾಜ್ಯದಲ್ಲಿ ಸರಕಾರಿ ವೈದ್ಯಕೀಯ ಕಾಲೇಜುಗಳಿಗಾಗಿ ಹೋರಾಟ, ಪ್ರತಿಭಟನೆಗಳು ನಡೆಯುತ್ತಿವೆ. ಆದರೆ ಜಮ್ಮುವಿನಲ್ಲಿ ಶ್ರೀಮಾತಾ ವೈಷೋದೇವಿ ನಾರಾಯಣ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಮಾನ್ಯತೆಯನ್ನು ನೆಪಗಳನ್ನು ತೆಗೆದು ರದ್ದುಗೊಳಿಸಿದಾಗ ಅದನ್ನು ಸಂಘಪರಿವಾರ ಕಾರ್ಯಕರ್ತರು ಸಂಭ್ರಮಿಸಿ ಸ್ವಾಗತಿಸಿದರು. ಅದರೆ ಇತ್ತೀಚೆಗೆ ಏಕಾಏಕಿ ಕಾಲೇಜಿನ ಅನುಮತಿಯನ್ನು ನಿರಾಕರಿಸಲಾಯಿತು. ಕಾರಣವಿಷ್ಟೆ, ಕಳೆದ ಬಾರಿಯ ನೀಟ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಕಾಲೇಜಿನಲ್ಲಿ ಪ್ರವೇಶ ಪಡೆದ 50 ವಿದ್ಯಾರ್ಥಿಗಳಲ್ಲಿ 44 ವಿದ್ಯಾರ್ಥಿಗಳು ಅಲ್ಪಸಂಖ್ಯಾತರು ಅಥವಾ ಮುಸ್ಲಿಮರು. ಇದು ಜಮ್ಮುವಿನ ಸಂಘಪರಿವಾರದ ಕೆಂಗಣ್ಣಿಗೆ ಕಾರಣವಾಯಿತು. ನೀಟ್ ಪರೀಕ್ಷೆಯೆನ್ನುವುದು ಧರ್ಮಾಧಾರಿತವಲ್ಲ ಅದು ಅರ್ಹತೆಯನ್ನು ಆಧರಿಸಿಕೊಂಡಿದೆ. ದೇಶಾದ್ಯಂತ ನೀಟ್ ಪರೀಕ್ಷೆಯ ಮೂಲಕವೇ ವಿದ್ಯಾರ್ಥಿಗಳ ಆಯ್ಕೆ ನಡೆಯುತ್ತದೆ. ಹೀಗಿದ್ದರೂ, 44 ಅರ್ಹ ಮುಸ್ಲಿಮ್ ವಿದ್ಯಾರ್ಥಿಗಳ ಕಾಲೇಜು ಸೇರ್ಪಡೆಯನ್ನು ಸ್ಥಳೀಯ ಸಂಘಪರಿವಾರ ವಿರೋಧಿಸಿತು. ಹಾಗಾದರೆ ಸಂಘಪರಿವಾರ ಏನನ್ನು ನಿರೀಕ್ಷಿಸುತ್ತದೆ ನೀಟ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರನ್ನು ಹೊರಗಿಟ್ಟು ಕಳಪೆ ಸಾಧನೆ ಮಾಡಿದವರನ್ನು ವೈದ್ಯಕೀಯ ಕಾಲೇಜಿಗೆ ಸೇರ್ಪಡೆ ಮಾಡಬೇಕೆ ಸರಕಾರಕ್ಕೆ ಈ ಪ್ರತಿಭಟನೆ ನುಂಗಲಾರದ ತುತ್ತಾಯಿತು. ಅಂತಿಮವಾಗಿ ಸೂಕ್ತ ಸಿಬ್ಬಂದಿಯಿಲ್ಲ ಎಂಬ ನೆಪವನ್ನು ಮುಂದಿಟ್ಟುಕೊಂಡು ವೈದ್ಯಕೀಯ ಕೋರ್ಸನ್ನೇ ರದ್ದುಗೊಳಿಸಿತು. ದ್ವೇಷ ಗೆದ್ದಿತು, ಶಿಕ್ಷಣ ಸೋತಿತು. ಅಲ್ಲಿ ಅವಕಾಶ ಪಡೆದ 44 ಮುಸ್ಲಿಮ್ ವಿದ್ಯಾರ್ಥಿಗಳ ಜೊತೆಗೆ ಇತರ ಹಿಂದೂ ಮತ್ತು ಸಿಖ್ ವಿದ್ಯಾರ್ಥಿಗಳೂ ಆ ಕಾಲೇಜಿನಲ್ಲಿ ಕಲಿಯುವ ಅವಕಾಶದಿಂದ ವಂಚಿತರಾದರು. ನೀಟ್ ಪರೀಕ್ಷೆಯನ್ನು ರದ್ದುಗೊಳಿಸಿ. ಅದು ದಕ್ಷಿಣ ಭಾರತೀಯರ ಅವಕಾಶಗಳನ್ನು ಕಿತ್ತುಕೊಳ್ಳುತ್ತಿದೆ ಎಂಬ ದಕ್ಷಿಣ ರಾಜ್ಯಗಳ ಆಗ್ರಹವನ್ನು ಈ ಮೂಲಕ ಕೇಂದ್ರ ಸರಕಾರವೇ ಸಮರ್ಥಿಸಿದಂತಾಗಿದೆ. ಧರ್ಮದ ಹೆಸರು ಹೇಳಿ ನೀಟ್ ಪರೀಕ್ಷೆಯ ಅರ್ಹ ವಿದ್ಯಾರ್ಥಿಗಳನ್ನು ವೈದ್ಯಕೀಯ ಕಾಲೇಜಿನಿಂದ ಹೊರಗಿಡಬಹುದಾದರೆ, ಪ್ರಾದೇಶಿಕತೆಯ ಹೆಸರಿನಲ್ಲಿ ನೀಟ್‌ನ್ನು ಯಾಕೆ ತಿರಸ್ಕರಿಸಬಾರದು ಎನ್ನುವ ಪ್ರಶ್ನೆಗೆ ಬಲ ಬಂದಿದೆ. ಒಂದೆಡೆ ವೈದ್ಯಕೀಯ ಕಾಲೇಜುಗಳನ್ನು ಮುಚ್ಚಿಸುತ್ತಾ ಇನ್ನೊಂದೆಡೆ ಸೆಗಣಿಯಿಂದ, ಪಂಚಗವ್ಯದಿಂದ ಕ್ಯಾನ್ಸರ್‌ಗಳಿಗೆ ಔಷಧಿ ಹುಡುಕಲು ಸರಕಾರ ಕೋಟಿ ಗಟ್ಟಲೆ ಹಣ ಸುರಿಯುವ ಮೂಲಕ ಸುದ್ದಿಯಲ್ಲಿದೆ. ನಾನಾಜಿ ದೇಶ್ಮುಖ್ ಪಶುವೈದ್ಯಕೀಯ ವಿಜ್ಞಾನ ವಿವಿಯಲ್ಲಿ ಹಸುವಿನ ಸೆಗಣಿ, ಮೂತ್ರ ಬಳಸಿ ಕ್ಯಾನ್ಸರ್ ಔಷಧಿ ಹುಡುಕಲು ಮೂರೂವರೆ ಕೋಟಿ ರೂಪಾಯಿ ವ್ಯಯ ಮಾಡಿತ್ತು. ಆದರೆ ಫಲಿತಾಂಶ ಮಾತ್ರ ಶೂನ್ಯ. ಇದೀಗ ಮಂಜೂರಾದ ಹಣದಲ್ಲಿ 2 ಕೋಟಿ ರೂಪಾಯಿ ಅವ್ಯವಹಾರವಾಗಿರುವುದು ಬಹಿರಂಗವಾಗಿದೆ. ವಿಶ್ವದ ಟಾಪ್ 100 ರ‍್ಯಾಂಕಿಂಗ್ ಪಟ್ಟಿಯಲ್ಲಿ ಈ ಬಾರಿಯೂ ಭಾರತದ ವಿಶ್ವವಿದ್ಯಾನಿಲಯಗಳ ಹೆಸರಿಲ್ಲ ಭಾರತದ ವಿಶ್ವವಿದ್ಯಾನಿಲಯಗಳು ಇಂದು ಮೌಲ್ಯಗಳಿಗೆ ಜಾತಿ ರಾಜಕೀಯಗಳಿಗಾಗಿಯಷ್ಟೇ ಸುದ್ದಿಯಾಗುತ್ತಿವೆ.

# ದೇಹದ ತೂಕ ಹೆಚ್ಚಿಸಲು ಇಂತಹ ಆಹಾರಗಳನ್ನು ಸೇವನೆ ಮಾಡಿ



ನೋಡುವುದಕ್ಕೆ ತುಂಬಾನೇ ತೆಳ್ಳಗೆ ಅಥವಾ ಸಪೂರವಾಗಿ ಇದ್ದೀರಾ ಹಾಗಾದ್ರೆ, ಆರೋಗ್ಯಕರ ರೀತಿಯಲ್ಲಿ ದೇಹದ ತೂಕ ಹೆಚ್ಚಿಸಲು ಬಯಸುವಿರಾ? ಹಾಗಾದ್ರೆ ಪ್ರೋಟೀನ್ ಮತ್ತು ಕಾರ್ಬೋಹೈಡ್ರೇಟ್‌ಗಳಲ್ಲಿ ಸಮೃದ್ಧವಾಗಿರುವ ಆಹಾರಗಳನ್ನು ಸೇವನೆ ಮಾಡುವ ಅಭ್ಯಾಸ ಮಾಡಿಕೊಳ್ಳಿ. ಇದರಿಂದ ದೇಹದ ತೂಕವನ್ನು ತ್ವರಿತವಾಗಿ ಹೆಚ್ಚಿಸಲು ಸಹಾಯ ವಾಗುತ್ತದೆ. ದೇಹದ ತೂಕ ಹೆಚ್ಚಾಗಿ ಬೊಜ್ಜು ಕಾಣಿಸಿಕೊಂಡರೆ ಅದು ಆರೋಗ್ಯಕ್ಕೆ ಒಳ್ಳೆಯದಲ್ಲ, ಇದರಿಂದ ನಾನಾ ರೀತಿಯ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ ಎನ್ನುವುದರ ಬಗ್ಗೆ ನಾವು ಕೇಳಿದ್ದೇವೆ, ಹಾಗಂತ ತುಂಬಾನೇ ತಳ್ಳಗೆ ಅಥವಾ ಸಪೂರ ದೇಹ ಇರುವುದು ಕೂಡ ಆರೋಗ್ಯಕ್ಕೆ ಒಳ್ಳೆಯದಲ್ಲ ಎನ್ನುವುದು ತಜ್ಞರ ಸಲಹೆ. ಆತಂಕಕಾರಿ ವಿಚಾರವೆಂದರೆ ದೇಹದಲ್ಲಿ ಪೌಷ್ಟಿಕಾಂಶಗಳ ಕೊರತೆಯಿಂದಾಗಿ ಮಿಲಿಯನ್ ಗಟ್ಟಲೆ ವಯಸ್ಕರು ಕಡಿಮೆ ತೂಕ ಹೊಂದಿದ್ದಾರೆ ಎನ್ನುತ್ತದೆ ಒಂದ ಸಂಶೋಧನೆ ವರದಿ

**ದೇಹದ ತೂಕವನ್ನು ಹೆಚ್ಚಿಸಿಕೊಳ್ಳುವುದು ಹೇಗೆ?:** ದೇಹದ ತೂಕ ಇಳಿಸಿಕೊಳ್ಳಲು ಹೇಗೆ ಡಯೆಟ್, ವ್ಯಾಯಾಮದ ಬಗ್ಗೆ ತಿಳಿದು ಕೊಳ್ಳಲು ಫಿಟ್ನೆಸ್ ತಜ್ಞರ ಬಳಿ ಹೋಗುತ್ತಾರೆಯೋ, ಅಂತೆಯೇ ದೇಹದ ತೂಕ ಹೆಚ್ಚಿಸಿಕೊಳ್ಳುವುದಕ್ಕೆ ಏನಾದರೂ ಡಯೆಟ್ ಅಥವಾ ಪೌಷ್ಟಿಕಾಂಶಗಳ ಆಹಾರದ ಬಗ್ಗೆ ಮಾಹಿತಿಯನ್ನು ತಿಳಿದುಕೊಳ್ಳಲು ಪೌಷ್ಠಿಕಾಂಶ ತಜ್ಞರು ಅಥವಾ ಫಿಟ್ನೆಸ್ ಸೆಂಟರ್‌ಗಳಿಗೆ ಹೋಗುವವರ ಸಂಖ್ಯೆಯೂ ಕೂಡ ಇಂದಿನ ದಿನಗಳಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದೆ. ಆದರೆ ಈ ಬಗ್ಗೆ ಆರೋಗ್ಯ ತಜ್ಞರ ಪ್ರಕಾರ,ಕೆಲವೊಂದು ಆಹಾರ ಪದಾರ್ಥಗಳನ್ನು ನಿಯಮಿತವಾಗಿ ನಮ್ಮ ದೈನಂದಿನ ಆಹಾರ ಪದ್ಧತಿಯಲ್ಲಿ ಸೇರಿಸಿಕೊಂಡರೆ, ದೇಹಕ್ಕೆ ಯಾವುದೇ ಸೈಡ್ ಎಫೆಕ್ಟ್ ಇಲ್ಲದೆ ಆರೋಗ್ಯಕರವಾಗಿ ದೇಹದ ತೂಕ ವನ್ನು ಹೆಚ್ಚಿಸಿಕೊಳ್ಳಬಹುದು. ಪ್ರಸ್ತುತ ಅಂತಹ ಆಹಾರಗಳ ಬಗ್ಗೆ ಮಾಹಿತಿ ಯನ್ನು ಇಂದಿನ ಲೇಖನದಲ್ಲಿ ಹಂಚಿಕೊಂಡಿದ್ದೇವೆ ಮುಂದೆ ಓದಿ

**ಬಾದಾಮಿ ಮತ್ತು ವಾಲ್ನಟ್ಸ್ ನೆನೆಹಾಕಿ ಸೇವನೆ ಮಾಡಿ:** ಒಣ ಹಣ್ಣುಗಳನ್ನು ಸೇವಿಸುವುದರಿಂದ ತೂಕ ಹೆಚ್ಚಾಗಲು ಸಹಾಯವಾಗುತ್ತದೆ. ಯಾಕೆಂದ್ರೆ ಒಣಫಲಗಳಲ್ಲಿ ಅಥವಾ ಡ್ರೈ ಫ್ರೂಟ್ಸ್ ಗಳಲ್ಲಿ ಅಧಿಕ ಪ್ರಮಾಣದಲ್ಲಿ ಕ್ಯಾಲೋರಿಗಳು ಮತ್ತು ಪೋಷಕಾಂಶಗಳಿಂದ ಸಮೃದ್ಧ ಪ್ರಮಾಣದಲ್ಲಿ ಕಂಡು ಬರುವ ಕಾರಣ, ಮಿತವಾಗಿ ಇವುಗಳನ್ನು ಸೇವನೆ ಮಾಡುವ ಅಭ್ಯಾಸ ಇಟ್ಟುಕೊಂಡರೆ, ಆರೋಗ್ಯ ಕರ ರೀತಿಯಲ್ಲಿ ದೇಹದ ತೂಕವನ್ನು ಹೆಚ್ಚಿಸಿಕೊಳ್ಳಬಹುದು. ಬಾದಾಮಿ ಮತ್ತು ವಾಲ್ನಟ್ಸ್ ತೂಕ ಇಳಿಸಿಕೊಳ್ಳಲು ಅತ್ಯುತ್ತಮವೆಂದು ಪರಿಗಣಿ ಸಲಾಗುತ್ತದೆ. ಈ ಎರಡೂ ಬೀಜಗಳು ಆರೋಗ್ಯಕರ ಕೊಬ್ಬುಗಳು, ಪ್ರೋಟೀನ್ ಮತ್ತು ಫೈಬರ್‌ನಲ್ಲಿ ಸಮೃದ್ಧವಾಗಿವೆ. ಅವು ಸ್ನಾಯುಗಳನ್ನು ನಿರ್ಮಿಸಲು ಸಹಾಯ ಮಾಡುತ್ತವೆ ಮತ್ತು ದೇಹಕ್ಕೆ ಅಗತ್ಯವಾದ ಕ್ಯಾಲೊರಿಗಳನ್ನು ಒದಗಿಸುತ್ತವೆ. ಪ್ರತಿದಿನ ಬೆಳಗ್ಗೆ ಒಂದು ಹಿಡಿ ನೆನೆಸಿದ ಬಾದಾಮಿ ಮತ್ತು ಕೆಲವು ವಾಲ್ನಟ್ಸ್ ತಿನ್ನುವುದರಿಂದ ಕ್ರಮೇಣ ತೂಕ ಹೆಚ್ಚಾಗಲು ಮತ್ತು ಶಕ್ತಿಯನ್ನು ಕಾಪಾಡಿಕೊಳ್ಳಲು ಸಹಾಯವಾಗುತ್ತದೆ.



**ಊಟದ ಜೊತೆಗೆ ದೇಸಿ ತುಪ್ಪ ಸೇವನೆ ಮಾಡಿ** ಆಯುರ್ವೇದದಲ್ಲಿ ದೇಸಿ ತುಪ್ಪವನ್ನು ಒಂದು ಪೋಷಕಾಂಶವೆಂದು ಪರಿಗಣಿಸಲಾಗುತ್ತದೆ.

ಇದು ದೇಹವನ್ನು ಒಳಗಿನಿಂದ ಬಲಪಡಿಸುವ ಮತ್ತು ತೂಕ ಹೆಚ್ಚಿಸಲು ಸಹಾಯ ಮಾಡುವ ಆರೋಗ್ಯಕರ ಕೊಬ್ಬನ್ನು ಹೊಂದಿರುತ್ತದೆ. ಬೇಳೆ, ರೊಟ್ಟಿ ಅಥವಾ ಅನ್ನದೊಂದಿಗೆ ಪ್ರತಿದಿನ 1-2 ಟೀ ಚಮಚ ತುಪ್ಪವನ್ನು ತಿನ್ನುವುದು ಚಯಾಪಚಯ ಕ್ರಿಯೆಯನ್ನು ಕಾಪಾಡಿಕೊಳ್ಳಲು ಮತ್ತು ದೇಹವನ್ನು ಬಲಪಡಿಸಲು ಸಹಾಯ ಮಾಡುತ್ತದೆ. ದೇಸಿ ತುಪ್ಪವನ್ನು ಸೇವಿಸುವುದು ದೇಹದ ಮೇಲೆ ಔಷಧವಾಗಿ ಕಾರ್ಯನಿರ್ವಹಿಸುತ್ತದೆ.

**ಬಾಳೆಹಣ್ಣು, ಹಾಲು:** ಬಾಳೆಹಣ್ಣು, ಹಾಲಿನ ಸಂಯೋಜನೆಯು ತೂಕ ಹೆಚ್ಚಿಸಲು ಹಳೆಯ ಆದರೆ ಪರಿಣಾಮಕಾರಿ ಪರಿಹಾರವಾಗಿದೆ. ಬಾಳೆಹಣ್ಣುಗಳು ಕಾರ್ಬೋಹೈಡ್ರೇಟ್‌ಗಳು, ಕ್ಯಾಲೊರಿಗಳನ್ನು ಹೊಂದಿರುತ್ತವೆ, ಆದರೆ ಹಾಲು ಪ್ರೋಟೀನ್ ಮತ್ತು ಕ್ಯಾಲ್ಸಿಯಂನ ಮೂಲವಾಗಿದೆ. ಪ್ರತಿದಿನ ಬೆಳಿಗ್ಗೆ ಅಥವಾ ಸಂಜೆ ಒಂದು ಲೋಟ ಹಾಲಿನೊಂದಿಗೆ ಎರಡು ಬಾಳೆಹಣ್ಣುಗಳನ್ನು ತಿನ್ನುವುದರಿಂದ ದೇಹಕ್ಕೆ ಅಗತ್ಯವಾದ ಶಕ್ತಿ ದೊರೆಯುತ್ತದೆ

# ಕವನ

## ಸಂಕ್ರಾಂತಿ



ವಿ.ಎಂ.ಎಸ್.ಗೋಪಿ

ಬಂದಿದೆ ಹೊಸ ವರ್ಷ
ತಂದಿದೆ ಹೊಸ ಹರುಷ
ಸಂಕ್ರಾಂತಿ ಹಬ್ಬ
ಸಡಗರ ಸಂಭ್ರಮದ ಹಬ್ಬ
ಭೋಗಿ ಪೊಂಗಲ್ ಹಬ್ಬ
ಸಿಹಿ ಸಂಭ್ರಮದ ಹಬ್ಬ
ಎಳ್ಳು ಬೆಲ್ಲ ಕೊಬ್ಬರಿಗಳು
ಗೊಂಬೆಯ ಸಕ್ಕರೆಯ ಹಚ್ಚುಗಳು
ಎಲ್ಲಾರಿಗೂ ಹಂಚುವ ಹಬ್ಬಗಳು
ಗೆಣಸು ಅವರೇಕಾಯಿ ಕಬ್ಬುಗಳು
ಕುಂಬಳ ಕಡಲೇಕಾಯಿ ಕೊಡುವ ಹಬ್ಬಗಳು
ಎಳ್ಳು ಬೆಲ್ಲ ಕಹಿ ಸಿಹಿಗಳು
ಹಸು ಗೋವುಗಳಿಗೆ ಸಿಂಗರಿಸಿ ಗೋ ಪೂಜಿಸಿ
ದನ ಕರುಗಳಿಗೆ ಕಿಚ್ಚು ಹಾಯಿಸಿ
ಸಂತಸ ಸಮೃದ್ಧಿ ತಂದಿರುವ ಈ ಹಬ್ಬ
ಸಂಕ್ರಾಂತಿ ಪೊಂಗಲ್ ಹಬ್ಬ.



# ಗರ್ಭಾವಸ್ಥೆಯಲ್ಲಿ ಸರಿಯಾಗಿ ನಿದ್ದೆ ಬರದಿದ್ದರೆ...!

ಗರ್ಭಾವಸ್ಥೆಯ ಸಮಯದಲ್ಲಿ ಮಹಿಳೆಯರಿಗೆ ಒಂದಲ್ಲ ಒಂದು ಸಮಸ್ಯೆ ಕಾಣಿಸಿಕೊಳ್ಳುತ್ತಲೇ ಇರುತ್ತದೆ. ಇದರಲ್ಲಿ ಸರಿಯಾಗಿ ನಿದ್ರೆ ಬರದೇ ಇರುವುದು ಕೂಡ ಒಂದು. ಈ ಬಗ್ಗೆ ತಜ್ಞರು ಹೇಳುವ ಪ್ರಕಾರ ಹೊಟ್ಟೆಯಲ್ಲಿ ಬೆಳೆಯುವ ಮಗು ಹಾಗೂ ತಾಯಿಯ ಆರೋಗ್ಯಕ್ಕೆ ಗರ್ಭಿಣಿಯರು ಕನಿಷ್ಠ ಪಕ್ಷ ಎಂದರೂ ಕೂಡ ಎಂಟು ಗಂಟೆಗಳ ಕಾಲ ನಿದ್ದೆ ಮಾಡಲೇಬೇಕು. ನಿದ್ರಾ ಹೀನತೆ ಸಮಸ್ಯೆಯಿಂದ ಬಳಲುತ್ತಿರುವವರಿಗೆ ಸ್ತ್ರೀರೋಗತಜ್ಞ ಡಾ. ಪ್ರಿಯಾಂಕಾ ಅವರು ಹಂಚಿಕೊಂಡಿರುವ ಮಾಹಿತಿ ಇಲ್ಲಿದೆ ನೋಡಿ



ಮದುವೆ ಆದ ಬಳಿಕ ತಾನೂ ಕೂಡ ಒಂದು ಮಗುವಿಗೆ ತಾಯಿ ಆಗಬೇಕು ಎನ್ನುವ ಆಸೆ ಎಲ್ಲಾ ಮಹಿಳೆಯರಿಗೂ ಇರುತ್ತದೆ ಆದರೆ ಗರ್ಭಾವಸ್ಥೆಯಲ್ಲಿ ಮಹಿಳೆಯರು ಅನೇಕ ಸವಾಲುಗಳನ್ನು ಎದುರಿಸಬೇಕಾಗುತ್ತದೆ. ಅಂದ್ರೆ ಈ ಗರ್ಭಾವಸ್ಥೆಯ ಒಂಬತ್ತು ತಿಂಗಳು ಎನ್ನುವುದು ಬಹಳ ಮಹತ್ವದ ಹಾಗೂ ತುಂಬಾನೇ ಸೂಕ್ಷ್ಮ ಸಮಯ ಎನ್ನಲಾಗುತ್ತದೆ. ಮಹಿಳೆ ಗರ್ಭಧರಿಸಿದ ಬಳಿಕ ಪ್ರತಿಯೊಂದು ಕ್ಷಣಗಳನ್ನು ಕೂಡ ಬಹಳ ಎಚ್ಚರಿಕೆಯಿಂದ ನಿಭಾಯಿಸಬೇಕಾಗುವ ಪರಿಸ್ಥಿತಿ ಎದುರಾಗುತ್ತದೆ ಸಾಮಾನ್ಯವಾಗಿ ಗರ್ಭಾವಸ್ಥೆಯಲ್ಲಿ ಆರೋಗ್ಯದಲ್ಲಿ ಉಂಟಾಗುವ ಬದಲಾವಣೆಗಳು ಅಥವಾ ಇತರ ಬಗೆಯ ಆರೋಗ್ಯದ ಸಮಸ್ಯೆಯು ಎಲ್ಲಾ ಗರ್ಭಿಣಿಯರಿಗೂ ಒಂದೇ ರೀತಿಯಲ್ಲಿ ಇರುವುದಿಲ್ಲ. ಈ ಅನುಭವ ಒಬ್ಬರಿಂದ ಒಬ್ಬರಿಗೆ ಭಿನ್ನವಾಗಿರುತ್ತವೆ. ಹೀಗಾಗಿ ಈ ಸಮಯದಲ್ಲಿ ಗರ್ಭಿಣಿಯರು ಹೆರಿಗೆ ಆಗುವ ತನಕ ಎದುರಾಗುವ ಸಮಸ್ಯೆಗಳನ್ನು ಬಹಳ ಎಚ್ಚರಿಕೆಯಿಂದ ನಿಭಾಯಿಸಬೇಕು. ವೈದ್ಯರ ಸಲಹೆ ಸೂಚನೆಗಳನ್ನು ಸರಿ ಯಾಗಿ ಅನುಸರಿಸಬೇಕು.

**ಗರ್ಭಿಣಿಯರಿಗೆ ಕಾಣಿಸಿಕೊಳ್ಳುವ ಆರೋಗ್ಯ ಸಮಸ್ಯೆಗಳು:** ಪ್ರಮುಖವಾಗಿ ಗರ್ಭಿಣಿಯರಿಗೆ ಈ ಅವಧಿಯಲ್ಲಿ ಕಾಣಿಸಿಕೊಳ್ಳುವ ಆರೋಗ್ಯ ಸಮಸ್ಯೆಗಳು ಏನೆಂದರೆ, ದೇಹದ ತೂಕ ಹೆಚ್ಚಾಗುವುದು, ಹೊಟ್ಟೆಯ ಚಲನೆ, ಹಾರ್ಮೋನುಗಳ ಬದಲಾವಣೆಗಳು ಮತ್ತು ಭಂಗಿಯಲ್ಲಿನ ಬದಲಾವಣೆಗಳು ನಿದ್ರಾಹೀನತೆಗೆ ಪ್ರಮುಖ ಕಾರಣಗಳಾಗಿವೆ. ಇದು ಗರ್ಭಿಣಿಯರ ನಿದ್ರೆಗೆ ಅಡ್ಡಿಯಾಗುವುದಲ್ಲದೆ, ನಿದ್ರೆಯ ಗುಣಮಟ್ಟವನ್ನು ಸಹ ಹಾಳು ಮಾಡುತ್ತದೆ.

ಈ ಬಗ್ಗೆ ಸ್ತ್ರೀರೋಗತಜ್ಞ ಡಾ. ಪ್ರಿಯಾಂಕಾ ಇನ್ ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡಿರುವ ವಿಡಿಯೋದಲ್ಲಿ ಗರ್ಭಾವಸ್ಥೆಯಲ್ಲಿ ಕಾಡುವ ನಿದ್ರಾಹೀನತೆ ಸಮಸ್ಯೆಯನ್ನು ಕೆಲವು ಸರಳ ಕ್ರಮಗಳನ್ನು ಅಳವಡಿಸಿಕೊಳ್ಳುವ ಮೂಲಕ ಪರಿಹಾರವನ್ನು ಕಂಡುಕೊಳ್ಳಬಹುದು ಎಂದು ಸಲಹೆ ನೀಡಿದ್ದಾರೆ.

# ರಕ್ತದಲ್ಲಿ ಯೂರಿಕ್ ಆಸಿಡ್ ಹೆಚ್ಚಾದರೆ ಕಿಡ್ನಿ, ಮೂಳೆಗಳಿಗೆ ಹಾನಿ ಜಾಸ್ತಿಯಂತೆ!



ಯೂರಿಕ್ ಆಸಿಡ್ ಎನ್ನುವುದು ಇಂದಿನ ದಿನಗಳಲ್ಲಿ ದೊಡ್ಡ ಸಮಸ್ಯೆಯಾಗಿ ಕಾಡುತ್ತಿದೆ. ಈ ಬಗ್ಗೆ ತಜ್ಞರು ಕೂಡ ಹೇಳುವ ದೇಹದಲ್ಲಿ ಯೂರಿಕ್ ಆಸಿಡ್ ಹೆಚ್ಚಾಗಲೂ ಬಾರದು ಹಾಗೂ ತುಂಬಾನೇ ಕಡಿಮೆ ಆಗಲು ಬಾರದು ಎಂದು ಸಲಹೆ ನೀಡುತ್ತಾರೆ. ಇದರಲ್ಲೂ ಆದಷ್ಟು ಪ್ಯೂರಿನ್ ಭರಿತ ಆಹಾರ ಪದಾರ್ಥಗಳಿಂದ ದೂರವಿದ್ದರೆ ಈ ಆರೋಗ್ಯ ಸಮಸ್ಯೆಗಳಿಂದ ದೂರವಿರಬಹುದು ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಯೂರಿಕ್ ಆಮ್ಲದ ಮಟ್ಟಗಳು ಸಾಮಾನ್ಯ ಆರೋಗ್ಯ ಸಮಸ್ಯೆಯಾಗಿ ಮಾರ್ಪಟ್ಟಿವೆ. ಒಂದು ವೇಳೆ ದೇಹದಲ್ಲಿ ಹೆಚ್ಚಾಗಿ ಬಿಟ್ಟರೆ ದೇಹದ ಕೀಲುಗಳಲ್ಲಿ ತೀವ್ರವಾದ ನೋವು ಕಾಣಿಸಿಕೊಳ್ಳುತ್ತದೆ, ಕಾಲಿನ ಗಂಟುಗಳಲ್ಲಿ ಊತ ಕಾಣಿಸಿಕೊಳ್ಳುತ್ತದೆ, ಮೂತ್ರಪಿಂಡದಲ್ಲಿ ಕಲ್ಲುಗಳು ರೂಪುಗೊಳ್ಳುತ್ತದೆ ಹಾಗೂ ಸಂಧಿವಾತದ ಲಕ್ಷಣಗಳು ಬಹಳ ಸಣ್ಣ ವಯಸ್ಸಿಗೆಯೇ ಕಾಣಿಸಿಕೊಳ್ಳುತ್ತದೆ.

ಆದ್ದರಿಂದ, ದೇಹದಲ್ಲಿ ಯೂರಿಕ್ ಆಮ್ಲದ ಮಟ್ಟವನ್ನು ನಿಯಂತ್ರಿಸುವುದು ಬಹಳ ಮುಖ್ಯ. ಈ ಬಗ್ಗೆ ತಜ್ಞರು ಹೇಳುವ ಪ್ರಕಾರ, ದೇಹದ ರಕ್ತದಲ್ಲಿ ಯೂರಿಕ್ ಆಮ್ಲ ಹೆಚ್ಚಾಗಿ ಬಿಟ್ಟರೆ ಮೂಳೆಗಳಿಗೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುವುದರ ಜೊತೆಗೆ ಟೈಪ್ 2 ಮಧುಮೇಹ, ಹೃದಯದ ಆರೋಗ್ಯಕ್ಕೆ ಸಂಬಂಧಪಟ್ಟ ಸಮಸ್ಯೆಗಳನ್ನು ಕೂಡ ತಳ್ಳಿ ಹಾಕುವ ಹಾಗಿಲ್ಲ ಎನ್ನಲಾಗುತ್ತದೆ

**ಯೂರಿಕ್ ಆಮ್ಲ ಎಂದರೇನು?:** ಯೂರಿಕ್ ಆಮ್ಲವು ದೇಹವು ಪ್ಯೂರಿನ್‌ಗಳನ್ನು ಒಡೆಯುವಾಗ ಉತ್ಪತ್ತಿ ಯಾಗುವ ರಾಸಾಯನಿಕವನ್ನು ಸೂಚಿಸುತ್ತದೆ, ಇದು ವಿವಿಧ ಆಹಾರ ಗಳಲ್ಲಿ ಕಂಡುಬರುವ ಸಂಯುಕ್ತವಾಗಿದೆ. ಹೀಗಾಗಿ ಈಗಾಗಲೇ ಈ ಕಾಯಿಲೆಯಿಂದ ಬಳಲುತ್ತಿರುವವರುವ ಪ್ಯೂರಿನ್ಸ್ ಎಂಬ ರಾಸಾಯನಿಕ ಅಂಶ ಹೆಚ್ಚಿರುವ ಕೆಲವೊಂದು ಬಗೆಯ ಆಹಾರ ಪದಾರ್ಥಗಳಿಂದ ದೂರವಿರಬೇಕು. ನಿಮಗೆ ಗೊತ್ತಿರಲಿ ನಮ್ಮ ಕಿಡ್ನಿಗಳು ರಕ್ತದಲ್ಲಿ ಸೇರಿಕೊಂಡಿರುವ ಯೂರಿಕ್ ಆಮ್ಲವನ್ನು ಶೋಧಿಸಿ ಮೂತ್ರದ ಮೂಲಕ ಹೊರಹಾಕುತ್ತದೆ. ಆದರೆ ಪ್ಯೂರಿನ್ ಎನ್ನುವ ರಾಸಾಯನಿಕ ಅಂಶಗಳು ಹೆಚ್ಚಾದರೆ, ಕಿಡ್ನಿಗಳಲ್ಲಿಯೇ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ, ಕೊನೆಗೆ ಇದೇ ಕಾರಣಕ್ಕೆ ದೇಹದಲ್ಲಿ ಯೂರಿಕ್ ಆಮ್ಲ ಹೆಚ್ಚಾಗಿ ಇತರ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಿ ಬಿಡುತ್ತದೆ. ಯೂರಿಕ್ ಆಮ್ಲವು ದೇಹದಿಂದ ಸಮರ್ಪಕವಾಗಿ ಹೊರಹಾಕಲ್ಪಡದಿದ್ದರೆ ಅಥವಾ ಪ್ಯೂರಿನ್ ಅಂಶಗಳು ಅತಿಯಾಗಿ ಇರುವ ಆಹಾರಗಳ ಸೇವನೆ ಯಿಂದ ರಕ್ತದಲ್ಲಿ ಯೂರಿಕ್ ಆಮ್ಲದ ಮಟ್ಟ ಹೆಚ್ಚಾಗಿ ಬಿಡುವ ಸಾಧ್ಯತೆ ಯನ್ನು ಕೂಡ ತಳ್ಳಿ ಹಾಕುವ ಹಾಗಿಲ್ಲ!

ಕೊನೆಗೆ ಇದೇ ಕಾರಣಕ್ಕೆ ಹಲವಾರು ಬಗೆಯ ಆರೋಗ್ಯ ಸಮಸ್ಯೆಗಳು ಕೂಡ ಕಾಣಿಸಿಕೊಳ್ಳುಬಹುದು ಎಂದು 2016 ರ ಮಾಲಿಕ್ಯುಲರ್ ಬೇಸಿಸ್ ಆಫ್ ನ್ಯೂಟ್ರಿಷನ್ ಅಂಡ್ ಏಜಿಂಗ್ ಜರ್ನಲ್‌ನಲ್ಲಿ ಪ್ರಕಟವಾದ ಅಧ್ಯಯನವು ತಿಳಿಸಿದೆ.



# ರಾಮಾಯಣ

## ಶ್ರೀರಾಮನು ಸೀತಾದೇವಿಯ ಆಭರಣಗಳನ್ನು ನೋಡಿ ದುಃಖಿಸಿದ್ದು

• ಹಿಂದಿನ ಸಂಚಿಕೆಯಿಂದ — 120 ನೆಯ ಅಧ್ಯಾಯ

ಅನೇಕ ಬಿಲಗಳನ್ನೂ ವೈಡೂರ್ಯ ರತ್ನದಂತೆ ನಿರ್ಮಲವಾದ ಎಸಳುಗಳುಳ್ಳ ಕಮಲಗಳಿಂದಲೂ ಒಪ್ಪುತ್ತಿರುವ ಮಾರ್ಗದಲ್ಲಿದ್ದ ಕೆರೆಗಳನ್ನೂ ಅಲ್ಲಿರುವ ಹಂಸ ಸಾರಸ ನೀರುಕೋಳಿ ಚಕ್ರವಾಕ ಮೊದಲಾದ ಪಕ್ಷಿಗಳನ್ನೂ ಕಿವಿಗಿಂಪಾಗಿ ಸ್ವರಗೈಯುತ್ತಿದ್ದ ಪಕ್ಷಿಗಳನ್ನೂ ಕೋಮಲವಾದ ಎಳೆಹುಲ್ಲನ್ನು ಮೇಯುತ್ತ ಭಯವಿಲ್ಲದೆ ಸಂಚರಿಸುತ್ತಿದ್ದ ಮೃಗಗಳನ್ನೂ ನೋಡುತ್ತ ಹೋಗುತ್ತಿದ್ದರು.

ಆ ಸಮಯದಲ್ಲಿ ಮನೋಹರವಾದ ಒಂದು ವನವನ್ನು ಕಂಡು ಶ್ರೀರಾಮನು ಸುಗ್ರೀವನನ್ನು ಕುರಿತು ಸುಗ್ರೀವ, ನೀರುಂಡ ಮೇಘದಂತೆ ರಮಣೀಯವಾಗಿ ಸುತ್ತಲೂ ಕದಳೀವನವುಳ್ಳ ಈ ವನವಾರದು ಯಾವ ಕಾರಣದಿಂದ ಈ ವನವು ಇಂಥ ಗಿರಿಪ್ರದೇಶದಲ್ಲಿಯೂ ಮನೋಹರವಾಗಿದೆ ಈ ವನದ ವಿಷಯವನ್ನು ಕೇಳುವುದಕ್ಕೆ ನನ್ನ ಮನಸ್ಸಿಗೆ ಕುತೂಹಲವಾಗುತ್ತಿದೆ. ಈ ವನದ ಮಹಿಮೆಯನ್ನು ಹೇಳು ಎಂದು ಕೇಳಿದನು.

**ಆ ಮಾತನ್ನು ಕೇಳಿ ಸುಗ್ರೀವನು ಶ್ರೀರಾಮ, ಕೇಳು :** ಈ ವನವು ವಿಸ್ತೀರ್ಣವಾದದ್ದು. ಇದು ಮುನಿಗಳ ಒಂದು ಆಶ್ರಮ. ನಂದನವನದಂತೆ ಸಂಪನ್ನತೆಯುಳ್ಳುದು ಅತ್ಯಂತ ಸ್ವಾದುವಾದ ಕಂದಮೂಲಫಲಗಳುಳ್ಳುದು. ಈ ಆಶ್ರಮದಲ್ಲಿ ಅನೇಕ ವ್ರತನಿಯಮಗಳುಳ್ಳ ಸಪ್ತಜನರೆಂಬ ತಪಸ್ವಿಗಳಿದ್ದರು. ಅವರೆಲ್ಲರೂ ತೀಕ್ಷ್ಣವಾದ ವ್ರತವನ್ನು ಹಿಡಿದು ತಲೆಕೆಳಗಾಗಿ ನೀರಿನಲ್ಲಿ ಮುಳುಗಿ ತಪಸ್ಸನ್ನು ಮಾಡುತ್ತಿದರು. ಅವರು ಈ ವನದಲ್ಲಿ ಏಳು ರಾತ್ರಿಗಳಿಗೊಂದು ಬಾರಿ ಗಾಳಿಯನ್ನು ಕುಡಿದು ಏಳುನೂರು ವರ್ಷಗಳ ಕಾಲ ತಪಸ್ಸನ್ನು ಮಾಡಿ ಕೊನೆಗೆ ಸಶರೀರರಾಗಿ ಸ್ವರ್ಗವನ್ನು ಸೇರಿದರು.

ಅಂಥ ಋಷಿಗಳ ತಪೋಮಹಿಮೆಯಿಂದ ಈ ವನವು ದೇವಾಸುರರಿಗೂ ಆಕ್ರಮಿಸಲು ಅಸಾಧ್ಯವಾಗಿದೆ. ಅಜ್ಞಾನದಿಂದ ಈ ವನವನ್ನು ಹೊಕ್ಕ ಮೃಗಪಕ್ಷಿಗಳಾದರೂ ಮನುಷ್ಯರಾದರೂ ತಿರುಗಿ ಬರುವಂತಿಲ್ಲ. ಈ ವನದಲ್ಲಿ ಎಲ್ಲಿ ನೋಡಿದರೂ ಭೂಷಣಗಳ ಧ್ವನಿಗಳೂ ತಾಳಮದ್ದಳೆಗಳ ಧ್ವನಿಯೂ ಗಾನಸ್ವರಗಳೂ ಕೇಳಲ್ಪಡುವುವು. ಇದು ಯಾವಾಗಲೂ ದಿವ್ಯವಾದ ಗಂಧಪರಿಮಳವುಳ್ಳದ್ದಾಗಿರುವುದು. ಈ ವನಮಧ್ಯದಲ್ಲಿ ಆಹವನೀಯ ಗಾರ್ಹಪತ್ಯ ದಕ್ಷಿಣಾಗ್ನಿಗಳೆಂಬ ಅಗ್ನಿ ತ್ರಯಗಳು ಜ್ವಲಿಸುತ್ತಿರುವುವು. ಕಾಣುತ್ತಿರುವ ಈ ಹೊಗೆಯು ವೃಕ್ಷಾಗ್ರಗಳನ್ನು ದಟ್ಟವಾಗಿಸುತ್ತ ಮೇಘದಿಂದ ಮುಚ್ಚಲ್ಪಟ್ಟ ವೈಡೂರ್ಯದ ಬೆಟ್ಟಗಳಂತೆ ತೋರುವುವು. ಶ್ರೀರಾಮ ನೀನ ಸಾವಧಾನನಾಗಿ ಲಕ್ಷ್ಮಣಸಮೇತ ಕೈ ಮುಗಿದುಕೊಂಡು ಇಲ್ಲಿರುವ ಋಷಿಗಳಿಗೆ ಅಭಿವಾದಪಪಾಡು. ಈ ಋಷಿಗಳಿಗೆ ಅಂತರಂಗ ಶುದ್ಧಿಯಿಂದ ನಮಸ್ಕಾರವನ್ನು ಮಾಡುವವರ ಶರೀರಕ್ಕೆ ಬಾಧೆಯು ಬರಲಾರದು ಎಂದು ಹೇಳಿದನು. ಆ ಮಾತನ್ನು ಕೇಳಿ ಶ್ರೀರಾಮನು ಲಕ್ಷ್ಮಣಸಮೇತನಾಗಿ ಕೈ ಮುಗಿದುಕೊಂಡು ಅಲ್ಲಿದ್ದ ತಪಸ್ವಿಗಳಿಗೆ ಅಭಿವಾದನಮಾಡಿದನು. ತರುವಾಯ ಹನುಮಂತನೇ ಮೊದಲಾದ ನಾಲ್ಕು ಮಂದಿ ಕಪಿನಾಯಕರೊಡನೆ ಸುಗ್ರೀವನನ್ನು ಮುಂದಿಟ್ಟುಕೊಂಡು ಅನ್ಯೋನ್ಯ ಸಂಭಾಷಣೆ ಮಾಡುತ್ತ ಆ ಆಶ್ರಮವನ್ನು ದಾಟಿ ವಾಲಿಯ ಭುಜಬಲಪರಾಕ್ರಮದಿಂದ ರಕ್ಷಿಸಲ್ಪಟ್ಟ ಕಿಕ್ಕಿಂಧಾಪಟ್ಟಣಕ್ಕೆ ಹೋದನು. ಮುಂದುವರಿಯುವುದು...

# ಬಿಪಿ ನಿಯಂತ್ರಣಕ್ಕೆ, ಬೊಜ್ಜು ಇಳಿಸಲು ಸೋರೆಕಾಯಿ

ನೀರಿನಾಂಶ ಹೆಚ್ಚಿರುವ ಸೋರೆಕಾಯಿ ರುಚಿಕರದ ಜೊತೆಗೆ ಆರೋಗ್ಯಕ್ಕೂ ಬಹಳ ಒಳ್ಳೆಯ ತರಕಾರಿ. ಈ ತರಕಾರಿಯಲ್ಲಿರುವ ಪೋಷಕಾಂಶಗಳು ಅನೇಕ ಆರೋಗ್ಯ ಸಮಸ್ಯೆಗಳನ್ನು ನಿವಾರಿಸಲು ಸಹಾಯ ಮಾಡುತ್ತವೆ. ಹೀಗಾಗಿ ಆಗಾಗ ಸೋರೆಕಾಯಿಯನ್ನು ತಮ್ಮ ಆಹಾರಪದ್ಧತಿಯಲ್ಲಿ ಬಳಸಿಕೊಳ್ಳುವುದರಿಂದ ದುಪ್ಪಟ್ಟು ಪ್ರಯೋಜನಗಳನ್ನು ಪಡೆದುಕೊಳ್ಳಬಹುದು ಎನ್ನುತ್ತಾರೆ ನೈಸರ್ಗಿಕವಾಗಿ ಸಿಗುವಂತಹ ಎಲ್ಲಾ ಬಗೆಯ ಹಸಿರೆಲೆ ತರಕಾರಿಗಳನ್ನು ನಮ್ಮ ದೈನಂದಿನ ಆಹಾರಪದ್ಧತಿಯಲ್ಲಿ ಬಳಸಿಕೊಂಡರೆ ಅದರ ಲಾಭ ಅಪಾರ ಎನ್ನುವುದು ತಜ್ಞರು ಸಲಹೆ. ಹೀಗಾಗಿ ನೈಸರ್ಗಿಕವಾಗಿ ಸಿಗುವ ತಾಜಾ ತರಕಾರಿಗಳು ಮತ್ತು ಹಣ್ಣುಗಳಿಗೆ ಹೆಚ್ಚಿನ ಮಹತ್ವ ಕೊಡಬೇಕು ಹಾಗೂ ನಮ್ಮ ಆಹಾರಪದ್ಧತಿಯಲ್ಲಿ ಇವುಗಳನ್ನು ಆಗಾಗ ಬಳಸುತ್ತಾ ಬರಬೇಕು.

ಯಾಕೆಂದ್ರೆ ಇಂತಹ ಆಹಾರಗಳು ಮನುಷ್ಯನ ದೇಹದ ಪ್ರಮುಖ ಅಂಗಾಂಗಗಳ ಕಾರ್ಯ ಚಟುವಟಿಕೆಯನ್ನು ಸರಿಯಾಗಿ ನಿರ್ವಹಣೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಅದರಲ್ಲೂ ಕೆಲವೊಂದು ಬಗೆಯ ಹಸಿರು ತರಕಾರಿಗಳು ತನ್ನಲ್ಲಿ ಅತೀ ಹೆಚ್ಚಿನ ಪ್ರಮಾಣದ ಪೋಷಕಾಂಶಗಳನ್ನು ಒಳಗೊಂಡಿರುವ ನೈಸರ್ಗಿಕ ಆಹಾರ ಪದಾರ್ಥಗಳು ಎಂಬ ಬಿರುದನ್ನು ಕೂಡ ಪಡೆದುಕೊಂಡಿದೆ, ಇದರಲ್ಲಿ ಸೋರೆಕಾಯಿಯ ಕೂಡ ಒಂದು.

**ಸೋರೆಕಾಯಿಯ ಪ್ರಯೋಜನಗಳ ಬಗ್ಗೆ ನೋಡುವುದಾದರೆ :** ತನ್ನಲ್ಲಿ ನೀರಿನಾಂಶ ಹೆಚ್ಚಿನ ಪ್ರಮಾಣದಲ್ಲಿ ಕಂಡು ಬರುವ ತರಕಾರಿಗಳ ಪಟ್ಟಿಯಲ್ಲಿ ಸೋರೆಕಾಯಿಗೂ ಕೂಡ ಪ್ರಮುಖ ಸ್ಥಾನ ನೀಡಲಾಗಿದೆ. ಈ ತರಕಾರಿ ಬಳಸಿ ಮಾಡುವ ಅಡುಗೆ ರುಚಿ ಮಾತ್ರವಲ್ಲ, ಆರೋಗ್ಯಕ್ಕೂ ಕೂಡ ದುಪ್ಪಟ್ಟು ಪ್ರಯೋಜನಗಳನ್ನು ನೀಡುತ್ತದೆ.

ಇನ್ನು ಈ ತರಕಾರಿಯಲ್ಲಿ ಅನೇಕ ಬಗೆಯ ಪೋಷಕಾಂಶಗಳು ಕಂಡು ಬರುತ್ತದೆ ಪ್ರಮುಖವಾಗಿ ಇದು ಹೊಟ್ಟೆಗೆ ಹೆಚ್ಚು ಪ್ರಯೋಜನಕಾರಿ ಎಂದು ಪರಿಗಣಿಸಲಾಗಿದೆ, ಯಾಕೆಂದ್ರೆ ಇದು ತುಂಬಾನೇ ಲಘು ಆಹಾರವಾಗಿದೆ ಹಾಗೂ ಬಹಳ ಬೇಗನೇ ಹೊಟ್ಟೆಯಲ್ಲಿ ಜೀರ್ಣಕಾರಿ ಪ್ರಕ್ರಿಯೆಗೆ ಒಳಗಾಗುತ್ತದೆ. ಇನ್ನು ಈ ತರಕಾರಿಯಲ್ಲಿ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವ ವಿಟಮಿನ್ ಸಿ ಕೂಡ ಅಧಿಕ ಪ್ರಮಾಣದಲ್ಲಿ ಕಂಡು ಬರುತ್ತದೆ. ಜೊತೆಗೆ ವಿಟಮಿನ್ ಬಿ ಕಾಂಪ್ಲೆಕ್ಸ್, ಕಣ್ಣುಗಳಿಗೆ ಅಗತ್ಯವಾದ ವಿಟಮಿನ್ ಎ (ಬೀಟಾ-ಕ್ಯಾರೋಟಿನ್), ಪೊಟ್ಯಾಸಿಯಮ್ (ರಕ್ತದೊತ್ತಡ ನಿಯಂತ್ರಣಕ್ಕೆ ಹಾಗೂ ಹೃದಯದ ಆರೋಗ್ಯಕ್ಕೆ), ಕ್ಯಾಲ್ಸಿಯಂ ಬಲವಾದ ಮೂಳೆಗಳಿ, ಮೆಗ್ನೀಸಿಯಮ್, ಕಬ್ಬಿಣಾಂಶ ಮತ್ತು ಬಹಳ ಕಡಿಮೆ ಸೋಡಿಯಂಗಳನ್ನು ಸಹ ಒಳಗೊಂಡಿದೆ ಉತ್ಕರ್ಷಣ ನಿರೋಧಕಗಳು ಪೋಷಕಾಂಶಗಳನ್ನು ಸಹ ಒಳಗೊಂಡಿದೆ.

## ಸೋರೆಕಾಯಿ ಸೇವನೆಯ ವಿಧಾನ ಹೇಗೆ?

ಬೊಜ್ಜು, ರೋಗವನ್ನು ತಡೆಗಟ್ಟಲು, ಸೋರೆಕಾಯಿ ರಸವನ್ನು ಕುಡಿಯುವ ಅಭ್ಯಾಸ ಮಾಡಿಕೊಳ್ಳಬೇಕು ಎನ್ನುತ್ತಾರೆ ಸ್ವಾಮಿ ರಾಮದೇವ್ ಅವರು. ಇದರ ಹೊರತಾಗಿ ಈ ತರಕಾರಿಯ ಕರಿ, ಹಲ್ವಾ, ಖೀರ್ ಅಥವಾ ಬರ್ಫಿ ಜೊತೆಗೆ ಸೋರೆಕಾಯಿ ಸೂಪ್ ಸೇವಿಸಲು ಶಿಫಾರಸು ಮಾಡಿತ್ತಾರೆ. ಆದರೆ ಈ ತರಕಾರಿಯ ಪ್ರಯೋಜನಗಳನ್ನು ಪಡೆದುಕೊಳ್ಳಬೇಕು ಎಂದರೆ, ಇದರ ಜ್ಯೂಸ್ ಮಾಡಿ ಕುಡಿಯುವುದು ಬಹಳ ಒಳ್ಳೆಯದು ಎನ್ನುವುದು ಇವರ ಸಲಹೆ. ಸ್ವಾಮಿ ರಾಮದೇವ್ ಪ್ರಕಾರ, ನಿಯಮಿತವಾಗಿ ಸೋರೆಕಾಯಿ ಸೇವಿಸುವುದರಿಂದ ದೇಹವು ಆರೋಗ್ಯಕರವಾಗಿ ಮತ್ತು ರೋಗ ಮುಕ್ತವಾಗಿ ಉಳಿಯುತ್ತದೆ.



**ಈ ತರಕಾರಿಯ ಬಗ್ಗೆ ಬಾಬಾ ರಾಮದೇವ್ ಅವರು ಹೇಳುವ ಪ್ರಕಾರ :** ಯೋಗ ಗುರು ಬಾಬಾ ರಾಮದೇವ್ ಅವರ ಪ್ರಕಾರ, ಸೋರೆಕಾಯಿ ಅನೇಕ ಆರೋಗ್ಯ ಸಮಸ್ಯೆಗಳನ್ನು ಕಡಿಮೆ ಮಾಡುವಲ್ಲಿ ಅಥವಾ ನಿವಾರಿಸುವಲ್ಲಿ ಅತ್ಯಂತ ಪ್ರಯೋಜನಕಾರಿಯಾಗಿದೆ. ಸರಿಯಾದ ಪ್ರಮಾಣದಲ್ಲಿ ಸೇವಿಸಿದರೆ, ಅದು ಅಧಿಕ ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ ಎಂದು ಬಾಬಾ ರಾಮದೇವ್ ಅವರು ಸಲಹೆ ನೀಡುತ್ತಾರೆ. ಈ ರೀತಿಯಾಗಿ, ನೀವು ಹೃದಯ ಕಾಯಿಲೆಯ ಅಪಾಯವನ್ನು ಕಡಿಮೆ ಮಾಡಬಹುದು. ಚರ್ಮಕ್ಕೆ ಸಂಬಂಧಿಸಿದ ಸಮಸ್ಯೆಗಳಿರುವ ಜನರು ಕೂಡ ಈ ತರಕಾರಿಯ ಸೇವನೆಯಿಂದ ಪ್ರಯೋಜನಗಳನ್ನು ಪಡೆದುಕೊಳ್ಳ ಬಹುದು. ಅಲ್ಲದೆ ಮಿತ ಪ್ರಮಾಣದಲ್ಲಿ ಈ ತರಕಾರಿಯನ್ನು ಸೇವನೆ ಮಾಡುವುದ ರಿಂದ ಮೂತ್ರಪಿಂಡ ಅಂದ್ರೆ ಕಿಡ್ನಿ ಮತ್ತು ಹೊಟ್ಟೆಯ ಆರೋಗ್ಯ ಸಮಸ್ಯೆಗಳ ಅಪಾಯವನ್ನು ಕಡಿಮೆ ಮಾಡಬಹುದು. ಈಗಾಗಲೇ ಹೊಟ್ಟೆಯ ಸಂಬಂಧಪಟ್ಟ ಆರೋಗ್ಯ ಸಮಸ್ಯೆ ಇರುವ ಜನರು ಸೋರೆಕಾಯಿ ಸೇವನೆ ಯಿಂದ ಲಾಭ ಪಡೆದುಕೊಳ್ಳಬಹುದು ಎನ್ನುತ್ತಾರೆ ಬಾಬಾ ರಾಮದೇವ್ ಅವರು ಸಲಹೆ ನೋಡುತ್ತಾರೆ. ಸೋರೆಕಾಯಿ ಆರೋಗ್ಯಕರ ಮತ್ತು ಪೌಷ್ಟಿಕಾಂಶಗಳಿಂದ ಕೂಡಿದ ತರಕಾರಿಯಾಗಿದ್ದು, ಇದನ್ನು ಆಹಾರಪದ್ಧತಿಯಲ್ಲಿ ಸೇರಿಸಿಕೊಳ್ಳುವುದು ತುಂಬಾ ಪ್ರಯೋಜನಕಾರಿ ಎಂದು ಸ್ವಾಮಿ ರಾಮದೇವ್ ಅವರು ತಮ್ಮ ಇನ್ಸ್ಟಾಗ್ರಾಮ್ ನಲ್ಲಿ ಮಾಹಿತಿಯನ್ನು ಹಂಚಿಕೊಂಡಿದ್ದಾರೆ. ದೇಹದ ತೂಕ ಇಳಿಸಿ ಕೊಳ್ಳುವವರಿಗೆ ಈ ತರಕಾರಿಯಿಂದ ತುಂಬಾನೇ ಲಾಭವಿದೆಯಂತೆ ಜೊತೆಗೆ ಇದು ದೇಹವನ್ನು ಹೈಡ್ರೇಟೆಡ್ ಆಗಿರಲು ಕೂಡ ಸಹಾಯ ಮಾಡುತ್ತದೆಯಂತೆ.ಇನ್ನು ಈಗಾಗಲೇ ಹೇಳಿದ ಹಾಗೆ ಈ ತರಕಾರಿಯಲ್ಲಿ ದೇಹಕ್ಕೆ ಅಗತ್ಯವಾದ ಎಲ್ಲಾ ಬಗೆಯ ಪೋಷಕಾಂಶಗ ಳಾದ ಬಿ ವಿಟಮಿನ್‌ಗಳು, ಸಿ ವಿಟಮಿನ್‌ಗಳು, ಕಬ್ಬಿಣ ಮತ್ತು ಸೋಡಿಯಂ ಗಮನಾರ್ಹ ಪ್ರಮಾಣದಲ್ಲಿ ಕಂಡು ಬರುತ್ತದೆಯಂತೆ

> **ಆಹಾರ ಪದ್ಧತಿಯಲ್ಲಿ ಸೋರೆಕಾಯಿ ಬಳಸುವುದರಿಂದ ಇಂತಹ ಆರೋಗ್ಯ ಸಮಸ್ಯೆಗಳು ದೂರವಾಗುವುದು**
> **ಹೃದಯದ ಆರೋಗ್ಯ - ಸ್ವಾಮಿ ರಾಮದೇವ್ ತಮ್ಮ ವೀಡಿಯೋದಲ್ಲಿ ಆಗಾಗ ಸೋರೆಕಾಯಿ ಆಹಾರಪದ್ಧತಿಯಲ್ಲಿ ಬಳಸುವುದರಿಂದ ಹೃದಯದ ಆರೋಗ್ಯ ಸುಧಾರಿಸುತ್ತದೆ ಎಂದು ಸಲಹೆ ನೀಡಿದ್ದಾರೆ. ಸೋರೆಕಾಯಿ ಹೃದಯದಲ್ಲಿನ ಅಡಚಣೆಗಳನ್ನು ನಿರ್ವಹಿಸಲು ಸಹಾಯ ಮಾಡುತ್ತದೆ ಹಾಗೂ ಹೃದಯ ಸಂಬಂಧಿತ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ.**
> **ರಕ್ತದೊತ್ತಡ ನಿಯಂತ್ರಣ: ಸೋರೆಕಾಯಿ ಕಡಿಮೆ ಕ್ಯಾಲೋರಿ ಹೊಂದಿರುವ ತರಕಾರಿ. ಇದನ್ನು ತಿನ್ನುವುದರಿಂದ ಕೊಲೆಸ್ಟ್ರಾಲ್ ಕಡಿಮೆಯಾಗುತ್ತದೆ, ಇದು ರಕ್ತದೊತ್ತಡವನ್ನು ನಿರ್ವಹಿಸಲು ಸಹಾಯ ಮಾಡುತ್ತದೆ. ಸೋರೆಕಾಯಿ ಸೇವನೆಯು ರಕ್ತದೊತ್ತಡವನ್ನು ಸುಧಾರಿಸುವ ಮೂಲಕ ರಕ್ತದ ಹರಿವನ್ನು ಸುಧಾರಿಸುತ್ತದೆ.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಮುಂಗೋಪ ನಿಮ್ಮನ್ನು ಇನ್ನೂ ಹೆಚ್ಚು ತೊಂದರೆಯಲ್ಲಿ ಸಿಲುಕಿಸಬಹುದು. ವ್ಯಾಪಾರಿಗಳಿಗೆ ವ್ಯಾಪಾರದಲ್ಲಿ ಹಾನಿ ಉಂಟಾಗಬಹುದು ಮತ್ತು ತಮ್ಮ ವ್ಯಾಪಾರವನ್ನು ಉತ್ತಮಗೊಳಿಸಲು ಹಣವನ್ನು ಖಾರುಚು ಮಾಡಬೇಕಾಗುತ್ತದೆ.

**ವೃಷಭ** ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ನೀವು ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ.

**ಮಿಥುನ** ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ.

**ಕರ್ಕಾಟಕ** ಸ್ನೇಹಿತರು ಮತ್ತು ಅಪರಿಚಿತರಿಬ್ಬರ ಬಗೆಗೂ ಎಚ್ಚರದಿಂದಿರಿ. ಪ್ರೇಮ ಜೀವನದ ವಿವಾದಾತ್ಮಕವಾಗಿರಬಹುದು. ನಿಮ್ಮ ನಡೆಯಲ್ಲಿ ಪ್ರಾಮಾಣಿಕವಾಗಿರಿ, ನಿಮ್ಮ ಬದ್ಧತೆಯನ್ನು ಹಾಗೂ ನಿಮ್ಮ ಕೌಶಲ್ಯಗಳನ್ನು ಗುರುತಿಸಲಾಗುತ್ತದೆ.

**ಸಿಂಹ** ನೀವು ನಿಮ್ಮ ಭಾವನೆಗಳನ್ನು ನಿಯಂತ್ರಿಸಬೇಕು. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು.

**ಕನ್ಯಾ** ದೂರದ ಸಂಬಂಧಿಗಳಿಂದ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷದ ಕ್ಷಣಗಳನ್ನು ತರುವುದು. ನಿಮ್ಮ ಪ್ರೀತಿಯನ್ನು ಅಮೂಲ್ಯ ವಸ್ತುಗಳಂತೆ ಹೊಸತನದಿಂದಿಡಿ.

**ತುಲಾ** ನಿಮ್ಮ ಶಕ್ತಿಯನ್ನು ಸ್ವಯಂ ಸುಧಾರಣೆ ಯೋಜನೆಗಳಲ್ಲಿ ಹಾಗೂ ನಿಮ್ಮನ್ನು ಉತ್ತಮವಾಗಿಸುವ ಯೋಜನೆಗಳಲ್ಲಿ ಹಾಕಿ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ.

**ವೃಶ್ಚಿಕ** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ, ಅಹಂಭಾವ, ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ.

**ಧನಸ್ಸು** ನೀವು ವ್ಯಾಯಾಮದ ಮೂಲಕ ನಿಮ್ಮ ತೂಕವನ್ನು ನಿಯಂತ್ರಿಸಬಹುದು. ವಿದೇಶದಲ್ಲಿ ವ್ಯಾಪಾರ ಮಾಡುವ ಈ ರಾಶಿಚಕ್ರದ ಜನರಿಗೆ ಇಂದು ಸಾಕಷ್ಟು ಹಣದ ಲಾಭವನ್ನು ಪಡೆಯಬಹುದು.

**ಮಕರ** ನಿಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಹಿಂಜರಿಯದಿರಿ. ಆತ್ಮವಿಶ್ವಾಸದ ನಿಮ್ಮನ್ನು ಆವರಿಸಲು ಬಿಡಬೇಡಿ, ಏಕೆಂದರೆ ಅದು ಕೇವಲ ನಿಮ್ಮ ಸಮಸ್ಯೆಯನ್ನು ಮಾತ್ರ ಸಂಕೀರ್ಣಗೊಳಿಸುತ್ತದೆ.

**ಕುಂಭ** ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ.

**ಮೀನ** ನೀವು ಒಂದು ದೀರ್ಘ ಪ್ರಯಾಣಕ್ಕೆ ಹೋಗಲು ಯೋಜನೆ ಹಾಕುತ್ತಿದ್ದ ಹಾಗೆ ನಿಮ್ಮ ಆರೋಗ್ಯ ಮತ್ತು ಇಂಧನ ಸಂರಕ್ಷಣೆಯ ಹವ್ಯಾಸ ನಿಮಗೆ ಅಪಾರವಾದ ಉಪಯೋಗವುಂಟುಮಾಡುತ್ತದೆ.

### ತುಂಗಾ ಜಲಾಶಯದಿಂದ ನೀರು ಲಿಫ್ಟ್ ಮಾಡಿ ಭದ್ರಾ ಜಲಾಶಯಕ್ಕೆ ಹಾಕಿಕೊಂಡು ನಂತರ ಕಾಲುವೆಗೆ ಹರಿಸಲಾಗುತ್ತದೆ

# ಭದ್ರಾ ಜಲಾಶಯವ ವಿಶ್ವೇಶ್ವರಯ್ಯ ಜಲ ನಿಗಮ ವ್ಯಾಪ್ತಿಗೆ ಒಳಪಡಿಸಲು ಆಗ್ರಹ

• ಉದಯವಾಹಿನಿ ಚಿತ್ರದುರ್ಗ

ಮಧ್ಯ ಕರ್ನಾಟಕದ ಬಯಲು ಸೀಮೆ ರೈತಾಪಿ ಸಮುದಾಯದ ಜೀವನಾಡಿಯಾಗಿರುವ ಭದ್ರಾ ಜಲಾಶಯವನ್ನು ವಿಶ್ವೇಶ್ವರಯ್ಯ ಜಲ ನಿಗಮ (ವಿಜೆಎನ್ ಎಲ್ ) ದ ವ್ಯಾಪ್ತಿಗೆ ಒಳಪಡಿಸುವ ತನ್ನ ನಿರ್ಧಾರದಿಂದ ರಾಜ್ಯ ಸರ್ಕಾರ ಹಿಂದೆ ಸರಿಯಬಾರದೆಂದು ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಆಗ್ರಹಿಸುತ್ತದೆ.

ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಮಿತಿ ಕಾರ್ಯಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಹಾಲಿ ಭದ್ರಾ ಜಲಾಶಯ ಕರ್ನಾಟಕ ನೀರಾವರಿ ನಿಗಮದ ಅಡಿಯಲ್ಲಿದೆ. ಭದ್ರಾ ಮೇಲ್ದಂಡೆ ಕಾಮಗಾರಿಗಳು ವಿಶ್ವೇಶ್ವರಯ್ಯ ನೀರಾವರಿ ನಿಗಮದಿಂದ ನಿರ್ವಹಣೆಗೆ ಒಳಪಟ್ಟಿದ್ದು ಭವಿಷ್ಯದಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ನೀರು ಪಡೆಯಬೇಕಾದರೆ ಎರಡು ನಿಗಮಗಳ ನಡುವೆ ಸಂಘರ್ಷ ಸೃಷ್ಟಿಯಾಗುವ ಸಾಧ್ಯತೆ ಇರುತ್ತದೆ. ಎರಡೂ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರ(ಎಂಡಿಗಳು) ನಡುವೆ ಒಮ್ಮತ ಮೂಡದೇ ಇರಬಹುದು. ಹಾಗಾಗಿ ಭದ್ರಾ ಜಲಾಶಯವ ವಿಶ್ವೇಶ್ವರಯ್ಯ ಜಲ ನಿಗಮದ ವ್ಯಾಪ್ತಿಗೆ ಒಳಪಡಿಸಿ ಒಬ್ಬರೇ ವ್ವವಸ್ಥಾಪಕ ನಿರ್ದೇಶಕರ ನಿರ್ವಹಣೆ ಮಾಡುವ ರೀತಿಯಲ್ಲಿ ಇರಬೇಕೆಂದರು. ಈ ಸಂಬಂಧ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಜಲ ಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ಹಾಗೂ ವಿಜೆಎನ ಎಲ್ ವ್ಯವಸ್ಥಾಪಕ ನಿರ್ದೇಶಕ ಸಣ್ಣ ಚಿತ್ತಯ್ಯ ಅವರಿಗೆ ಮನವಿ ಮಾಡಿಕೊಂಡಿತ್ತು. ಭದ್ರಾ ಜಲಾಶಯದ ಕಾಡ ಸಮಿತಿಯಲ್ಲಿ ಚಿತ್ರದುರ್ಗ ಜಿಲ್ಲೆಗೂ ಸೂಕ್ತ ಸ್ಥಾನ ಮಾನಬೇಕು ಎಂಬ ಬೇಡಿಕೆ ಮಂಡಿಸಿತ್ತು. ಈ ನಿಟ್ಟಿನಲ್ಲಿ ಕಾರ್ಯತತ್ಪರರಾಗಿದ್ದ ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ಭದ್ರಾ ಜಲಾಶಯವ ಕರ್ನಾಟಕ ನೀರಾವರಿ ನಿಗಮ ವ್ಯಾಪ್ತಿಯಿಂದ ಹೊರ ತೆಗೆದು ವಿಶ್ವೇಶ್ವರಯ್ಯ ಜಲ ನಿಗಮಕ್ಕೆ ಸೇರ್ಪಡಿಸುವ ತೀರ್ಮಾನ ಕೈಗೊಂಡು ಆ ನಿಟ್ಟಿನಲ್ಲಿ ಮುಂದಡಿ ಇಟ್ಟಿದ್ದರು. ಈ ಸುಳಿವು ಅರಿತ ದಾವಣಗೆರೆ ಜಿಲ್ಲೆಯ ಕ್ಯಾತೆ ಶೂರ ರೇಣುಕಾಚಾರ್ಯ ತೀವ್ರ ಆಕ್ಷೇಪಣೆ ವ್ಯಕ್ತಪಡಿಸಿ ಯಾವುದೇ ಕಾರಣದಿಂದ ಕರ್ನಾಟಕ ನೀರಾವರಿ ನಿಗಮದಿಂದ ವಿಜೆಎನ್ ಎಲ್ ಗೆ ಭದ್ರಾ ಜಲಾಶಯವ ಶಿಫ್ಟ್ ಮಾಡಲು ಅವಕಾಶ ಕೊಡುವುದಿಲ್ಲವೆಂದು ಹೇಳಿಕೆ ನೀಡಿ ಉಭಯ ಜಿಲ್ಲೆಯ ರೈತರ ನಡುವೆ ಸಂಘರ್ಷ ಸೃಷ್ಟಿ ಮಾಡಲು ಮುಂದಾಗಿದ್ದಾರೆ. ರೇಣುಕಾಚಾರ್ಯರ ಈ ನಡೆಯನ್ನು ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಉಗ್ರವಾಗಿ ಖಂಡಿಸುತ್ತದೆ ಎಂದರು.

ದೈನೇಸಿ ಸ್ಥಿತಿ ಬಿಡಿ, ಹಕ್ಕೊತ್ತಾಯ ಮಂಡಿಸಿ

ಭದ್ರಾ ಮೇಲ್ದಂಡೆ ಕಾಮಗಾರಿ ನಿಧಾನಗತಿಯಲ್ಲಿ ಸಾಗಿದ್ದು ಯೋಜನೆ ವ್ಯಾಪ್ತಿಯ ಜನ ಪ್ರತಿನಿಧಿಗಳು ಅನುದಾನಕ್ಕಾಗಿ ರಾಜ್ಯ ಸರ್ಕಾರದ ಮುಂದೆ ದೈನೇಸಿಯಾಗಿ ಕೈ ಕಟ್ಟಿ ನಿಲ್ಲದೆ ಹಕ್ಕೊತ್ತಾಯ ಮಂಡಿಸುವಂತೆ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಆಗ್ರಹಿಸುತ್ತದೆ. ಕಳೆದ ವಾರ ಸಚಿವ ಡಿ.ಸುಧಾಕರ್ ನೇತೃತ್ವದಲ್ಲಿ ಜಿಲ್ಲೆಯ ಶಾಸಕರುಗಳು ಕಾಮಗಾರಿ ಪರಿಶೀಲನೆ ನಡೆಸಿದ್ದು ವಾರದೊಳಗೆ ಸಿಎಂ, ಡಿಸಿಎಂ ಭೇಟಿ ಮಾಡಿ 200 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿಸಿಕೊಂಡು ಫೆಬ್ರವರಿ ಅಂತ್ಯದ ಒಳಗೆ ಗೋನೂರು ಕೆರೆ ವರೆಗೆ ಪರೀಕ್ಷಾರ್ಥ (ಟ್ರಯಲ್) ನೀರು ಹರಿಸುವುದಾ ಹೇಳಿದ್ದರು. ಆದರೆ ಇದುವರೆಗೂ ಸಿಎಂ ಹಾಗೂ ಡಿಸಿಎಂ ಭೇಟಿ ಮಾಡುವ ನಿಟ್ಟಿನಲ್ಲಿ ಸಚಿವ, ಶಾಸಕರು ಪ್ರಯತ್ನ ನಡೆಸಿಲ್ಲ. ಜಿಲ್ಲೆಯ ಜನ ಪ್ರತಿನಿಧಿಗಳ ಇಚ್ಛಾಶಕ್ತಿ ಕೊರತೆಯ ದುರ್ಬಲ ಮನಸ್ಥಿತಿಯ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಖಂಡಿಸುತ್ತದೆ. ರಾಜ್ಯ ಸರ್ಕಾರವ ಬೇಡಿಕೊಳ್ಳುವ ಪರಿಸ್ಥಿತಿಯಿಂದ ಹೊರ ಬಂದು ಹಕ್ಕೊತ್ತಾಯ ಮಂಡಿಸುವಂತೆ ಲಿಂಗಾರೆಡ್ಡಿ ಒತ್ತಾಯಿಸಿದರು. ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಕೆ.ಆರ್.ದಯಾನಂದ, ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ, ರೈತ ಸಂಘದ ಜಿಲ್ಲಾಧ್ಯಕ್ಷ ಹಂಪಯ್ಯನ ಮಾಳಿಗೆ ಧನಂಜಯ, ಉಪಾಧ್ಯಕ್ಷ ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಮಲ್ಲಾಪುರ ತಿಪ್ಪೇಸ್ವಾಮಿ, ಮಾಜಿ ಅಧ್ಯಕ್ಷ ಬಸ್ತಿಹಳ್ಳಿ ಸುರೇಶ್ ಇದ್ದರು.


ಉದಯವಾಹಿನಿ ಚಿತ್ರ

**ಮಧ್ಯ ಕರ್ನಾಟಕದ ರೈತರ ಆಕ್ರೋಶ**

> ಭದ್ರಾ ಮೇಲ್ದಂಡೆ ಯೋಜನೆಯಡಿ ತುಂಗಾ ಜಲಾಶಯದಿಂದ 17.4 ಟಿಎಂಸಿ ಹಾಗೂ ಭದ್ರಾ ಜಲಾಶಯದಿಂದ 12.5 ಟಿಎಂಸಿ ಸೇರಿ ಒಟ್ಟು 29.9 ಟಿಎಂಸಿಯಷ್ಟು ನೀರನ್ನು ಹಂಚಿಕೆ ಮಾಡಲಾಗಿದೆ. ತುಂಗಾ ಜಲಾಶಯದಿಂದ ನೀರು ಲಿಫ್ಟ್ ಮಾಡಿ ಭದ್ರಾ ಜಲಾಶಯಕ್ಕೆ ಹಾಕಿಕೊಂಡು ನಂತರ ಕಾಲುವೆಗೆ ಹರಿಸಲಾಗುತ್ತದೆ. ಹಾಗಾಗಿ ಭದ್ರಾ ಜಲಾಶಯದ ಮೇಲೆ ಹೆಚ್ಚು ಅವಲಂಬನೆ ಇದೆ. ಜಲಾಶಯವ ಒಂದೇ ನಿಗಮ ನಿರ್ವಹಣೆ ಮಾಡಿದ್ದಲ್ಲಿ ತೊಂದರೆ ಆಗುವುದಿಲ್ಲ. ಚಿತ್ರದುರ್ಗ, ಚಿಕ್ಕಮಗಳೂರು, ಜಗಳೂರು, ತುಮಕೂರು ಜಿಲ್ಲೆಯ ರೈತರು ಯಾವುದೇ ಸಂಘರ್ಷಕ್ಕೆ ಇಳಿಯದೇ ಭದ್ರಾ ಜಲಾಶಯದಿಂದ ನೀರು ಪಡೆಯಬಹುದಾಗಿದೆ. ರಾಜ್ಯ ಸರ್ಕಾರ ಭದ್ರಾ ಜಲಾಶಯವ ನೀರಾವರಿ ನಿಗಮದ ವ್ಯಾಪ್ತಿಯಿಂದ ವಿಶ್ವೇಶ್ವರಯ್ಯ ಜಲ ನಿಗಮಕ್ಕೆ ಸೇರಿಸುವ ತನ್ನ ನಿಲುವಿನಿಂದ ಕಾರಣಕ್ಕೂ ಹಿಂದೆ ಸರಿಯಬಾರದು. ಹಾಗೊಂದು ವೇಳೆ ಒತ್ತಡಕ್ಕೆ ಮಣಿದು ನೀರಾವರಿ ನಿಗಮದ ವ್ಯಾಪ್ತಿಯಲ್ಲಿ ಉಳಿಸಿದರೆ ಮಧ್ಯ ಕರ್ನಾಟಕದ ರೈತರ ಆಕ್ರೋಶ ಎದುರಿಸಬೇಕಾಗುತ್ತದೆ , ಹೋರಾಟದ ಹಾದಿ ತುಳಿಯಬೇಕಾಗುತ್ತದೆ -ಲಿಂಗಾರೆಡ್ಡಿ

## ಐನಾಪೂರ ಏತ ನೀರಾವರಿ ಯೋಜನೆಗೆ ಚಾಲನೆ ನೀಡುವಂತೆ ಆಗ್ರಹಿಸಿ ಮೌನ ಪ್ರತಿಭಟನೆ

• ಉದಯವಾಹಿನಿ, ಚಿಂಚೋಳಿ

ರಾಜ್ಯ ಘನ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಐನಾಪೂರ ಏತ ನೀರಾವರಿ ಯೋಜನೆಗೆ 95ಕೋಟಿ ರೂ.ಬಿಡುಗಡೆಗೊಳಿಸಿ 10ತಿಂಗಳಾದರೂ ಕಾಮಗಾರಿಗೆ ಚಾಲನೆ ನೀಡದೆ ಇರುವುದರಿಂದ ಈಭಾಗದ ರೈತಾಪಿ ಜನತೆ ಯೋಜನೆಗೆ ಚಾಲನೆ ನೀಡುವಂತೆ ಮನವಿ ಮಾಡಿಕೊಳ್ಳುತ್ತಿದ್ದೇವೆ ಎಂದು ಮುಲ್ಲಾಮಾರಿ ಏತ ನೀರಾವರಿ ಅಭಿವೃದ್ಧಿ ಸಮಿತಿ ಅಧ್ಯಕ್ಷ ಶಿವಾನಂದ ಮಾಲಿ ಪಾಟೀಲ ಹೇಳಿದರು.

ಪಟ್ಟಣದ ಪ್ರಜಾಸೌಧ ಎದುರು ಮುಲ್ಲಾಮಾರಿ ಏತ ನೀರಾವರಿ ಅಭಿವೃದ್ಧಿ ಸಮಿತಿ ವತಿಯಿಂದ ಒಂದು ದಿನದ ಮೌನ ಪ್ರತಿಭಟನೆ ಹಮ್ಮಿಕೊಂಡು ತಹಸೀಲ್ದಾರ್ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿಪತ್ರ ಸಲ್ಲಿಸಿ ಮಾತನಾಡಿದ ಅವರು, ಕಳೆದ ಎರಡು ದಶಕಗಳಿಂದ ಐನಾಪೂರ ವ್ಯಾಪ್ತಿಯ ರೈತಾಪಿ ವರ್ಗದವರು ಐನಾಪೂರ ಮುಲ್ಲಾಮಾರಿ ಏತ ನೀರಾವರಿ ಯೋಜನೆ ಜಾರಿಗೆ ಮಾಡುವಂತೆ ನಿರಂತರ ಹೋರಾಟ ಮಾಡುತ್ತಾ ಬಂದಿದ್ದೇವೆ ಆದರೆ ಅನೇಕ ಸರ್ಕಾರಗಳು ಅಧಿಕಾರದ ಚುಕ್ಕಾಣಿ ಹಿಡಿದು ಹೋಗಿವೆ ಆದರೆ ಯಾವದೇ ಸರ್ಕಾರಗಳು ಬರೀ ಅಶ್ವಾಸನೆ ನೀಡಿ ಹೋಗಿವೆ. ಆದರೆ 2023ರಲ್ಲಿ ಕಾಂಗ್ರೆಸ್ ಸರ್ಕಾರದ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಐನಾಪೂರ ಏತ ನೀರಾವರಿ ಯೋಜನೆ ಜಾರಿಗೆ ಮಾಡಲು ಬೇಕಾಗುವ ಎಲ್ಲಾ ಕ್ರೀಯಾಯೋಜನೆ ಸಿದ್ದಪಡಿಸಿ 220ಕೋಟಿ ರೂ.ಘೋಷಣೆ ಮಾಡಿದೆ ಆದರೆ ಮೊದಲ ಹಂತದ 95 ಕೋಟಿ ರೂ.ಟೆಂಡರ್ ಕರೆದು ಅನುದಾನ ಬಿಡುಗಡೆ ಮಾಡಿ 10ತಿಂಗಳು ಗತಿಸಿದರೂ ರಾಜ್ಯ ಸರ್ಕಾರದ ಮುಖ್ಯಮಂತ್ರಿಗಳು, ಮಂತ್ರಿಗಳು, ಯೋಜನೆಗೆ ಚಾಲನೆ ನೀಡದೆ ಇರುವುದರಿಂದ ಈಭಾಗದ ರೈತರು ಗೊಂದಲಕ್ಕೆ ಒಳಗಾಗಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸಚಿವ ಸಂಪುಟದ ಸಚಿವರು, ಶಾಸಕರು ಮುತುವರ್ಜಿ ವಹಿಸಿ ಈಭಾಗದ ರೈತಾಪಿ ವರ್ಗದವರಿಗೆ ಆರ್ಥಿಕವಾಗಿ ಸಬಲರಾಗಲು ಐನಾಪೂರ ಏತ ನೀರಾವರಿ ಯೋಜನೆಗೆ ಮುಖ್ಯಮಂತ್ರಿಗಳು ಮತ್ತು ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರು ಚಾಲನೆ ನೀಡಿ ಅನುಕೂಲ ಕಲ್ಪಿಸಿ ಕೊಡಬೇಕು ಎಂದರು.

ಹಣಮಂತ ಪೂಜಾರಿ, ಮೋಹನ್ ಐನಾಪೂರ, ಗೋಪಾಲ ಗಾರಂಪಳ್ಳಿ, ಹರೀಶ ದೇಗಲಮಡಿ, ಅನೇಕರಿದ್ದರು.


ಉದಯವಾಹಿನಿ ಚಿತ್ರ

## ಗಣರಾಜ್ಯೋತ್ಸವ ಅರ್ಥಪೂರ್ಣವಾಗಿ ಆಚರಿಸಲು ನಿರ್ಧಾರ

• ಉದಯವಾಹಿನಿ, ಅಥಣಿ

ತಾಲೂಕ ಆಡಳಿತದಿಂದ ಬರುವ ಜನವರಿ 26ರಂದು ಆಚರಿಸಲಾಗುವ ಗಣರಾಜ್ಯೋತ್ಸವ ದಿನಾಚರಣೆ ಸಮಾರಂಭವನ್ನು ಜಿಲ್ಲಾ ಆಡಳಿತದ ನಿರ್ದೇಶನದಂತೆ ಅಥಣಿ ಪಟ್ಟಣ ಸೇರಿದಂತೆ ತಾಲೂಕಿನ ಎಲ್ಲೆಡೆ ಅರ್ಥಪೂರ್ಣವಾಗಿ ಮತ್ತು ಅದ್ದೂರಿಯಾಗಿ ಆಚರಿಸಲು ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ತಹಸೀಲ್ದಾರ್ ಸಿದ್ದರಾಯ ಬೋಸಗಿ ಹೇಳಿದರು.

ಅವರು ಇಲ್ಲಿನ ಮಿನಿ ವಿಧಾನಸೌಧದಲ್ಲಿ ಗಣರಾಜ್ಯೋತ್ಸವ ಹಾಗೂ ವಿವಿಧ ಜಯಂತಿಗಳ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರತಿ ವರ್ಷದಂತೆ ಈ ಬಾರಿ ಪಟ್ಟಣದ ಭೋಜರಾಜ ಕ್ರೀಡಾಂಗಣದಲ್ಲಿ ಸಾರ್ವಜನಿಕ ಧ್ವಜಾರೋಹಣಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಧ್ವಜಸ್ತಂಭ, ವೇದಿಕೆಯ ಸಿದ್ಧತೆ, ಪೆಂಡಾಲ್ ಮತ್ತು ಆಸನಗಳ ವ್ಯವಸ್ಥೆ, ಶಾಲಾ ಮಕ್ಕಳಿಗೆ ಉಪಹಾರ ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ನಮ್ಮ ಕಂದಾಯ ಇಲಾಖೆಯ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಜವಾಬ್ದಾರಿಗಳನ್ನು ವಹಿಸಿಕೊಂಡು ಸಿದ್ಧತೆ ಮಾಡಿಕೊಳ್ಳಲು ಸೂಚಿಸಿದರು. ರಾಷ್ಟ್ರೀಯ ಹಬ್ಬದ ಕಾರ್ಯಕ್ರಮ ಜರುಗುವ ಭೋಜರಾಜ ಕ್ರೀಡಾಂಗಣದ ಸ್ಥಳದಲ್ಲಿ ಹಾಗೂ ಶಾಲಾ ಮಕ್ಕಳ ಪ್ರಭಾತ ಫೇರಿ ಸಂಚರಿಸುವ ಮಾರ್ಗದಲ್ಲಿ ಸ್ವಚ್ಛಗೊಳಿಸಬೇಕು. ಎಲ್ಲಾ ಅಂಗಡಿ ಮುಗ್ಗಟ್ಟುಗಳನ್ನು ಮುಂಚಿತವಾಗಿ ತೆರೆಯುವಂತೆ ವ್ಯಾಪಾರಸ್ಥರಿಗೆ ತಿಳುವಳಿಕೆ ನೀಡಬೇಕು. ಪಟ್ಟಣದ ಪ್ರಮುಖ ವೃತ್ತಗಳಲ್ಲಿ ಅಲಂಕಾರ ಮಾಡುವುದರ ಜೊತೆಗೆ ಸ್ವಾತಂತ್ರ್ಯ ಹೋರಾಟಗಾರರ ಮತ್ತು ಮಹಾತ್ಮರ ಪುತ್ಥಳಿಗೆ ಮಾಲಾರ್ಪಣೆ ಮಾಡುವಂತೆ ಪುರಸಭೆಯ ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕಿನ ಎಲ್ಲ ಇಲಾಖೆಯ ಅಧಿಕಾರಿಗಳು ಬೆಳಿಗ್ಗೆ 7:00 ಒಳಗಾಗಿ ತಮ್ಮ ಕಾರ್ಯಾಲಯದ ಧ್ವಜಾರೋಹಣ ಮುಗಿಸಿಕೊಂಡು, 8 ಗಂಟೆಗೆ ಅಂಬೇಡ್ಕರ್ ವೃತ್ತದಲ್ಲಿ ಪ್ರಭಾತ್ ಫೇರಿ ಮೆರವಣಿಗೆ ಆರಂಭಗೊಂಡು 9 ಗಂಟೆಗೆ ಭೋಜರಾಜ ಕ್ರೀಡಾಂಗಣದಲ್ಲಿ ಸಮಾರೋಪಗೊಂಡು ಶಾಸಕರ ಅಧ್ಯಕ್ಷತೆಯಲ್ಲಿ ಸಾರ್ವಜನಿಕ ಧ್ವಜಾರೋಹಣ ಹಾಗೂ ವೇದಿಕೆ ಕಾರ್ಯಕ್ರಮಗಳು ಜರುಗಲಿದ್ದು, ಈ ಕಾರ್ಯಕ್ರಮದಲ್ಲಿ ತಾಲೂಕ ಮಟ್ಟದ ಎಲ್ಲ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಶಾಲಾ-ಕಾಲೇಜುಗಳ ಪ್ರತಿನಿಧಿಗಳು ಹಾಗೂ ಸಂಘ-ಸಂಸ್ಥೆಗಳ ಸದಸ್ಯರು ಭಾಗವಹಿಸಿ ತಮ್ಮ ಸಲಹೆಗಳನ್ನು ನೀಡಿದರು.


ಉದಯವಾಹಿನಿ ಚಿತ್ರ

## ಕಾಲುವೆ ದಡದಲ್ಲಿ ಕುಸಿದ ಮಣ್ಣು, ಯಾವ ಕ್ಷಣದಲ್ಲಾದರೂ ಸಿಸಿ ರಸ್ತೆ ಮುರಿದು ಅನಾಹುತಕ್ಕೆ ಕಾದಿರುವ ಕಾಲುವೆ ಸಿಸಿ ರಸ್ತೆ

• ಉದಯವಾಹಿನಿ ಕಾರಟಗಿ

ಪಟ್ಟಣದ ವಾರ್ಡ್ ನಂಬರ್ 20 ರ 31 ನೆಯ ವಿತರಣಾ ಕಾಲುವೆ ಎಡಭಾಗದಲ್ಲಿ ಸಾರ್ವಜನಿಕರ ಸಂಚಾರಕ್ಕೆ ಸಿಸಿ ರಸ್ತೆ ನಿರ್ಮಿಸಲಾಗಿತ್ತು, ಸಿಸಿ ರಸ್ತೆಯನ್ನು ವೈಜ್ಞಾನಿಕವಾಗಿ ನಿರ್ಮಿಸದೆ ಆವೈಜ್ಞಾನಿಕವಾಗಿ ನಿರ್ಮಿಸಿದ್ದರ ಪರಿಣಾಮವಾಗಿ ಸಿಸಿ ರಸ್ತೆ ನಿರ್ಮಾಣಗೊಂಡ ಕೆಲವೇ ವರ್ಷಗಳಲ್ಲಿ ರಸ್ತೆ ಕೆಳಭಾಗದಲ್ಲಿ ಮಣ್ಣು ಕುಸಿದಿದೆ, ಕಳಪೆ ಗುಣಮಟ್ಟ ಕಾಮಗಾರಿಯನ್ನು ಅಧಿಕಾರಿಗಳು ಮತ್ತು ಗುತ್ತಿಗೆದಾರರು ನಿರ್ಮಿಸಿದ್ದು ರಸ್ತೆ ನಿರ್ಮಾಣದ ಹಲವು ಲೋಪದೋಷಗಳು ಮೇಲ್ನೋಟಕ್ಕೆ ಸಾಬೀತು ಪಡಿಸುವಂತಾಗಿದ್ದು ರಸ್ತೆಯ ಮೇಲ್ಭಾಗ ಕೇವಲ ಸಿಸಿ ಮಾತ್ರ ಕಾಣ್ತಾ ಇದೆ ಕೆಳಭಾಗದಲ್ಲಿ ಮಣ್ಣು ಕುಸಿದು ಟೊಳ್ಳಾಗಿದೆ, ನಿರಂತರ ಈ ರಸ್ತೆಯ ಮೇಲೆ ಟಿಪ್ಪರ್ಗಳು ಕಾರ್ ಟ್ರ್ಯಾಕ್ಟರ್ ಸೇರಿದಂತೆ ಹಲವು ಭಾರವಾದ ವಾಹನಗಳು ಸಂಚರಿಸುತ್ತಿವೆ, ಶಿಥಿಲಗೊಂಡ ರಸ್ತೆಯ ಭಾಗದಲ್ಲಿ ವಾಹನಗಳ ಸಂಚರಿಸುವಾಗ ಬೀಳುವ ಅವಕಾಶಗಳಿದ್ದು ಸಾರ್ವಜನಿಕರು ಭಯ ಬೀತರಾಗಿದ್ದಾರೆ.

ಕೂಡಲೇ ಅಧಿಕಾರಿಗಳು ಈ ರಸ್ತೆಯನ್ನು ದುರಸ್ತಿಗೊಳಿಸಿ ನಡೆಯಬಹುದಾದ ಅವಗಡಗಳನ್ನು ತಪ್ಪಿಸಬೇಕು, ಒಂದು ವೇಳೆ ಅಧಿಕಾರಿಗಳು ದುರಸ್ತಿ ಕಾರ್ಯಕ್ಕೆ ಮುಂದಾಗದಿದ್ದರೆ ಅವಗಡಗಳು ಸಂಭವಿಸಿದರೆ ಅದಕ್ಕೆ ಅಧಿಕಾರಿಗಳೇ ನೇರ ಹೊಣೆ ಎಂದು ಸಾರ್ವಜನಿಕರು ಎಚ್ಚರಿಕೆ ನೀಡಿದ್ದಾರೆ.


ಉದಯವಾಹಿನಿ ಚಿತ್ರ

**ಸಾವು ನೋವು ಸಂಭವಿಸಿದರೆ ಹೊಣೆ ಯಾರು? ಸಾರ್ವಜನಿಕರ ಪ್ರಶ್ನೆ**

## ಕನ್ನಡ ಸಾಹಿತ್ಯ ಸಮ್ಮೇಳನ ಅದ್ದೂರಿ ಆಚರಣೆಗೆ ನಿರ್ಧಾರ, ವಿವಿಧ ಸಮಿತಿಗಳ ರಚನೆ

• ಉದಯವಾಹಿನಿ ಔರಾದ್

ಫೆಬ್ರುವರಿ 04 ರಂದು ಪಟ್ಟಣದ ಗುರುಪಾದಪ್ಪ ನಾಗಮಾರಪಳ್ಳಿ ಕಲ್ಯಾಣ ಮಂಟಪದಲ್ಲಿ ನಡೆಯುವ 7ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಅದ್ದೂರಿ ಆಚರಣೆಗಾಗಿ ವಿವಿಧ ಸಮಿತಿಗಳು ರಚಿಸಲಾಗಿದೆ ಎಂದು ಕಸಾಪ ಅಧ್ಯಕ್ಷ ಬಾಲಾಜಿ ಅಮರವಾಡಿ ತಿಳಿಸಿದ್ದಾರೆ.

ಪಟ್ಟಣದ ಕನ್ನಡ ಭವನದಲ್ಲಿ ನಡೆದ ಎರಡನೇ ಪೂರ್ವಭಾವಿ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ ಪ್ರಚಾರ ಸಮಿತಿ ಅಧ್ಯಕ್ಷರಾಗಿ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ಮೊಕ್ತೆದಾರ, ಆಹಾರ ಸಮಿತಿಗೆ ಮಹಾದೇವ ಘುಳೆ, ಅತಿಥಿ ಸತ್ಕಾರ ಸಮಿತಿಗೆ ವಿಶ್ವನಾಥ ಬಿರಾದಾರ, ಶಿಸ್ತು ಪಾಲನಾ ಸಮಿತಿ, ವೇದಿಕೆ ಸಮಿತಿಗೆ ಯಶವಂತರಾವ ಡೊಂಬಾಳೆ, ಸಂಘಟನಾ ಸಮಿತಿಗೆ ಸುನೀಲ ಮಿತ್ರ, ಹಣಕಾಸು ಸಮಿತಿಗೆ ಶಿವರಾಜ ಅಲ್ಮಾಜೆ, ಸಾಂಸ್ಕೃತಿಕ ಸಮಿತಿ ಡಾ.ಶಾಲಿವಾನ ಉದಗಿರೆ, ಸ್ಮರಣ ಸಂಚಿಕೆ ಸಮಿತಿ ಶಿವಲಿಂಗ ಹೇಡೆ, ಮೆರವಣಿಗೆ ಸಮಿತಿ ಸಂಜೀವ ಶೆಟಕಾರ, ನಗರ ಅಲಂಕಾರ ಸಮಿತಿಗೆ ರಾಜ್ಕುಮಾರ ಎಡವೆ, ನೋಂದಣಿ ಸಮಿತಿಗೆ ಗೋವಿಂದರಾವ ಪಾಟೀಲ, ವೈದ್ಯಕೀಯ ಸಮಿತಿಗೆ ಡಾ.ಗಾಯತ್ರಿ, ಮಳಿಗೆ ಸಮಿತಿಗೆ ಗುರುನಾಥ ರೆಡ್ಡಿ, ಚಿತ್ರಕಲೆ ಸಮಿತಿ ಅನಿಲಕುಮಾರ ಕಟ್ಟೆ, ಮಹಿಳಾ ಸಮಿತಿಗೆ ಮಾರ್ತಮ್ಮ ಮಾಳಗೆ ಅವರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ. ಈ ಸಂಧರ್ಭದಲ್ಲಿ ಡಾ.ವೈಜಿನಾಥ ಬುಟ್ಟೆ, ಶಿವಾಜಿರಾವ ಪಾಟೀಲ, ಅಮೃತರಾವ ಬಿರಾದಾರ, ತುಳಸಿರಾಮ ಬೆಂದ್ರೆ, ಗುರುನಾಥ ದೇಶಮುಖ, ಬಸವರಾಜ ಶೆಟಕಾರ, ಶರಣಪ್ಪ ಪಾಟೀಲ, ವಿರೇಶ ಅಲ್ಮಾಜೆ, ಆನಂದ ದ್ಯಾಡೆ, ರತ್ನದೀಪ ಕಸ್ತೂರೆ, ಸಂಜೀವ ಬಿರಾದರ, ಕೈಲಾಸಪತಿ ಕೇದಾರೆ, ಪ್ರಕಾಶ ಭಂಗಾರೆ, ದತ್ತಾತ್ರಿ ಮಸ್ಕಲೆ, ರವಿ ಡೋಳೆ, ಚನ್ನಬಸವ ಮುಕ್ತೆದಾರ, ಬಾಲಾಜಿ ದಾಮಾ, ಮಾಧವ ಮಾಳಕಾರಿ, ಧನರಾಜ ಮಾನೆ, ಆನಂದ ಕಾಂಬಳೆ, ಆನಂದ ಪವಾರ, ಅಶೋಕ ಶೆಂಬೆಳ್ಳಿ, ಮಲ್ಲಿಕಾರ್ಜುನ ಟೆಕರಾಜ, ಮಹಾದೇವ ಶಿಂಧೆ, ಸಂದೀಪ ಪಾಟೀಲ ಸೇರಿದಂತೆ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

## ವಾಲ್ಮೀಕಿ ಹಗರಣ: ನಾಗೇಂದ್ರಗೆ ನಿರೀಕ್ಷಣಾ ಜಾಮೀನು

• ಉದಯವಾಹಿನಿ ಬಳ್ಳಾರಿ

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣ ಸಂಬಂಧ ಸಿಬಿಐನಿಂದ ಬಂಧನದ ಭೀತಿಯಲ್ಲಿದ್ದ ಮಾಜಿ ಸಚಿವ, ಗ್ರಾಮೀಣ ಶಾಸಕ ಬಿ.ನಾಗೇಂದ್ರಗೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಷರತ್ತು ಬದ್ಧ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ. ನಿರೀಕ್ಷಣಾ ಜಾಮೀನು ಅರ್ಜಿ ಸಂಬಂಧ ಸುದೀರ್ಘ ವಾದ -ಪ್ರತಿವಾದ ಆಲಿಸಿ ಕಾಯ್ದಿರಿಸಿದ್ದ ತೀರ್ಪನ್ನು ಜನಪ್ರತಿ ನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ನಿನ್ನೆ ಸಂಜೆ ಪ್ರಕಟಿಸಿದರು. 2 ಲಕ್ಷ ರೂ. ಮೊತ್ತದ ವೈಯಕ್ತಿಕ ಬಾಂಡ್, ತಲಾ 2 ಲಕ್ಷ ರೂ. ಮೊತ್ತಕ್ಕೆ ಇಬ್ಬರ ಶೂರಿಟಿ, ಪ್ರಕರಣದ ಸಾಕ್ಷ್ಯಗಳನ್ನು ನಾಶ ಮಾಡಬಾರದು ಮತ್ತು ಸಾಕ್ಷಿಗಳನ್ನು ಬೆದರಿಸಬಾರದು ಎಂದು ನ್ಯಾಯಾಲಯ ಹೇಳಿದೆ.

## ಮಾಂಜಾ ದಾರ ನಿಷೇಧಿಸಿದ ಜಿಲ್ಲಾಡಳಿತ

• ಉದಯವಾಹಿನಿ ಬೀದರ್

ಬೀದರ್ ಜಿಲ್ಲೆಯ ಜಿಲ್ಲೆಯಾದ್ಯಂತ ಗಾಳಿಪಟ ಹಾರಿಸಲು ನಿಷೇಧಿತ ಮಾಂಜಾ ದಾರ ಬಳಕೆ ಮಾಡುವುದರಿಂದ ಪ್ರಾಣಿ-ಪಕ್ಷಿಗಳಿಗೆ ಹಾಗೂ ಬೈಕ್ ಸವಾರರಿಗೆ ಮಾರಣಾಂತಿಕ ಗಾಯಗಳನ್ನು ಉಂಟುಮಾಡುವುದಲ್ಲದೇ ಸಾವಿಗೂ ಕಾರಣವಾಗುತ್ತದೆ. ಇವು ಸುಲಭವಾಗಿ ಕತ್ತರಿಸುವುದಿಲ್ಲ ಮತ್ತು ಪರಿಸರದಲ್ಲಿ ದೀರ್ಘಕಾಲ ಉಳಿಯುತ್ತವೆ ಇದರಿಂದಾಗಿ ಪರಿಸರ ಹಾನಿಯೂ ಉಂಟಾಗುತ್ತದೆ. ಆದುದರಿಂದ ಗಾಳಿಪಟ ಹಾರಿಸಲು ಕೇವಲ ಹತ್ತಿ ದಾರ ಬಳಸಲು ಮಾತ್ರ ಅನುಮತಿ ಇರುತ್ತದೆ. ನಿಷೆ?ಧಿತ ಮಾಂಜಾ ದಾರ ತಯಾರಿಕೆ, ಸಂಗ್ರಹಣೆ, ಮಾರಾಟ ಮತ್ತು ಬಳಕೆಯನ್ನು ಮಾನ್ಯ ರಾಷ್ಟ್ರೀಯ ಹಸಿರು ಪೀಠವು ಸಂಪೂರ್ಣವಾಗಿ ನಿಷೇಧಿಸಿ ಆದೇಶಿಸಿರುತ್ತದೆ. ಒಂದು ವೇಳೆ ಇಂತಹ ನಿಷೇಧಿತ ಮಾಂಜಾ ದಾರ ತಯಾರಿಕೆ, ಸಂಗ್ರಹಣೆ, ಮಾರಾಟ ಮತ್ತು ಬಳಕೆ ಮಾಡುವವರ ವಿರುದ್ಧ ಪರಿಸರ ಸಂರಕ್ಷಣಾ ಕಾಯ್ದೆ -1986, ವನ್ಯ ಜೀವಿ ಸಂರಕ್ಷಣಾ ಕಾಯ್ದೆ ಮತ್ತು ಭಾರತೀಯ ನ್ಯಾಯ ಸಂಹಿತೆ ಕಲಂಗಳ ಅಡಿಯಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಡಳಿತದಿಂದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

## ಶಿಕ್ಷಕರ ಭವನಕ್ಕಾಗಿ ನಿವೇಶನ ಹಂಚಿಕೆ ಪತ್ರ ವಿತರಣೆ

• ಉದಯವಾಹಿನಿ ಕಲಬುರಗಿ

ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ ಖರ್ಗೆ ರವರ ಮುತುವರ್ಜಿಯಿಂದ ಕರ್ನಾಟಕ ರಾಜ್ಯ ಪ್ರೌಢಶಾಲಾ ಶಿಕ್ಷಕರ ಸಂಘ ಜಿಲ್ಲಾ ಘಟಕ ಕಲಬುರ್ಗಿಗೆ, ಕಲಬುರ್ಗಿ ನಗರಾಭಿವೃದ್ಧಿ ಪ್ರಾಧಿಕಾರದಿಂದ, ನಗರದ ಆಳಂದ ಚೆಕ್ ಪೊ?ಸ್ಟ್ ಹತ್ತಿರ 25000 ಚದುರ ಅಡಿ ನಿವೇಶನವನ್ನು ಶೇಕಡ 90%ರ ರಿಯಾಯತಿ ದರದಲ್ಲಿ ನೀಡಲು ದಿನಾಂಕ 2-1-2026 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಿರುವ ಹಿನ್ನೆಲೆಯಲ್ಲಿ, ಇಂದು ಕಲಬುರ್ಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಜಹರ ಅಲಂ ಖಾನ್ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಶಿವಕುಮಾರ್ ಪಾಟೀಲ್ ಅವರು ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷರಾದ ಮಹೇಶ ಹೂಗಾರ ಹಾಗೂ ಪ್ರಧಾನ ಕಾರ್ಯದರ್ಶಿಗಳಾದ ಜಮೀಲ್ ಇಮ್ರಾನ್ ಅಹ್ಮದ್ ಅವರಿಗೆ ಸಿ. ಎ. ನಿವೇಶನದ ಹಂಚಿಕೆ ಪತ್ರ ವಿತರಿಸಿದರು.

ತಕ್ಷಣದಲ್ಲಿ ಹಂಚಿಕೆ ಪತ್ರ ವಿತರಣೆ ಮಾಡಿರುವುದಕ್ಕೆ ಕಲಬುರ್ಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಜಹರ್ ಅಲಂ ಖಾನ್ ರವರಿಗೆ ಹಾಗೂ ಆಯುಕ್ತರಾದ ಶಿವಕುಮಾರ ಪಾಟೀಲ ಅವರಿಗೆ ಸಂಘದ ಪದಾಧಿಕಾರಿಗಳಿಂದ ಅಭಿನಂಧಿಸಿ ಸನಮಾನಿಸಲಾಯಿತು.


ಉದಯವಾಹಿನಿ ಚಿತ್ರ

# ಕಾಯಕ, ಮನುಷ್ಯತ್ವ ಬೋಧಿಸುವುದೇ ನಿಜ ಧರ್ಮ: ಬಿ.ವೈ.ರಾಘವೇಂದ್ರ

### ಸಿದ್ದರಾಮೇಶ್ವರರು ನೇರ ನುಡಿಯ ದಾರ್ಶನಿಕರು, ಬಸವಾದಿ ಶರಣರೊಂದಿಗೆ ಸಮ ಸಮಾಜದ ನಿರ್ಮಾಣದಲ್ಲಿ ತೊಡಗಿದ್ದವರು

• ಉದಯವಾಹಿನಿ ಶಿವಮೊಗ್ಗ

ಕಾಯಕವೇ ಎಲ್ಲಕ್ಕಿಂತ ಶ್ರೇಷ್ಠ. ಮನುಷ್ಯತ್ವ ಬೋಧಿಸುವುದೇ ನಿಜವಾದ ಧರ್ಮ ಎಂದು ನಂಬಿ ಅದನ್ನೇ ಪ್ರತಿಪಾದಿಸುತ್ತಿದ್ದ ಕಾಯಕಯೋಗಿ ಸಿದ್ದರಾಮೇಶ್ವರರು ನಮ್ಮೆಲ್ಲರಿಗೂ ಆದರ್ಶ ಪುರುಷರು' ಎಂದು ಸಂಸದ ಬಿ.ವೈ.ರಾಘವೇಂದ್ರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಭೋವಿ ವಿದ್ಯಾವರ್ಧಕ ಸಂಘದ ಸಂಯುಕ್ತಾಶ್ರಯದಲ್ಲಿ ಕುವೆಂಪು ರಂಗಮಂದಿರದಲ್ಲಿ ಏರ್ಪಡಿಸಿದ್ದ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಿದ್ದರಾಮೇಶ್ವರರು ನೇರ ನುಡಿಯ ದಾರ್ಶನಿಕರು. ಬಸವಾದಿ ಶರಣರೊಂದಿಗೆ ಸಮ ಸಮಾಜದ ನಿರ್ಮಾಣದಲ್ಲಿ ತೊಡಗಿದ್ದವರು. 12ನೇ ಶತಮಾನದಲ್ಲೇ ನೂರಾರು ಕೆರೆ, ಕಟ್ಟೆಗಳನ್ನು ನಿರ್ಮಿಸಿ ನೀರಾವರಿ ಕ್ರಾಂತಿಗೆ ನಾಂದಿ ಹಾಡಿದವರು ಎಂದರು. ಸಮಾಜದಲ್ಲಿ ಮೂಢನಂಬಿಕೆ, ಅಸಮಾನತೆ, ತಾರತಮ್ಯಗಳನ್ನು ತಿರಸ್ಕರಿಸಿದ್ದ ಅವರು, ಮನುಷ್ಯತ್ವವೇ ಮುಖ್ಯವೆಂದು ಮನುಕುಲದ ಏಳಿಗಾಗಿ ದುಡಿದರು. ಇಂತಹ ಮಹಾನ್ ವ್ಯಕ್ತಿ ಪ್ರತಿಪಾದಿಸಿದ ಮೌಲ್ಯಗಳು ಯುವ ಪೀಳಿಗೆಗೆ ಮಾದರಿ ಎಂದು ತಿಳಿಸಿದರು.

ಪತ್ರಕರ್ತ ದೇಶಾದ್ರಿ ಹೊಸ್ಮನೆ ಉಪನ್ಯಾಸ ನೀಡಿ ಮಾತನಾಡಿ, 'ಯಾವುದೇ ಮಹಾನ್ ಪುರುಷರ, ದಾರ್ಶನಿಕರ ಜಯಂತಿಗಳು ಆತ್ಮಾವಲೋಕನಕ್ಕೆ ವೇದಿಕೆಯಾಗಬೇಕು. ಮಹನೀಯರ ಜೀವನ ಚರಿತ್ರೆ, ಮೌಲ್ಯಗಳು, ತತ್ವಗಳನ್ನು ಅರಿತು ಅವುಗಳನ್ನು ಅಳವಡಿಸಿಕೊಂಡು ಅವರ ದಾರಿಯಲ್ಲಿ ನಡೆಯುವ ಪ್ರಯತ್ನಗಳಾಗಬೇಕೇ ವಿನಾ ಕೇವಲ ಸಭೆ ಸಮಾರಂಭಗಳಿಗೆ ಸೀಮಿತವಾಗಬಾರದು' ಎಂದರು.

12ನೇ ಶತಮಾನದ ವಚನ ಚಳವಳಿ ನಾವ್ಯಾರೂ ಮರೆಯಲಿಕ್ಕೆ ಸಾಧ್ಯವಿಲ್ಲ. ಅಂತಹ ಚಳವಳಿಯಲ್ಲಿ ಸಿದ್ದರಾಮೇಶ್ವರರು ಮುಂಚೂಣಿಯಲ್ಲಿದ್ದರು. ಬಸವಣ್ಣನವರ ಸಮ ಸಮಾಜ ನಿರ್ಮಾಣ ಪರಿಕಲ್ಪನೆಯಿಂದ ಪ್ರೇರೇಪಣೆಗೊಂಡು ಅದೇ ಮಾರ್ಗದಲ್ಲಿ ನಡೆದವರು ಸಿದ್ದರಾಮೇಶ್ವರರು. ಅಧಿಕಾರದ ಆಸೆ ತಿರಸ್ಕರಿಸಿ, ಬಸವಣ್ಣನವರ ಸಂಪರ್ಕ ಬೆಳೆದು ವಚನ ಚಳವಳಿಯಲ್ಲಿ ಪಾಲ್ಗೊಳ್ಳುತ್ತಾರೆ. ಜಾತಿ ವ್ಯವಸ್ಥೆ ವಿರುದ್ಧ ಹೋರಾಡುತ್ತಾರೆ ಎಂದು ಹೇಳಿದರು. ದೊಡ್ಡ ದೊಡ್ಡ ಕಟ್ಟಡ, ಅರಮನೆ, ಅಣೆಕಟ್ಟು ಕಟ್ಟುವ ಸಂಸ್ಕೃತಿಯ ಪ್ರತೀಕವಾದ ನಮ್ಮ ಸಮಾಜದವರು ಕೀಳರಿಮೆ ಬಿಟ್ಟು ಉನ್ನತ ಸ್ಥಾನದಲ್ಲಿದ್ದೇವೆ ಎಂದು ಹೆಮ್ಮೆ ಪಡಬೇಕು. ಸಂಘಟಿತರಾಗಬೇಕು. ಸಮಾಜಕ್ಕಾಗಿ ನಾವು ಕೊಡುಗೆಗಳ ನೀಡಬೇಕು. ಕುಲಗುರುಗಳ ಮಹತ್ವ ತಿಳಿದು ಎಚ್ಚರಗೊಳ್ಳಬೇಕು' ಎಂದು ಸಲಹೆ ನೀಡಿದರು.

**ಸಿದ್ದರಾಮೇಶ್ವರರು ನಮ್ಮೆಲ್ಲರಿಗೂ ಆದರ್ಶ ಪುರುಷರು**



ಉದಯವಾಹಿನಿ ಚಿತ್ರ

ಸಿದ್ದರಾಮೇಶ್ವರ ಶ್ರೀ ಶಿವಮೊಗ್ಗ: ಸಮುದಾಯದಲ್ಲಿ ಏಕತೆ ಇಲ್ಲದಿದ್ದರೆ ಯಾವುದೇ ಕ್ಷೇತ್ರದಲ್ಲಿಯೂ ಯಶಸ್ಸು ಸಾಧಿಸಲು ಸಾಧ್ಯವಿಲ್ಲ ಎಂದು ನಂದಿಗುಡಿ ವೃಷಭಪುರಿ ಸಂಸ್ಥಾನಮಠದ ಸಿದ್ದರಾಮೇಶ್ವರ ಶಿವಾಚಾರ್ಯ ಸ್ವಾಮೀಜಿ ಹೇಳಿದರು. ನಗರದ ಗುರುಸಿದ್ದರಾಮೇಶ್ವರ ದೇವಸ್ಥಾನದ ಆವರಣದಲ್ಲಿ ಬುಧವಾರ ನೊಳಂಬ ಲಿಂಗಾಯತ ಸಮಾಜದಿಂದ ಆಯೋಜಿಸಿದ್ದ ಶ್ರೀಗುರು ಸಿದ್ದರಾಮೇಶ್ವರರ 853ನೇ ಜಯಂತ್ಯುತ್ಸವದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ನೊಳಂಬ ಸಮುದಾಯದಲ್ಲಿ ಆರ್ಥಿಕ ರಾಜಕೀಯ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ಇಚ್ಛಾಶಕ್ತಿ ಮೂಡಿಬರುತ್ತಿದೆ. ಅದು ಸಂತೋಷಕರ. ಹಿಂದೊಮ್ಮೆ ರಾಜ್ಯದಲ್ಲಿ 9 ಶಾಸಕರು ನೊಳಂಬ ಸಮುದಾಯದವರಿದ್ದರು. ಈಗ ಒಬ್ಬ ಶಾಸಕರಷ್ಟೇ ಉಳಿದಿದ್ದಾರೆ. ಇದಕ್ಕೆ ಬೇರೆ ಯಾರೂ ಹೊಣೆಗಾರರಲ್ಲ. ನಮ್ಮ ಸಮುದಾಯದವರೇ ಹೊಣೆ. ಆ ಬಗ್ಗೆ ಆತ್ಮವಿಮರ್ಶೆ ಮಾಡಿಕೊಳ್ಳಬೇಕಿದೆ ಎಂದು ಹೇಳಿದರು.

**ಸಮುದಾಯದ ಏಕತೆಯೇ ಯಶಸ್ಸಿಗೆ ಮೂಲ**

## ಗಾಳಿಪಟದ ದಾರ ಕುತ್ತಿಗೆಗೆ ಸಿಲುಕಿ ವ್ಯಕ್ತಿ ಸಾವು

• ಉದಯವಾಹಿನಿ ಚಿಟಗುಪ್ಪ

ತಾಲ್ಲೂಕಿನ ತಾಳಮಡಗಿ ಗ್ರಾಮದ ರಾಷ್ಟ್ರೀಯ ಹೆದ್ದಾರಿ ಮೇಲೆ ಬೈಕ್ ಮೇಲೆ ಹೋಗುತ್ತಿದ್ದ ಸವಾರನ ಕುತ್ತಿಗೆಗೆ ಪತಂಗದ ದಾರ ಸಿಲುಕಿ ಆತ ಸ್ಥಳದಲ್ಲಿಯೇ ಮೃತಪಟ್ಟಿರುವ ದಾರುಣ ಘಟನೆ ಇಂದು ಬೆಳಿಗ್ಗೆ ನಡೆದಿದೆ. ಮೃತನನ್ನು ಬೊಂಬುಳಿಗೆ ಗ್ರಾಮದ ಸಂಜೀವಕುಮಾರ ಗುಂಡಪ್ಪ ಹೊಸಮನಿ (48) ಎಂದು ಗುರುತಿಸಲಾಗಿದೆ. ಬೆಳಿಗ್ಗೆ ಬೊಂಬುಳಿಗೆ ಗ್ರಾಮದಿಂದ ಹುಮನಾಬಾದ ಕಡೆ ಬೈಕ್ ಮೇಲೆ ಹೋಗುತ್ತಿದ್ದಾಗ ತಾಳಮಡಗಿ ಹತ್ತಿರ ಗಾಳಿಪಟದ ದಾರ ಕುತ್ತಿಗೆಗೆ ಸಿಲುಕಿ ಸವಾರ ಸ್ಥಳದಲ್ಲಿಯೇ ಮೃತಪಟ್ಟಿದ್ದಾನೆ ಎಂದು ತಿಳಿದುಬಂದಿದೆ. ಗಾಳಿ ಪಟಕ್ಕೆ ನೈಲಾನ್ ದಾರ ಬಳಸಲಾಗಿತ್ತು ಎಂದು ತಿಳಿದುಬಂದಿದೆ. ಈಚೆಗೆ ತಹಶೀಲ್ದಾರರು ಗಾಳಿಪಟಕ್ಕೆ ನೈಲಾನ್ ದಾರ ಉಪಯೋಗಿಸಿದವರ ವಿರುದ್ಧ ಕ್ರಿಮಿನಲ್ ಮೊಕ್ಕದ್ದಮ್ಮೆ ಹೂಡಬೇಕೆಂದು ಸೂಚಿಸಿದ್ದರು. ಅಲ್ಲದೆ ಗಾಳಿಪಟ ಮಾರಾಟ ಮಾಡುವವರ ಜೊತೆಗೂ ಸಭೆ ಮಾಡಿದ್ದರು. ಈಚೆಗೆ ಚಿಟಗುಪ್ಪಾ ಪಟ್ಟಣದಲ್ಲಿಯೂ ಕೂಡ ಇದೇ ರೀತಿ ವ್ಯಕ್ತಿಯವರ ಕುತ್ತಿಗೆಗೆ ಗಾಳಿಪಟದ ದಾರ ಸಿಲುಕಿ ಅವರು ಗಂಭೀರವಾಗಿ ಗಾಯಗೊಂಡಿದ್ದರು. ಈ ಬಗ್ಗೆ ಅಧಿಕಾರಿಗಳು ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು, ಪತಂಗ ಮಾರಾಟ ಮಾಡುವವರ ವಿರುದ್ಧ ಮಾತ್ರವಲ್ಲದೆ ನೈಲನ್ ದಾರವನ್ನು ತಯಾರು ಮಾಡುವ ಕಂಪನಿಗಳ ವಿರುದ್ಧವೂ ಕೂಡ ಕೇಸ್ ದಾಖಲಿಸ ಬೇಕು, ಮರಣ ಹೊಂದಿದ ವ್ಯಕ್ತಿಗೆ ಸರ್ಕಾರದ ವತಿಯಿಂದ ಸೂಕ್ತ ಪರಿಹಾರ ಒದಗಿಸಬೇಕು ಎಂದು ಇಲ್ಲಿನ ನಾಗರಿಕರು ಆಗ್ರಹಿಸಿದ್ದಾರೆ.

## ಮದುರೈನಲ್ಲಿ ಜಲ್ಲಿಕಟ್ಟು ಸ್ಪರ್ಧೆ



**ಮದುರೈ:** ಪೊಂಗಲ್ ಹಬ್ಬದ ನಿಮಿತ್ತ ಮದುರೈನ ಅವನಿಯಪುರಂನಲ್ಲಿ ಜಲ್ಲಿಕಟ್ಟು ಸ್ಪರ್ಧೆ ಆರಂಭವಾಗಿದೆ. ವಿವಿಧ ಹಳ್ಳಿಗಳಿಂದ ಜಲ್ಲಿಕಟ್ಟು ಹೋರಿಗಳು ಅಖಾಡದಲ್ಲಿ ಉತ್ಸಾಹದಿಂದ ಓಡುತ್ತಿವೆ. ಜಲ್ಲಿಕಟ್ಟು ಇಲ್ಲದೆ ತಮಿಳು ಹಬ್ಬ ಪೊಂಗಲ್ ಅಪೂರ್ಣ. ಅದರಂತೆ, ಪೊಂಗಲ್ ಹಬ್ಬದ ಮೊದಲ ದಿನದಂದು, ಮಧುರೈನ ಅವನಿಯಪುರಂನಲ್ಲಿ ಜಲ್ಲಿಕಟ್ಟು ಸ್ಪರ್ಧೆ ಪ್ರಾರಂಭವಾಗಿದೆ. ತಿರುಪರಣಕುಂದ್ರಂ ರಸ್ತೆಯ ಭದ್ರಕಾಳಿ ಅಮ್ಮನ್ ದೇವಸ್ಥಾನದ ಬಳಿಯ ಮೈದಾನದಲ್ಲಿ ಆಯೋಜಿಸಲಾದ ಸ್ಪರ್ಧೆಯನ್ನು ಸಚಿವ ಮೂರ್ತಿ ಮತ್ತು ಪಳನಿವೇಲ್ ತ್ಯಾಗರಾಜನ್ ಉದ್ಘಾಟಿಸಲಿದ್ದಾರೆ.

ಮಧುರೈ, ವಿರುಧುನಗರ, ಶಿವಗಂಗಾ, ರಾಮನಾಥಪುರಂ, ಥೇಣಿ, ದಿಂಡಿಗಲ್ ಮತ್ತು ತಿರುಚ್ಚಿ ಸೇರಿದಂತೆ ಹಲವಾರು ಜಿಲ್ಲೆಗಳಿಂದ 1,000 ಕ್ಕೂ ಹೆಚ್ಚು ಹೋರಿಗಳು ಈ ಜಲ್ಲಿಕಟ್ಟಿನಲ್ಲಿ ಭಾಗವಹಿಸುತ್ತಿವೆ. ಅದೇ ರೀತಿ, ಹಲವು ಸ್ಥಳಗಳಿಂದ ಹೋರಿಪಾಲಕರು ಸಹ ಬಂದಿದ್ದಾರೆ. 'ವಾಡಿವಾಸಲ್' (ಪ್ರವೇಶ ದ್ವಾರ) ಮೂಲಕ ಪ್ರತಿ ಗಂಟೆಗೆ 80 ರಿಂದ 90 ಹೋರಿಗಳನ್ನು ಬಿಡಲು ವ್ಯವಸ್ಥೆ ಮಾಡಲಾಗಿದೆ. ಕಣಿವೆಯಿಂದ, ಜಲ್ಲಿಕಟ್ಟು ಹೋರಿಗಳು ಅಖಾಡಕ್ಕೆ ಪ್ರವೇಶಿಸಿ ಹೋರಿಗಳಿಗೆ ಬೆದರಿಕೆ ಹಾಕುತ್ತಿವೆ. ಬುಲ್ ಹಿಡಿಯುವವರು ಸಹ ಧೈರ್ಯದಿಂದ ಬುಲ್‌ಗಳನ್ನು ಅಪ್ಪಿಕೊಳ್ಳುತ್ತಿದ್ದಾರೆ. ಸ್ಪರ್ಧೆಯನ್ನು ವೀಕ್ಷಿಸಲು ಸಾವಿರಾರು ಜನರು ಸೇರಿದ್ದಾರೆ ಮತ್ತು ಭದ್ರತೆಗಾಗಿ 2000 ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

**ಬುಲ್‌ಗಳಿಗೆ ವಿಶೇಷ ಆಹಾರ ಪದ್ಧತಿಯೂ ಇದೆ:** ಎರಡು ತಿಂಗಳ ಮುಂಚಿತವಾಗಿ, ಮಾಲೀಕರು ಜಲ್ಲಿಕಟ್ಟು ಸ್ಪರ್ಧೆಗಾಗಿ ಹೋರಿಗಳಿಗೆ ತರಬೇತಿ ನೀಡುತ್ತಾರೆ. ಬೆಳಿಗ್ಗೆ ಮತ್ತು ಸಂಜೆ ಎರಡು ಗಂಟೆಗಳ ನಡಿಗೆ ವ್ಯಾಯಾಮ, ಈಜು ತರಬೇತಿ ಮತ್ತು ಹೋರಿಗಳಿಂದ ತಪ್ಪಿಸಿಕೊಳ್ಳುವುದು ಹೇಗೆ ಎಂಬುದರ ಕುರಿತು ತರಬೇತಿ ನೀಡಲಾಗುತ್ತದೆ.

### ಕೂಡಲೇ ಭಾರತಕ್ಕೆ ಬಂದುಬಿಡಿ: ಇರಾನ್‌ನಲ್ಲಿ ಸಿಲುಕಿರುವ ಭಾರತೀಯರಿಗೆ ಕೇಂದ್ರ ಸರಕಾರ ಸೂಚನೆ

# ಇರಾನ್‌ನಲ್ಲಿ ತೀವ್ರಗೊಂಡ ಪ್ರತಿಭಟನೆಯ ಕಿಚ್ಚು

**ಟೆಹ್ರಾನ್:** ಇರಾನ್‌ನಲ್ಲಿ ತೀವ್ರಗೊಂಡ ಪ್ರತಿಭಟನೆಯ ಕಿಚ್ಚು ಹಾಗೂ ಅಮೆರಿಕದಿಂದ ಇರಾನ್ ಮೇಲೆ ದಾಳಿ ಸಾಧ್ಯತೆ ಹೆಚ್ಚಿದ ನಡುವೆಯೇ ಅಲ್ಲಿರುವ ಭಾರತೀಯರಿಗೆ ಕೂಡಲೇ ತವರಿಗೆ ಮರಳುವಂತೆ ಭಾರತ ಸರಕಾರ ಸೂಚಿಸಿದೆ.

ಭಾರತೀಯ ನಾಗರಿಕರು ಮುಂಜಾಗ್ರತೆ ವಹಿಸಬೇಕು. ಪ್ರತಿಭಟನೆ ನಡೆಯುವ ಸ್ಥಳಗಳಿಗೆ ಹೋಗಬಾರದು. ಸದಾ ಭಾರತೀಯ ರಾಯಭಾರ ಕಚೇರಿಯೊಂದಿಗೆ ಸಂಪರ್ಕದಲ್ಲಿರಬೇಕು. ಸ್ಥಳೀಯ ಮಾಧ್ಯಮಗಳ ಮೇಲೆ ನಿಗಾವಹಿಸಬೇಕು, ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹೇಳಿದ

ಎಲ್ಲಾ ನಾಗರಿಕರು ಪಾಸ್‌ಪೋರ್ಟ್, ಗುರುತಿನ ಚೀಟಿ, ಪ್ರಯಾಣ

- ದಾಳಿ ನಡೆಸಿದರೆ ತಕ್ಕ ತಿರುಗೇಟು, ಅಮೆರಿಕಕ್ಕೆ ಇರಾನ್ ಎಚ್ಚರಿಕೆ- ಹೆಚ್ಚಿದ ಉದ್ವಿಗ್ನತೆ
- ಇರಾನ್‌ನಲ್ಲಿ ನಡೆಯುತ್ತಿರುವ ಆಡಳಿತ ವಿರೋಧಿ ಪ್ರತಿಭಟನೆಯಲ್ಲಿ ಸಾವಿನ ಸಂಖ್ಯೆ 2,572ಕ್ಕೆ ಏರಿದೆ.
- ಇರಾನ್ ಮೇಲೆ ದಾಳಿ ನಡೆಸುವುದಾಗಿ ಅಮೆರಿಕ ಅಧ್ಯಕ್ಷ ಟ್ರಂಪ್ ಬೆದರಿಕೆಯ ನಡುವೆಯೇ, ಮಧ್ಯಪ್ರಾಚ್ಯದ ಪ್ರಾದೇಶಿಕ ನೆಲೆಗಳಿಂದ ಕೆಲವು ಸೇನಾ ತುಕಡಿಗಳನ್ನು ಅಮೆರಿಕ ಬುಧವಾರ ವಾಪಸ್ ಕರೆಸಿಕೊಂಡಿದೆ

ಹಾಗೂ ವಲಸೆ ದಾಖಲಾತಿಗಳು ಸುಲಭವಾಗಿ ಲಭ್ಯವಿರುವಂತೆ ನೋಡಿಕೊಳ್ಳಬೇಕು. ಯಾವುದೇ ಸಹಾಯಕ್ಕಾಗಿ ರಾಯಭಾರ ಕಚೇರಿಯನ್ನು ಸಂಪರ್ಕಿಸಬೇಕು, ಎಂದು ಸೂಚಿಸಲಾಗಿದೆ.

ಅಂದಾಜಿನ ಪ್ರಕಾರ, ವಿದ್ಯಾರ್ಥಿಗಳು ಸೇರಿದಂತೆ 10,000 ಭಾರತೀಯರು ಇರಾನ್‌ನಲ್ಲಿ ನೆಲೆಸಿದ್ದಾರೆ. ಅಂತರ್ಜಾಲ ಸಂಪರ್ಕ ಕಡಿತ ಅಥವಾ ಬೇರೆ ಕಾರಣದಿಂದ ಭಾರತೀಯರು ರಾಯಭಾರ ಕಚೇರಿಯನ್ನು ಸಂಪರ್ಕಿಸಲು ಸಾಧ್ಯವಾಗದಿದ್ದರೆ, ಅವರ ಪರವಾಗಿ ಭಾರತದಲ್ಲಿರುವ ಅವರ ಕುಟುಂಬದ ಸದಸ್ಯರು ಹೆಸರು ನೋಂದಾಯಿಸುವಂತೆಯೂ ಸಚಿವಾಲಯ ಸಲಹೆ ನೀಡಿದೆ.



ಅಮೆರಿಕ ಅಧ್ಯಕ್ಷ ಟ್ರಂಪ್ ಬೆದರಿಕೆ

**ಸೇನೆ ಸ್ಥಳಾಂತರಿಸಿದ ಅಮೆರಿಕ:** ಇರಾನ್ ಮೇಲೆ ದಾಳಿ ನಡೆಸುವುದಾಗಿ ಅಮೆರಿಕ ಅಧ್ಯಕ್ಷ ಟ್ರಂಪ್ ಬೆದರಿಕೆಯ ನಡುವೆಯೇ, ಮಧ್ಯಪ್ರಾಚ್ಯದ ಪ್ರಾದೇಶಿಕ ನೆಲೆಗಳಿಂದ ಕೆಲವು ಸೇನಾ ತುಕಡಿಗಳನ್ನು ಅಮೆರಿಕ ವಾಪಸ್ ಕರೆಸಿಕೊಂಡಿದೆ. ಅಮೆರಿಕ ದಾಳಿ ನಡೆಸಿದರೆ, ತಕ್ಕ ಪ್ರತಿದಾಳಿ ನಡೆಸುವುದಾಗಿ ಇರಾನ್ ಎಚ್ಚರಿಕೆ ನೀಡಿದೆ. ಈ ಹಿನ್ನೆಲೆಯಲ್ಲಿ ತನ್ನ ನಾಗರಿಕರ ಭದ್ರತೆ ಹಾಗೂ ಮಿಲಿಟರಿ ಸೌಲಭ್ಯಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಅಮೆರಿಕ ಕ್ರಮ ಕೈಗೊಂಡಿದೆ ಎಂದು ಮೂಲಗಳು ತಿಳಿಸಿವೆ. ಕತಾರ್‌ನ ಅಲ್ ಉದೈದ್ ವಾಯು ನೆಲೆಯಲ್ಲಿದ್ದ ಸೇನೆಯನ್ನು ಮುನ್ನೆಚ್ಚರಿಕೆ ಕ್ರಮವಾಗಿ ಸ್ಥಳಾಂತರಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

**ಗಲ್ಲು ಶಿಕ್ಷೆ ಪ್ರಕ್ರಿಯೆ ಕ್ಷಿಪ್ರ:** ಇರಾನ್‌ನಲ್ಲಿ ನಡೆಯುತ್ತಿರುವ ಆಡಳಿತ ವಿರೋಧಿ ಪ್ರತಿಭಟನೆಯಲ್ಲಿ ಸಾವಿನ ಸಂಖ್ಯೆ 2,572ಕ್ಕೆ ಏರಿದೆ. ಅಲ್ಲದೆ 10,000ಕ್ಕೂ ಹೆಚ್ಚು ಜನರನ್ನು ಬಂಧಿಸಲಾಗಿದೆ. ಈ ಮಧ್ಯೆ, ಇರಾನ್‌ನಲ್ಲಿ ಪ್ರತಿಭಟನಾಕಾರರನ್ನು ಗಲ್ಲಿಗೇರಿಸುವ ಪ್ರಕ್ರಿಯೆ ಕ್ಷಿಪ್ರಗೊಳಿಸಲು ಅಲ್ಲಿನ ಸರಕಾರ ನಿರ್ಧರಿಸಿದೆ.

**ಪ್ರತಿಭಟನೆ ಹಿನ್ನೆಲೆ:** ಇರಾನ್‌ನಲ್ಲಿ ಆಡಳಿತದ ವಿರುದ್ಧ ಯುವ ಸಮೂಹದ (ಜೆನ್ ಜಿ) ನಾಗರಿಕ ಹೋರಾಟ ನಡೆಯುತ್ತಿದೆ. ಇದನ್ನು ಹತ್ತಿಕ್ಕುತ್ತಿರುವ ಸರ್ವೋಚ್ಚ ನಾಯಕ ಸೈಯ್ಯದ್ ಅಯತೊಲ್ಲಾ ಆಲಿ ಖಮೇನಿ ಆಡಳಿತ ವಿರುದ್ಧ ಸೇನಾ ಕಾರ್ಯಾಚರಣೆಗೆ

#### ಇಸ್ರೇಲ್ ಹೈ ಅಲರ್ಟ್

ಇರಾನ್ ವಿರುದ್ಧ ಅಮೆರಿಕದ ಸಂಭಾವ್ಯ ಸೇನಾ ದಾಳಿ ಹಿನ್ನೆಲೆಯಲ್ಲಿ ಇಸ್ರೇಲ್‌ನಲ್ಲಿ ಹೈ ಅಲರ್ಟ್ ಘೋಷಣೆ ಮಾಡಲಾಗಿದೆ. ಗಡಿಯುದ್ದಕ್ಕೂ ವಾಯು ರಕ್ಷಣಾ ವ್ಯವಸ್ಥೆಯನ್ನು ಕಾರ್ಯಾಚರಣೆಗೊಳಿಸಲಾಗಿದೆ. ಇರಾನ್ ಬೆಂಬಲಿತ ಪಡೆಗಳ ದಾಳಿ ನಿಗ್ರಹಿಸಲು ರಕ್ಷಣಾ ಪಡೆಗಳನ್ನು ಸನ್ನದ್ಧ ಸ್ಥಿತಿಯಲ್ಲಿಡಲಾಗಿದೆ ಎಂದು ವರದಿಯಾಗಿದೆ.

ಅಮೆರಿಕ ಸಿದ್ಧತೆ ನಡೆಸಿದೆ. ದಾಳಿ ನಡೆಸುವ ವಿಧಾನ, ಟೆಹ್ರಾನ್ ಸೇರಿದಂತೆ ದಾಳಿ ನಡೆಸುವ ನಿಗದಿತ ಪ್ರದೇಶಗಳು, ಇರಾನ್ ಭದ್ರತಾ ಕೇಂದ್ರಗಳು ಒಳಗೊಂಡ ಸೇನಾ ನೆಲೆಗಳ ಸಂಪೂರ್ಣ ಮಾಹಿತಿಯೊಂದಿಗೆ ಸೇನಾ ಕಾರ್ಯಾಚರಣೆ ವಿಧಾನ ಕುರಿತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ವಿವರಿಸಲಾಗಿದೆ ಎಂದು ನ್ಯೂಯಾರ್ಕ್

#### ಇಸ್ರೇಲ್ ಜತೆ ಚರ್ಚೆ

ಈ ನಡುವೆ, ಇರಾನ್‌ನಲ್ಲಿನ ಸದ್ಯದ ಪರಿಸ್ಥಿತಿಯ ಬಗ್ಗೆ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಜತೆ ಚರ್ಚಿಸಿರುವ ಅಮೆರಿಕ ವಿದೇಶಾಂಗ ಸಚಿವ ಮಾರ್ಕೊ ರುಬಿಯೊ, ಇರಾನ್ ಧೈರ್ಯಶಾಲಿ ಜನರನ್ನು ಅಮೆರಿಕ ಬೆಂಬಲಿಸಲಿದೆ ಎಂದು ಹೇಳಿದ್ದಾರೆ.

ಟೈಮ್ಸ್ ವರದಿ ಮಾಡಿದೆ.

**ಎಚ್ಚರಿಕೆಯ ಹೆಜ್ಜೆ ಅಗತ್ಯ:** ಇರಾನ್ ವಿರುದ್ಧದ ಯಾವುದೇ ಸಂಭವನೀಯ ಸೇನಾ ಕಾರ್ಯಾಚರಣೆ ಎಚ್ಚರಿಕೆಯ ಹೆಜ್ಜೆಯಾಗಿರಬೇಕು. ಟೆಹ್ರಾನ್ ಅನ್ನು ದಂಡಿಸುವ ಪ್ರಯತ್ನ ಸೂಕ್ಷ್ಮತೆ ಹಾಗೂ ಸಮತೋಲದಿಂದ ಕೂಡಿರಬೇಕು ಎಂದು ಅಮೆರಿಕದ ಸೇನಾಧಿಕಾರಿಗಳು ಸರಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

## ಮಿನಿ ನ್ಯೂಸ್

### ಬಿಷ್ಣೋಯ್ ಗ್ಯಾಂಗ್ ಸದಸ್ಯಸರ ಬಂಧನ

**ನವದೆಹಲಿ:** ಉತ್ತರ ದೆಹಲಿಯಲ್ಲಿ ನಡೆದ ಗುಂಡಿನ ಚಕಮಕಿಯಲ್ಲಿ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ಗೆ ಸಂಬಂಧಿಸಿದ ಇಬ್ಬರು ವ್ಯಕ್ತಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಎನ್‌ಕೌಂಟರ್ ಸಮಯದಲ್ಲಿ, ಶಾರ್ಪ್ ಶೂಟರ್‌ಗಳಲ್ಲಿ ಒಬ್ಬನ ಕಾಲಿಗೆ ಗುಂಡು ತಗುಲಿದೆ ಎಂದು ಪೊಲೀಸರು ಮಾಹಿತಿ ಹಂಚಿಕೊಂಡಿದ್ದಾರೆ.

ಇತ್ತೀಚಿನ ದಿನಗಳಲ್ಲಿ ದೆಹಲಿಯ ಹೊರವಲಯದ ಜಿಮ್‌ನಲ್ಲಿ ನಡೆದ ಗುಂಡಿನ ದಾಳಿ ಮತ್ತು ಪೂರ್ವ ದೆಹಲಿಯ ವಿನೋದ್ ನಗರದಲ್ಲಿ ಉದ್ಯಮಿಯೊಬ್ಬರ ಮೇಲೆ ನಡೆದ ದಾಳಿಯಲ್ಲಿ ಈ ಇಬ್ಬರು ವ್ಯಕ್ತಿಗಳು ಭಾಗಿಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಉತ್ತರ ದೆಹಲಿಯ ಮಾದಕವಸ್ತು ವಿರೋಧಿ ತಂಡಕ್ಕೆ ಶಂಕಿತರು ಹಿರಾಂಕಿ ಮೋರ್ ಬಳಿ ಬರುತ್ತಾರೆ ಎಂಬ ಮಾಹಿತಿ ಸಿಕ್ಕಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರದೇಶದಲ್ಲಿ ಬಲೆ ಹಾಕಲಾಗಿತ್ತು. ಪೊಲೀಸರು ಅವರನ್ನು ತಡೆಯಲು ಪ್ರಯತ್ನಿಸಿದಾಗ, ಶಂಕಿತರು ಗುಂಡು ಹಾರಿಸಿದರು, ಪೊಲೀಸ್ ತಂಡವು ಪ್ರತೀಕಾರ ತೀರಿಸಿಕೊಂಡಿತು ಎಂದು ಮೂಲಗಳು ತಿಳಿಸಿವೆ. ಪ್ರತಿದಾಳಿಯ ಗುಂಡಿನ ದಾಳಿಯಲ್ಲಿ ಒಬ್ಬ ಆರೋಪಿ ಗಾಯಗೊಂಡಿದ್ದು, ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಆದರೆ ಅವನ ಸಹಚರನನ್ನು ಸ್ಥಳದಲ್ಲೇ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ, ಅವರಿಂದ ಎರಡು ಪಿಸ್ತೂಲ್‌ಗಳು ಮತ್ತು ಜೀವಂತ ಕಾರ್ಟ್ರಿಡ್ಜ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ.

### ಐಟಿ ಉದ್ಯೋಗಿ ಬಂಧಿಸಿಲ್ಲ: ಪರೇಖ್

**ನವದೆಹಲಿ:** ಅಮೆರಿಕ ವಲಸೆ ಮತ್ತು ಕಸ್ಟಮ್ಸ್ ಜಾರಿ ಅಧಿಕಾರಿಗಳು ಐಟಿ ಸಂಸ್ಥೆಯ ಯಾವುದೇ ಉದ್ಯೋಗಿಯನ್ನು ಬಂಧಿಸಿಲ್ಲ ಅಥವಾ ಗಡೀಪಾರು ಮಾಡಿಲ್ಲ ಎಂದು ಇನ್ಫೋಸಿಸ್ ಸಿಇಒ ಸಲೀಲ್ ಪರೇಖ್ ಸ್ಪಷ್ಟಪಡಿಸಿದ್ದಾರೆ. ಇನ್ಫೋಸಿಸ್ ಉದ್ಯೋಗಿಯೊಬ್ಬರನ್ನು ಅಮೆರಿಕದಲ್ಲಿ ಐಸಿಇ ಏಜೆಂಟರು ವಶಕ್ಕೆ ಪಡೆದಿದ್ದಾರೆ ಎಂದು ಎಕ್ಸ್ ನಲ್ಲಿ ಹಂಚಿಕೊಂಡ ವಿಚಾರ ವೈರಲ್ ಆದ ಒಂದು ದಿನದ ನಂತರ ಪರೇಖ್ ಅವರ ಸ್ಪಷ್ಟೀಕರಣ ನೀಡಿದ್ದಾರೆ. ಆದಾಗ್ಯೂ, ಇನ್ಫೋಸಿಸ್ ಉದ್ಯೋಗಿಯನ್ನು ಅಮೆರಿಕ ಪ್ರವೇಶಿಸಿದ ನಂತರ ಬಂಧಿಸಿ ಭಾರತಕ್ಕೆ ಕಳುಹಿಸಲಾಗಿದೆ ಎಂದು ಪರೇಖ್ ಹೇಳಿದ್ದಾರೆ. ಜನವರಿ 14ರಂದು ಕಂಪನಿಯ ಕ್ಯೂ3 ಗಳಿಕೆ ಸಮ್ಮೇಳನದಲ್ಲಿ ಮಾತನಾಡಿದ ಇನ್ಫೋಸಿಸ್ ನ ಸಿಇಒ ಮತ್ತು ಎಂಡಿ, ''ಯಾವುದೇ ಅಮೆರಿಕ ಪ್ರಾಧಿಕಾರವು ಇನ್ಫೋಸಿಸ್ ಉದ್ಯೋಗಿಯನ್ನು ಬಂಧಿಸಿಲ್ಲ. ಕೆಲವು ತಿಂಗಳ ಹಿಂದೆ, ನಮ್ಮ ಉದ್ಯೋಗಿಯೊಬ್ಬರನ್ನು ಅಮೆರಿಕ ಪ್ರವೇಶವನ್ನು ನಿರಾಕರಿಸಲಾಯಿತು ಮತ್ತು ಅವರನ್ನು ಭಾರತಕ್ಕೆ ಕಳುಹಿಸಲಾಯಿತು ಎಂದು ಹೇಳಿದ್ದಾರೆ.

### ನ್ಯೂಜೆರ್ಸಿಯಲ್ಲಿ 5, 7 ವರ್ಷದ ಮಕ್ಕಳನ್ನು ಕೊಂದ ಭಾರತೀಯ ಮೂಲದ ಮಹಿಳೆ

**ನ್ಯೂಯಾರ್ಕ್:** ಭಾರತೀಯ ಮೂಲದ ಮಹಿಳೆಯೊಬ್ಬರು ತನ್ನ ಇಬ್ಬರು ಮಕ್ಕಳನ್ನು ಹತ್ಯೆ ಮಾಡಿದ ಆರೋಪದ ಮೇಲೆ ನ್ಯೂಜೆರ್ಸಿಯಲ್ಲಿ ಬಂಧನಕ್ಕೆ ಒಳಗಾಗಿದ್ದಾರೆ. ನ್ಯೂಜೆರ್ಸಿಯ ಹಿಲ್ಸ್‌ಬರೋದ ಪ್ರಿಯತರ್ಶಿನಿ ನಟರಾಜನ್ (35) ತನ್ನ ಇಬ್ಬರು ಮಕ್ಕಳನ್ನು ಕೊಂದಿದ್ದಾರೆಂದು ಅಮೆರಿಕದ ಅಧಿಕಾರಿಗಳು ತಿಳಿಸಿದ್ದಾರೆ. ಜನವರಿ 13 ರಂದು ಸಂಜೆ ಸರಿಸುಮಾರು 6:45 ಕ್ಕೆ, ಮಕ್ಕಳ ತಂದೆ 911 ಕರೆ ಮಾಡಿ, ಕೊಲೆಯಾಗಿರುವ ವಿಚಾರವನ್ನು ತಿಳಿಸಿದ್ದರು. ಹತ್ಯೆಯಾದ ಮಕ್ಕಳ ತಂದೆ ಕೆಲಸ ಮುಗಿಸಿ ಮನೆಗೆ ಹಿಂತಿರುಗಿದ್ದರು. ಈ ವೇಳೆ ಅವರ 5 ಮತ್ತು 7 ವರ್ಷ ವಯಸ್ಸಿನ ಇಬ್ಬರು ಗಂಡು ಮಕ್ಕಳು ಪ್ರಜ್ಞಾಹೀನ ಸ್ಥಿತಿಯಲ್ಲಿ ಬಿದ್ದಿರುವುದನ್ನು ಕಂಡಿದ್ದಾರೆ. ತನ್ನ ಪತ್ನಿ ಮಕ್ಕಳನ್ನು ಹತ್ಯೆ ಮಾಡಿರುವುದನ್ನು ತಿಳಿದು ಪೊಲೀಸರಿಗೆ ವಿಷಯ ತಿಳಿಸಿದ್ದಾರೆ. ಘಟನಾ ಸ್ಥಳಕ್ಕೆ ಬಂದ ಪೊಲೀಸರು, ಇಬ್ಬರನ್ನೂ ವಶಕ್ಕೆ ಪಡೆದಿದ್ದಾರೆ.

### SAI ಹಾಸ್ಟೆಲ್‌ನಲ್ಲಿ ಇಬ್ಬರು ಬಾಲಕಿಯರು ನೇಣಿಗೆ ಶರಣು

**ತಿರುವನಂತಪುರಂ:** ಕೇರಳದ ಕೊಲ್ಲಂನಲ್ಲಿರುವ ಸ್ಪೋರ್ಟ್ಸ್ ಅಥಾರಿಟಿ ಆಫ್ ಇಂಡಿಯಾ ಹಾಸ್ಟೆಲ್‌ನಲ್ಲಿ ಇಬ್ಬರು ಹುಡುಗಿಯರ ಶವ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ. ಆತ್ಮಹತ್ಯೆಗೆ ಶರಣಾದ ಬಾಲಕಿಯರಲ್ಲಿ ಒಬ್ಬಳು ತಿರುವನಂತಪುರಂನವಳು ಹಾಗೂ ಮತ್ತೊಬ್ಬಳು ಕೋಯಿಕ್ಕೋಡ್ ಮೂಲದವಳಾಗಿದ್ದಳು. ಒಬ್ಬರ ವಯಸ್ಸು 17 ಮತ್ತು ಮತ್ತೊಬ್ಬಳ ವಯಸ್ಸು 15 ವರ್ಷ ಎಂದು ತಿಳಿದು ಬಂದಿದೆ. ಇಬ್ಬರು ವಿದ್ಯಾರ್ಥಿನಿಯರು ಬೆಳಗಿನ ತರಬೇತಿಗೆ ತೆರಳಿಲ್ಲದೇ ಇದ್ದಿದ್ದನ್ನು ಹಾಸ್ಟೆಲ್‌ನ ಇತರೆ ವಿದ್ಯಾರ್ಥಿಗಳು ಗಮನಿಸಿ, ರೂಮ್‌ನ ಬಾಗಿಲು ಬಡಿದಿದ್ದಾರೆ. ಈ ವೇಳೆ ಯಾವುದೇ ಪ್ರತಿಕ್ರಿಯೆ ಬರಲಿಲ್ಲ, ಈ ಬಗ್ಗೆ ಹಾಸ್ಟೆಲ್ ಸಿಬ್ಬಂದಿಗೆ ಉಳಿದ ವಿದ್ಯಾರ್ಥಿಗಳು ಮಾಹಿತಿ ನೀಡಿದ್ದಾರೆ. ಬಳಿಕ ಬಾಗಿಲು ಒಡೆದು ನೋಡಿದಾಗ ಇಬ್ಬರೂ ಹುಡುಗಿಯರ ಶವ ಕೋಣೆಯಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ. 15 ವರ್ಷದ ಬಾಲಕಿ ಬೇರೆ ಕೋಣೆಯಲ್ಲಿ ವಾಸಿಸುತ್ತಿದ್ದಳು. ರಾತ್ರಿ ಇನ್ನೊಂದು ಹುಡುಗಿಯ ಕೋಣೆಯಲ್ಲಿ ಬಂದು ತಂಗಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ. 17 ವರ್ಷದ ಬಾಲಕಿ 12ನೇ ತರಗತಿಯಲ್ಲಿ ಓದುತ್ತಿದ್ದು, ಅಥ್ಲೆಟಿಕ್ಸ್ ತರಬೇತಿ ಪಡೆಯುತ್ತಿದ್ದಳು. ಮತ್ತೊಬ್ಬಳು 10ನೇ ತರಗತಿ ವಿದ್ಯಾರ್ಥಿನಿಯಾಗಿದ್ದು, ಕಬಡ್ಡಿ ತರಬೇತಿ ಪಡೆಯುತ್ತಿದ್ದಳು. ಕೊಠಡಿಯಿಂದ ಯಾವುದೇ ಡೆತ್‌ನೋಟ್ ಪತ್ತೆಯಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

## ಜಿದ್ದಾ ಜಿದ್ದಿ ಹೋರಾಟಕ್ಕೆ ಸಾಕ್ಷಿಯಾದ ಬಿಎಂಸಿ ಚುನಾವಣೆ

**ಮುಂಬೈ:** ಮಹಾರಾಷ್ಟ್ರದಾದ್ಯಂತ ಸ್ಥಳೀಯ ಸಂಸ್ಥೆ ಚುನಾವಣೆ ಮತದಾನ ಇಂದು ಬೆಳಿಗ್ಗೆ ಆರಂಭಗೊಂಡಿದ್ದು ಪ್ರಮುಖವಾಗಿ ಬೃಹತ್ ಮುಂಬೈ ಪಾಲಿಕೆಗೆ ಜಿದ್ದಾ ಜಿದ್ದಿ ಹೋರಾಟ ಗಮನ ಸೆಳೆದಿದೆ. ಇಲ್ಲಿ ಬಿಜೆಪಿ ನೇತೃತ್ವದ ಮಹಾಯುತಿ ಮೈತ್ರಿಕೂಟವು ಭಾರತದ ಅತಿದೊಡ್ಡ ಮತ್ತು ಶ್ರೀಮಂತ ನಾಗರಿಕ ಸಂಸ್ಥೆಯ ನಿಯಂತ್ರಣಕ್ಕಾಗಿ ಮತ್ತೆ ಒಂದಾದ ಠಾಕ್ರೆ ಸೋದರ ಸಂಬಂಧಿಗಳೊಂದಿಗೆ ತೀವ್ರ ಹಣಾಹಣಿ ನಡೆಸಿದೆ.

ಪುರಸಭೆ ,ಪಾಲಿಕೆ ಸೇರಿ ಒಟ್ಟು 2,869 ಸ್ಥಾನಗಳಿಗೆ ಮತದಾನ ಬೆಳಿಗ್ಗೆ 7.30 ಕ್ಕೆ ಬಿಗಿ ಭದ್ರತೆಯ ನಡುವೆ ಪ್ರಾರಂಭವಾಯಿತು ಮತ್ತು ಸಂಜೆ 5.30 ಕ್ಕೆ ಕೊನೆಗೊಳ್ಳುತ್ತದೆ. ಒಟ್ಟು 3.48 ಕೋಟಿ ಮತದಾರರು 15,931 ಅಭ್ಯರ್ಥಿಗಳ ಭವಿಷ್ಯವನ್ನು ನಿರ್ಧರಿಸಲಿದ್ದಾರೆ. ವಾರ್ಷಿಕ ಬಜೆಟ್ ರೂ. 74,400 ಕೋಟಿಗಿಂತ ಹೆಚ್ಚಿರುವ ಬೃಹನ್ಮುಂಬೈ ಪಾಲಿಕೆ (ಬಿಎಂಸಿ)ಯಲ್ಲಿ, ಒಂಬತ್ತು ವರ್ಷಗಳ ನಂತರ ನಡೆಯುತ್ತಿರುವ ಚುನಾವಣೆಯಲ್ಲಿ 227 ಸ್ಥಾನಗಳಿಗೆ 1,700 ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದಾರೆ. ಚುನಾವಣೆಗಳ ಮೇಲ್ವಿಚಾರಣೆಗೆ ಮುಂಬೈನಾದ್ಯಂತ 25,000 ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಅವಿಭಜಿತ ಶಿವಸೇನೆಯು 25 ವರ್ಷಗಳ ಕಾಲ (1997-2022) ಭಾರತದ ಅತ್ಯಂತ ಶ್ರೀಮಂತ ನಾಗರಿಕ ಸಂಸ್ಥೆಯ ಮೇಲೆ ಹಿಡಿತ



ಮುಂಬೈ ಹೊರತುಪಡಿಸಿ, ಇತರ ನಗರ ಸಂಸ್ಥೆಗಳು ಬಹು-ಸದಸ್ಯ ವಾರ್ಡ್‌ಗಳನ್ನು ಹೊಂದಿವೆ. ಮತ ಎಣಿಕೆ ಜನವರಿ 16 ರಂದು ನಡೆಯಲಿದೆ.2022 ರಲ್ಲಿ ಶಿವಸೇನೆಯಲ್ಲಿ ವಿಭಜನೆಯಾದ ನಂತರ, ಪ್ರಸ್ತುತ ಉಪಮುಖ್ಯಮಂತ್ರಿಯಾಗಿರುವ ಏಕನಾಥ್ ಶಿಂಧೆ ಅವರು ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡು ನಂತರ ಮೊದಲ ಬಿಎಂಸಿ ಚುನಾವಣೆ ಇದಾಗಿದೆ.

ಮತ ಎಣಿಕೆ ಜ. 16 ರಂದು

ಸಾಧಿಸಿತು.ಚುನಾವಣೆಗೆ ಮುನ್ನ ನಡೆದ ಮಹತ್ವದ ರಾಜಕೀಯ ತಿರುವುಗಳಲ್ಲಿ, ಶಿವಸೇನೆ (ಯುಬಿಟಿ) ಮತ್ತು ಎಂಎನ್‌ಎಸ್ ಮುಖ್ಯಸ್ಥರಾಗಿರುವ ಉದ್ಧವ್ ಮತ್ತು ರಾಜ್ ಠಾಕ್ರೆ, ಎರಡು ದಶಕಗಳ ನಂತರ ಮರಾಠಿ ಮತಗಳನ್ನು ಕ್ರೋಢೀಕರಿಸುವ ಪ್ರಯತ್ನದಲ್ಲಿ ಕಳೆದ ತಿಂಗಳು ಮತ್ತೆ ಒಂದಾದರು, ಪ್ರತಿಸ್ಪರ್ಧಿ ಎನ್‌ಸಿಪಿ ಬಣಗಳು ಪುಣೆ ಮತ್ತು ಪಿಂಪ್ರಿ-ಚಿಂಚ್ ವಾಡ್‌ನಲ್ಲಿ ಸ್ಥಳೀಯ ಮೈತ್ರಿ ಮಾಡಿಕೊಂಡಿದ್ದರೂ ಸಹ.

ಮಹಾರಾಷ್ಟ್ರದಲ್ಲಿ ಒಂದು ಕಾಲದಲ್ಲಿ ಪ್ರಬಲ ರಾಜಕೀಯ ಶಕ್ತಿಯಾಗಿದ್ದ ಕಾಂಗ್ರೆಸ್, ತನ್ನ ಮಹಾ ವಿಕಾಸ್ ಅಘಾಡಿ ಮಿತ್ರಪಕ್ಷಗಳಾದ ಶಿವಸೇನೆ (ಯುಬಿಟಿ) ಮತ್ತು ಎನ್‌ಸಿಪಿ (ಎಸ್‌ಪಿ) ಗಳ ನೆರಳಿನಿಂದ ಹೊರಬಂದು ಮುಂಬೈನಲ್ಲಿ ತನ್ನ ಅಸ್ತಿತ್ವವನ್ನು ಪ್ರತಿಪಾದಿಸಿದೆ.

## ಛತ್ತೀಸ್‌ಗಢದಲ್ಲಿ ಶರಣಾದ 52 ಮಾವೋವಾದಿಗಳು

**ಛತ್ತೀಸ್‌ಗಢ:** ನಕ್ಸಲ್ ನಿಗ್ರಹ ಕಾರ್ಯಾಚರಣೆಯಲ್ಲಿ ತೊಡಗಿಸಿಕೊಂಡಿದ್ದ ಭದ್ರತಾ ಪಡೆಗಳಿಗೆ ಮತ್ತು ಛತ್ತೀಸ್‌ಗಢ ಪೊಲೀಸರಿಗೆ ಗುರುವಾರ ದೊಡ್ಡ ಮಟ್ಟದ ಯಶಸ್ಸು ದೊರೆತಿದೆ. ರಾಜ್ಯದ ಬಿಜಾಪುರ ಜಿಲ್ಲೆಯಲ್ಲಿ ಬರೋಬ್ಬರಿ 52 ಜನ ಮಾವೋವಾದಿಗಳು ಹಿರಿಯ ಪೊಲೀಸ್ ಅಧಿಕಾರಿಗಳ ಸಮ್ಮುಖದಲ್ಲಿ ಶಸ್ತ್ರತ್ಯಾಗ ಮಾಡಿ ಶರಣಾಗಿದ್ದಾರೆ. ವಿಶೇಷವೆಂದರೆ, ಶರಣಾದವರಲ್ಲಿ 49 ನಕ್ಸಲರ ತಲೆಗೆ ಸರ್ಕಾರ ಒಟ್ಟಾರೆಯಾಗಿ 1.41 ಕೋಟಿ ರೂಪಾಯಿಗೂ ಅಧಿಕ ಬಹುಮಾನವನ್ನು ಘೋಷಿಸಿತ್ತು.

ದೇಶದಿಂದ ಎಡಪಂಥೀಯ ತೀವ್ರವಾದವನ್ನು ನಿರ್ಮೂಲನೆ ಮಾಡಲು ಕೇಂದ್ರ ಸರ್ಕಾರವು ಇದೇ ಮಾರ್ಚ್ 31 ರ (2026) ಗಡುವನ್ನು ನಿಗದಿಪಡಿಸಿದೆ. ಈ ಹಿನ್ನೆಲೆಯಲ್ಲಿ ಭದ್ರತಾ ಪಡೆಗಳ ಕಾರ್ಯಾಚರಣೆ ಮತ್ತು ಸರ್ಕಾರದ ಪುನರ್ವಸತಿ ನೀತಿಗಳು ನಕ್ಸಲರನ್ನು ಮುಖ್ಯವಾಹಿನಿಗೆ ತರುವಲ್ಲಿ ಯಶಸ್ವಿಯಾಗುತ್ತಿವೆ.

ಬಿಜಾಪುರ ಎಸ್ಪಿ ಜಿತೇಂದ್ರ ಕುಮಾರ್ ಯಾದವ್ ಅವರು ನೀಡಿರುವ ಮಾಹಿತಿಯ ಪ್ರಕಾರ, ಶರಣಾದ 52 ಮಾವೋವಾದಿಗಳಲ್ಲಿ 21 ಜನ ಮಹಿಳೆಯರಿದ್ದಾರೆ. ಇವರೆಲ್ಲರೂ ದಂಡಕಾರಣ್ಯ ವಿಶೇಷ ವಲಯ ಸಮಿತಿ, ಆಂಧ್ರ-ಒಡಿಶಾ ಗಡಿ ವಿಭಾಗ ಮತ್ತು ಮಹಾರಾಷ್ಟ್ರದ ಭಾಮರಗಢ ಏರಿಯಾ ಕಮಿಟಿಗಳಲ್ಲಿ ಸಕ್ರಿಯರಾಗಿದ್ದರು.

ಲಖು ಕರಮ್ ಅಲಿಯಾಸ್ ಅನಿಲ್ (32): ಮಾವೋವಾದಿಗಳ ಡಿವಿಷನಲ್ ಕಮಿಟಿ ಸದಸ್ಯ. ಇತನ ತಲೆಗೆ 8 ಲಕ್ಷ ರೂ. ಬಹುಮಾನವಿತ್ತು. ಲಕ್ಷ್ಮಿ ಮದ್ವಿ (28):



ಪ್ಲಟೂನ್ ಪಾರ್ಟಿ ಕಮಿಟಿ ಸದಸ್ಯೆ (8 ಲಕ್ಷ ರೂ. ಬಹುಮಾನ). ಚಿನ್ನಿ ಸೋಧಿ ಅಲಿಯಾಸ್ ಶಾಂತಿ (28): ಪ್ಲಟೂನ್ ಪಾರ್ಟಿ ಕಮಿಟಿ ಸದಸ್ಯೆ (8 ಲಕ್ಷ ರೂ. ಬಹುಮಾನ). ಇವರಲ್ಲದೆ, 13 ನಕ್ಸಲರ ತಲೆಗೆ ತಲಾ 5 ಲಕ್ಷ ರೂ., 19 ನಕ್ಸಲರ ತಲೆಗೆ ತಲಾ 2 ಲಕ್ಷ ರೂ. ಮತ್ತು 14 ಸದಸ್ಯರ ತಲೆಗೆ ತಲಾ 1 ಲಕ್ಷ ರೂ. ಬಹುಮಾನ ನಿಗದಿಪಡಿಸಲಾಗಿತ್ತು. ಒಟ್ಟಾರೆಯಾಗಿ ಶರಣಾದ 49 ಜನರ ಮೇಲಿದ್ದ ಒಟ್ಟು ಬಹುಮಾನದ ಮೊತ್ತ 1.41 ಕೋಟಿ ರೂ.ಗಳಷ್ಟಾಗುತ್ತದೆ.

**ಪೂನಾ ಮರ್ಗೆಮ್' ಅಭಿಯಾನದ ಯಶಸ್ಸು:**

ಮಾವೋವಾದಿಗಳು ಹಿಂಸಾಮಾರ್ಗ ಬಿಟ್ಟು ಜನಜೀವನದ ಮುಖ್ಯವಾಹಿನಿಗೆ ಮರಳಲು ಬಿಜಾಪುರ ಪೊಲೀಸರು ಹಮ್ಮಿಕೊಂಡಿರುವ 'ಪೂನಾ ಮರ್ಗೆಮ್' (ಹೊಸ ಹಾದಿ) ಅಭಿಯಾನವು ಈ ಶರಣಾಗತಿಗೆ ಪ್ರಮುಖ ಕಾರಣವಾಗಿದೆ. ರಾಜ್ಯ ಸರ್ಕಾರದ ಶರಣಾಗತಿ ಮತ್ತು ಪುನರ್ವಸತಿ ನೀತಿಗೆ ಆಕರ್ಷಿತರಾಗಿ, ಹಿಂಸೆಯಿಂದ ಬೇಸತ್ತು ಇವರು ಶಸ್ತ್ರತ್ಯಾಗ ಮಾಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಮೋದಿ ವಿರುದ್ಧ ಖರ್ಗೆ ಟೀಕಾ ಪ್ರಹಾರ

**ವಾರಣಾಸಿ:** ವಾರಣಾಸಿಯ ಮಣಿಕರ್ಣಿಕಾ ಘಾಟ್ ಪುನರಾಭಿವೃದ್ಧಿ ಕುರಿತು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಮೋದಿ ಪ್ರತಿ ಐತಿಹಾಸಿಕ ಪರಂಪರೆಯನ್ನು ಅಳಿಸಿಹಾಕಿ ಸರಳವಾಗಿ ತಮ್ಮದೇ ಆದ ನಾಮಫಲಕವನ್ನು ಅಂಟಿಸಲು ಬಯಸುತ್ತಾರೆ ಎಂದು ಖರ್ಗೆ ಆರೋಪಿಸಿದರು.

ಗುಪ್ತರ ಕಾಲದಲ್ಲಿ ವಿವರಿಸಲ್ಪಟ್ಟ ಮತ್ತು ನಂತರ ಲೋಕಮಾತಾ ಅಹಲ್ಯಾಬಾಯಿ ಹೋಳ್ಕರ್ ಅವರಿಂದ ನವೀಕರಿಸಲ್ಪಟ್ಟ ಮಣಿಕರ್ಣಿಕಾ ಘಾಟ್‌ನ ಅಪರೂಪದ ಪ್ರಾಚೀನ ಪರಂಪರೆಯನ್ನು ನವೀಕರಣದ ನೆಪದಲ್ಲಿ ಕೆಡವುವ ಅಪರಾಧವನ್ನು ನೀವು ಮಾಡಿದ್ದೀರಿ ಎಂದು ಖರ್ಗೆ ಎಕ್ಸ್‌ನಲ್ಲಿ ಪೋಸ್ಟ್‌ನಲ್ಲಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸುಂದರೀಕರಣ ಮತ್ತು ವಾಣಿಜ್ಯೀಕರಣದ ಹೆಸರಿನಲ್ಲಿ, ಪ್ರಧಾನಿ ಮೋದಿ ವಾರಣಾಸಿಯ ಮಣಿಕರ್ಣಿಕಾ ಘಾಟ್‌ನಲ್ಲಿ ಶತಮಾನಗಳಷ್ಟು ಹಳೆಯದಾದ ಧಾರ್ಮಿಕ, ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಪರಂಪರೆಯನ್ನು ಕೆಡವಲು ಬುಲ್ಡೋಜರ್‌ಗಳಿಗೆ ಆದೇಶಿಸಿದ್ದಾರೆ ಎಂದು ಖರ್ಗೆ ಹೇಳಿದರು.

ನರೇಂದ್ರ ಮೋದಿ ಜಿ... ನೀವು ಪ್ರತಿಯೊಂದು ಐತಿಹಾಸಿಕ ಪರಂಪರೆಯನ್ನು ಅಳಿಸಿಹಾಕಲು ಮತ್ತು ನಿಮ್ಮ ಸ್ವಂತ ನಾಮಫಲಕವನ್ನು ಅಂಟಿಸಲು



ಬಯಸುತ್ತೀರಿ ಎಂದು ಖರ್ಗೆ ತಮ್ಮ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಮಣಿಕರ್ಣಿಕಾ ಘಾಟ್‌ನ ಪುನರಾಭಿವೃದ್ಧಿ ಯೋಜನೆಯಡಿಯಲ್ಲಿ ತೆರವು ಕಾರ್ಯಾಚರಣೆಯನ್ನು ಪ್ರತಿಭಟನಾಕಾರರು ವಿರೋಧಿಸಿದ್ದಾರೆ ಮತ್ತು ಶತಮಾನಗಳಷ್ಟು ಹಳೆಯದಾದ ಅಹಲ್ಯಾಬಾಯಿ ಹೋಳ್ಕರ್ ಅವರ ವಿಗ್ರಹಕ್ಕೆ ಹಾನಿ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಆದರೆ ಜಿಲ್ಲಾಡಳಿತ ಈ ಆರೋಪವನ್ನು ನಿರಾಕರಿಸಿದೆ. ಜಿಲ್ಲಾ ಮ್ಯಾಜಿಸ್ಟ್ರೇಟ್ ಸತ್ಯೇಂದ್ರ ಕುಮಾರ್ ಕಲಾಕೃತಿಗಳನ್ನು ಸಂಸ್ಕೃತಿ ಇಲಾಖೆಯಿಂದ ಭದ್ರಪಡಿಸಲಾಗಿದೆ ಮತ್ತು ಕೆಲಸ ಪೂರ್ಣಗೊಂಡ ನಂತರ ಅವುಗಳ ಮೂಲ ರೂಪದಲ್ಲಿ ಮರುಸ್ಥಾಪಿಸಲಾಗುವುದು ಎಂದು ಹೇಳಿದರು.

ಪ್ರತಿದಿನ ಹೆಚ್ಚಿನ ಸಂಖ್ಯೆಯ ಅಂತ್ಯಕ್ರಿಯೆಗಳಿಗೆ ಸಾಕ್ಷಿಯಾಗುವ ಘಾಟ್‌ನಲ್ಲಿ ನೈರ್ಮಲ್ಯ ಮತ್ತು ಸ್ಥಳ ನಿರ್ವಹಣೆಯನ್ನು ಸುಧಾರಿಸುವ ಗುರಿಯನ್ನು ಈ ನವೀಕರಣ ಹೊಂದಿದೆ ಎಂದು ಅವರು ಹೇಳಿದರು.

## ಶಾಂತಿ ಒಪ್ಪಂದದ ಮುಖಾಂತರ ಯುದ್ಧವನ್ನು ಅಂತ್ಯಗೊಳಿಸಲು ಸಿದ್ಧತೆ

**ವಾಷಿಂಗ್ಟನ್:** ರಷ್ಯಾ ಹಾಗೂ ಉಕ್ರೇನ್ ನಡುವೆ ಯುದ್ದ ಆರಂಭವಾಗಿ ಸುಮಾರು ವರ್ಷಗಳೇ ಕಳೆದಿವೆ. ಈವರೆಗೂ ಕದನವಿರಾಮ ಮಾತ್ರ ಘೋಷಣೆಯಾಗಿಲ್ಲ, ಸದ್ಯ ಅಮೆರಿಕಾ ಅಧ್ಯಕ್ಷ ಟ್ರಂಪ್ ಮಧ್ಯಸ್ಥಿಕೆ ವಹಿಸಿ ಉಕ್ರೇನ್ ಶಾಂತಿ ಒಪ್ಪಂದದ ಮುಖಾಂತರ ಯುದ್ದವನ್ನು ಅಂತ್ಯಗೊಳಿಸಲು ಸಿದ್ದತೆ ನಡೆಸುತ್ತಿದ್ದಾರೆ. ಆದರೆ, ಈ ಮಾತುಕತೆಗಳು ಆರಂಭವಾಗಿ ಹಲವು ದಿನಗಳೂ ಕಳೆದರೂ ಯಾವುದೇ ಘಟ್ಟವನ್ನು ತಲುಪದೆ ಇದೆ. ಇದಕ್ಕೆ ಕಾರಣ ಪುಟಿನ್ ಎಂದು ಈವರೆಗೂ ಹೇಳಲಾಗುತ್ತಿತ್ತು.ಆದರೆ ಅದು ಸುಳ್ಳು ಎಂದಿರುವ ಟ್ರಂಪ್ ಕದನವಿರಾಮ ಒಪ್ಪಂದ ಆಗದೇ ಇರುವುದಕ್ಕೆ ನಿಜವಾದ ಕಾರಣ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅಲ್ಲ.. ಬದಲಾಗಿ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಎಂಬ ಅಚ್ಚರಿಯ ಹೇಳಿಕೆಯನ್ನು ನೀಡಿದ್ದಾರೆ.

ಇತ್ತೀಚೆಗೆ ರಾಯಿಟರ್ಸ್ ಜೊತೆಗೆ ಶ್ವೇತಭವನದಲ್ಲಿ ನಡೆಸಿದ ಎಕ್ಸ್‌ಕ್ಲೂಸಿವ್ ಸಂದರ್ಶನದಲ್ಲಿ ಮಾತನಾಡಿರುವ ಟ್ರಂಪ್ ರಷ್ಯಾ ಅಧ್ಯಕ್ಷ ಪುಟಿನ್ ಸುಮಾರು ನಾಲ್ಕು ವರ್ಷಗಳಿಂದ ನಡೆಯುತ್ತಿರುವ ಉಕ್ರೇನ್ ಯುದ್ಧವನ್ನು ಕೊನೆಗೊಳಿಸಲು ಸಿದ್ಧರಿದ್ದಾರೆ. ಆದರೆ, ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿ ಅವರು ಶಾಂತಿ ಒಪ್ಪಂದಕ್ಕೆ ಹಿಂಜರಿಯುತ್ತಿದ್ದಾರೆ ಎಂದು ಟ್ರಂಪ್ ಹೇಳಿದ್ದಾರೆ.

ಈ ಕುರಿತು ಎರಡನೇ ಮಹಾಯುದ್ಧದ ನಂತರದ ಯುರೋಪಿನ ಅತಿ ದೊಡ್ಡ ಭೂ ಸಂಘರ್ಷವನ್ನು ಅಮೆರಿಕಾ



- ರಷ್ಯಾ-ಉಕ್ರೇನ್ ಶಾಂತಿಒಪ್ಪಂದ ತಡವಾಗುತ್ತಿರುವುದಕ್ಕೆ ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿ ಕಾರಣ ಎಂದ ಟ್ರಂಪ್
- ಪುಟಿನ್ 4 ವರ್ಷಗಳ ಯುದ್ದವನ್ನು ಕೊನೆಗೊಳಿಸಲು ಸಿದ್ದವಿದ್ದಾರೆಂದು ಹೇಳಿದ ಟ್ರಂಪ್
- ಝೆಲೆನ್ಸ್ಕಿಗೆ ಈ ನಿರ್ಧಾರಕ್ಕೆ ಬರಲು ಕಷ್ಟವಾಗುತ್ತಿದೆ ಎಂಬ ಟ್ರಂಪ್ ಮಾತಿನ ಅರ್ಥವೇನು?

ನೇತೃತ್ವದ ಮಾತುಕತೆಗಳು ಇನ್ನೂ ಏಕೆ ಪರಿಹರಿಸಿಲ್ಲ ಎಂಬ ಪ್ರಶ್ನೆಗೆ ಒಂದೇ ಮಾತಿನಲ್ಲಿ ಉತ್ತರಿಸಿದ ಟ್ರಂಪ್ ಝೆಲೆನ್ಸ್ಕಿ ಎಂದು ಉತ್ತರಿಸಿದ್ದಾರೆ. ಈ ವೇಳೆ, ನಾನು ಅಧ್ಯಕ್ಷ ಪುಟಿನ್ ಒಪ್ಪಂದ ಮಾಡಿಕೊಳ್ಳಲು ಸಿದ್ಧರಿದ್ದಾರೆ ಎಂದು ಭಾವಿಸುತ್ತೇನೆ ಎಂದಿರುವ ಟ್ರಂಪ್, ಆದರೆ ನನಗೆ ತಿಳಿದಿರುವಂತೆ ಉಕ್ರೇನ್ ಒಪ್ಪಂದ ಮಾಡಿಕೊಳ್ಳಲು ಅಷ್ಟಾಗಿ ಸಿದ್ಧವಿಲ್ಲ ಎಂದು ನನಗೆ ಅನಿಸುತ್ತದೆ ಎಂದು ತಿಳಿಸಿದ್ದಾರೆ.

**ಝೆಲೆನ್ಸ್ಕಿ ನಿರ್ಧಾರ ತೆಗೆದುಕೊಳ್ಳಲು ಕಷ್ಟಪಡುತ್ತಿದ್ದಾರೆ ಎಂದ ಟ್ರಂಪ್:** ಇನ್ನು, ಯಾಕೆ ಝೆಲೆನ್ಸ್ಕಿ ಶಾಂತಿ ಒಪ್ಪಂದಕ್ಕೆ ಸಿದ್ಧವಾಗಿಲ್ಲ ಎಂದು ನಿಮಗೆ ಅನಿಸುತ್ತದೆ ಎಂದು ಕೇಳಿದ್ದಕ್ಕೆ ಟ್ರಂಪ್ ಬಹುಶಃ ಝೆಲೆನ್ಸ್ಕಿ ಆ ನಿರ್ಧಾರಕ್ಕೆ ತಲುಪಲು ಕಷ್ಟಪಡುತ್ತಿರಬಹುದು ಎಂದು ಮಾತ್ರ ಹೇಳಿದ್ದು, ಹೆಚ್ಚಿನ ವಿವರಣೆಯನ್ನು ನೀಡಿಲ್ಲ.

ಇದೇ ವೇಳೆ ಸಂದರ್ಶನದಲ್ಲಿ ಮುಂದಿನವಾರ ಸ್ವಿಟ್ಜರ್ಲ್ಯಾಂಡ್‌ನ ದಾವೋಸ್‌ನಲ್ಲಿ ನಡೆಯಲಿರುವ ವಿಶ್ವ ಆರ್ಥಿಕ ವೇದಿಕೆಯಲ್ಲಿ ಝೆಲೆನ್ಸ್ಕಿ ಸಹ ಭಾಗಿಯಾಗಲಿದ್ದು, ಈ ಸಂದರ್ಭದಲ್ಲಿ ನೀವು ಭೇಟಿಯಾಗುತ್ತಿರಾ ಎಂಬ ಪ್ರಶ್ನೆಗೆ ಟ್ರಂಪ್ ಉತ್ತರಿಸಿ ನಾನು ಅಲ್ಲಿಗೆ ಹೋಗುತ್ತಿದ್ದು, ಬಹುಶಃ ಭೇಟಿಯಾಗಬಹುದು ಆದರೆ, ಈ ಬಗ್ಗೆ ಯಾವುದೇ ಯೋಜನೆಗಳನ್ನು ಈವರೆಗೂ ಸಿದ್ದಪಡಿಸಿಲ್ಲ ಎಂದು ತಿಳಿಸಿದ್ದಾರೆ.

ರಷ್ಯಾ-ಉಕ್ರೇನ್ ಶಾಂತಿ ಮಾತುಕತೆ ಸ್ಥಗಿತಗೊಂಡಿದ್ದು, ಉಕ್ರೇನ್ ಪರವಾಗಿ ನಿಂತಿರುವ ಯುರೋಪಿಯನ್ ಮಿತ್ರರಾಷ್ಟ್ರಗಳು ರಷ್ಯಾ ಯುದ್ಧವನ್ನು ಕೊನೆಗೊಳಿಸಲು ಆಸಕ್ತಿ ತೋರಿಸುತ್ತಿಲ್ಲ ಎಂದು ಹೇಳುತ್ತಿದ್ದಾರೆ. ಆದರೆ ಶಾಂತಿ ಮಾತುಕತೆಗೆ ಮಧ್ಯಸ್ಥಿಕೆ ವಹಿಸಿರುವ ಟ್ರಂಪ್‌ನ ಇತ್ತೀಚಿನ ಹೇಳಿಕೆ ಇದಕ್ಕೆ ತದ್ವಿರುದ್ಧವಾಗಿದೆ.

# ಸ್ಥಳೀಯ ಶಸ್ತ್ರಾಸ್ತ್ರಗಳೊಂದಿಗೆ ಭವಿಷ್ಯದ ಯುದ್ಧಗಳಿಗೆ ಸಿದ್ಧತೆ ನಡೆಸುತ್ತಿದ್ದೇವೆ: ಸೇನಾ ಮುಖ್ಯಸ್ಥ

## ಸೇನೆಗೆ ಭವಿಷ್ಯದಲ್ಲಿ ಭಾರತದಲ್ಲಿ ವಿನ್ಯಾಸಗೊಳಿಸಲಾದ ಮತ್ತು ಅಭಿವೃದ್ಧಿಪಡಿಸಲಾದ ಉಪಕರಣಗಳು ಬೇಕಾಗುತ್ತವೆ

**ಜೈಪುರ:** ಭವಿಷ್ಯಕ್ಕೆ ಯುದ್ಧಗಳಿಗೆ ನಾವು ಸಿದ್ಧವಾಗಿದ್ದೇವೆ ಎಂದು ಭಾರತೀಯ ಸೇನಾ ಪಡೆ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಹೇಳಿದ್ದಾರೆ. ಸ್ಥಳೀಯ ಉಪಕರಣಗಳ ಅಗತ್ಯವಾಗಿದ್ದು ಈ ನಿಟ್ಟಿನಲ್ಲಿ ಇದನ್ನು ಕಾರ್ಯತಂತ್ರದ ಅವಶ್ಯಕತೆ ಇದೆ ಎಂದಿರುವ ಅವರು ಸ್ವಾವಲಂಬನೆಗೆ ದೇಶೀಕರಣವೇ ಕೀಲಿಕೈ ಎಂದಿದ್ದಾರೆ.

ಭಾರತೀಯ ಸೇನೆಯು ಭವಿಷ್ಯಕ್ಕೆ ಸಿದ್ಧವಾಗಿರುವ ಪಡೆಯಾಗಿ ಮುಂದುವರಿಯುತ್ತಿದೆ, ಉತ್ತಮ ತರಬೇತಿ ಪಡೆದ ಸೈನಿಕರು, ಆಧುನಿಕ ಉಪಕರಣಗಳು ಮತ್ತು ಬಹುಕ್ಷೇತ್ರದ ಕಾರ್ಯಾಚರಣೆಯ ಸಾಮರ್ಥ್ಯಗಳನ್ನು ಹೊಂದಿದೆ. ಸೈನಿಕನನ್ನು ಇನ್ನಷ್ಟು ಸಮರ್ಥರನ್ನಾಗಿ ಮಾಡಲು ತಂತ್ರಜ್ಞಾನವನ್ನು ಬಳಸಲಾಗುತ್ತಿದೆ ಎಂದು ಅವರು ಸೇನಾ ದಿನದ ಮೆರವಣಿಗೆಯ ನಂತರ ಜೈಪುರದಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ಕಳೆದ ಕೆಲವು ವರ್ಷಗಳಲ್ಲಿ ಭಾರತೀಯ ಸೇನೆಯ ಚಿಂತನೆಯಲ್ಲಿ ಸ್ಪಷ್ಟ ಬದಲಾವಣೆಯಾಗಿದೆ, ನಾವು ಪ್ರಸ್ತುತ ಸವಾಲುಗಳನ್ನು ಎದುರಿಸುವುದಲ್ಲದೆ ಭವಿಷ್ಯದ ಯುದ್ಧಗಳಿಗೂ ತಯಾರಿ ನಡೆಸುತ್ತಿದ್ದೇವೆ. ಈ ದಿಕ್ಕಿನಲ್ಲಿ ಹೊಸ ರಚನೆಗಳನ್ನು ರಚಿಸಲಾಗುತ್ತಿದೆ, ಭವಿಷ್ಯದ ಅಗತ್ಯಗಳಿಗೆ ಅನುಗುಣವಾಗಿ ಅವುಗಳನ್ನು ಸಜ್ಜುಗೊಳಿಸಲಾಗುತ್ತಿದೆ ಮತ್ತು ತರಬೇತಿ ನೀಡಲಾಗುತ್ತಿದೆ ಎಂದು ಅವರು ಹೇಳಿದರು.

ಸೇನಾ ದಿನದ ಮೆರವಣಿಗೆ

ಭೈರವ ಬೆಟಾಲಿಯನ್ ಮತ್ತು ಶಕ್ತಿ ಬಾನ್ ರೆಜಿಮೆಂಟ್ ನಂತಹ ಹೊಸ ಘಟಕಗಳನ್ನು ಬೆಳೆಸಲಾಗಿದೆ ಎಂದು ಅವರು ಹೇಳಿದರು. ಇದು ಭವಿಷ್ಯದ ಸವಾಲುಗಳಿಗೆ ಹೊಂದಿಕೊಂಡಂತೆ ಚುರುಕಾದ, ಸ್ಪಂದಿಸುವ ಮತ್ತು ಮಿಷನ್ ಆಧಾರಿತ ಸೈನ್ಯದ ಸೃಷ್ಟಿಯನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ಹೇಳಿದರು.ಇಂದಿನ ಮೆರವಣಿಗೆಯು ಸಂಪ್ರದಾಯ ಮತ್ತು ಪರಿವರ್ತನೆಯ ಸುಂದರ ಮಿಶ್ರಣ ಕಾವಾಯತು ಪ್ರದರ್ಶಿಸಲಾಯಿತು ಎಂದು ಅವರು ಹೇಳಿದರು.

ಸೇನಾ ಬ್ಯಾಂಡ್ ನಮ್ಮ ಬಲವಾದ ಸಂಬಂಧಗಳನ್ನು ಪ್ರತಿಬಿಂಬಿಸುತ್ತದೆ ಆದರೆ ಹೊಸ ಘಟಕಗಳು ಸೈನ್ಯದ ಉದಯೋನುಖ ಶಕ್ತಿಯನ್ನು ಪ್ರದರ್ಶಿಸುತ್ತವೆ ಎಂದು ಅವರು ಹೇಳಿದರು. ಭಾರತೀಯ ಸೇನೆಯು ಯಾವುದೇ ರೀತಿಯ ದಾಳಿಗೆ ಎಲ್ಲಾ ಸಮಯದಲ್ಲೂ ಸಂಪೂರ್ಣವಾಗಿ ಸಿದ್ಧವಾಗಿದೆ. ಸಮಯಕ್ಕೆ ತಕ್ಕಂತೆ ಹೊಂದಿಕೊಳ್ಳುವುದನ್ನು ಮತ್ತು ಅಗತ್ಯ ಬದಲಾವಣೆಗಳನ್ನು ತರುತ್ತದೆ ಎಂದು ಅವರು ಹೇಳಿದರು.



ರಷ್ಯಾ-ಉಕ್ರೇನ್ ಸಂಘರ್ಷವು ಯಾವುದೇ ಯುದ್ಧದ ಅವಧಿಯನ್ನು ಮುಂಚಿತವಾಗಿ ಊಹಿಸಲು ಸಾಧ್ಯವಿಲ್ಲ ಮತ್ತು ಭವಿಷ್ಯದ ಘರ್ಷಣೆಗಳು ಕೆಲವು ದಿನಗಳವರೆಗೆ ಅಥವಾ ವರ್ಷಗಳವರೆಗೆ ವಿಸ್ತರಿಸಬಹುದು ಎಂದು ಅವರು ಒತ್ತಿ ಹೇಳಿದರು.ತಂತ್ರಜ್ಞಾನವು ದಕ್ಷತೆಯನ್ನು ಹೆಚ್ಚಿಸುತ್ತದೆ, ಆದರೆ ಅದು ಮಾನವಶಕ್ತಿಯನ್ನು ಬದಲಾಯಿಸುತ್ತದೆ ಎಂದು ಅರ್ಥವಲ್ಲ ಎಂದು ದ್ವಿವೇದಿ ಹೇಳಿದರು, ಹೊಸ ಘಟಕಗಳು ಹೆಚ್ಚಿನ ವೇಗ ಮತ್ತು ಚುರುಕುತನವನ್ನುನಾವು ಭವಿಷ್ಯವನ್ನು ಊಹಿಸಲು ಸಾಧ್ಯವಿಲ್ಲ, ಆದ್ದರಿಂದ

ಭಾರತದಲ್ಲಿ ತಯಾರಿಸಲಾದ ಉಪಕರಣಗಳ ಪ್ರದರ್ಶನದೊಂದಿಗೆ, ರೂಪಾಂತರದ ಅಡಿಪಾಯ ಸ್ವಾವಲಂಬನೆ ಎಂಬುದನ್ನು ಮೆರವಣಿಗೆ ಪ್ರತಿಬಿಂಬಿಸುತ್ತದೆ ಎಂದು ಅವರು ಹೇಳಿದರು. ಭಾರತೀಯ ಸೇನೆಗೆ ಭವಿಷ್ಯದಲ್ಲಿ ಭಾರತದಲ್ಲಿ ವಿನ್ಯಾಸಗೊಳಿಸಲಾದ ಮತ್ತು ಅಭಿವೃದ್ಧಿಪಡಿಸಲಾದ ಉಪಕರಣಗಳು ಬೇಕಾಗುತ್ತವೆ. ದೇಶೀಕರಣವು ಕೇವಲ ಗುರಿಯಾಗಿಲ್ಲ, ಇಂದು, ಅದು ಕಾರ್ಯತಂತ್ರದ ಅವಶ್ಯಕತೆಯಾಗಿದೆ. -ಸೇನಾ ಮುಖ್ಯಸ್ಥ

ಬದಲಾಗುತ್ತಿರುವ ಸಂದರ್ಭಗಳಿಗೆ ಹೊಂದಿಕೊಳ್ಳುವುದು ಅತ್ಯಗತ್ಯ. ಇಂದಿನ ಯುದ್ಧವು ನಾಲ್ಕು ದಿನಗಳು ಅಥವಾ ನಾಲ್ಕು ವರ್ಷಗಳ ಕಾಲ ಇರುತ್ತದೆಯೇ ಎಂಬುದು ಯುದ್ಧಭೂಮಿಯಲ್ಲಿ ಮಾತ್ರ ತಿಳಿಯುತ್ತದೆ ಎಂದು ಅವರು ಹೇಳಿದರು.ಸೇನಾ ಮುಖ್ಯಸ್ಥರು ದೇಶದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿಗೆ ಒತ್ತು ನೀಡಿದರು.

ಆದ್ದರಿಂದ, ಸಂಶೋಧನೆ ನಿರ್ಣಾಯಕವಾಗಿದೆ. ಇದನ್ನು ಗಮನದಲ್ಲಿಟ್ಟುಕೊಂಡು, ಭಾರತೀಯ ಸೇನೆಯು, ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಮತ್ತು ಶೈಕ್ಷಣಿಕ ಸಂಸ್ಥೆಗಳ ಸಹಯೋಗದೊಂದಿಗೆ, ಹೇಗೆ ಮುಂದುವರಿಯುವುದು ಎಂಬುದರ ಕುರಿತು ಚರ್ಚಿಸುತ್ತಿದೆ ಎಂದು ಅವರು ಹೇಳಿದರು. ಮಾಹಿತಿ ಯುದ್ಧದಲ್ಲಿ ವಿಶ್ವಾಸಾರ್ಹತೆ ಅತ್ಯಗತ್ಯ ಎಂದು ಸೇನಾ ಮುಖ್ಯಸ್ಥರು ಹೇಳಿದರು.

#### ಅಭಿವೃದ್ಧಿ ಬಹಳ ಮುಖ್ಯ

ದೀರ್ಘ ಯುದ್ಧವನ್ನು ಎದುರಿಸಲು ಉಪಕರಣಗಳು ಮತ್ತು ಸರಬರಾಜುಗಳನ್ನು ದೇಶದೊಳಗೆ ತಯಾರಿಸಬೇಕು ಮತ್ತು ದುರಸ್ತಿ ಮಾಡಬೇಕು ಎಂದು ಅವರು ಹೇಳಿದರು. ಸಂಶೋಧನೆ ಮತ್ತು ಅಭಿವೃದ್ಧಿ ಬಹಳ ಮುಖ್ಯ. ಭಾರತ ಸಂಶೋಧನೆ ಮತ್ತು ಅಭಿವೃದ್ಧಿಯ ಮೇಲೆ ಗಮನಹರಿಸುವವರೆಗೆ ನಾವು ದೀರ್ಘ ಯುದ್ಧವನ್ನು ಹೋರಾಡಲು ಮತ್ತು ಸಂಪೂರ್ಣ ಸ್ವಾವಲಂಬನೆಯನ್ನು ಸಾಧಿಸಲು ಸಾಧ್ಯವಾಗುವುದಿಲ್ಲ ಎಂದು ಅವರು ಹೇಳಿದರು.



# ನಂದಿತಾ ಗೆಟಪ್ ಬದಲಾಯ್ತು

ಕನ್ನಡದ ನಟಿ ನಂದಿತಾ ಶ್ವೇತಾ ಅವರು ತೆಲುಗು ಮತ್ತು ತಮಿಳು ಚಿತ್ರಗಳಲ್ಲಿ ನಟಿಸಿದ್ದೇ ಜಾಸ್ತಿ. ಈಗ ಅವರು ಕನ್ನಡದ 'ಬೆನ್ನಿ' ಸಿನಿಮಾಗೆ ನಾಯಕಿ ಆಗಿದ್ದಾರೆ. ಸಂಕ್ರಾಂತಿಗೆ ಈ ಚಿತ್ರ ಅನೌನ್ಸ್ ಆಗಿದೆ. ಸಂಕ್ರಾಂತಿ ಹಬ್ಬದ ಪ್ರಯುಕ್ತ 'ಬೆನ್ನಿ' ಸಿನಿಮಾದ ಮೋಷನ್ ಪೋಸ್ಟರ್ ಬಿಡುಗಡೆ ಮಾಡಲಾಗಿದೆ. ನಟಿ ಶ್ವೇತಾ ಎಂದರೆ ತಕ್ಷಣಕ್ಕೆ ಯಾರಿಗೂ ಗೊತ್ತಾಗಲ್ಲ. ನಂದಿತಾ ಶ್ವೇತಾ ಎಂದರೆ ಅಭಿಮಾನಿಗಳಿಗೆ ಗೊತ್ತಾಗುತ್ತದೆ. 'ನಂದಾ ಲವ್ಸ್ ನಂದಿತಾ' ಸಿನಿಮಾದ ಶ್ವೇತಾ ಎಂದರೆ ಎಲ್ಲರಿಗೂ ತಿಳಿಯುತ್ತದೆ. ಆ ಸಿನಿಮಾ ಮೂಲಕ ಸಿಕ್ಕಾಪಟ್ಟೆ ಖ್ಯಾತಿ ಪಡೆದ ಅವರು ಪರಭಾಷೆಯಲ್ಲೇ ಹೆಚ್ಚು ಬ್ಯುಸಿ ಆದರು. ಈಗ ಜಿಂಕೆಮರಿ ಶ್ವೇತಾ ಅವರು ಮತ್ತೆ ಕನ್ನಡ ಸಿನಿಮಾ ಮಾಡುತ್ತಿದ್ದಾರೆ.

ಬರೋಬ್ಬರಿ 18 ವರ್ಷಗಳ ಬಳಿಕ ಅವರು ಕನ್ನಡ ಚಿತ್ರರಂಗಕ್ಕೆ ಮರಳುತ್ತಿದ್ದಾರೆ. ನಂದಿತಾ ಶ್ವೇತಾ ನಟನೆಯ ಹೊಸ ಸಿನಿಮಾಗೆ 'ಬೆನ್ನಿ' ಎಂದು ಹೆಸರು ಇಡಲಾಗಿದೆ.

ಸಂಕ್ರಾಂತಿ ಹಬ್ಬದ ಪ್ರಯುಕ್ತ 'ಬೆನ್ನಿ' ಸಿನಿಮಾದ ಮೋಷನ್ ಪೋಸ್ಟರ್ ಬಿಡುಗಡೆ ಮಾಡಲಾಗಿದೆ. ಇದರಲ್ಲಿ ಶ್ವೇತಾ ಅವರ ಲುಕ್ ಗಮನ ಸೆಳೆಯುತ್ತಿದೆ. 'ಪೆಪೆ' ಸಿನಿಮಾ ನಿರ್ದೇಶಕ ಶ್ರೀಲೇಶ್ ಎಸ್. ನಾಯರ್ ಅವರು ಈಗ 'ಬೆನ್ನಿ' ಸಿನಿಮಾಗೆ ಆಕ್ಷನ್-ಕಟ್ ಹೇಳುತ್ತಿದ್ದಾರೆ. ಈ ಚಿತ್ರದ ಮೂಲಕ ಮಹಿಳಾ ಪ್ರಧಾನ ಕಥೆಯನ್ನು ಪ್ರೇಕ್ಷಕರ ಎದುರು ಅವರು ತರಲಿದ್ದಾರೆ. ಕನ್ನಡ, ತಮಿಳು, ತೆಲುಗು ಚಿತ್ರರಂಗದಲ್ಲಿ ಫೇಮಸ್ ಆಗಿರುವ ನಂದಿತಾ ಶ್ವೇತಾ ಅವರು 'ಬೆನ್ನಿ' ಸಿನಿಮಾದಲ್ಲಿ ಸಂಪೂರ್ಣ ಬೇರೆಯದೇ ಗೆಟಪ್ ಧರಿಸುತ್ತಿದ್ದಾರೆ.



ಸಿನಿ ವಾಹಿನಿ

# ಪೈರಸಿ ವಿರುದ್ಧ ಧ್ವನಿ ಎತ್ತಿದ ಜಗ್ಗೇಶ್

ಕನ್ನಡ ಚಿತ್ರರಂಗದ ಬೆಂಬಲ ಇಲ್ವಾ



ವರ್ಷಗಟ್ಟಲೆ ಕಷ್ಟಪಟ್ಟು, ಕೋಟಿಗಟ್ಟಲೆ ಹಣ ಸುರಿದ ಚಿತ್ರತಂಡಕ್ಕೆ ಪೈರಸಿಯಿಂದ ನಷ್ಟ ಆಗುತ್ತದೆ. ಚಿತ್ರರಂಗಕ್ಕೆ ಪೈರಸಿ ಎಂಬುದು ಮಾರಕ ಆಗಿದೆ.

ಪೈರಸಿ ವಿರುದ್ಧ ಜಗ್ಗೇಶ್ ಅವರು ಹೋರಾಟಕ್ಕೆ ಇಳಿದಿದ್ದಾರೆ. ರಾಜ್ಯಸಭೆಯಲ್ಲಿ ಜಗ್ಗೇಶ್ ಅವರು ಪೈರಸಿ ಬಗ್ಗೆ ಮಾತನಾಡಿದ್ದಾರೆ. ಅದಕ್ಕೆ ಸರ್ಕಾರದಿಂದ ಸ್ಪಂದನೆ ಸಿಕ್ಕಿದೆ. ನಟ, ರಾಜ್ಯಸಭಾ ಸದಸ್ಯ ಜಗ್ಗೇಶ್ ಅವರು ಪೈರಸಿ ವಿರುದ್ಧ ಧ್ವನಿ ಎತ್ತಿದ್ದಾರೆ. ರಾಜ್ಯಸಭೆಯಲ್ಲಿ ಅವರು ಈ ಬಗ್ಗೆ ಚರ್ಚಿಸಿದ್ದಾರೆ. ಅದರ ಫಲವಾಗಿ ಸರ್ಕಾರದಿಂದ ಭರವಸೆ ಸಿಕ್ಕಿದೆ. ಆ ಬಗ್ಗೆ ಜಗ್ಗೇಶ್ ಅವರು ಸೋಶಿಯಲ್ ಮೀಡಿಯಾದಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಎಲ್ಲಾ ಭಾಷೆಯ ಚಿತ್ರರಂಗಕ್ಕೂ ಪೈರಸಿ ಎಂಬುದು ಮಾರಕ ಆಗಿದೆ. ಇದರ ವಿರುದ್ಧ ಹೋರಾಡಲು ಕನ್ನಡ ಚಿತ್ರರಂಗದ ಯಾರೂ ಕೂಡ ತಮಗೆ ಬೆಂಬಲ ನೀಡಲಿಲ್ಲ ಎಂದು ಜಗ್ಗೇಶ್ ಅವರು ಬೇಸರ ವ್ಯಕ್ತಪಡಿಸಿದ್ದಾರೆ. ಅವರು ಮಾಡಿದ ಪೋಸ್ಟ್ ಈ ರೀತಿ ಇದೆ..

'ರಾಜ್ಯಸಭೆಯಲ್ಲಿ ಸಿನಿಮಾ ಪೈರಸಿ ಕಳ್ಳರ ಮಟ್ಟಹಾಕಲು ಶೂನ್ಯ ವೇಳೆಯಲ್ಲಿ ರಾಷ್ಟ್ರಸರ್ಕಾರವನ್ನು ಒತ್ತಾಯ ಮಾಡಿದ ಪ್ರತಿಫಲಕ್ಕೆ ರಾಷ್ಟ್ರಸರ್ಕಾರ ಒಪ್ಪಿಗೆ ಸೂಚಿಸಿ ಆಧುನಿಕ ತಂತ್ರಜ್ಞಾನ ಬಳಸಿ ಅಂತಹ ಸಿನಿಮಾ ಕಳ್ಳರನ್ನು ಕಂಡುಹಿಡಿದು ದಂಡ, ಜೈಲು ಕ್ರಮ ತೆಗೆದುಕೊಳ್ಳುವ ಹಾಗು ಸಿನಿಮಾ ಪೈರಸಿ ಚಿರಿರಿ ಬಂದ್ ಮಾಡುವ ನಿರ್ಧಾರ ಮಾಡಿದ್ದು, ವೈಯಕ್ತಿಕವಾಗಿ ಹಾಗು ಭಾರತೀಯ ಚಿತ್ರರಂಗದ ಪರ ಹರ್ಷ ವ್ಯಕ್ತಪಡಿಸುವೆ.' 'ಚಿತ್ರರಂಗದ ಅನ್ನ 45 ವರ್ಷದಿಂದ ತಿಂದು ಬೆಳೆದ ನಾನು ಅದರ ಋಣ ತೀರಿಸುವ ನನ್ನ ಯತ್ನಕ್ಕೆ ಚಿತ್ರರಂಗದ ಯಾರೊಬ್ಬರೂ ಬೆಂಬಲ ವ್ಯಕ್ತಪಡಿಸಲಿಲ್ಲ (ಭಾಮಾ ಹರೀಶ್, ಬಣಕಾರ್, ಯೂಟೂಬ್ ಅನಿಲ್ ಯಾದವ್ ಗೆಳೆಯರು ಹಾಗು ಕೋಣ ನಿರ್ಮಾಪಕರ ಸಹಕಾರ ಹೊರತುಪಡಿಸಿ) ಎಂಬ ದುಃಖ ಕಾಡಿತು. ಆದರೂ ಪರವಾಗಿಲ್ಲ ನನ್ನ ಜೀವನದ ಪ್ರತಿ ಘಟ್ಟದಲ್ಲಿಯೂ ನಾನು ಏಕಾಂಗಿ ಹೋರಾಟ ಮಾಡಿ ನನ್ನ ಕನ್ನಡದ ಜನರ ಆಶೀರ್ವಾದದಿಂದ ಗಟ್ಟಿನೆಲೆ ಪಡೆದು ಕಂಬದಂತೆ ನಿಂತಿರುವೆ.' 'ರಾಯರ ಆಶೀರ್ವಾದ ಪಡೆದು ನುಗ್ಗಿ ಕಾರ್ಯ ಮಾಡಿ ಜನರು ಮೆಚ್ಚುವಂತೆ ಬಾಳುವೆ ಎಂದರು.

# 25 ಲಕ್ಷ ವಂಚನೆ ತಂಗಿ ವಿರುದ್ಧವೇ ನಟಿ ಕಾರುಣ್ಯಾ ರಾಮ್ ದೂರು

ಕನ್ನಡದ ನಟಿ, ಮಾಜಿ ಬಿಗ್ ಬಾಸ್ ಸ್ಪರ್ಧಿ ಕಾರುಣ್ಯಾ ರಾಮ್ ಅವರು ಸ್ವಂತ ತಂಗಿ ಸಮೃದ್ಧಿ ರಾಮ್ ವಿರುದ್ಧವೇ ವಂಚನೆ ಪ್ರಕರಣ ದಾಖಲಿಸಿದ್ದಾರೆ. ತಂಗಿ ಸಮೃದ್ಧಿ ರಾಮ್, ಪ್ರತಿಭಾ, ಕಪಿಲ್, ಪ್ರಜ್ವಲ್, ರಕ್ಷಿತ್ ಮತ್ತು ಸಾಗರ್ ಎಂಬುವವರ ವಿರುದ್ಧ ಸಿಸಿಬಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಮೇಕಪ್ ಆರ್ಟಿಸ್ಟ್ ಆಗಿರುವ ಸಹೋದರಿ ಸಮೃದ್ಧಿ ರಾಮ್ ಅವರು ಬೆಟ್ಟಿಂಗ್ ಆಡಿ ಸುಮಾರು 25 ಲಕ್ಷ ರೂ. ಸಾಲ ಮಾಡಿಕೊಂಡಿದ್ದಾರೆ. ಅಷ್ಟೇ ಅಲ್ಲದೇ ವ್ಯವಹಾರದಲ್ಲೂ ಅಪಾರ ನಷ್ಟ ಅನುಭವಿಸಿದ್ದಾರೆ. ಖಾಸಗಿ ವ್ಯಕ್ತಿಗಳಿಂದ ಸಾಲ ಪಡೆದಿದ್ದಾರೆ. ಹೀಗಾಗಿ ಮನೆಯಲ್ಲಿದ್ದ ಚಿನ್ನ ಹಾಗೂ ಹಣವನ್ನು ಸಾಲ ತೀರಿಸಲು ಬಳಸಿಕೊಂಡು ವಂಚಿಸಿದ್ದಾರೆ. ಈಕೆ ಮಾಡಿದ ಸಾಲದ ಹಣ ಪಡೆಯಲು ಸಾಲಗಾರರು ಮನೆಗೆ ಬಂದು ಪೀಡಿಸುತ್ತಿದ್ದಾರೆ. ನನ್ನ ಹಣವನ್ನು ಬಳಕೆ ಮಾಡಿಕೊಂಡಿದ್ದನ್ನು ಪ್ರಶ್ನಿಸಿದ್ದಕ್ಕೆ ಸಮೃದ್ಧಿ ನನ್ನನ್ನು ಮನೆಯಿಂದ ಹೊರಗೆ ಹಾಕಿದ್ದಾರೆ. ವಾಟ್ಸಪ್‌ನಲ್ಲಿ ಅಶ್ಲೀಲ ಸಂದೇಶ, ಸಾಮಾಜಿಕ ಜಾಲತಾಣದಲ್ಲಿ ಹಾಕುವ ಫೋಟೋಗಳಿಗೆ ಕೆಟ್ಟದಾಗಿ ಕಾಮೆಂಟ್ ಮಾಡಿ ನಿಂದನೆ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಈ ಹಿಂದೆ ಕಾರುಣ್ಯ ರಾಮ್ ಸಮೃದ್ಧಿ ವಿರುದ್ಧ ರಾಜರಾಜೇಶ್ವರಿ ನಗರ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾಗ ಎನ್‌ಸಿಆರ್ ದಾಖಲಾಗಿತ್ತು. ಈಗ ಕಾರುಣ್ಯ ರಾಮ್ ಸಹೋದರಿ ವಿರುದ್ಧ ಸಿಸಿಬಿಯಲ್ಲಿ ದೂರು ನೀಡಿದ್ದಾರೆ.

ಒಂಬತ್ತು ವರ್ಷಗಳ ಬಳಿಕ ರೀ ಎಂಟ್ರಿ

# ಅಮೂಲ್ಯ ಕಮ್‌ಬ್ಯಾಕ್



ನಟಿ ಅಮೂಲ್ಯ 2017 ರಲ್ಲಿ ಬಿಡುಗಡೆ ಆಗಿದ್ದ ಗಣೇಶ್ ನಟನೆಯ 'ಮುಗುಳು ನಗೆ' ಸಿನಿಮಾದ ಅತಿಥಿ ಪಾತ್ರದಲ್ಲಿ ನಟಿಸಿದ್ದೇ ಕೊನೆ ಅದಾದ ಬಳಿಕ ಇನ್ಯಾವ ಸಿನಿಮಾನಲ್ಲಿಯೂ ನಟಿಸಿರಲಿಲ್ಲ. ಇದೀಗ ಒಂಬತ್ತು ವರ್ಷಗಳ ಬಳಿಕ ಅಮೂಲ್ಯ ಮತ್ತೆ ಚಿತ್ರರಂಗಕ್ಕೆ ನಾಯಕಿಯಾಗಿ ಮರು ಎಂಟ್ರಿ ಕೊಟ್ಟಿದ್ದಾರೆ.

ಅಷ್ಟಕ್ಕೂ ಅಮೂಲ್ಯಗೆ ನಾಯಕ ಯಾರು ಬಾಲ ನಟಿಯಾಗಿ ಕನ್ನಡ ಚಿತ್ರರಂಗಕ್ಕೆ ಪರಿಚಯವಾದ ನಟಿ ಅಮೂಲ್ಯ ನಾಯಕಿಯಾಗಿ ಸಖತ್ ಸದ್ದು ಮಾಡಿದ್ದವರು. ಆದರೆ ಹಲವು ನಾಯಕಿಯರಂತೆ ಮದುವೆ, ಮಕ್ಕಳ ಬಳಿಕ ಚಿತ್ರರಂಗದಿಂದ ದೂರಾದರು. ಇದೀಗ ನಟಿ ಅಮೂಲ್ಯ ಬರೋಬ್ಬರಿ ಎಂಟು ವರ್ಷಗಳ ಬಳಿಕ ಮತ್ತೆ ಸ್ಯಾಂಡಲ್‌ವುಡ್‌ಗೆ ಎಂಟ್ರಿ ಕೊಡಲು ಸಜ್ಜಾಗಿದ್ದಾರೆ. ತಮ್ಮಂತೆ ಕ್ಯೂಟ್ ಆದ ಹೆಸರಿರುವ ಸಿನಿಮಾ ಮೂಲಕ. ಅಷ್ಟಕ್ಕೂ ಕ್ಯೂಟ್ ನಟಿ ಅಮೂಲ್ಯಗೆ ನಾಯಕ ಯಾರು 'ಪೀಕಬೂ' ಹೆಸರಿನ ಸಿನಿಮಾನಲ್ಲಿ ಅಮೂಲ್ಯ ನಟಿಸುತ್ತಿದ್ದು, ಈ ಸಿನಿಮಾವನ್ನು ಮಂಜು ಸ್ವರಾಜ್ ನಿರ್ದೇಶನ ಮಾಡುತ್ತಿದ್ದಾರೆ. ಸಿನಿಮಾದ ಲುಕ್ ಟೀಸರ್ ಬಿಡುಗಡೆ ಆಗಿದ್ದು, ಟೀಸರ್‌ನಲ್ಲಿ ಅಮೂಲ್ಯ ಜೊತೆಗೆ ನಾಯಕನ ಲುಕ್‌ನ ಪರಿಚಯವನ್ನೂ ಸಹ ಮಾಡಿಕೊಡಲಾಗಿದೆ. ನಟಿ ಅಮೂಲ್ಯಾಗೆ ಜೋಡಿಯಾಗಿ ನಟ ಶ್ರೀರಾಮ್ ಕಾಣಿಸಿಕೊಳ್ಳುತ್ತಿದ್ದಾರೆ. ಕಿರುತೆರೆ ಹಾಗೂ ಹಿರಿತೆರೆ ಎರಡರಲ್ಲಿಯೂ ನಟಿಸಿ ಅನುಭವ ಇರುವ ಶ್ರೀರಾಮ್ 'ಪೀಕಬೂ' ಸಿನಿಮಾ ಮೂಲಕ ಮತ್ತೆ ದೊಡ್ಡ ಪರದೆ ಮೇಲೆ ಮಿಂಚಲು ರೆಡಿಯಾಗಿದ್ದಾರೆ. 2008 ರಲ್ಲಿ ''ರಿಷಭಪ್ರಿಯ ಎಂದ ಕಿರುಚಿತ್ರದ ಮೂಲಕ ನಾಯಕ ನಟನಾಗಿ ಎಂಟ್ರಿ ಕೊಟ್ಟ ಶ್ರೀರಾಮ್, ಬಳಿಕ ಧಾರಾವಾಹಿಯಲ್ಲಿ ಬ್ಯುಸಿಯಾದರು. ನಂತರ 'ಇರುವುದೆಲ್ಲವ ಬಿಟ್ಟು' ಸಿನಿಮಾ ಮೂಲಕ ನಾಯಕನಾಗಿ ಗಮನ ಸೆಳೆದರು.

# ಗೋಶಾಲೆಗಾಗಿ ಲಕ್ಷಾಂತರ ಹಣ ದೇಣಿಗೆ ನೀಡಿದ ನಟ



ಗೋವು ಆಶ್ರಯತಾಣಗಳ ಜೊತೆಗೆ ನಿಲ್ಲೋಣ

ಸೋನು ಸೂದ್ ಅವರು ಕೋವಿಡ್ ಸಮಯದಲ್ಲಿ ಮಾಡಿದ ಸೇವೆ ಲಕ್ಷಾಂತರ ಜನರಿಗೆ ಸಹಾಯ ಆಗಿತ್ತು. ಆಗ ಅವರನ್ನು 'ಮಸೀಹ' (ದೇವರು) ಎಂದು ಕರೆದಿದ್ದರು ದೇಶದ ಜನ. ಕೋವಿಡ್ ಬಳಿಕವೂ ಸೋನು ಸೂದ್ ತಮ್ಮ ಸಮಾಜ ಸೇವೆಯನ್ನು ಮುಂದುವರೆಸಿದ್ದು, ನಾನಾ ರೀತಿಯ ಜನರಿಗೆ ಸಹಾಯ ಮಾಡುತ್ತಲೇ ಬಂದಿದ್ದಾರೆ. ಇದೀಗ ಸೋನು ಸೂದ್ ಅವರು ಗೋಸೇವೆಗೂ ಇಳಿದಿದ್ದು, ಗೋಶಾಲೆಗೆ ಲಕ್ಷಾಂತರ ರೂಪಾಯಿ ದೇಣಿಗೆ ನೀಡಿದ್ದಾರೆ. ಸೋನು ಸೂದ್ , ಸಿನಿಮಾಗಳಲ್ಲಿ ಹೆಚ್ಚಾಗಿ ಕಾಣಿಸಿಕೊಂಡಿರುವುದು ವಿಲನ್ ಪಾತ್ರದಲ್ಲಿ ಆದರೆ ನಿಜ ಜೀವನದಲ್ಲಿ ಅಪ್ಪಟ ಹೀರೋ. ಸೋನು ಸೂದ್ ಅವರು ಗುಜರಾತ್‌ನ ಗೋಶಾಲೆಯೊಂದಕ್ಕೆ ಬರೋಬ್ಬರಿ 22 ಲಕ್ಷ ರೂಪಾಯಿ ಹಣವನ್ನು ದೇಣಿಗೆಯಾಗಿ ನೀಡಿದ್ದಾರೆ. ಗುಜರಾತಿನ ವಾರಾಹಿಯ ಗೋಶಾಲೆಯೊಂದಕ್ಕೆ ಭೇಟಿ ನೀಡಿದ್ದ ನಟ ಸೋನು ಸೂದ್, 7000 ಗೋವುಗಳಿರುವ ಆ ಗೋಶಾಲೆಗೆ ಬರೋಬ್ಬರಿ 22 ಲಕ್ಷ ರೂಪಾಯಿ ಹಣವನ್ನು ದೇಣಿಗೆಯಾಗಿ ನೀಡಿದ್ದಾರೆ. ಈ ಗೋಶಾಲೆಯು ಗೋವುಗಳಿಗೆ ಆಶ್ರಯ, ಶುಶ್ರೂಶೆ ನೀಡುವ ಜೊತೆಗೆ ಆರೈಕೆ ಸಹ ಮಾಡುತ್ತದೆ. ವಿಶೇಷವಾಗಿ ಅನಾಥ ಗೋವುಗಳು, ಗಾಯಗೊಂಡ ಗೋವುಗಳು, ಅಂಗವಿಕಲ ಗೋವುಗಳು, ಮುದಿ ಗೋವುಗಳನ್ನು ಹುಡುಕಿ ಅವುಗಳ ರಕ್ಷಣೆ ಮಾಡುವ ಕಾರ್ಯವನ್ನು ಈ ಗೋಶಾಲೆ ಮಾಡುತ್ತಿದೆ. ನನಗೆ ಇಲ್ಲಿ ಸಿಕ್ಕ ಪ್ರೀತಿ ನನಗೆ ತುಂಬಾ ಸಂತೋಷ ಮತ್ತು ಹೆಮ್ಮೆ ತಂದಿತು. ಇಲ್ಲಿ ಗೋರಕ್ಷಣೆಯನ್ನು ಅದ್ಭುತ ರೀತಿಯಲ್ಲಿ ಮಾಡುವ ವಿಧಾನವನ್ನು ಭಾರತದಾದ್ಯಂತ ಜಾರಿಗೆ ತರಬೇಕು. ಗೋವುಗಳು ನಮ್ಮಿಂದ ಏನನ್ನೂ ಕೇಳುವುದಿಲ್ಲ, ಕೇವಲ ಕಾಳಜಿಯನ್ನು ಮಾತ್ರ ಕೇಳುತ್ತವೆ. ನಮ್ಮ ಹಸುಗಳು ಮತ್ತು ಗೋ ಆಶ್ರಯತಾಣಗಳ ಜೊತೆಗೆ ನಿಲ್ಲೋಣ ಎಂದಿದ್ದಾರೆ ನಟ ಸೋನು ಸೂದ್. ಅವರು ಹಲವು ವರ್ಷಗಳಿಂದಲೂ ಈ ರೀತಿಯ ಸಾಮಾಜಿಕ ಸೇವೆಗಳನ್ನು ಮಾಡುತ್ತಲೇ ಬರುತ್ತಿದ್ದಾರೆ. ಕೋವಿಡ್ ಸಮಯದಲ್ಲಿ ಅವರು ಮಾಡಿದ ಸೇವೆಯನ್ನು ರಾಜ್ಯಪಾಲರೇ ಗುರುತಿಸಿ ಬೆನ್ನುತಟ್ಟಿದ್ದರು. ಕೋವಿಡ್ ಲಾಕ್‌ಡೌನ್ ಇಂದಾಗಿ ಬೇರೆ ಬೇರೆ ರಾಜ್ಯಗಳಲ್ಲಿ ಸಿಕ್ಕಿಹಾಕಿಕೊಂಡಿದ್ದ ಜನರನ್ನು ತಮ್ಮ ಮನೆಗಳಿಗೆ ತಲುಪಲು ಸೋನು ಸೂದ್ ಸಹಾಯ ಮಾಡಿದ್ದರು. ಮಾತ್ರವಲ್ಲದೆ ಆಕ್ಸಿಜನ್ ಸಪ್ಲೈ, ತ್ವರಿತ ಆಸ್ಪತ್ರೆ ನಿರ್ಮಾಣಕ್ಕೆ ದೇಣಿಗೆ, ಕಾರ್ಮಿಕರುಗಳಿಗೆ ಊಟದ ವ್ಯವಸ್ಥೆ ಇನ್ನೂ ಅನೇಕ ರೀತಿಯ ಸಹಾಯವನ್ನು ಸೋನು ಸೂದ್ ಆಗ ಮಾಡಿದ್ದರು.

# ಟಿ20 ಸರಣಿಯಿಂದಲೂ ವಾಷಿಂಗ್ಟನ್ ಔಟ್

ಸುಂದರ್‌ಗೆ ಕಾಡುತ್ತಿದೆ ಬೆನ್ನು ನೋವು



ನ್ಯೂಜಿಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ಭಾರತ 1-1 ರಿಂದ ಸಮಬಲ ಸಾಧಿಸಿದೆ, ಮೂರನೇ ಪಂದ್ಯ ನಿರ್ಣಾಯಕವಾಗಿದೆ.

ಈ ನಡುವೆ, ಸ್ಟಾರ್ ಆಲ್‌ರೌಂಡರ್ ವಾಷಿಂಗ್ಟನ್ ಸುಂದರ್ ಬೆನ್ನು ನೋವಿನಿಂದ ಟಿ20 ಸರಣಿಯಿಂದ ಹೊರಗುಳಿದಿರುವುದು ಟೀಂ ಇಂಡಿಯಾಗೆ ದೊಡ್ಡ ಆಘಾತವಾಗಿದೆ. ಮುಂಬರುವ ಟಿ20 ವಿಶ್ವಕಪ್ ಸಿದ್ಧತೆಗಳ ದೃಷ್ಟಿಯಿಂದ ಇದು ಪ್ರಮುಖ ಹಿನ್ನಡೆಯಾಗಿದೆ, ಸುಂದರ್ ಅನುಪಸ್ಥಿತಿ ತಂಡದ ಸಮತೋಲನದ ಮೇಲೆ ಪರಿಣಾಮ ಬೀರಬಹುದು. ನ್ಯೂಜಿಲೆಂಡ್ ವಿರುದ್ಧ ಮೂರು ಪಂದ್ಯಗಳ ಏಕದಿನ ಸರಣಿ ಆಡುತ್ತಿರುವ ಟೀಂ ಇಂಡಿಯಾ ಸರಣಿಯ ಎರಡನೇ ಪಂದ್ಯದಲ್ಲಿ ಏಕಪಕ್ಷೀಯ ಸೋಲು ಅನುಭವಿಸಿತು. ಹೀಗಾಗಿ ಸರಣಿ ಪ್ರಸ್ತುತ 1-1 ರಿಂದ ಸಮಬಲಗೊಂಡಿದೆ. ಇದೀಗ ಸರಣಿ ಭಾರತದ ಪಾಲಾಗಬೇಕಾದರೆ, ಮೂರನೇ ಪಂದ್ಯವನ್ನು ಗೆಲ್ಲಲೇಬೇಕಾಗಿದೆ. ಇದೆಲ್ಲದರ ನಡುವೆ ತಂಡಕ್ಕೆ ದೊಡ್ಡ ಆಘಾತವೊಂದು ಎದುರಾಗಿದ್ದು, ಸ್ಟಾರ್ ಆಲ್‌ರೌಂಡರ್ ವಾಷಿಂಗ್ಟನ್ ಸುಂದರ್ ಟಿ20 ಸರಣಿಗೂ ಅಲಭ್ಯ ಎನ್ನಲಾಗುತ್ತಿದೆ. ವಾಸ್ತವವಾಗಿ ಟೀಂ ಇಂಡಿಯಾ ನ್ಯೂಜಿಲೆಂಡ್ ವಿರುದ್ಧದ ಏಕದಿನ ಸರಣಿ ಮುಗಿದ ಬಳಿಕ ಇದೇ ತಂಡದ ವಿರುದ್ಧ ಐದು ಪಂದ್ಯಗಳ ಟಿ20 ಸರಣಿಯನ್ನು ಆಡಲಿದೆ. ಈ ಸರಣಿಯ ಬಳಿಕ ಟಿ20 ವಿಶ್ವಕಪ್ ಆರಂಭವಾಗಲಿದೆ. ಹೀಗಾಗಿ ಟಿ20 ವಿಶ್ವಕಪ್‌ಗೆ ತಯಾರಿಯ ದೃಷ್ಟಿಯಿಂದ ಕಿವೀಸ್ ವಿರುದ್ಧದ ಟಿ20 ಸರಣಿ ಟೀಂ ಇಂಡಿಯಾಗೆ ಬಹಳ ಮುಖ್ಯವಾಗಿದೆ.

ಹೀಗಿರುವಾಗ ಸುಂದರ್ ಈ ಸರಣಿಗೆ ಅಲಭ್ಯರಾಗುತ್ತಿರುವುದು ತಂಡಕ್ಕೆ ಕೊಂಚ ಹಿನ್ನಡೆಯಾಗಿದೆ. ವಡೋದರಾದಲ್ಲಿ ನಡೆದ ಮೊದಲ ಏಕದಿನ ಪಂದ್ಯದ ವೇಳೆ ವಾಷಿಂಗ್ಟನ್ ಸುಂದರ್ ಬೆನ್ನು ನೋವಿಗೆ ತುತ್ತಾಗಿದ್ದರು. ಇದರಿಂದಾಗಿ ಅವರು ಅರ್ಧಕ್ಕೆ ಆಟ ನಿಲ್ಲಿಸಿ ಮೈದಾನವನ್ನು ತೊರೆದಿದ್ದರು. ಆ ಬಳಿಕ ಸುಂದರ್‌ಗೆ ವೈದ್ಯಕೀಯ ಪರೀಕ್ಷೆ ಮಾಡಲಾಗಿದ್ದು, ಅವರಿಗೆ ಕೆಲವು ವಾರಗಳ ಕಾಲ ವಿಶ್ರಾಂತಿ ಪಡೆಯಲು ಸೂಚಿಸಲಾಗಿದೆ. ವರದಿಗಳ ಪ್ರಕಾರ, ವೈದ್ಯಕೀಯ ತಂಡವು ಸುಂದರ್‌ಗೆ ಎರಡು ವಾರಗಳ ಕಾಲ ವಿಶ್ರಾಂತಿ ಪಡೆಯಲು ಸೂಚಿಸಿದೆ. ಹೀಗಾಗಿ ಅವರು ಮುಂದಿನ ವಾರ ಚೇತರಿಸಿಕೊಳ್ಳಲು ಬಿಸಿಸಿಐನ ಸೆಂಟರ್ ಆಫ್ ಎಕ್ಸಲೆನ್ಸ್‌ಗೆ ತೆರಳಲಿದ್ದಾರೆ. ಸುಂದರ್ ಅವರನ್ನು ಟಿ20 ವಿಶ್ವಕಪ್ ತಂಡಕ್ಕೆ ಆಯ್ಕೆ ಮಾಡಿರುವ ಕಾರಣ, ನ್ಯೂಜಿಲೆಂಡ್ ವಿರುದ್ಧದ ಸರಣಿಯಲ್ಲಿ ಅವರನ್ನು ಅಪಾಯಕ್ಕೆ ಸಿಲುಕಿಸಲು ತಂಡದ ಆಡಳಿತ ಮಂಡಳಿ ಬಯಸಲಿಲ್ಲ ಎಂದು ವರದಿಯಾಗಿದೆ.

# ಕೆನಡಾ ಟಿ20 ವಿಶ್ವಕಪ್ ತಂಡದಲ್ಲಿ ಮಾಜಿ ಭಾರತೀಯ ಕ್ರಿಕೆಟಿಗ



ಕೆನಡಾ ಟಿ20 ವಿಶ್ವಕಪ್ ತಂಡದಲ್ಲಿ ಮಾಜಿ ಭಾರತೀಯ ಕ್ರಿಕೆಟಿಗ ಭಾರತ ಮತ್ತು ಶ್ರೀಲಂಕಾ ಆತಿಥ್ಯದಲ್ಲಿ ನಡೆಯಲಿರುವ 2026ರ ಟಿ20 ವಿಶ್ವಕಪ್‌ಗೆ ಕೆನಡಾ ತನ್ನ 15 ಸದಸ್ಯರ ತಂಡವನ್ನು ಪ್ರಕಟಿಸಿದೆ. ದಿಲ್‌ಪ್ರೀತ್ ಬಾಜ್ವಾ ನಾಯಕತ್ವ ವಹಿಸಲಿದ್ದಾರೆ. ಈ ಹಿಂದೆ ಐಪಿಎಲ್‌ನಲ್ಲಿ ಪಂಜಾಬ್ ಕಿಂಗ್ಸ್‌ಗಾಗಿ ಆಡಿದ ಅನುಭವಿ ಅನ್ಶ್ ಪಟೇಲ್ ಕೂಡ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಕೆನಡಾ ತಂಡವು ದಕ್ಷಿಣ ಆಫ್ರಿಕಾ, ನ್ಯೂಜಿಲೆಂಡ್, ಅಫ್ಘಾನಿಸ್ತಾನ ಮತ್ತು ಯುಎಇ ಜೊತೆ ಡಿ ಗುಂಪಿನಲ್ಲಿದ್ದು, ಫೆಬ್ರವರಿ 9ರಂದು ದಕ್ಷಿಣ ಆಫ್ರಿಕಾ ವಿರುದ್ಧ ತನ್ನ ಮೊದಲ ಪಂದ್ಯ ಆಡಲಿದೆ.

ಭಾರತ ಮತ್ತು ಶ್ರೀಲಂಕಾ ಆತಿಥ್ಯದಲ್ಲಿ ನಡೆಯಲಿರುವ 2026 ರ ಟಿ20 ವಿಶ್ವಕಪ್‌ಗಾಗಿ ಕೆನಡಾ ತನ್ನ 15 ಸದಸ್ಯರ ತಂಡವನ್ನು ಪ್ರಕಟಿಸಿದೆ. ಈ ತಿಂಗಳ ಕೊನೆಯಲ್ಲಿ 23ನೇ ವಸಂತಕ್ಕೆ ಕಾಲಿಡುವ ದಿಲ್‌ಪ್ರೀತ್ ಬಾಜ್ವಾ ಅವರನ್ನು ತಂಡದ ನಾಯಕರನ್ನಾಗಿ ನೇಮಿಸಲಾಗಿದೆ.ಕೆನಡಾ ತಂಡವು ಎಲ್ಲಾ ಆರು ಪಂದ್ಯಗಳನ್ನು ಗೆಲ್ಲುವ ಮೂಲಕ ಈ ಆವೃತ್ತಿಯ ಐಸಿಸಿ ಪುರುಷರ ಟಿ20 ವಿಶ್ವಕಪ್ ಅಮೆರಿಕಾಸ್ ಪ್ರಾದೇಶಿಕ ಫೈನಲ್‌ಗೆ ಅರ್ಹತೆ ಪಡೆದುಕೊಂಡಿತು. ತಂಡವು ಅಂಕಪಟ್ಟಿಯಲ್ಲಿ ಅಗ್ರಸ್ಥಾನ ಪಡೆದು ಟಿ20 ವಿಶ್ವಕಪ್‌ಗೆ ಅರ್ಹತೆಯನ್ನು ಪಡೆದುಕೊಂಡಿದೆ.

**ಅಂಶ್ ಪಟೇಲ್‌ಗೆ ಸ್ಥಾನ:** ಈ ತಂಡದಲ್ಲಿ ಬರೋಡಾ ಪರ ದೇಶೀಯ ಕ್ರಿಕೆಟ್ ಆಡಿದ್ದ ಅಂಶ್ ಪಟೇಲ್ ಕೂಡ ಇದ್ದಾರೆ. ಐಪಿಎಲ್ 2022 ರ ಹರಾಜಿನಲ್ಲಿ ಪಂಜಾಬ್ ಕಿಂಗ್ಸ್ ಅವರನ್ನು 20 ಲಕ್ಷಕ್ಕೆ ಖರೀದಿಸಿತು. ಆದಾಗ್ಯೂ, ಅವರಿಗೆ ಆಡಲು ಅವಕಾಶ ಸಿಗಲಿಲ್ಲ, ಮುಂದಿನ ಆವೃತ್ತಿಗೂ ಮುನ್ನ ಫ್ರಾಂಚೈಸಿ ಅವರನ್ನು ತಂಡದಿಂದ ಬಿಡುಗಡೆ ಮಾಡಿತು. ಕಳೆದ ವರ್ಷ ಕೆನಡಾ ಪರ ಪಾದಾರ್ಪಣೆ ಮಾಡಿದ ಅಂಶ್, ಎರಡು ಏಕದಿನ ಮತ್ತು ಐದು ಟಿ20 ಅಂತಾರಾಷ್ಟ್ರೀಯ ಪಂದ್ಯಗಳನ್ನು ಆಡಿದ್ದಾರೆ. ಅತಿ ಕಡಿಮೆ ಮಾದರಿಯ ಕ್ರಿಕೆಟ್‌ನಲ್ಲಿ, ಅವರು ನಾಲ್ಕು ಇನ್ನಿಂಗ್ಸ್‌ಗಳಲ್ಲಿ ಪ್ರತಿ ವಿಕೆಟ್‌ಗೆ ಸರಾಸರಿ 7 ರನ್‌ಗಳಂತೆ ಐದು ವಿಕೆಟ್‌ಗಳನ್ನು ಪಡೆದಿದ್ದಾರೆ.

**ಡಿ ಗುಂಪಿನಲ್ಲಿ ಕೆನಡಾ:** ಕೆನಡಾ ತಂಡವು ದಕ್ಷಿಣ ಆಫ್ರಿಕಾ, ನ್ಯೂಜಿಲೆಂಡ್, ಅಫ್ಘಾನಿಸ್ತಾನ ಮತ್ತು ಯುಎಇ ಜೊತೆಗೆ ಗ್ರೂಪ್ ಡಿಯಲ್ಲಿ ಸ್ಥಾನ ಪಡೆದಿದೆ. ಕೆನಡಾ ತನ್ನ ಮೊದಲ ಪಂದ್ಯವನ್ನು ಫೆಬ್ರವರಿ 9 ರಂದು ಅಹಮದಾಬಾದ್‌ನಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಆಡಲಿದೆ. ನಂತರ ಯುಎಇ, ನ್ಯೂಜಿಲೆಂಡ್ ಮತ್ತು ಅಫ್ಘಾನಿಸ್ತಾನವನ್ನು ಎದುರಿಸಲಿದೆ. ಇದು ಕೆನಡಾದ ಎರಡನೇ ಟಿ20 ವಿಶ್ವಕಪ್ ಆಗಿದ್ದು , ಈ ಹಿಂದೆ 2024 ರ ಆವೃತ್ತಿಯಲ್ಲಿ ಐರ್ಲೆಂಡ್ ತಂಡವನ್ನು ಸೋಲಿಸಿತ್ತು.

# ಬಾಂಗ್ಲಾದೇಶ್ ಕ್ರಿಕೆಟ್‌ನಲ್ಲಿ ಕೋಲಾಹಲ



ರಾಜೀನಾಮೆ ನೀಡಿದ್ರೆ ಮಾತ್ರ ಆಡ್ತೇವೆ!

ಭಾರತದಲ್ಲಿ ಟಿ20 ವಿಶ್ವಕಪ್ ಪಂದ್ಯವಾಡಲು ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್ ಹಿಂದೇಟು ಹಾಕಿದೆ. ಬಾಂಗ್ಲಾದೇಶ್ ಆಟಗಾರರ ಸುರಕ್ಷತೆಯನ್ನು ಮುಂದಿಟ್ಟುಕೊಂಡು ಬಿಸಿಬಿ ಪಂದ್ಯಗಳ ಸ್ಥಳಾಂತರಕ್ಕೆ ಐಸಿಸಿಗೆ ಮನವಿ ಮಾಡಿದೆ. ಈ ಸಮಸ್ಯೆ ಪರಿಹರಿಯುವ ಮುನ್ನವೇ ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್‌ಗೆ ಮತ್ತೊಂದು ಸಮಸ್ಯೆ ಶುರುವಾಗಿದೆ. ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್ ಸಂಕಷ್ಟದಿಂದ ಸಂಕಷ್ಟಕ್ಕೆ ಒಳಗಾಗುತ್ತಿದೆ.

ಒಂದೆಡೆ ಟಿ20 ವಿಶ್ವಕಪ್ ಪಂದ್ಯಗಳ ಸ್ಥಳಾಂತರಕ್ಕೆ ಒತ್ತಾಯಿಸುತ್ತಿರುವ ಬಿಸಿಬಿಯ ಮನವಿಗೆ ಐಸಿಸಿ ಕ್ಯಾರೆ ಅನ್ನುತ್ತಿಲ್ಲ. ಮತ್ತೊಂಡೆ ಆಟಗಾರರಿಂದಲೇ ಬಿಸಿಬಿಗೆ ಒತ್ತಡ ಎದುರಾಗಿದೆ. ಅದು ಕೂಡ ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್‌ನ ಹಣಕಾಸು ಸಮಿತಿ ಅಧ್ಯಕ್ಷನ ರಾಜೀನಾಮೆ ಕೇಳುವ ಮೂಲಕ..!

ಹೌದು, ಬಾಂಗ್ಲಾದೇಶ್ ಆಟಗಾರರು ಇದೀಗ ಬಿಸಿಬಿ ಹಣಕಾಸು ಸಮಿತಿ ಅಧ್ಯಕ್ಷ ನಜ್ಮುಲ್ ಹಸನ್ ರಾಜೀನಾಮೆಯನ್ನು ಆಗ್ರಹಿಸುತ್ತಿದ್ದಾರೆ. ಇತ್ತೀಚೆಗೆ ಮಾಜಿ ಆಟಗಾರ ತಮೀಮ್ ಇಕ್ಬಾಲ್ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡಿದ ಬೆನ್ನಲ್ಲೇ ಬಾಂಗ್ಲಾ ಕ್ರಿಕೆಟಿಗರು ನಜ್ಮುಲ್ ಹಸನ್ ವಿರುದ್ಧ ತಿರುಗಿ ನಿಂತಿದ್ದಾರೆ.

ಬಾಂಗ್ಲಾದೇಶ್ ಪ್ರೀಮಿಯರ್ ಲೀಗ್‌ನ (ಬಿಪಿಎಲ್) ಮುಂದಿನ ಪಂದ್ಯಕ್ಕೂ ಮುನ್ನ ಬಿಸಿಬಿ ಹಣಕಾಸು ಸಮಿತಿ ಅಧ್ಯಕ್ಷ ನಜ್ಮುಲ್ ಹಸನ್ ತಮ್ಮ ಹುದ್ದೆಗೆ ರಾಜೀನಾಮೆ ನೀಡಬೇಕು. ಇಲ್ಲದಿದ್ದರೆ ಆಟಗಾರರು ಇನ್ನು ಮುಂದೆ ಕ್ರಿಕೆಟ್ ಆಡುವುದಿಲ್ಲ ಎಂದು ಬಾಂಗ್ಲಾದೇಶ ಕ್ರಿಕೆಟಿಗರ ಕಲ್ಯಾಣ ಸಂಘ ( ಸಿಡಬ್ಲ್ಯುಎಬಿ) ಬುಧವಾರ ಘೋಷಿಸಿದೆ. ಅಂದರೆ ನಜ್ಮುಲ್ ಹಸನ್ ರಾಜೀನಾಮೆ ನೀಡಿದರೆ ಮಾತ್ರ ಬಾಂಗ್ಲಾದೇಶ್ ಕ್ರಿಕೆಟಿಗರು ಬಿಪಿಎಲ್‌ನಲ್ಲಿ ಕಣಕ್ಕಿಳಿಯಲಿದ್ದಾರೆ ಎಂದು ತಿಳಿಸಿದ್ದಾರೆ. ಹೀಗಾಗಿಯೇ ಇದೀಗ ಬಾಂಗ್ಲಾದೇಶ್ ಪ್ರೀಮಿಯರ್ ಲೀಗ್‌ನ ಉಳಿದ ಪಂದ್ಯಗಳು ನಡೆಯಲಿದೆಯಾ ಎಂಬ ಪ್ರಶ್ನೆಯೊಂದು ಹುಟ್ಟಿಕೊಂಡಿದೆ.

ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್‌ನ ಹಣಕಾಸು ಸಮಿತಿ ಅಧ್ಯಕ್ಷ ನಜ್ಮುಲ್ ಹಸನ್ ಇತ್ತೀಚೆಗೆ ಮಾಧ್ಯಮದೊಂದಿಗೆ ಮಾತನಾಡುವ ವೇಳೆ, ಐಸಿಸಿ ಟಿ20 ವಿಶ್ವಕಪ್ 2026 ರಿಂದ ಬಾಂಗ್ಲಾದೇಶ್ ತಂಡವನ್ನು ಹೊರಗಿಟ್ಟರೆ, ಮಂಡಳಿಯು ಯಾವುದೇ ಆರ್ಥಿಕ ನಷ್ಟವನ್ನು ಅನುಭವಿಸುವುದಿಲ್ಲ. ಬಾಂಗ್ಲಾದೇಶ್ ತಂಡ ಆಡದಿದ್ದರೆ ಅದು ಆಟಗಾರರಿಗೆ ಮಾತ್ರ ನಷ್ಟವಾಗುತ್ತದೆ. ಏಕೆಂದರೆ ಅವರಿಗೆ ಪಂದ್ಯ ಶುಲ್ಕ ಸಿಗುವುದಿಲ್ಲ. ಇದರ ಹೊರತಾಗಿಯೂ ಯಾರಿಗೂ ನಷ್ಟವಿಲ್ಲ ಎಂಬ ಹೇಳಿಕೆ ನೀಡಿದ್ದರು.

# ಅಗ್ರಸ್ಥಾನಕ್ಕೇರಿದ 7 ಗಂಟೆಯೊಳಗೆ ದ್ವಿತೀಯ ಸ್ಥಾನಕ್ಕೆ ಕುಸಿದ ವಿರಾಟ್ ಕೊಹ್ಲಿ



ಇಂಟರ್‌ನ್ಯಾಷನಲ್ ಕ್ರಿಕೆಟ್ ಕೌನ್ಸಿಲ್ ಬಿಡುಗಡೆ ಮಾಡಿರುವ ನೂತನ ಒಡಿಐ ಬ್ಯಾಟರ್‌ಗಳ ಶ್ರೇಯಾಂಕ ಪಟ್ಟಿಯಲ್ಲಿ ವಿರಾಟ್ ಕೊಹ್ಲಿ ಮೊದಲ ಸ್ಥಾನದಲ್ಲಿದ್ದರೆ, ನ್ಯೂಝಿಲೆಂಡ್ ಡೇರಿಲ್ ಮಿಚೆಲ್ ದ್ವಿತೀಯ ಸ್ಥಾನದಲ್ಲಿದ್ದಾರೆ. ಇನ್ನು ಭಾರತ ತಂಡದ ರೋಹಿತ್ ಶರ್ಮಾ ಈ ಪಟ್ಟಿಯಲ್ಲಿ ಮೂರನೇ ಸ್ಥಾನದಲ್ಲಿ ಕಾಣಿಸಿಕೊಂಡಿದ್ದಾರೆ. ದಾಖಲೆಗಳ ಸರದಾರ ವಿರಾಟ್ ಕೊಹ್ಲಿ ಬರೋಬ್ಬರಿ 4 ವರ್ಷ, 9 ತಿಂಗಳುಗಳ ಬಳಿಕ ಏಕದಿನ ಕ್ರಿಕೆಟ್ ಬ್ಯಾಟರ್‌ಗಳ ರ್ಯಾಂಕಿಂಗ್‌ನಲ್ಲಿ ಅಗ್ರಸ್ಥಾನಕ್ಕೇರಿದ್ದರು.

ಹೀಗೆ ಅಗ್ರಸ್ಥಾನವನ್ನು ಅಲಂಕರಿಸಿದ 7 ಗಂಟೆಯೊಳಗೆ ಕೊಹ್ಲಿ ದ್ವಿತೀಯ ಸ್ಥಾನಕ್ಕೆ ಕುಸಿದಿದ್ದಾರೆ ಎಂದರೆ ನಂಬಲೇಬೇಕು. ಇಲ್ಲಿ ಗಂಟೆಗಳ ಒಳಗೆ ವಿರಾಟ್ ಕೊಹ್ಲಿಯನ್ನು ಹಿಂದಿಕ್ಕಿರುವುದು ನ್ಯೂಝಿಲೆಂಡ್‌ನ ಡೇರಿಲ್ ಮಿಚೆಲ್. ಐಸಿಸಿಯ ನೂತನ ಏಕದಿನ ಬ್ಯಾಟರ್‌ಗಳ ಶ್ರೇಯಾಂಕ ಪಟ್ಟಿಯಲ್ಲಿ ವಿರಾಟ್ ಕೊಹ್ಲಿ 785 ಅಂಕಗಳೊಂದಿಗೆ ಅಗ್ರಸ್ಥಾನವನ್ನು ಅಲಂಕರಿಸಿದ್ದರೆ, ಡೇರಿಲ್ ಮಿಚೆಲ್ 784 ಅಂಕಗಳೊಂದಿಗೆ ದ್ವಿತೀಯ ಸ್ಥಾನದಲ್ಲಿದ್ದರು. ಅತ್ತ ಡೇರಿಲ್ ಮಿಚೆಲ್‌ಗೆ ಅಗ್ರಸ್ಥಾನಕ್ಕೇರಲು ಕೇವಲ 25 ರನ್‌ಗಳ ಅವಶ್ಯಕತೆಯಿತ್ತು. ಅಂದರೆ ಭಾರತದ ವಿರುದ್ಧದ 2ನೇ ಏಕದಿನ ಪಂದ್ಯದಲ್ಲಿ ಅತ್ಯುತ್ತಮ ಬ್ಯಾಟಿಂಗ್ ಪ್ರದರ್ಶಿಸುವ ಆಟಗಾರ ಅಗ್ರಸ್ಥಾನಕ್ಕೇರುವುದು ಖಚಿತವಾಗಿತ್ತು. ಆದರೆ ಈ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಕಲೆಹಾಕಿದ್ದು ಕೇವಲ 23 ರನ್‌ಗಳು ಮಾತ್ರ. ಆದರೆ ಡೇರಿಲ್ ಮಿಚೆಲ್ ಭರ್ಜರಿ ಸೆಂಚುರಿ ಸಿಡಿಸಿದ್ದಾರೆ. ಅಷ್ಟೇ ಅಲ್ಲದೆ ಅಜೇಯ 131 ರನ್‌ಗಳ ಇನಿಂಗ್ಸ್ ಕೂಡ ಆಡಿದ್ದಾರೆ. ಈ ಮೂಲಕ ಐಸಿಸಿ ಶ್ರೇಯಾಂಕ ಪಟ್ಟಿಯಲ್ಲಿ ತನ್ನ ರೇಟಿಂಗ್ ಅನ್ನು ಹೆಚ್ಚಿಸಿಕೊಂಡಿದ್ದಾರೆ. ಈ ಮೂಲಕ ವಿರಾಟ್ ಕೊಹ್ಲಿಯನ್ನು ಹಿಂದಿಕ್ಕಿ ಡೇರಿಲ್ ಮಿಚೆಲ್ ಐಸಿಸಿ ಏಕದಿನ ಬ್ಯಾಟರ್‌ಗಳ ಪಟ್ಟಿಯಲ್ಲಿ ಮೊದಲ ಸ್ಥಾನಕ್ಕೇರಿದ್ದಾರೆ. ಇದಾಗ್ಯೂ, ಮಂಗಳವಾರದವರೆಗೆ ಡೇರಿಲ್ ಮಿಚೆಲ್ ಅವರ ಹೆಸರು ಐಸಿಸಿ ಶ್ರೇಯಾಂಕ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿ ಕಾಣಿಸಿಕೊಳ್ಳುವುದಿಲ್ಲ. ಏಕೆಂದರೆ ಐಸಿಸಿ ರ್ಯಾಂಕಿಂಗ್‌ನ ನವೀಕರಣ ಪ್ರತಿ ಬುಧವಾರ ನಡೆಯುತ್ತದೆ. ಹೀಗಾಗಿ ಮಂಗಳವಾರದವರೆಗೆ ರ್ಯಾಂಕಿಂಗ್ ಪಟ್ಟಿಯಲ್ಲಿ ಕೊಹ್ಲಿಯ ಹೆಸರೇ ಮೊದಲ ಸ್ಥಾನದಲ್ಲಿ ಕಾಣಿಸಿಕೊಳ್ಳಲಿದೆ. ಅಷ್ಟೇ ಅಲ್ಲದೆ ಭಾನುವಾರ ನಡೆಯಲಿರುವ 3ನೇ ಏಕದಿನ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಶತಕದ ಇನಿಂಗ್ಸ್ ಆಡಿದರೆ ಡೇರಿಲ್ ಮಿಚೆಲ್ ಅವರನ್ನು ಹಿಂದಿಕ್ಕಿ ಬುಧವಾರ ಮತ್ತೆ ಐಸಿಸಿ ರ್ಯಾಂಕಿಂಗ್‌ನಲ್ಲಿ ಅಗ್ರಸ್ಥಾನವನ್ನು ಅಲಂಕರಿಸಬಹುದು.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**